# ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಮೈಸೂರು ಮಿತ್ರ 45 | ಏಪ್ರಿಲ್ 30 ಮಂಗಳವಾರ 2024

ಸಂಪುಟ: 45 | ಸಂಚಿಕೆ: 15 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com




# ಶ್ರೀನಿವಾಸ ಪ್ರಸಾದ್ ಇನ್ನಿಲ್ಲ

## 6 ಬಾರಿ ಸಂಸದರು, 2 ಬಾರಿ ಶಾಸಕರು, ಕೇಂದ್ರ ಹಾಗೂ ರಾಜ್ಯದಲ್ಲಿ ಸಚಿವರೂ ಆಗಿದ್ದರು...

## ಬೌದ್ಧ ಧರ್ಮದ ಸಂಪ್ರದಾಯದಂತೆಯೇ ಇಂದು ಪ್ರಸಾದರ ಅಂತ್ಯಕ್ರಿಯೆ

ಮೈಸೂರು, ಏ. 29– ಸೋಮವಾರ ಮುಂಜಾನೆ ಅಗಲಿದ ಸಂಸದ ವಿ.ಶ್ರೀನಿವಾಸಪ್ರಸಾದ್ ಅವರ ಅಂತ್ಯಕ್ರಿಯೆಯನ್ನು ಅವರೇ ಸ್ಥಾಪಿಸಿದ ಮಾನಂದವಾಡಿ ರಸ್ತೆಯ ಸಿಲ್ಕ್ ಫ್ಯಾಕ್ಟರಿ ಎದುರಿಗಿರುವ ಡಾ. ಬಿ.ಆರ್.ಅಂಬೇಡ್ಕರ್ ಸಾಂಸ್ಕೃತಿಕ ಟ್ರಸ್ಟ್ ಆವರಣದಲ್ಲಿ ನೆರವೇರಿಸಲಾಗುವುದು ಎಂದು ಅವರ ಹಿರಿಯ ಪುತ್ರಿ ಪ್ರತಿಮಾ ತಿಳಿಸಿದ್ದಾರೆ.

ನಾಳೆ (ಮಂಗಳವಾರ) ಬೆಳಗ್ಗೆ 11 ಗಂಟೆ ನಂತರ ಪ್ರಸಾದ್ ಅವರ ಪಾರ್ಥಿವ ಶರೀರವನ್ನು ಎನ್‌ಟಿಎಂ ಶಾಲೆ ಆವರಣದಿಂದ ಮೆರವಣಿಗೆ ಮೂಲಕ ಟ್ರಸ್ಟ್ ಆವರಣಕ್ಕೆ ಕೊಂಡೊಯ್ಯಲಾಗುವುದು. ಪ್ರಸಾದ್ ಅವರು ಬೌದ್ಧ ಧರ್ಮಕ್ಕೆ ಮತಾಂತರಗೊಂಡಿರುವ ಕಾರಣ ಬೌದ್ಧ ಧರ್ಮದ ಸಂಪ್ರದಾಯದಂತೆಯೇ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಅವರು ಹೇಳಿದರು. ನಮ್ಮ ತಂದೆಯವರು (ಶ್ರೀನಿವಾಸ ಪ್ರಸಾದ್) ಎಂತಹ ಸಂಕಷ್ಟದ ಪರಿಸ್ಥಿತಿಯಲ್ಲೂ ನಗುನಗುತ್ತಲೇ ಇದ್ದರು. ನನಗೆ ಸಾವು ಬಂದರೂ ನನ್ನನ್ನು ನಗುನಗುತ್ತಲೇ ಕಳುಹಿಸಿಕೊಡಿ ಎಂದು ಹೇಳುತ್ತಿದ್ದರು. ಅವರ ಆಶಯದಂತೆ ಯಾವುದೇ ರೀತಿಯ ಗೊಂದಲಗಳಿಗೆ ಎಡೆಮಾಡದೇ ಸಮಾಧಾನ ಚಿತ್ತದಿಂದ ಅವರನ್ನು ಗೌರವಯುತವಾಗಿ ಕಳುಹಿಸಿಕೊಡೋಣ ಎಂದು ಅಭಿಮಾನಿಗಳಲ್ಲಿ ಮನವಿ ಮಾಡಿದರು. 50 ವರ್ಷ ಕಾಲ ರಾಜಕೀಯ ಜೀವನದಲ್ಲಿ ಯಾವುದೇ ಕಪ್ಪುಚುಕ್ಕೆ ಇಲ್ಲದೇ ಜನಸೇವೆ ಮಾಡಿದ್ದ ಅವರು, ಕಳೆದ ಮಾರ್ಚ್‌ನಲ್ಲಿ ರಾಜಕೀಯ ಜೀವನಕ್ಕೆ ವಿದಾಯ ಹೇಳಿದ್ದರು. ಆದರೆ, ಅವರು ಇಷ್ಟು ಬೇಗ ತಮ್ಮ ಜೀವನ ಪಯಣಕ್ಕೆ ವಿದಾಯ ಹೇಳುತ್ತಾರೆ ಎಂಬುದನ್ನು ನಾವು ನಿರೀಕ್ಷಿಸಿಯೇ ಇರಲಿಲ್ಲ ಎಂದು ಕಂಬನಿ ಮಿಡಿದರು. ನಮ್ಮ ತಂದೆಗೆ ವಿಲ್ ಪವರ್ ಜಾಸ್ತಿ. 2000 ವರ್ಷದಲ್ಲೇ ಮೂತ್ರಪಿಂಡ ಕಸಿ ನಡೆದಿತ್ತು. ಆಗಾಗ ಸ್ವಲ್ಪ ಆರೋಗ್ಯ ಸಮಸ್ಯೆಯಾದರೂ ಜನಸೇವೆಯನ್ನಂತೂ ಬಿಟ್ಟಿರಲಿಲ್ಲ. ಏಪ್ರಿಲ್ 22ರಂದು ಅವರನ್ನು ಮಣಿಪಾಲ್ ಆಸ್ಪತ್ರೆಗೆ ದಾಖಲಿಸಿದ್ದೆವು. ತಂದೆಯವರು ಯಾವಾಗಲೂ ಮಣಿಪಾಲ್ ಆಸ್ಪತ್ರೆಯಲ್ಲೇ ಚಿಕಿತ್ಸೆ ಪಡೆಯುತ್ತಿದ್ದರು. ಅವರನ್ನು ಉಳಿಸಿಕೊಳ್ಳಲು ಈ ಆಸ್ಪತ್ರೆಯ ವೈದ್ಯರು ಬಹಳಷ್ಟು ಶ್ರಮ ವಹಿಸಿದ್ದಾರೆ. ಅವರಿಗೆ ಧನ್ಯವಾದ ತಿಳಿಸುತ್ತಿದ್ದೇನೆ ಎಂದು ಪ್ರತಿಮಾ ಹೇಳಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ, ಹಿರಿಯ ರಾಜಕೀಯ ಮುತ್ಸದ್ದಿ ವಿ.ಶ್ರೀನಿವಾಸ್ ಪ್ರಸಾದ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದರು.



ವೆಂಕಟಯ್ಯ ಶ್ರೀನಿವಾಸ ಪ್ರಸಾದ್
6-8-1947 – 29-4-2024

**ಮೈಸೂರು, ಏ. 29(ಆರ್‌ಕೆ)– ಧೀಮಂತ ನಾಯಕ, ಅಂಬೇಡ್ಕರ್‌ವಾದಿ, ಮುತ್ಸದ್ಧಿ ರಾಜಕಾರಣಿ, ಚಾಮರಾಜನಗರ ಸಂಸದ ವಿ. ಶ್ರೀನಿವಾಸ ಪ್ರಸಾದ್ (76) ಅವರು ಸೋಮವಾರ ಮುಂಜಾನೆ 1.30ರ ವೇಳೆಯಲ್ಲಿ ವಿಧಿವಶರಾಗಿದ್ದಾರೆ.**

ಕಳೆದ ಏಪ್ರಿಲ್ 22ರಂದು ಅನಾರೋಗ್ಯದಿಂದ ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿದ್ದ ಪ್ರಸಾದ್ ಅವರು, ಸೋಮವಾರ ಮುಂಜಾನೆ ನಿಧನರಾಗಿದ್ದು, ಕುಟುಂಬಸ್ಥರು ಅವರ ಪಾರ್ಥಿವ ಶರೀರವನ್ನು ಇಂದು ಬೆಳಗ್ಗೆ 7.30ರ ವೇಳೆಗೆ ಮೈಸೂರಿನ ಜಯಲಕ್ಷ್ಮೀಪುರಂನ ಅವರ ಭೀಮ ಸದನ ನಿವಾಸಕ್ಕೆ ತಂದರು. ಪ್ರಸಾದ್ ನಿವಾಸದಲ್ಲಿ ಮಧ್ಯಾಹ್ನದವರೆಗೂ ಪಾರ್ಥಿವ ಶರೀರವನ್ನು ಅಂತಿಮ ದರ್ಶನಕ್ಕೆ ಇಡಲಾಗಿತ್ತು. ಈ ವೇಳೆ ಸುತ್ತೂರು ಶ್ರೀಗಳಾದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ, ಸಚಿವ ಕೆ.ವೆಂಕಟೇಶ್, ಶಾಸಕರಾದ ಜಿ.ಟಿ.ದೇವೇಗೌಡ, ಶ್ರೀವತ್ಸ, ತನ್ವೀರ್ ಸೇಠ್, ಅನಿಲ್‌ಕುಮಾರ್, ಕೆ.ಹರೀಶ್‌ಗೌಡ, ಪುಟ್ಟರಂಗಶೆಟ್ಟಿ, ಎಂಎಲ್‌ಸಿಗಳಾದ ಸಿ.ಎನ್. ಮಂಜೇಗೌಡ, ಎ.ಹೆಚ್.ವಿಶ್ವನಾಥ್, ಮಾಜಿ ಸಂಸದ ಕಾಗಲವಾಡಿ ಶಿವಣ್ಣ, ಮುಡಾ ಅಧ್ಯಕ್ಷ ಕೆ.ಮರೀಗೌಡ, ಮಾಜಿ ಅಧ್ಯಕ್ಷರಾದ ಹೆಚ್.ವಿ. ರಾಜೀವ್, ಸಿ.ಬಸವೇಗೌಡ, ಕೆ.ಆರ್.ಮೋಹನ್ ಕುಮಾರ್ ಸೇರಿದಂತೆ ಅನೇಕ ರಾಜಕೀಯ ಮುಖಂಡರು ಹಾಗೂ ಉದ್ಯಮಿಗಳು, ಸಾಹಿತಿಗಳು ಪ್ರಸಾದ್ ಅವರ ಅಂತಿಮ ದರ್ಶನ ಪಡೆದು, ಶ್ರದ್ಧಾಂಜಲಿ ಸಲ್ಲಿಸಿದರು.

ಮಧ್ಯಾಹ್ನ 1.30ರ ನಂತರ ಅಲಂಕೃತ ವಾಹನದಲ್ಲಿ ಮೆರವಣಿಗೆ ಮೂಲಕ ಪ್ರಸಾದ್ ಪಾರ್ಥಿವ ಶರೀರವನ್ನು ಅಶೋಕಪುರಂ ಪಾರ್ಕ್ ಎದುರಿಗಿರುವ ಎನ್‌ಟಿಎಂ ಶಾಲೆ ಮೈದಾನಕ್ಕೆ ತರಲಾಯಿತು. ಈ ಸ್ಥಳದಲ್ಲಿ ಪಾರ್ಥಿವ ಶರೀರವನ್ನಿಡಲು ವೇದಿಕೆ, ಸಾರ್ವಜನಿಕರು ಅಂತಿಮ ದರ್ಶನ ಪಡೆಯಲು ಅನುಕೂಲವಾಗುವಂತೆ ಬ್ಯಾರಿಕೇಡ್, ಗಣ್ಯ ವ್ಯಕ್ತಿಗಳಿಗಾಗಿ ಪ್ರತ್ಯೇಕ ಸಾಲು ಹಾಗೂ ಕುರ್ಚಿಗಳನ್ನು ಜಿಲ್ಲಾಡಳಿತದಿಂದ ವ್ಯವಸ್ಥೆ ಮಾಡಲಾಗಿತ್ತು. ಎನ್‌ಟಿಎಂ ಶಾಲೆ ಮೈದಾನದಲ್ಲಿ ಪ್ರಸಾದ್ ಪಾರ್ಥಿವ ಶರೀರವನ್ನು ಸಾರ್ವಜನಿಕ ದರ್ಶನಕ್ಕೆ ಇಡಲಾಗಿದ್ದು, ಮೈಸೂರು ಮತ್ತು ಚಾಮರಾಜನಗರ ಜಿಲ್ಲೆ ಮಾತ್ರವಲ್ಲದೇ ರಾಜ್ಯದ ವಿವಿಧೆಡೆಯಿಂದ ಅವರ ಅಭಿಮಾನಿಗಳು ಸಾಗರೋಪಾದಿಯಲ್ಲಿ ಆಗಮಿಸಿ ಅಗಲಿದ ನಾಯಕನ ಅಂತಿಮ ದರ್ಶನ ಪಡೆಯುತ್ತಿದ್ದಾರೆ. ರಾತ್ರಿ ಬಹಳ ಹೊತ್ತಿನವರೆಗೂ ಅಭಿಮಾನಿಗಳು ಪ್ರಸಾದ್ ಅಂತಿಮ ದರ್ಶನಕ್ಕಾಗಿ ಸಾಲುಗಟ್ಟಿ ನಿಂತಿರುವ ದೃಶ್ಯ ಕಂಡುಬಂದಿತು.

ನಾಳೆ (ಮಂಗಳವಾರ) ಬೆಳಗ್ಗೆವರೆಗೂ ಅಂತಿಮ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದ್ದು, ಬೆಳಗ್ಗೆ 11 ಗಂಟೆ ನಂತರ ಎನ್‌ಟಿಎಂ ಶಾಲೆಯಿಂದ ಮೆರವಣಿಗೆ ಮೂಲಕ ಪ್ರಸಾದರ ಪಾರ್ಥಿವ ಶರೀರವನ್ನು ಅಶೋಕಪುರಂನ ಮಾನಂದವಾಡಿ ರಸ್ತೆಯ ಸಿಲ್ಕ್ ಫ್ಯಾಕ್ಟರಿ ಎದುರಿಗಿರುವ ಶ್ರೀನಿವಾಸ ಪ್ರಸಾದ್ ಅವರೇ ಸ್ಥಾಪಿಸಿರುವ ಡಾ. ಬಿ.ಆರ್. ಅಂಬೇಡ್ಕರ್ ಸಾಂಸ್ಕೃತಿಕ ಟ್ರಸ್ಟ್ ಆವರಣದಲ್ಲಿ ಬೌದ್ಧ ಧರ್ಮದ ಸಂಪ್ರದಾಯದಂತೆ ಅಂತ್ಯಸಂಸ್ಕಾರ ನೆರವೇರಿಸಲಾಗುವುದು. ಇದಕ್ಕಾಗಿ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಎಲ್ಲಾ ತಯಾರಿ ನಡೆಸಿದೆ. ಸಂಜೆ ವೇಳೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗೃಹ ಸಚಿವ ಡಾ.ಜಿ. ಪರ ಮೇಶ್ವರ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಸಾಹಿತಿ ದೇವನೂರ ಮಹದೇವ, ● 9ನೇ ಪುಟಕ್ಕೆ

## ನಾವಿಬ್ಬರು ಒಟ್ಟಿಗೆ ರಾಜಕಾರಣಕ್ಕೆ ಬಂದವರು

### ಸ್ನೇಹಿತನಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಮನ

ಮೈಸೂರು, ಏ.29(ಎಂಕೆ)– ಸ್ನೇಹಿತ, ಸಹೋದ್ಯೋಗಿಯನ್ನು ಕಳೆದುಕೊಂಡಿದ್ದು ಬಹಳ ದುಃಖವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಹಿರಿಯ ರಾಜಕಾರಣಿ, ಚಾ.ನಗರ ಲೋಕಸಭಾ ಕ್ಷೇತ್ರದ ಸಂಸದರಾದ ವಿ.ಶ್ರೀನಿವಾಸ್ ಪ್ರಸಾದ್ ಅವರ ನಿಧನಕ್ಕೆ ಕಂಬನಿ ಮಿಡಿದರು. ವಿಶೇಷ ವಿಮಾನದಲ್ಲಿ ಸೋಮವಾರ ರಾತ್ರಿ ಮೈಸೂರಿಗೆ ಬಂದ ಅವರು, ನಗರದ ಅಶೋಕಪುರಂ ಸರ್ಕಾರಿ ಶಾಲೆ ಆವರಣಕ್ಕೆ ಆಗಮಿಸಿ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದರು. ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ, ಶ್ರೀನಿವಾಸ್ ಪ್ರಸಾದ್ ಅವರು ಇಷ್ಟು ಬೇಗ ನಿಧನರಾಗುತ್ತಾರೆ ಎಂದುಕೊಂಡಿರಲಿಲ್ಲ. ಇದೇ ತಿಂಗಳ 13 ರಂದು ಅವರನ್ನು ಭೇಟಿಯಾಗಿದ್ದೆ. ದೇಶದ ರಾಜಕಾರಣದ ಬಗ್ಗೆ ಮಾತನಾಡಿದ್ದೆವು. ಅವರಿಗೆ ಜ್ಞಾಪಕ ಶಕ್ತಿ ಚೆನ್ನಾಗಿತ್ತು. ಮೊನ್ನೆಯಷ್ಟೇ ಆಸ್ಪತ್ರೆಗೆ ಹೋಗಿ ನೋಡಿದಾಗ ಅವರಿಗೆ ಪ್ರಜ್ಞೆ ಇರಲಿಲ್ಲ. ವೈದ್ಯರನ್ನು ವಿಚಾರಿಸಿದಾಗ ಎಲ್ಲಾ ಪ್ರಯತ್ನ ಮಾಡಿದ್ದೇವೆ. ಕಷ್ಟ ಎಂದಿದ್ದರು.

2013ರಲ್ಲಿ ಶ್ರೀನಿವಾಸ್ ಪ್ರಸಾದ್ ಅವರಿಗೆ ಕಿಡ್ನಿ ಸಮಸ್ಯೆಯಾಗಿತ್ತು. ನಂತರ 11 ವರ್ಷ ಸಮಸ್ಯೆಯನ್ನು ನಿಬಾಸಿಕೊಂಡೇ ಬಂದಿದ್ದರು. ಅವರಲ್ಲಿ ವಿಲ್ ಪವರ್ ಚೆನ್ನಾಗಿತ್ತು. ನಾನು–ಅವರು ಒಂದೇ ವಯೋಮಾನದವರು, ಒಟ್ಟಿಗೆ ರಾಜಕಾರಣಕ್ಕೆ ಬಂದವರು. ನೇರ ನುಡಿಗೆ, ಇರುವುದನ್ನು ಇದ್ದಂತೆಯೇ ಹೇಳುವ, ಅಸಮಾನತೆ ವಿರುದ್ಧ ಹೋರಾಡುವ ಸ್ವಭಾವದವರು. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ತತ್ವ, ಸಿದ್ಧಾಂತದಲ್ಲಿ ನಂಬಿಕೆ ಇಟ್ಟಿದ್ದವರು. ಸಮಾಜದಲ್ಲಿ ಯಾರಿಗೆ ಅನ್ಯಾಯವಾದರೂ ಅದನ್ನು ಪ್ರತಿಭಟಿಸುವ ಪ್ರವೃತ್ತಿ ಅವರದ್ದು ಎಂದು ನೆನೆದರು. ಸುಮಾರು 50 ವರ್ಷಗಳ ದೀರ್ಘಕಾಲ ರಾಜಕೀಯದಲ್ಲಿದ್ದು, ಇತ್ತೀಚೆಗಷ್ಟೇ ಸಕ್ರಿಯ ● 9ನೇ ಪುಟಕ್ಕೆ

## ಇಂದು ಮೈಸೂರು, ಚಾ.ನಗರ ಜಿಲ್ಲೆಯಲ್ಲಿ ಸರ್ಕಾರಿ ರಜೆ

### ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆಗೆ ಸರ್ಕಾರ ಆದೇಶ

ಮೈಸೂರು,ಏ.29(ಎಂಟಿವೈ)– ಸಂಸದ ವಿ.ಶ್ರೀನಿವಾಸ್ ಪ್ರಸಾದ್ ನಿಧನದ ಹಿನ್ನೆಲೆಯಲ್ಲಿ ಏ.30ರಂದು ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ಸರ್ಕಾರಿ ಕಚೇರಿ ಹಾಗೂ ಶಾಲಾ–ಕಾಲೇಜುಗಳಿಗೆ ರಜೆ ಘೋಷಿಸಿ ರಾಜ್ಯ ಸರ್ಕಾರ ಆದೇಶಿಸಿದೆ. ಸರ್ಕಾರದ ಅಧೀನ ಕಾರ್ಯದರ್ಶಿ ವಿಜಯ್ ಕುಮಾರ್ ಹೆಚ್.ಬಿ., ಅಧಿಸೂಚನೆ ಹೊರಡಿಸಿದ್ದು, ಸಂಸದ ವಿ.ಶ್ರೀನಿವಾಸ್ ಪ್ರಸಾದ್ ನಿಧನಕ್ಕೆ ರಾಜ್ಯ ಸರ್ಕಾರ ತೀವ್ರ ಸಂತಾಪ ವ್ಯಕ್ತಪಡಿಸಿದ್ದು, ಶ್ರೀನಿವಾಸ್ ಪ್ರಸಾದ್ ಅವರ ಗೌರವಾರ್ಥ ನಾಳೆ(ಏ.30) ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಯಲ್ಲಿ ಮಾತ್ರ ಎಲ್ಲಾ ಸರ್ಕಾರಿ ಕಚೇರಿ, ಶಾಲಾ–ಕಾಲೇಜುಗಳಿಗೆ (ಪೂರ್ವ ನಿಗದಿಯಾಗಿರುವ ಪರೀಕ್ಷೆಗಳನ್ನು ಹೊರತುಪಡಿಸಿ) ರಜೆ ಘೋಷಿಸಲಾಗಿದೆ. ಅಲ್ಲದೆ, ಮೃತರ ಅಂತ್ಯಕ್ರಿಯೆಯನ್ನು ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲು ಆದೇಶಿಸಲಾಗಿದೆ ಎಂದು ತಿಳಿಸಿದ್ದಾರೆ.

## ಮಾಜಿ ಸಿಎಂ ಎಸ್.ಎಂ.ಕೃಷ್ಣ ಆಸ್ಪತ್ರೆಗೆ ದಾಖಲು



ಬೆಂಗಳೂರು: ಹಿರಿಯ ರಾಜಕಾರಣಿ ಹಾಗೂ ಮಾಜಿ ಮುಖ್ಯಮಂತ್ರಿ ಎಸ್‌ಎಂ ಕೃಷ್ಣ ಅವರು ಅನಾರೋಗ್ಯದ ಹಿನ್ನೆಲೆಯಲ್ಲಿ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಸೋಮವಾರ ಆಸ್ಪತ್ರೆ ಪ್ರಕಟಣೆ ತಿಳಿಸಿದೆ.

ಕೃಷ್ಣ ಅವರ ಆರೋಗ್ಯ ಸ್ಥಿರವಾಗಿದೆ. ಅವರು ಚೇತರಿಸಿಕೊಳ್ಳುತ್ತಿದ್ದಾರೆ ಮತ್ತು ಆತಂಕ ಪಡುವ ಅಗತ್ಯವಿಲ್ಲ ಎಂದು ಆಸ್ಪತ್ರೆ ಪ್ರಕಟಣೆಯಲ್ಲಿ ತಿಳಿಸಿದೆ.

ಎಸ್‌ಎಂ ಕೃಷ್ಣ ಅವರು ಕಳೆದ ಏಪ್ರಿಲ್ 22ರಂದು ಜ್ವರ, ಕೆಮ್ಮು ಕಾಣಿಸಿಕೊಂಡ ಹಿನ್ನೆಲೆ ಬೆಂಗಳೂರಿನ ವಿಠಲ್ ಮಲ್ಯ ರಸ್ತೆಯ ವೈದೇಹಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದುಕೊಂಡು ಡಿಸ್ಚಾರ್ಜ್ ಆಗಿದ್ದರು. ಇದೀಗ ಮತ್ತೆ ಅವರ ಆರೋಗ್ಯದಲ್ಲಿ ಏರುಪೇರಾಗಿದ್ದು, ಇಂದು ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದುಕೊಳ್ಳುತ್ತಾರೆ. ಕೃಷ್ಣ ಅವರು ಅಕ್ಟೋಬರ್ 11, 1999 ರಿಂದ ಮೇ 28, 2004ರವರೆಗೆ ರಾಜ್ಯದ ಮುಖ್ಯಮಂತ್ರಿಯಾಗಿದ್ದರು.

## ಮೇಕೆದಾಟುವಿನಲ್ಲಿ ಮಂಡ್ಯ ಯುವತಿ ಸೇರಿ ಐವರು ವಿದ್ಯಾರ್ಥಿಗಳು ಜಲಸಮಾಧಿ

ಕನಕಪುರ,ಏ.29(ಮೋಹನ್‌ರಾಜ್)– ತಾಲೂಕಿನ ಪ್ರವಾಸಿತಾಣ ಮೇಕೆದಾಟು ಬಳಿಯ ಸಂಗಮದಲ್ಲಿ ಐದು ಜನ ಕಾಲೇಜಿನ ವಿದ್ಯಾರ್ಥಿಗಳು ಈಜಲು ಹೋಗಿ ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಘಟನೆ ಸೋಮವಾರ ಜರುಗಿದೆ. ಬೆಂಗಳೂರು ಮೂಲದ ಐದು ಇಂಜಿನಿಯರಿಂಗ್ ವಿದ್ಯಾರ್ಥಿಗಳು ಪ್ರವಾಸಕ್ಕೆ ಎಂದು ತಾಲೂಕಿನ ಸಂಗಮಕ್ಕೆ ಬಂದು ಕಾವೇರಿ ನದಿಯಲ್ಲಿ ಆಟವಾಡುತ್ತಿದ್ದ ವೇಳೆ ನೀರಿನ ಸುಳಿಗೆ ಸಿಲುಕಿ ಇಬ್ಬರು ಯುವಕರು ಹಾಗೂ ಮೂವರು ಯುವತಿಯರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ. ರಾಜಾಜಿನಗರದ ಕೆಎಲ್‌ಇ ಕಾಲೇಜಿನ ವರ್ಷ (20), ಮಲ್ಲೇಶ್ವರಂ ಸರ್ಕಾರಿ ಕಾಲೇಜಿನ ಬಿಹಾರ ಮೂಲದ ಕಂಪ್ಯೂಟರ್ ಸೈನ್ಸ್ ವಿದ್ಯಾರ್ಥಿ ಅಭಿಷೇಕ್ (20), ಚಿಕ್ಕಬಾಣಾವರದ ಆರ್.ಆರ್. ಕಾಲೇಜಿನ ದ್ವಿತೀಯ ವರ್ಷದ ಎಂಜಿನಿಯರಿಂಗ್ ವಿದ್ಯಾರ್ಥಿನಿ ಮಂಡ್ಯ ಜಿಲ್ಲೆಯ ಅರ್ಪಿತಾ (20), ಚಿತ್ರದುರ್ಗ ಮೂಲದ ವಿಜಯನಗರದ ಸರ್ಕಾರಿ ಕಾಲೇಜಿನ ಬಿಸಿಎ ಎರಡನೇ ವರ್ಷದ ವಿದ್ಯಾರ್ಥಿ ತೇಜಸ್ (21), ಆರ್.ಆರ್. ನಗರ ಕಾಲೇಜೊಂದರ ವಿದ್ಯಾರ್ಥಿನಿ ನೇಹಾ (19) ಮೃತ ದುರ್ದೈವಿಗಳಾಗಿದ್ದಾರೆ.

ಟಿ ಟಿ. ವಾಹನದಲ್ಲಿ ಬಂದಿದ್ದ ಹನ್ನೆರಡು ಜನ ವಿದ್ಯಾರ್ಥಿಗಳು ಸಂಗಮ ಬಳಿಯ ಕಾವೇರಿ ನದಿ ನೀರಲ್ಲಿ ಆಟವಾಡುವ ವೇಳೆ ಈ ಐದು ಜನ ವಿದ್ಯಾರ್ಥಿಗಳು ನೀರಿನಲ್ಲಿ ಕಾಲು ಜಾರಿ ಬಿದ್ದು ಸುಳಿಗೆ ಸಿಲುಕಿ, ಮುಳುಗಿ ಅಸುನೀಗಿದ್ದಾರೆ ಎಂದು ತಿಳಿದು ಬಂದಿದೆ. ವಿಷಯ ತಿಳಿದ ತಕ್ಷಣ ಸಾತನೂರು ಪೊಲೀಸ್ ಸಿಬ್ಬಂದಿ ಹಾಗೂ ಅಗ್ನಿಶಾಮಕ ದಳದವರು ಆಗಮಿಸಿ ಮೃತದೇಹಗಳನ್ನು ನೀರಿನಿಂದ ಹೊರತೆಗೆದು ಮರಣೋತ್ತರ ಪರೀಕ್ಷೆಗಾಗಿ ತಾಲೂಕಿನ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ.

ತಾಲೂಕಿನ ಪ್ರಸಿದ್ಧ ಪ್ರವಾಸಿ ತಾಣವಾಗಿರುವ ಸಂಗಮ ಮೇಕೆದಾಟು ಬಳಿ ಈ ರೀತಿಯ ಅವಘಡಗಳು ಸಂಭವಿಸುತ್ತಿದ್ದರೂ ಅರಣ್ಯ ಅಧಿಕಾರಿಗಳಾಗಲೀ ಸ್ಥಳೀಯವಾಗಿರುವ (ಇಡಿಸಿ)ಪರಿಸರ ಅಭಿವೃದ್ಧಿ ಸಮಿತಿ ಸದಸ್ಯರಾಗಲೀ ಯಾವುದೇ ಮುನ್ನೆಚ್ಚರಿಕೆ ತೆಗೆದುಕೊಳ್ಳದಿರುವುದೇ ಇಂತಹ ಘಟನೆಗಳು ನಡೆಯುತ್ತಿವೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ. ಈ ಪ್ರವಾಸಿತಾಣದಲ್ಲಿ ಇಂತಹ ಅವಘಡಗಳು ನಡೆಯುತ್ತಿದ್ದು ಎಷ್ಟೋ ಅಮಾಯಕ ಜೀವಗಳು ಬಲಿಯಾಗಿರುವ ಘಟನೆ ಜರುಗಿದೆ. ಪ್ರವಾಸಿಗರ ರಕ್ಷಣೆಗಾಗಿ ಸ್ಥಳೀಯವಾಗಿ ಪರಿಸರ ಜಾಗೃತಿ ಹಾಗೂ ಅಭಿವೃದ್ಧಿ ಸಮಿತಿ ● 9ನೇ ಪುಟಕ್ಕೆ



ಮೇಕೆದಾಟು ಬಳಿ ಪ್ರವಾಸಕ್ಕೆ ಬಂದಿದ್ದ ಬೆಂಗಳೂರು ಮೂಲದ ಐವರು ಕಾವೇರಿ ನದಿಯ ನೀರಿನ ಸುಳಿಗೆ ಸಿಲುಕಿ ಸಾವನ್ನಪ್ಪಿರುವುದು.

### ಸಿಇಟಿ ಗೊಂದಲದ ಹಿನ್ನೆಲೆ

## ಪಠ್ಯಕ್ರಮ ಹೊರತಾದ ಪ್ರಶ್ನೆಗಳ ಮೌಲ್ಯಮಾಪನಕ್ಕೆ ಪರಿಗಣಿಸಲ್ಲ

### ಮರು ಪರೀಕ್ಷೆ ಇಲ್ಲ; ಸರ್ಕಾರ ಸ್ಪಷ್ಟನೆ

ಬೆಂಗಳೂರು, ಏ.29(ಕೆಎಂಶಿ)– ಪಠ್ಯಕ್ರಮದ ಹೊರತಾದ ಪ್ರಶ್ನೆಗಳನ್ನು ಸಿಇಟಿ ಮೌಲ್ಯಮಾಪನಕ್ಕೆ ಪರಿಗಣಿಸುವುದಿಲ್ಲ ಎಂದು ಸರ್ಕಾರ ಘೋಷಣೆ ಮಾಡಿರುವ ಜೊತೆಗೆ ಮರು ಪರೀಕ್ಷೆ ನಡೆಸುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

ಈ ಸಂಬಂಧ ಪ್ರಕಟಣೆ ನೀಡಿರುವ ಉನ್ನತ ಶಿಕ್ಷಣ ಪ್ರಧಾನ ಕಾರ್ಯದರ್ಶಿ ಶ್ರೀಕರ್ ಎಂ.ಎಸ್.ಅವರು, ಗಣಿತ, ಭೌತಶಾಸ್ತ್ರ, ರಾಸಾಯನಶಾಸ್ತ್ರ, ಜೀವಶಾಸ್ತ್ರಗಳಲ್ಲಿನ ಒಟ್ಟಾರೆ 50 ಅಂಕಗಳು ಪಠ್ಯಕ್ರಮ ಹೊರತಾಗಿವೆ ಎಂದು ಮಾಹಿತಿ ನೀಡಿದ್ದಾರೆ. ಈ ಎಲ್ಲ ಗೊಂದಲದ ನಡುವೆಯೂ ನಿಗದಿಯಂತೆ ಸಿಇಟಿ ಪರೀಕ್ಷೆ ಫಲಿತಾಂಶವನ್ನು ಮೇ ತಿಂಗಳಲ್ಲೇ ಪ್ರಕಟಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಭೌತಶಾಸ್ತ್ರದಲ್ಲಿ 9, ರಾಸಾಯನ ಶಾಸ್ತ್ರದಲ್ಲಿ 15, ಗಣಿತ 15, ಜೀವಶಾಸ್ತ್ರದಲ್ಲಿನ 11 ಅಂಕಗಳನ್ನು ಹೊರಗಿಟ್ಟು ಮೌಲ್ಯಮಾಪನ ಮಾಡಲಾಗುವುದು. ವಿದ್ಯಾರ್ಥಿಗಳು ಮತ್ತು ಪೋಷಕರು ಆತಂಕಪಡುವ ಅಗತ್ಯವಿಲ್ಲ, ಒಟ್ಟಾರೆ 4 ಪತ್ರಿಕೆಗಳಿಂದ 240 ಅಂಕಗಳಿಗೆ ಬದಲಾಗಿ 190 ಅಂಕಗಳನ್ನು ಮಾತ್ರ ಪರಿಗಣಿಸಿ ವಿದ್ಯಾರ್ಥಿಗಳಿಗೆ ಅವರು ಪಡೆದ ಅಂಕಗಳ ಮೌಲ್ಯದ ಮೇಲೆ ರ್‍ಯಾಂಕ್‌ಗಳನ್ನು ನೀಡಲಾಗುವುದು. ಸಿಇಟಿ ಅಂಕಗಳ ಜೊತೆಗೆ ದ್ವಿತೀಯ ಪಿಯುಸಿಯಲ್ಲಿ ವಿದ್ಯಾರ್ಥಿಗಳು ಪಡೆದಿರುವ 50 ಅಂಕಗಳನ್ನು ರ್‍ಯಾಂಕ್ ನೀಡುವ ಸಂದರ್ಭದಲ್ಲಿ ಪರಿಗಣಿಸಲಾಗುವುದು ಎಂದು ತಿಳಿಸಿದ್ದಾರೆ.

ಪರಿಣಿತ ಸಮಿತಿಯ ವರದಿಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಕೆಇಎಯ ಮತ್ತು ಸಿಇಟಿ ವ್ಯವಸ್ಥೆಯ ವಿಶ್ವಾಸಾರ್ಹತೆ ಮತ್ತು ಸಾಮಾನ್ಯತೆಯನ್ನು ಉಳಿಸಲು ನಿರ್ಧರಿಸಿದೆ. ● 9ನೇ ಪುಟಕ್ಕೆ



ಕ್ಯಾತಮಾರನಹಳ್ಳಿಯ ಡಾ.ಬಿ.ಆರ್.ಅಂಬೇಡ್ಕರ್ ವಿಚಾರ ವೇದಿಕೆಯಿಂದ ಏರ್ಪಡಿಸಿದ್ದ ಡಾ.ಅಂಬೇಡ್ಕರ್‌ರವರ 133ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ದ್ವಿತೀಯ ಪಿಯು ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಡಾ.ಅಂಬೇಡ್ಕರ್ ಅವರ ಕುರಿತ ಪುಸ್ತಕಗಳನ್ನು ನೀಡಿ, ಅಭಿನಂದಿಸಲಾಯಿತು. ಈ ವೇಳೆ ಮಾಜಿ ಮೇಯರ್ ಪುರುಷೋತ್ತಮ್, ಪ್ರೊ.ಆನಂದ್, ಪಾಲಿಕೆ ಮಾಜಿ ಸದಸ್ಯ ಶ್ರೀಧರ್, ಕಾಂಗ್ರೆಸ್ ಮುಖಂಡ ನರಸಿಂಹಮೂರ್ತಿ, ಜಿ.ಪಂ. ಮಾಜಿ ಸದಸ್ಯೆ ಕಾವ್ಯ ಶಿವಕುಮಾರ್, ಶಿವರಾಜ್, ರವಿ, ಮಹೇಶ್, ದಿನೇಶ್, ರಾಜೇಶ್, ಜಗದೀಶ್ ಉಪಸ್ಥಿತರಿದ್ದರು.

## ಕೆಎಎಸ್ ಪೂರ್ವಭಾವಿ ಪರೀಕ್ಷೆಗೆ 60 ದಿನಗಳ ಉಚಿತ ತರಬೇತಿ

ಮೈಸೂರು, ಏ.29–ಮೈಸೂರು ವಿಶ್ವವಿದ್ಯಾನಿಲಯ ನೇಗಿಲಯೋಗಿ ವಿದ್ಯಾವರ್ಧಕ ಸ್ಪರ್ಧಾಕೇಂದ್ರ ಮೈಸೂರು ವಿಶ್ವವಿದ್ಯಾನಿಲಯ ವೃತ್ತಿ ಕೇಂದ್ರ, ನವೋಪ್ರಮತಿ ಸಂಸ್ಥೆ ಸಹಕಾರದೊಂದಿಗೆ ಕರ್ನಾಟಕ ಲೋಕಸೇವಾ ಆಯೋಗದವರು 354 ಗ್ರೂಪ್ ಎ ಮತ್ತು ಗ್ರೂಪ್ ಬಿ ಹುದ್ದೆಗಳನ್ನು ಭರ್ತಿಮಾಡಲು ಪೂರ್ವಭಾವಿ ಪರೀಕ್ಷೆ ನಡೆಸುತ್ತಿದ್ದು, ಈ ಪರೀಕ್ಷೆಯನ್ನು ತೆಗೆದುಕೊಳ್ಳುವವರ ಅನುಕೂಲಕ್ಕಾಗಿ 60 ದಿನಗಳ ವಿಶೇಷ ತರಬೇತಿಯನ್ನು ಹಮ್ಮಿಕೊಂಡಿದೆ. ನಗರ ಮತ್ತು ಗ್ರಾಮೀಣ ಪ್ರದೇಶದವರಿಗೆ ಪ್ರತ್ಯೇಕ ತಂಡದಲ್ಲಿ ತರಬೇತಿ ನೀಡಲಾಗುತ್ತದೆ. ತರಗತಿಗಳು ಮೇ 1ರಿಂದ ಪ್ರಾರಂಭವಾಗಲಿದೆ. ಈಗಾಗಲೇ ನೊಂದಾಯಿಸಿಕೊಂಡಿರುವವರು ಹಾಗೂ ಇತರೆ ಆಸಕ್ತರು, ವಿಶ್ವವಿದ್ಯಾನಿಲಯ ವೃತ್ತಿ ಕೇಂದ್ರ, ಜಯಲಕ್ಷ್ಮಿ ವಿಲಾಸ್ ಪ್ಯಾಲೇಸ್ ಹಿಂಭಾಗ, ಮಾನಸಗಂಗೋತ್ರಿ ಇಲ್ಲಿ ಬೆಳಗ್ಗೆ 10 ಗಂಟೆಗೆ ಹಾಜರಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊ. ಸಂಖ್ಯೆ 9731139407, 8217724985, 9900629393, 9483453005 ಸಂಪರ್ಕಿಸಲು ಕೋರಲಾಗಿದೆ.

## ಮೇ 5ರಿಂದ ವಿಜ್ಞಾನ ಕಾರ್ಯಾಗಾರ

ಮೈಸೂರು, ಏ.29– ಮೈಸೂರ್ ಸೈನ್ಸ್ ಫೌಂಡೇಷನ್ ವತಿಯಿಂದ 10 ದಿನಗಳ "ವಿಜ್ಞಾನ ಕಾರ್ಯಾಗಾರ"ವನ್ನು ಮೇ 5ರಿಂದ ಮೇ 12ರವರೆಗೆ ಮೈಸೂರಿನ ಜ್ಞಾನೋದಯ ಪದವಿಪೂರ್ವ ಕಾಲೇಜಿನಲ್ಲಿ 7ನೇ ತರಗತಿಯಿಂದ ಪಿ.ಯು ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಳ್ಳಲಾಗಿದೆ. ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಮತ್ತು ಪ್ರಮುಖವಾಗಿ ಪ್ರಾಯೋಗಿಕ ಅನುಭವವನ್ನು ನೀಡುವ ಸಲುವಾಗಿ ಕಾರ್ಯಾಗಾರವನ್ನು ಹಮ್ಮಿಕೊಂಡಿದ್ದು, ಕಾರ್ಯಾಗಾರದಲ್ಲಿ ಪ್ರಮುಖವಾಗಿ ಭೌತವಿಜ್ಞಾನ, ರಸಾಯನಶಾಸ್ತ್ರ ಮತ್ತು ಜೀವ ವಿಜ್ಞಾನ ಪ್ರಯೋಗಾಲಯದ ಉಪಕರಣಗಳ ಪರಿಚಯ ಮತ್ತು ಪ್ರಯೋಗಾಲಯ ಉಪಕರಣಗಳನ್ನು ಬಳಸಿ ಸರಳ ಪ್ರಯೋಗಗಳು, ತಂತ್ರಾಂಶ ಬಳಸಿ ಭೌತವಿಜ್ಞಾನ ಮತ್ತು ರಸಾಯನಶಾಸ್ತ್ರ ವರ್ಚುಯಲ್ ಪ್ರಯೋಗಾಲಯ ಬಳಕೆ, ಗಣಿತ ಓರಿಗಾಮಿ, ಗಣಿತ ಪಜಲ್ ಲೆಕ್ಕಗಳನ್ನು ಬಿಡಿಸುವುದು, ಹರ್ಬೇರಿಯಂ ತಯಾರಿಕೆ, ಫೋಲ್ಡ್‌ಸ್ಕೋಪ್ ತಯಾರಿಕೆ, ಆಹಾರ ಕಲಬೆರಕೆ ಪತ್ತೆಹಚ್ಚುವ ಪ್ರಯೋಗಗಳು, ರಸಪ್ರಶ್ನೆ, ಪರಿಸರ ನಡಿಗೆ, ಶೈಕ್ಷಣಿಕ ಪ್ರವಾಸ, ಶಿಬಿರವು ಪ್ರತಿ ದಿನ ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಮತ್ತು ನೊಂದಾಯಿಸಲು ಸಂಪರ್ಕಿಸಿ ಜಿ.ಬಿ.ಸಂತೋಷ್‌ಕುಮಾರ್ ಮೊ: 8105503863.


## ನಿಧನ



### ಎನ್.ನಿಂಗರಾಜು

ಮೈಸೂರು,ಏ.29–ಚಾಮರಾಜನಗರ ಜಿಲ್ಲೆಯ ಲೆಕ್ಕ ಪರಿಶೋಧನೆ–ಲೆಕ್ಕಪತ್ರ ಇಲಾಖೆ ನೌಕರ ಎನ್.ನಿಂಗರಾಜು (53) ಭಾನುವಾರ ನಿಧನರಾದರು. ಇವರು ಪತ್ನಿ ಶಿಕ್ಷಕಿ ಸರಸ್ವತಿ, ಇಬ್ಬರು ಮಕ್ಕಳು, ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಕೊಳ್ಳೆಗಾಲ ತಾಲೂಕಿನ ಹೊಸ ಅಣಗಳ್ಳಿ ಗ್ರಾಮದಲ್ಲಿ ಸೋಮವಾರ ಮಧ್ಯಾಹ್ನ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮೃತರ ನಿಧನಕ್ಕೆ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ, ಶಿಕ್ಷಕರು, ಸ್ನೇಹಿತರು ಹಾಗೂ ಗ್ರಾಮಸ್ಥರು ಸಂತಾಪ ಸೂಚಿಸಿದ್ದಾರೆ.

## ಮೈಸೂರು ಹಾಗೂ ಸುತ್ತಮುತ್ತ ಇಂದು...



### ಇಂದಿನ ಪಂಚಾಂಗ


**30.04.2024 ಮಂಗಳವಾರ, ಮಳೆ ನಕ್ಷತ್ರ: ಭರಣಿ 27.04.2024ರಿಂದ 10.05.2024 ಕ್ರೋಧಿ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಕೃಷ್ಣ ಪಕ್ಷ, ತಿಥಿ: ಸಪ್ತಮಿ, ನಕ್ಷತ್ರ: ಉತ್ತರಾಷಾಢ, ರಾಹುಕಾಲ: ಮಧ್ಯಾಹ್ನ 3ರಿಂದ 4.30ವರೆಗೆ**

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7ರವರೆಗೆ

■ **ಸೇಂಟ್ ಜೋಸೆಫ್ಸ್ ಪ್ರಥಮ ದರ್ಜೆ ಕಾಲೇಜು: ಜೋ ಫೆಸ್ಟ್, ಅಧ್ಯಕ್ಷತೆ: ರೆ.ಫಾ. ವಿಜಯಕುಮಾರ್, ಮುಖ್ಯ ಅತಿಥಿ:** ಮೈಸೂರು ವಿವಿಯ ಕಾಲೇಜು ಅಭಿವೃದ್ಧಿ ಮಂಡಳಿ ನಿರ್ದೇಶಕ ಡಾ.ಡಿ.ಆನಂದ್, ಗೌರವ ಅತಿಥಿ: ಸಾಹಿತಿ ಎಂ.ಸಿ.ಬಿಜ್ಜು, ಉಪಸ್ಥಿತರು: ರೆ.ಫಾ. ಮದಲೈ ಮುತ್ತು, ರೆ.ಫಾ. ಅವಿನಾಶ್, ಸೆಬಿ ಮಾಪ್ಲಿ, ಪ್ರಾಂಶುಪಾಲ ಹೆಚ್.ಎನ್.ಚಂದ್ರಶೇಖರ್, ಸ್ಥಳ: ಸೇಂಟ್ ಜೋಸೆಫ್ಸ್ ಕಾಲೇಜು ಆವರಣ, ಜಯಲಕ್ಷ್ಮೀಪುರಂ, ಸಂಜೆ 6.30ಕ್ಕೆ

■ **ಶ್ರೀ ರಾಮಾಭ್ಯುದಯ ಸಭಾ ಪಬ್ಲಿಕ್ ಚಾರಿಟಬಲ್ ಟ್ರಸ್ಟ್:** ಶ್ರೀ ಕ್ರೋಧಿನಾಮ ಸಂವತ್ಸರದ 134ನೇ ವರ್ಷದ ಶ್ರೀ ರಾಮೋತ್ಸವ, ಶಯನೋತ್ಸವ, ಸಂಜೆ 6.30ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮ, ಸ॥ ವಿ॥ ಶ್ರೀಮತಿ ದೀಪ ರಘನಂದನ್ ಅವರಿಂದ, ಪಿಟೀಲು– ಶ್ರೀಮತಿ ದಿವ್ಯಶ್ರೀ, ಮೃದಂಗ–ಡಾ.ಪ್ರಹಲ್ಲಾದ ರಾವ್, ಘಟಂ–ರಘುನಂದನ್, ಸ್ಥಳ: ಸಭಾದ ಆವರಣ, ಶ್ರೀರಾಮಪೇಟೆ.

## ಮೈಸೂರು ಆಕಾಶವಾಣಿ



**ಬೆಳಗ್ಗೆ:** 6.10–ಚಿಂತನ, 6.15–ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಕರುನಾಡ ಕಬ್ಬಿಗರು, ಪ್ರಸ್ತುತಿ–ಡಾ.ವಿನೋದಾ, 6.40–ಪದಸಂಸ್ಕೃತಿ, ಪ್ರಸ್ತುತಿ–ಡಾ.ಬಿ.ವಿ.ವಸಂತಕುಮಾರ್, 6.50–ರೈತರಿಗೆ ಸಲಹೆ, 7.15–ಕಾದಂಬರಿ ವಿಹಾರ, 8.30–ಪರಾಗ–ಬೇಸಾಯದ ಬದುಕು ಸರಾಗ, ಬಾನುಲಿ ಸರಣಿ–ಪ್ರಸ್ತುತಿ–ಎನ್.ಕೇಶವಮೂರ್ತಿ, 8.45–ಚಿತ್ರಗೀತೆ, 10.00–ಶಾಸ್ತ್ರೀಯ ಸಂಗೀತ–ಜಿ.ಶ್ರೀಕಾಂತ್, ಹಾಡುಗಾರಿಕೆ–11.00–ಮಿಶ್ರ ಮಾಧುರ್ಯ, 12.30 ದೇವರನಾಮ–1.00–ಚಿತ್ರಗೀತೆಗಳು, 1.20–ಭಾವಗೀತೆಗಳು, 4.30–ಕಥಾ ಕಾಲಕ್ಷೇಪ, ಶ್ರೀ ತಿರುಪತಿ ವೆಂಕಟೇಶ್ವರ ಮಹಿಮೆ, ಪ್ರಸ್ತುತಿ–ವಿದ್ವಾನ್ ಭದ್ರಗಿರಿ ಅಚ್ಯುತದಾಸರು, 6.50–ಕೃಷಿರಂಗ–"ರೇಷ್ಮೆ ಐಸಿರಿ"–ರೇಷ್ಮೆ ಕೃಷಿ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ, ಹಿಪ್ಪುನೇರಳೆ ತೋಟದ ನಿರ್ವಹಣೆ ಕುರಿತ ನೇರ ಫೋನ್–ಇನ್ ಕಾರ್ಯಕ್ರಮ, ಭಾಗವಹಿಸುತ್ತಾರೆ ಮೈಸೂರಿನ ಕೇಂದ್ರ ರೇಷ್ಮೆ ಸಂಶೋಧನೆ ಹಾಗೂ ತರಬೇತಿ ಸಂಸ್ಥೆಯ ವಿಜ್ಞಾನಿಗಳಾದ ಡಾ.ಸಿ.ಎಂ.ಬಾಬು ಹಾಗೂ ಡಾ.ರವೀಂದ್ರ, ಪ್ರಸ್ತುತಿ–ಎನ್.ಕೇಶವ ಮೂರ್ತಿ, 10.10–ಗಮಕ ವ್ಯಾಖ್ಯಾನ–"ಚೈತ್ರವನ" ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ ವಾಚನ–ಹೆಚ್.ಆರ್.ಕೇಶವಮೂರ್ತಿ ವ್ಯಾಖ್ಯಾನ– ಮಾರ್ಕಾಂಡೇಯ ಅವಧಾನಿ, ಪ್ರಸ್ತುತಿ–ಡಾ.ಎ.ಎಸ್.ಶಂಕರನಾರಾಯಣ, 10.30–ಸವಿನೆನಪು

### ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣ

# ಹೆಚ್‌ಡಿಕೆ–ಡಿಕೆಸು ಏಟಿಗೆ–ಎದಿರೇಟು

- ಸಂತ್ರಸ್ತರಿಗೆ ಸರ್ಕಾರ ರಕ್ಷಣೆ ನೀಡುವಂತೆ ಸಂಸದ ಡಿ.ಕೆ.ಸುರೇಶ್ ಆಗ್ರಹ
- ನಿಮ್ಮ ದಬ್ಬಾಳಿಕೆಯಿಂದ ಜೀವ ಬಿಟ್ಟ ಜನರಿಗೆ ಯಾವ ರಕ್ಷಣೆ ಕೊಟ್ಟಿದ್ದೀರಿ: ಹೆಚ್‌ಡಿಕೆ

ಬೆಂಗಳೂರು, ಏ.29(ಕೆಎಂಶಿ)–ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಹಾಗೂ ಸಂಸದ ಡಿ.ಕೆ.ಸುರೇಶ್ ನಡುವೆ ಪ್ರಜ್ವಲ್ ರೇವಣ್ಣ ವಿಷಯದಲ್ಲಿ ಟ್ವೀಟ್ ಸಮರ ನಡೆದಿದೆ.

ಪ್ರಜ್ವಲ್ ರೇವಣ್ಣ ವಿಚಾರಕ್ಕೆ ಸಂಬಂಧಿಸಿದಂತೆ ಸುರೇಶ್ ಟ್ವೀಟ್ ಮಾಡಿ, ಪ್ರಜ್ವಲ್‌ನಿಂದ ದೌರ್ಜನ್ಯಕ್ಕೊಳಗಾದ ಹೆಣ್ಣು ಮಕ್ಕಳಿಗೆ ಆ ಕುಟುಂಬದಿಂದ ಯಾವುದೇ ಸಮಯಕ್ಕೂ ಆಪತ್ತು ತಪ್ಪಿದ್ದಲ್ಲ.

ಹೀಗಾಗಿ ಸರ್ಕಾರ ಜವಾಬ್ದಾರಿ ತೆಗೆದುಕೊಂಡು ಎಲ್ಲಾ ಸಂತ್ರಸ್ತೆಯರಿಗೂ ಸೂಕ್ತ ರಕ್ಷಣೆ ಕೊಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸುರೇಶ್ ಒತ್ತಾಯಿಸಿದ್ದಾರೆ.

ಸುರೇಶ್ ಟ್ವೀಟ್‌ಗೆ ಪ್ರತಿ ಟ್ವೀಟ್ ಮಾಡಿರುವ ಕುಮಾರಸ್ವಾಮಿ, ನಿಮ್ಮ ದಬ್ಬಾಳಿಕೆಯಿಂದ ಜೀವ ಬಿಟ್ಟ ಜನರಿಗೆ ಯಾವ ರೀತಿ ಭದ್ರತೆ ಕೊಟ್ಟಿದ್ದೀರಿ ಎಂದು ಪ್ರಶ್ನಿಸಿದ್ದಾರೆ. ನೀವು, ನಿಮ್ಮ ಅಣ್ಣ ಸೋಲುವ ಮುನ್ಸೂಚನೆ ಸಿಕ್ಕಿದ್ದರಿಂದ ಈ ರೀತಿ ನೀಚ ರಾಜಕೀಯ ಮಾಡುತ್ತಿರುವುದು ನಮಗೆ ಮೇಲ್ನೋಟಕ್ಕೆ ಕಾಣಿಸುತ್ತಿದೆ. ಈ ಪೆನ್ ಡ್ರೈವ್ ನಿಮ್ಮ ಅಣ್ಣನಿಗೆ ಎರಡು ತಿಂಗಳ ಹಿಂದೆಯೇ ಗೊತ್ತಿದ್ದರೆ ಯಾಕೆ ನೀವೇ ದೂರು ಕೊಡಲಿಲ್ಲ. ನಿಮ್ಮ ಈ ರಾಜಕೀಯ ನಿಜಕ್ಕೂ ಅಸಹ್ಯ ಎಂದಿದ್ದಾರೆ.



ಕುಮಾರಸ್ವಾಮಿ ಮತ್ತು ಸುರೇಶ್ ಟ್ವೀಟ್ ಹೊರ ಬರುತ್ತಿದ್ದಂತೆ, ಹಲವಷ್ಟು ನಾಗರಿಕರು ಕುಮಾರಸ್ವಾಮಿ ಎತ್ತಿರುವ ಪ್ರಶ್ನೆ ಬೆಂಬಲಿಸಿ ಸಹೋದರರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಟ್ವೀಟ್ ಸಮರದ ನಡುವೆಯೇ ಮಾಜಿ ಸಚಿವ ಎಚ್.ಡಿ.ರೇವಣ್ಣ, ಪೆನ್ ಡ್ರೈವ್ ಪ್ರಕರಣದ ನಂತರ ಸಾರ್ವಜನಿಕವಾಗಿ ಕಾಣಿಸಿಕೊಂಡು, ಸುದ್ದಿಗಾರರೊಂದಿಗೆ ಮಾತನಾಡಿ, ಇದು ನಮ್ಮ ಕುಟುಂಬದ ವಿರುದ್ಧ ನಡೆದಿರುವ ರಾಜಕೀಯ ಷಡ್ಯಂತ್ರ ಎಂದಿದ್ದಾರೆ. ಇದಕ್ಕೆ ಹೆದರಿ ನಾವು ಓಡಿಹೋಗುವುದಿಲ್ಲ, ಲೈಂಗಿಕ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ನೇಮಕ ಮಾಡಿದ್ದಾರೆ. ನಾವು ಕಾನೂನು ರೀತಿ ಹೋರಾಟ ಮಾಡುತ್ತೇವೆ, ಪ್ರಜ್ವಲ್ ಏನೂ ಓಡಿ ಹೋಗಿಲ್ಲ, ಆತ ಸಂಸದ, ಮೊದಲಿನ ಕಾರ್ಯಕ್ರಮದಂತೆ ವಿದೇಶಕ್ಕೆ ತೆರಳಿದ್ದಾನೆ. ಅವನು ತೆರಳುವಾಗ ಸರ್ಕಾರ ಎಸ್‌ಐಟಿ ತನಿಖಾ ಆದೇಶವನ್ನೂ ಮಾಡಿರಲಿಲ್ಲ, ಎಫ್‌ಐಆರ್ ಸಹ ಹಾಕಿರಲಿಲ್ಲ.

ತನಿಖೆಗೆ ಕರೆದರೆ ಬರುತ್ತಾನೆ. ಈಗಾಗಲೇ ಪ್ರಕರಣವನ್ನು ತನಿಖಾ ಸಂಸ್ಥೆಗೆ ವಹಿಸಿರುವುದರಿಂದ ನಾನು ಹೆಚ್ಚು ಮಾತನಾಡಲು ಬಯಸುವುದಿಲ್ಲ, ನಾವು ಓಡಿ ಹೋಗುವುದೂ ಇಲ್ಲ, ಇದನ್ನು ಎದುರಿಸುತ್ತೇವೆ ಎಂದರು.

### ಲೈಂಗಿಕ ದೌರ್ಜನ್ಯ ಆರೋಪ

## ಪ್ರಜ್ವಲ್ ಜೆಡಿಎಸ್‌ನಿಂದ ಅಮಾನತು ಸಾಧ್ಯತೆ

ಬೆಂಗಳೂರು,ಏ.29(ಕೆಎಂಶಿ)–ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ಜೆಡಿಎಸ್‌ನಿಂದ ಅಮಾನತು ಮಾಡುವ ಸಾಧ್ಯತೆ ಇದೆ.



ಪ್ರಜ್ವಲ್ ವಿರುದ್ಧದ ಲೈಂಗಿಕ ದೌರ್ಜನ್ಯ ಆರೋಪದ ಹಿನ್ನೆಲೆಯಲ್ಲಿ ಜೆಡಿಎಸ್, ಸಂಸದರ ಮೇಲೆ ಈ ಕಠಿಣ ಕ್ರಮ ಕೈಗೊಳ್ಳಲು ನಿರ್ಧರಿಸಿದೆ. ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ.ದೇವೇಗೌಡರ ಸಲಹೆಯಂತೆ ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ.ಕುಮಾರಸ್ವಾಮಿ ಅವರು, ಪ್ರಜ್ವಲ್ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ನಿರ್ಧರಿಸಿದ್ದಾರೆ. ಮಾಜಿ ಸಚಿವ ಜಿ.ಟಿ. ದೇವೇಗೌಡರ ಅಧ್ಯಕ್ಷತೆಯಲ್ಲಿ ಕೋರ್ ಕಮಿಟಿ ಸಭೆ ನಾಳೆ ಹುಬ್ಬಳ್ಳಿಯಲ್ಲಿ ನಡೆಯಲಿದ್ದು, ಅಲ್ಲಿ ಪ್ರಜ್ವಲ್ ವಿಚಾರಕ್ಕೆ ಸಂಬಂಧಿಸಿದಂತೆ ಚರ್ಚೆ ಮಾಡಿ, ಮುಂದಿನ ಕ್ರಮದ ಕುರಿತು ನಿರ್ಧರಿಸಲಿದ್ದಾರೆ.

ಮೊದಲ ಹಂತದಲ್ಲಿ ನಡೆದ 14 ಲೋಕಸಭಾ ಕ್ಷೇತ್ರಗಳ ಚುನಾವಣೆಗೆ ಸಂಬಂಧಿಸಿದಂತೆ ಎನ್‌ಡಿಎ ಮೈತ್ರಿಕೂಟ ಎಷ್ಟು ಸ್ಥಾನಗಳಲ್ಲಿ ಗೆಲುವು ಸಾಧಿಸಲಿದೆ ಎಂಬ ಬಗ್ಗೆ ಸಭೆಯಲ್ಲಿ ಚಿಂತನ–ಮಂಥನ ನಡೆಯಲಿದೆ. ಇದೇ ಸಂದರ್ಭದಲ್ಲಿ ಹಾಸನ ಲೋಕಸಭಾ ಚುನಾವಣೆಯ ಅಂತಿಮ ಘಟ್ಟದಲ್ಲಿ ಪ್ರಜ್ವಲ್ ವಿರುದ್ಧದ ಲೈಂಗಿಕ ದೌರ್ಜನ್ಯ ಆರೋಪ ಹಾಗೂ ಅವರ ವಿರುದ್ಧ ಬಿಡುಗಡೆ ಮಾಡಿರುವ ಪೆನ್ ಡ್ರೈವ್, ಇದರ ಹಿಂದಿರುವ ಷಡ್ಯಂತ್ರ, ಎಲ್ಲದರ ಬಗ್ಗೆಯೂ ಚರ್ಚೆಯಾಗಲಿದೆ. ಪ್ರಜ್ವಲ್ ವಿರುದ್ಧದ ಲೈಂಗಿಕ ದೌರ್ಜನ್ಯ ಪ್ರಕರಣವನ್ನು ಎನ್‌ಡಿಎ ಮೈತ್ರಿಕೂಟಕ್ಕೆ ಕಳಂಕ ತರಲು ವಿರೋಧಿಗಳು ಯತ್ನಿಸುತ್ತಾರೆ. ಸಂಸದರು ದೌರ್ಜನ್ಯದಲ್ಲಿ ಭಾಗಿಯಾಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ ಅವರನ್ನು ಪಕ್ಷದಿಂದ ಉಚ್ಛಾಟಿಸುವ ಬಗ್ಗೆ ತೀರ್ಮಾನವಾಗಲಿದೆ.

## ಛತ್ತೀಸ್‌ಗಢದಲ್ಲಿ ಟ್ರಕ್‌ಗೆ ಡಿಕ್ಕಿ ಹೊಡೆದ ಗೂಡ್ಸ್ ವಾಹನ: 8 ಮಂದಿ ಸಾವು

**ಬೆಮೆಟರಾ:** ಛತ್ತೀಸ್‌ಗಢದ ಬೆಮೆಟರಾ ಜಿಲ್ಲೆಯಲ್ಲಿ ಗೂಡ್ಸ್ ವಾಹನವೊಂದು ಟ್ರಕ್‌ಗೆ ಡಿಕ್ಕಿಯಲ್ಲಿ ಅದರಲ್ಲಿ ಸಂಚರಿಸುತ್ತಿದ್ದ ಐವರು ಮಹಿಳೆಯರು, ಮೂವರು ಮಕ್ಕಳು ಮೃತಪಟ್ಟು 23 ಮಂದಿ ಗಾಯಗೊಂಡಿದ್ದಾರೆ. ಕಳೆದ ತಡರಾತ್ರಿ ಈ ದುರ್ಘಟನೆ ಸಂಭವಿಸಿದ್ದು ಗೂಡ್ಸ್ ವಾಹನದಲ್ಲಿ ಪ್ರಯಾಣಿಕರು ಕಥಿಯಾದಲ್ಲಿ ಕುಟುಂಬ ಸಮಾರಂಭವೊಂದರಲ್ಲಿ ಭಾಗಿಯಾಗಿ ವಾಪಸ್ಸಾಗುತ್ತಿದ್ದ ವೇಳೆ ಈ ಘಟನೆ ಸಂಭವಿಸಿದೆ. ಗಾಯಗೊಂಡವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಗಂಭೀರ ಗಾಯಗೊಂಡ ನಾಲ್ವರನ್ನು ರಾಯ್‌ಪುರದ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ದಾಖಲಿಸಲಾಗಿದೆ.

## ಮೈಸೂರಿನ 13 ಪರೀಕ್ಷಾ ಕೇಂದ್ರಗಳಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ–2 ಆರಂಭ




ಮೈಸೂರು, ಏ.29(ಬಿಎಲ್‌ಯು)– ದ್ವಿತೀಯ ಪಿಯುಸಿ ಪರೀಕ್ಷೆ–2 ಇಂದಿನಿಂದ ಆರಂಭವಾಗಿದ್ದು, ಮೈಸೂರಿನ 13 ಪರೀಕ್ಷಾ ಕೇಂದ್ರಗಳಲ್ಲಿ ಬಿಗಿ ಭದ್ರತೆಯಲ್ಲಿ ಪರೀಕ್ಷೆ ನಡೆಯುತ್ತಿದೆ.

ಮೈಸೂರು ಜಿಲ್ಲೆಯಲ್ಲಿ ಒಟ್ಟು 8,764 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ. ಮೈಸೂರು ನಗರದ 7 ಪರೀಕ್ಷಾ ಕೇಂದ್ರ ಹಾಗೂ 6 ತಾಲೂಕು ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆ ನಡೆಯುತ್ತಿದೆ. ಕಳೆದ ತಿಂಗಳು ನಡೆದ ಪರೀಕ್ಷೆಯಲ್ಲಿ ಅನುತೀರ್ಣರಾದವರು ಉತೀರ್ಣರಾಗಲು ಮತ್ತೊಂದು ಅವಕಾಶ ನೀಡಲಾಗಿದೆ.

ಮೊದಲ ದಿನವಾದ ಇಂದು ಕನ್ನಡ, ಅರೇಬಿಕ್, ಇತಿಹಾಸ ಹಾಗೂ ಭೌತಶಾಸ್ತ್ರ ವಿಷಯಗಳಿಗೆ ಪರೀಕ್ಷೆ ನಡೆಯಿತು. ಬೆಳಗ್ಗೆ 10.30 ಗಂಟೆಗೆ ಆರಂಭವಾದ ಪರೀಕ್ಷೆ ಮಧ್ಯಾಹ್ನ 1.30 ಗಂಟೆ ತನಕ ನಡೆಯಿತು. ಪರೀಕ್ಷಾ ಕೇಂದ್ರಗಳಿಗೆ ಮುಖ್ಯ ಅಧೀಕ್ಷಕರು, ಪ್ರಶ್ನೆ ಪತ್ರಿಕೆ ಪಾಲಕರು ಹಾಗೂ ವಿಶೇಷ ಜಾಗೃತ ದಳವನ್ನು ನಿಯೋಜಿಸಲಾಗಿತ್ತು. ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಲು ಫ್ಲೈಯಿಂಗ್ ಸ್ಕ್ವಾರ್ಡ್ ಕೂಡ ಕಾರ್ಯ ನಿರ್ವಹಿಸಿತು.

ಪರೀಕ್ಷಾ ಕೇಂದ್ರಗಳ ಸುತ್ತ ಸೆಕ್ಷನ್ 144 ರ ಪ್ರಕಾರ ನಿಷೇಧಾಜ್ಞೆ ಜಾರಿಗೊಳಿಸಲಾಗಿತ್ತು. ಪರೀಕ್ಷಾ ಕೇಂದ್ರಗಳ ಬಳಿ ಯಾವುದೇ ಅಕ್ರಮಗಳಿಗೆ ಅವಕಾಶ ನೀಡದಂತೆ ಜೆರಾಕ್ಸ್ ಅಂಗಡಿಗಳನ್ನು ಮುಚ್ಚಲಾಗಿತ್ತು. ಅಪರಿಚಿತ ವ್ಯಕ್ತಿಗಳು ಪರೀಕ್ಷಾ ಕೇಂದ್ರಗಳ ಬಳಿ ಸುಳಿಯದಂತೆ ಪೊಲೀಸರನ್ನು ನಿಯೋಜಿಸಲಾಗಿತ್ತು.

ಪರೀಕ್ಷಾ ಕೇಂದ್ರದಲ್ಲಿ ವಿದ್ಯುತ್ ಅಡಚಣೆ ಉಂಟಾಗದಂತೆ ಚೆಸ್ಕಾಂ ಸಿಬ್ಬಂದಿಯನ್ನು ಸನ್ನದ್ಧಗೊಳಿಸಲಾಗಿತ್ತು. ವಿದ್ಯಾರ್ಥಿಗಳಿಗೆ ಅನಾರೋಗ್ಯ ಉಂಟಾದರೆ ಕೂಡಲೇ ಚಿಕಿತ್ಸೆ ನೀಡಲು ಆರೋಗ್ಯ ಇಲಾಖೆಯ ಸಿಬ್ಬಂದಿಯನ್ನು ಕೂಡ ನೇಮಕ ಮಾಡಲಾಗಿತ್ತು. ಇಂದಿನಿಂದ ಆರಂಭವಾಗಿರುವ ಪರೀಕ್ಷೆ ಮೇ. 16ರವರೆಗೆ ವಿವಿಧ ವಿಷಯಗಳಲ್ಲಿ ನಡೆಯಲಿದ್ದು, ಪ್ರತಿ ಪರೀಕ್ಷಾ ದಿನದಂದು ಇದೇ ರೀತಿಯ ಕಟ್ಟುನಿಟ್ಟಿನ ಕ್ರಮ ವಹಿಸಲಾಗುತ್ತದೆ ಎಂದು ಡಿಡಿಪಿಯು ಮರಿಸ್ವಾಮಿ ತಿಳಿಸಿದ್ದಾರೆ.



ಮೈಸೂರು ವಕೀಲರ ಸಂಘದ ವತಿಯಿಂದ ಹೈಕೋರ್ಟ್ ನ್ಯಾಯಮೂರ್ತಿಗಳಾದ ಶ್ರೀಮತಿ ಉಮಾ ಅವರನ್ನು ನೆನಪಿನ ಕಾಣಿಕೆ ನೀಡಿ, ಆತ್ಮೀಯವಾಗಿ ಸನ್ಮಾನಿಸಲಾಯಿತು. ಚಿತ್ರದಲ್ಲಿ ಹಿರಿಯ ವಕೀಲರಾದ ಮೈತಲಿ ಸಾವಿತ್ರಿ, ಸಂಘದ ಅಧ್ಯಕ್ಷ ಎಸ್.ಲೋಕೇಶ್, ಕಾರ್ಯದರ್ಶಿ, ಸುಧೀರ್ ಮತ್ತು ಇನ್ನಿತರ ಸದಸ್ಯರನ್ನು ಕಾಣಬಹುದು.

## ಇಂದು ವಿದ್ಯಾರ್ಥಿಗಳಿಗೆ ಅರಿವು ಕಾರ್ಯಕ್ರಮ

ಮೈಸೂರು, ಏ.29– ಮೈಸೂರಿನ ವಿಶ್ವೇಶ್ವರನಗರ ಕೈಗಾರಿಕಾ ಬಡಾವಣೆಯಲ್ಲಿರುವ ವಾಸವಿ ಸೇವಾ ಸಮಿತಿ ಮೈಸೂರು ಸೌತ್ ವತಿಯಿಂದ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ ಅರಿವು ಕಾರ್ಯಕ್ರಮ ಆಯೋಜಿಸಲಾಗಿದೆ. ನಾಳೆ (ಏ.30) ಸಂಜೆ 5 ಗಂಟೆಗೆ ಅಲ್ಲಿನ ವಾಸವಿ ಪ್ರಾರ್ಥನಾ ಮಂದಿರದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಮುಂದಿನ ಭವಿಷ್ಯದ ವಿದ್ಯಾಭ್ಯಾಸ ಹಾಗೂ ವೃತ್ತಿ ಜೀವನ ಆಯ್ಕೆ ಬಗ್ಗೆ ಅರಿವು ಮೂಡಿಸಲಾಗುತ್ತದೆ.

ಕಾರ್ಯಕ್ರಮವನ್ನು ರಾಮಕೃಷ್ಣಾಶ್ರಮದ ಸ್ವಾಮಿ ಮಹಾ ಮೇದಾನಂದ ಮಹಾರಾಜ್ ಉದ್ಘಾಟಿಸಲಿದ್ದು, ಗಣಿತ ವಿಭಾಗದ ಪ್ರೊಫೆಸರ್ ಡಾ.ಎಂ.ಎಸ್.ಸಂಜಯ್, ಸಿವಿಲ್ ಇಂಜಿನಿಯರ್ ಡಾ.ಮಂಜುನಾಥ್, ಐಸಿಎಸ್‌ಡಿ ಮೈಸೂರು ವಿಭಾಗದ ಮಾಜಿ ಛೇರ್ಮನ್ ಡಿ.ಎನ್.ಫಣಿದತ್ತ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲಿದ್ದಾರೆ. ನೋಂದಣಿಗಾಗಿ ವೇಣುಗೋಪಾಲ್ (9845225376) ಅಥವಾ ವಿಕ್ರಮ್ (97384 11401) ಅವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಅಕ್ಯೂಪ್ರೆಶರ್, ಸುಜೋಕ್ ಚಿಕಿತ್ಸಾ ಶಿಬಿರ

ಮೈಸೂರು,ಏ.29–ಮೈಸೂರು ಜಿಲ್ಲಾ ಪ್ರಾಕೃತಿಕ ಚಿಕಿತ್ಸಾ ಪರಿಷತ್ ಮತ್ತು ವಿಜಯನಗರ ಮೂರನೇ ಹಂತದ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಆಶ್ರಯದಲ್ಲಿ ಅಕ್ಯೂಪ್ರೆಶರ್ ಹಾಗೂ ಸುಜೋಕ್, ಅಕ್ಯೂಡಿಜಿಟಲ್ ಫಿಸಿಯೋ ಥೆರಪಿ ಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಚಿಕಿತ್ಸಾ ಶಿಬಿರದಲ್ಲಿ ಬಿಪಿ, ಶುಗರ್, ಬೊಜ್ಜು ನಿವಾರಣೆ, ಗ್ಯಾಸ್ಟ್ರಿಕ್, ಅಸಿಡಿಟಿ, ಅಸ್ತಮಾ, ಅಜೀರ್ಣತೆ, ಅಲರ್ಜಿ, ಹಸಿರುನರ (ವೆರೆಕೋವೈನ್) ಬೆನ್ನು ನೋವು, ಸಯಾಟಿಕ್, ಸಂಧಿವಾತ, ಥೈರಾಯಿಡ್, ನಿದ್ರಾಹೀನತೆ, ಮೊಣಕಾಲು ನೋವು, ಕುತ್ತಿಗೆ ನೋವು, (ಸ್ಪಾಂಡಿಲಾಸಿಸ್), ಮಲಬದ್ಧತೆ, ಹಿಮ್ಮಡಿ ನೋವು, ಪಾದಗಳ ಉರಿ ಇನ್ನಿತರ ರೋಗಗಳಿಗೆ ಚಿಕಿತ್ಸೆ ನೀಡಲಾಗುವುದು. ಶಿಬಿರವು ವಿ.ಕೆ.ಪಬ್ಲಿಕ್ ಸ್ಕೂಲ್, 3ನೇ ಹಂತ, ಎ ಬ್ಲಾಕ್, ವಿಜಯನಗರ, ಮೈಸೂರು ಇಲ್ಲಿ ಬೆಳಗ್ಗೆ 10.30ರಿಂದ ಸಂಜೆ 7.30ರವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಮೊ.ಸಂ. 98451 82716, 78927 98768 ಸಂಪರ್ಕಿಸಬಹುದು.

## ಆರೋಗ್ಯಾಯುಷ್ಯಾ ಆರೋಗ್ಯವರ್ಧಕ ಶಿಬಿರ

ಮೈಸೂರು, ಏ.29– ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ, (ಹೆಲಿಪ್ಯಾಡ್ ಹತ್ತಿರ), ಆಲನಹಳ್ಳಿ, ಮೈಸೂರು ಇಲ್ಲಿ ಆರೋಗ್ಯಾಯುಷ್ಯಾ ಆರೋಗ್ಯ ವರ್ಧಕ ಶಿಬಿರವನ್ನು ಮೇ 1ರಿಂದ 31ರವರೆಗೆ ಹಮ್ಮಿಕೊಳ್ಳಲಾಗಿದೆ. ಶಿಬಿರದಲ್ಲಿ ಆರೋಗ್ಯಕರ ಆಯುಷ್ಯ ಬಯಸುವವರು, ಬೊಜ್ಜು, ಸಕ್ಕರೆ ಕಾಯಿಲೆ, ಬಿಪಿ, ಕೀಲುನೋವು, ಅಲರ್ಜಿ, ಚರ್ಮದ ರೋಗಗಳು, ಒತ್ತಡ, ಆತಂಕ, ಬಾಲನೆರೆ, ವಯೋಸಹಜ ಗುಣಗಳು, ದೃಷ್ಟಿ ಮಾಂದ್ಯ, ತಲೆನೋವು, ಕೆಮ್ಮು, ಅಸ್ತಮಾ, ಪಿಸಿಓಡಿ, ಪುರುಷ ಹಾಗೂ ಸ್ತ್ರೀ ಬಂಜೆತನದ ಬಗ್ಗೆ ತಜ್ಞವೈದ್ಯರಿಂದ ತಪಾಸಣೆ, ಸಲಹೆ ಮತ್ತು ಚಿಕಿತ್ಸೆಯನ್ನು ನೀಡಲಾಗುತ್ತದೆ. ಶಿಬಿರವು ಬೆಳಗ್ಗೆ 9ರಿಂದ 4.30ರವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿ ಹಾಗೂ ಹೆಸರು ನೋಂದಾಯಿಸಿಕೊಳ್ಳಲು ಮೊ.ಸಂ. 9844549152, 9741513392 ಸಂಪರ್ಕಿಸುವುದು.

## ನಾಳೆ ಗುರು ಮಹಾಶಾಂತಿ ಹೋಮ

ಮೈಸೂರು,ಏ.29–ನಗರದ ದಿವಾನ್ಸ್ ರಸ್ತೆಯಲ್ಲಿರುವ ಶ್ರೀ ಅಮೃತೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಮೇ 1ರ ಬುಧವಾರದಂದು ಬೆಳಗ್ಗೆ 10ಕ್ಕೆ ಗುರು ಮಹಾಶಾಂತಿಯನ್ನು ಏರ್ಪಡಿಸಲಾಗಿದೆ. ಮೇಷ ರಾಶಿಯಿಂದ ವೃಷಭ ರಾಶಿಗೆ ಗುರುಗ್ರಹ ಪ್ರವೇಶಿಸುತ್ತಿರುವುದರಿಂದ ಮೇಷ, ವೃಷಭ, ಮಿಥುನ, ಕಟಕ, ಕನ್ಯಾ, ವೃಶ್ಚಿಕ, ಮಕರ, ಕುಂಭ ರಾಶಿಯವರಿಗೆ ವಿಶೇಷ ಶಾಂತಿ ಹೋಮ ನೆರವೇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸೋಮಶೇಖರ್ ಅವರನ್ನು ಮೊ.ನಂ. 9535413361ರ ಮೂಲಕ ಸಂಪರ್ಕಿಸಬಹುದು.




ಮೈಸೂರಿನ ಸರ್ದಾರ್ ವಲ್ಲಭಭಾಯ್ ಪಟೇಲ್‌ನಗರದಲ್ಲಿ ಜೈ ಭೀಮ್ ಬಂಧು ಬಳಗದ ವತಿಯಿಂದ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ 133ನೇ ಜನ್ಮದಿನವನ್ನು ಆಚರಿಸಲಾಯಿತು. ಸಂಘದ ಅಧ್ಯಕ್ಷ ವೈ.ಎಂ.ರಂಗಸ್ವಾಮಿ ಅಧ್ಯಕ್ಷತೆಯಲ್ಲಿ ಬೌದ್ಧ ಗುರುಗಳಾದ ಬೋಧಿ ರತ್ನ ಬಂತೇಜಿಯವರು ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಮುಖ್ಯ ಭಾಷಣಕಾರರಾಗಿ ಪ್ರಗತಿಪರ ಚಿಂತಕ ಡಾ.ಕೃಷ್ಣಮೂರ್ತಿ ಚಮರಂ, ಮಲ್ಕುಂಡಿ ಮಹದೇವಸ್ವಾಮಿ ಭಾಗವಹಿಸಿದ್ದರು. ಈ ವೇಳೆ ಸಂಘದ ಪದಾಧಿಕಾರಿಗಳಾದ ಶಾಂತರಾಜು, ಶಿವಸ್ವಾಮಿ, ಮೋಹನ್, ಜಯಶೇಖರಯ್ಯ, ಸಿದ್ದೇಶ್, ರೇವಣ್ಣ ಇನ್ನಿತರರು ಉಪಸ್ಥಿತರಿದ್ದರು.

## ಯೋಗಾಭ್ಯಾಸ

ಮೈಸೂರು,ಏ.29–ಯೋಗವನ್ನು ನೀವು ಮಾಡುತ್ತಿದ್ದರೆ, ರೋಗವನ್ನು ನೀವು ತಡೆಯಬಹುದು. ಯೋಗ ಮಾಡಿ ಆರೋಗ್ಯವಾಗಿರಿ. ಜೆಎಸ್‌ಎಸ್ ಆಯುರ್ವೇದ ಲಲಿತಾದ್ರಿಪುರ ರಸ್ತೆ (ಹೆಲಿಪ್ಯಾಡ್ ಹತ್ತಿರ), ಆಲನಹಳ್ಳಿ, ಮೈಸೂರು ಇಲ್ಲಿ ಮೇ 1ರಿಂದ ಪ್ರತಿದಿನ ಬೆಳಗ್ಗೆ 6.30ರಿಂದ 7.30ರವರೆಗೆ ಯೋಗ ತರಬೇತಿ ಆಯೋಜಿಸಲಾಗಿದೆ. ಹೆಸರು ನೋಂದಾಯಿಸಿಕೊಳ್ಳಲು ಮೊ.ಸಂ. 99164 83919, 9632000697 ಸಂಪರ್ಕಿಸಬಹುದು.

## ಮದ್ಯದ ಅಂಗಡಿಗೆ ಬೆಂಕಿ; ಲಕ್ಷಾಂತರ ಮೌಲ್ಯದ ಮದ್ಯ ಬೆಂಕಿಗಾಹುತಿ

ಮೈಸೂರು, ಏ.29(ಬಿಎಲ್ ಯು)– ಮದ್ಯದ ಅಂಗಡಿಗೆ ಆಕಸ್ಮಿಕ ಬೆಂಕಿ ಬಿದ್ದು ಲಕ್ಷಾಂತರ ಮೌಲ್ಯದ ಮದ್ಯ ಬೆಂಕಿಗಾಹುತಿಯಾಗಿದೆ. ಈ ಘಟನೆ ಮೈಸೂರಿನ ಬಂಬೂಬಜಾರ್‌ನಲ್ಲಿ ಇಂದು ಸಂಭವಿಸಿದೆ.


ಬಂಬೂ ಬಜಾರ್‌ನ ನ್ಯೂ ಸಯ್ಯಾಜಿರಾವ್ ರಸ್ತೆಯಲ್ಲಿರುವ ಮೈಸೂರ್ ಟೈಗರ್ ಮದ್ಯದ ಅಂಗಡಿಯಲ್ಲಿ ಈ ಅಗ್ನಿ ಅವಘಡ ಸಂಭವಿಸಿದೆ. ಇಂದು ಬೆಳಗ್ಗೆ 9 ಗಂಟೆಯಲ್ಲಿ ಬಾಗಿಲು ಬಂದ್ ಮಾಡಿದ್ದು, ಅಂಗಡಿಯಿಂದ ದಟ್ಟ ಹೊಗೆ ಹೊರ ಬರುತ್ತಿತ್ತು. ಅಕ್ಕ ಪಕ್ಕದವರು ಕೂಡಲೇ ಅಂಗಡಿ ಮಾಲೀಕರು, ಅಗ್ನಿಶಾಮಕ ದಳದವರಿಗೆ ವಿಷಯ ತಿಳಿಸಿದರು.

ತಕ್ಷಣವೇ ಸ್ಥಳಕ್ಕೆ ಬಂದ ಅಂಗಡಿ ಸಿಬ್ಬಂದಿ, ಬಾಗಿಲು ತೆರೆದಾಗ ಒಳಗೆ ಇಡೀ ಅಂಗಡಿಗೆ ಬೆಂಕಿ ಆವರಿಸಿಕೊಂಡಿತ್ತು. ಅದೇ ಸಮಯಕ್ಕೆ ಸ್ಥಳಕ್ಕೆ ಬಂದ ಅಗ್ನಿಶಾಮಕ ದಳದವರು ಬೆಂಕಿ ಆರಿಸುವಲ್ಲಿ ಯಶಸ್ವಿಯಾದರು. ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿದೆಯೋ ಅಥವಾ ಬೇರೆ ಕಾರಣದಿಂದ ಬೆಂಕಿ ಬಿದ್ದಿದೆಯೋ ಎಂಬ ಬಗ್ಗೆ ಸ್ಪಷ್ಟ ಮಾಹಿತಿ ತಿಳಿದು ಬಂದಿಲ್ಲ. ಈ ಸಂಬಂಧ ಮಂಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಯಾವ ಕಾರಣಕ್ಕೆ ಬೆಂಕಿ ಬಿದ್ದಿದೆ ಎಂದು ಪೊಲೀಸರು ತನಿಖೆ ಕೈಗೊಂಡಿದ್ದಾರೆ.






ಮೈಸೂರಿನ ಬಂಬೂ ಬಜಾರ್‌ನ ನ್ಯೂ ಸಯ್ಯಾಜಿರಾವ್ ರಸ್ತೆಯಲ್ಲಿರುವ ಮೈಸೂರ್ ಟೈಗರ್ ಮದ್ಯದ ಅಂಗಡಿಯಲ್ಲಿ ಸೋಮವಾರ ಆಕಸ್ಮಿಕ ಬೆಂಕಿ ಅನಾಹುತ ಸಂಭವಿಸಿ ಲಕ್ಷಾಂತರ ರೂಪಾಯಿ ಮೌಲ್ಯದ ಮದ್ಯ ಬೆಂಕಿಗಾಹುತಿಯಾಯಿತು.



# ವಿ.ಶ್ರೀನಿವಾಸಪ್ರಸಾದ್; ಮಹಾ ಮೇಧಾವಿ

## ನಂಬಿದ ಸಿದ್ಧಾಂತ ಮುಂದಿಟ್ಟುಕೊಂಡು ಹಿರಿಮೆ ಹೆಚ್ಚಿಸಿಕೊಂಡ ಹೋರಾಟಗಾರ

**ವಿ.** ಶ್ರೀನಿವಾಸಪ್ರಸಾದ್ ಅಂದರೆ ನೆನಪಿಗೆ ಬರುವುದೇ ಅವರ ಅಪ್ರತಿಮ ಹೋರಾಟ, ದಲಿತರು ಹಾಗೂ ತುಳಿತಕ್ಕೊಳಗಾದವರ ಪರವಾಗಿ ಅವರ ಧ್ವನಿ. ಸುದೀರ್ಘ 50 ವರ್ಷಗಳ ಕಾಲ ರಾಜಕಾರಣದಲ್ಲಿದ್ದರೂ, ಒಂದೇ ಒಂದು ಕಪ್ಪುಚುಕ್ಕೆ ಇಲ್ಲದ ಪ್ರಾಮಾಣಿಕ ರಾಜಕಾರಣಿ. ಎಂತಹುದ್ದೇ ಸನ್ನಿವೇಶದಲ್ಲೂ ನೇರ ನುಡಿ. ಅಧಿಕಾರಕ್ಕಾಗಿ ಹಾತೊರೆಯದ ತಾವು ಮೈಗೂಡಿಸಿಕೊಂಡಿದ್ದ ತತ್ವ ಸಿದ್ಧಾಂತವನ್ನು ಬಿಟ್ಟುಕೊಡದ ವ್ಯಕ್ತಿತ್ವ.

### ಹೆಗಡೆಯವರ ಆಪ್ತ

**ಜ**ನತಾ ಪಕ್ಷ ಉದಯವಾದಾಗ ರಾಮಕೃಷ್ಣ ಹೆಗಡೆಯವರ ಒತ್ತಾಯದ ಮೇರೆಗೆ ಮೊದಲ ಬಾರಿಗೆ ಚಾಮರಾಜನಗರ ಲೋಕಸಭಾ ಕ್ಷೇತ್ರದಿಂದ ಚುನಾವಣಾ ಕಣಕ್ಕಿಳಿದಿದ್ದರು. 1978ರಲ್ಲಿ ನಡೆದ ಸಾರ್ವತ್ರಿಕ ವಿಧಾನಸಭಾ ಚುನಾವಣೆಯಲ್ಲಿ ತಿ.ನರಸೀಪುರ ಕ್ಷೇತ್ರದಿಂದ ಜನತಾ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದರು. ಪ್ರಸಾದ್ ಅವರು ಆರಂಭದಲ್ಲಿ ಸ್ಪರ್ಧಿಸಿದ ಮೂರೂ ಚುನಾವಣೆಗಳಲ್ಲೂ ಸೋಲನುಭವಿಸಿದರೂ, ಎದೆಗುಂದದೆ ಕ್ರೀಡಾ ಮನೋಭಾವದಿಂದ ರಾಜಕೀಯದಲ್ಲಿ ಮುಂದುವರೆದಿದ್ದರು. ಯಾವುದೇ ಅಧಿಕಾರವಿಲ್ಲದಿದ್ದರೂ ಡಾ. ಬಿ.ಆರ್.ಅಂಬೇಡ್ಕರ್ ಅವರ ತತ್ವ-ಆದರ್ಶಗಳನ್ನು ಮುಂದಿಟ್ಟುಕೊಂಡು ಯುವ ಜನತೆಯ ಸಂಘಟನೆಯಲ್ಲಿ ತಮ್ಮನ್ನು ತೊಡಗಿಸಿಕೊಂಡರು. ಪ್ರಸಾದ್ ಅವರ ಉತ್ಸಾಹ ಹಾಗೂ ಹೋರಾಟದ ಬಗ್ಗೆ ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರೇ ಮೆಚ್ಚುಗೆ ವ್ಯಕ್ತಪಡಿಸಿದ್ದರು. ಅದೇ ಸಂದರ್ಭದಲ್ಲಿ ಹಿರಿಯ ಕಾಂಗ್ರೆಸ್ ಮುಖಂಡ ಆಸ್ಕರ್ ಫರ್ನಾಂಡಿಸ್ ಅವರ ಸಂಪರ್ಕವೂ ಪ್ರಸಾದ್ ಅವರಿಗೆ ದೊರೆಯಿತು.



ರಾಜ್ಯದ ಮುಖ್ಯಮಂತ್ರಿಯಾಗಿದ್ದ ನಿಜಲಿಂಗಪ್ಪ ಅವರ ಜೊತೆ ಪ್ರಸಾದ್



ತಮ್ಮ ರಾಜಕೀಯ ಮಾರ್ಗದರ್ಶಕರಾದ ರಾಮಕೃಷ್ಣ ಹೆಗಡೆ ಜೊತೆ ಪ್ರಸಾದ್

### ಫುಟ್ಬಾಲ್ ಪ್ರೇಮಿ


**ವಿ**ದ್ಯಾರ್ಥಿ ದೆಸೆಯಲ್ಲಿ ಫುಟ್ಬಾಲ್ ಕ್ರೀಡೆಯಲ್ಲಿ ಹೆಚ್ಚಿನ ಆಸಕ್ತಿ ಹೊಂದಿದ್ದ ಅವರು, ಕಾಲೇಜು ಮಟ್ಟದ ಫುಟ್ಬಾಲ್ ಪಂದ್ಯಾವಳಿಗಳಲ್ಲಿ ಸಹ ಭಾಗವಹಿಸುತ್ತಿದ್ದರು. ಪ್ರಸಾದ್ ಚಿಕ್ಕ ವಯಸ್ಸಿನಲ್ಲೇ ಸಂಘಟನಾ ಚತುರರಾಗಿದ್ದರು. ಹೈಸ್ಕೂಲ್‌ನಲ್ಲಿ ಓದುತ್ತಿರುವಾಗಲೇ ಆರ್‌ಎಸ್‌ಎಸ್ ಸಂಪರ್ಕ ಹೊಂದಿದ್ದರು. ಸುಮಾರು 15 ವರ್ಷ ಕಾಲ ಅಖಿಲ ಭಾರತ ವಿದ್ಯಾರ್ಥಿ ಪರಿಷತ್ (ಎಬಿವಿಪಿ)ನಲ್ಲಿ ತಮ್ಮನ್ನು ತೊಡಗಿಸಿಕೊಂಡು ವಿದ್ಯಾರ್ಥಿ ಮುಖಂಡರಾಗಿ ಹೊರ ಹೊಮ್ಮಿದರು.

**ಮೈ**ಸೂರಿನ ಅಶೋಕಪುರಂನಲ್ಲಿ 1947ರ ಆಗಸ್ಟ್ 6ರಂದು ವೆಂಕಟಯ್ಯ ಮತ್ತು ಪುಟ್ಟಮ್ಮ ದಂಪತಿ ಪುತ್ರರಾಗಿ ಜನಿಸಿದ ಶ್ರೀನಿವಾಸಪ್ರಸಾದ್, ವಿದ್ಯಾರ್ಥಿ ದೆಸೆಯಲ್ಲೇ ಹೋರಾಟಗಾರರಾಗಿ ಹೊರ ಹೊಮ್ಮಿದ್ದರು. ಇವರ ತಂದೆ ಸರ್ಕಾರಿ ಉದ್ಯೋಗದಲ್ಲಿದ್ದರು. ಪ್ರಸಾದ್ ಅವರ ತಂದೆ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡುವ ಮಹಾದಾಸೆ ಹೊಂದಿದ್ದರು. ಅಶೋಕಪುರಂ ಸರ್ಕಾರಿ ಶಾಲೆಯಲ್ಲೇ ಪ್ರಾಥಮಿಕ ಶಿಕ್ಷಣ ಪಡೆದ ಪ್ರಸಾದ್ ಅವರು, ಕೃಷ್ಣಮೂರ್ತಿಪುರಂನ ಶಾರದಾ ವಿಲಾಸ್ ಪ್ರೌಢಶಾಲೆಯಲ್ಲಿ ಹೈಸ್ಕೂಲ್ ಶಿಕ್ಷಣ ಪಡೆದರು. ನಂತರ ಶಾರದಾ ವಿಲಾಸ್ ಕಾಲೇಜಿನಲ್ಲೇ ಬಿ.ಎಸ್ಸಿ ಪದವಿ ಸಹ ಪಡೆದರು.

**ಬೂಸಾ ಚಳವಳಿ ಬಳುವಳಿ:** ವಿದ್ಯಾರ್ಥಿ ಸಂಘಟನೆಗಳಲ್ಲಿ ಹೋರಾಟ ಮಾಡುತ್ತಿದ್ದ ಪ್ರಸಾದ್ ಅವರನ್ನು ರಾಜಕೀಯಕ್ಕೆ ಎಳೆತಂದಿದ್ದು ಕ್ರಾಂತಿಕಾರಿ ದಲಿತ ನಾಯಕ ಬಿ.ಬಸವಲಿಂಗಪ್ಪ ಅವರ ಬೂಸಾ ಚಳವಳಿ. 1973ರಲ್ಲಿ ಬಿ.ಬಸವಲಿಂಗಪ್ಪ ಅವರನ್ನು ಅಂದಿನ ಮುಖ್ಯಮಂತ್ರಿ ಡಿ.ದೇವರಾಜ ಅರಸ್ ಅವರು ಸಂಪುಟದಿಂದ ವಜಾಗೊಳಿಸಿದ್ದರಿಂದ ಕೆರಳಿ ಕೆಂಡವಾಗಿದ್ದ ಶ್ರೀನಿವಾಸಪ್ರಸಾದ್, ಮೈಸೂರಿನಲ್ಲಿ ದೊಡ್ಡ ಮಟ್ಟದಲ್ಲಿ ಯುವಕರನ್ನು ಸಂಘಟಿಸಿ ಬೂಸಾ ಚಳವಳಿಯನ್ನು ಬೆಂಬಲಿಸುವ ಮೂಲಕ ಗಮನ ಸೆಳೆದಿದ್ದರು. ಇದೇ ವೇಳೆ ಕೃಷ್ಣರಾಜ ಕ್ಷೇತ್ರದ ಕಾಂಗ್ರೆಸ್ ಶಾಸಕರಾಗಿದ್ದ ಬಿ.ಸೂರ್ಯನಾರಾಯಣ್ ಅವರು ನಿಧನ ಹೊಂದಿದರು. ಈ ಸ್ಥಾನಕ್ಕೆ ನಡೆದ ಉಪ ಚುನಾವಣೆಯಲ್ಲಿ ಶ್ರೀನಿವಾಸಪ್ರಸಾದ್ ಕಾಂಗ್ರೆಸ್ ವಿರುದ್ಧ ಕಣಕ್ಕಿಳಿಯುವ ಮೂಲಕ ಚುನಾವಣಾ ರಾಜಕೀಯಕ್ಕೆ ಧುಮುಕಿದರು. ಬಿ.ಬಸವಲಿಂಗಪ್ಪ ಅವರನ್ನು ಮಂತ್ರಿ ಸ್ಥಾನದಿಂದ ವಜಾಗೊಳಿಸಿದ ಕಾಂಗ್ರೆಸ್ ಅನ್ನು ಸೋಲಿಸುವುದೇ ನನ್ನ ಗುರಿ ಎಂದು ಘೋಷಿಸಿ, ಚುನಾವಣಾ ಕಣಕ್ಕಿಳಿದ ಪ್ರಸಾದ್ ಅವರಿಗೆ ಯುವ ಜನತೆ ಹಾಗೂ ದಲಿತ ಸಮುದಾಯದಿಂದ ದೊಡ್ಡ ಮಟ್ಟದ ಬೆಂಬಲ ವ್ಯಕ್ತವಾಯಿತು. ಯಾವುದೇ ರಾಜಕೀಯ ಪಕ್ಷಕ್ಕೆ ಸೇರಿರದ ಪ್ರಸಾದ್, ಈ ಚುನಾವಣೆಯಲ್ಲಿ ಸೋಲುಂಡರಾದರೂ, ಕಾಂಗ್ರೆಸ್ ಅಭ್ಯರ್ಥಿಯನ್ನು, ರಾಜ್ಯದ ಮುಖ್ಯಮಂತ್ರಿಯಾಗಿದ್ದ ಡಿ.ದೇವರಾಜ ಅರಸು ಅವರ ತವರು ಜಿಲ್ಲೆಯಲ್ಲೇ ಸೋಲಿಸುವ ಮೂಲಕ ರಾಜ್ಯದ ಹಿರಿಯ ರಾಜಕಾರಣಿಗಳ ಗಮನ ಸೆಳೆದಿದ್ದರು.

ಆ ಸಂದರ್ಭದಲ್ಲಿ ಸಂಸ್ಥಾ ಕಾಂಗ್ರೆಸ್‌ನಲ್ಲಿದ್ದ ರಾಮಕೃಷ್ಣ ಹೆಗಡೆಯವರು ಖುದ್ದು, ಮೈಸೂರಿಗೆ ಆಗಮಿಸಿ ಶ್ರೀನಿವಾಸ ಪ್ರಸಾದ್ ಅವರನ್ನು ತಾವಿದ್ದಲ್ಲಿಗೆ ಕರೆಸಿಕೊಂಡು, ವಿರೋಧ ಪಕ್ಷದಲ್ಲಿದ್ದರೆ ಹೋರಾಟದ ಮೂಲಕ ರಾಜಕೀಯವಾಗಿ ಬೆಳೆಯಲು ಅನುಕೂಲವಾಗುತ್ತದೆ ಎಂದು ಸಲಹೆ ನೀಡಿ, ತಮ್ಮ ಪಕ್ಷಕ್ಕೆ ಆಹ್ವಾನಿಸಿದರು.

ಮುಂದಿನ ದಿನಗಳಲ್ಲಿ ಸಂಸ್ಥಾ ಕಾಂಗ್ರೆಸ್ ನಾಯಕರಾದ ರಾಮಕೃಷ್ಣ ಹೆಗಡೆ, ವೀರೇಂದ್ರ ಪಾಟೀಲ್, ಗುರುಪಾದಸ್ವಾಮಿ ಮುಂತಾದ ಪ್ರಭಾವಿ ನಾಯಕರ ಸಂಪರ್ಕ ಹೊಂದಿದ ಪ್ರಸಾದ್, 1975ರಲ್ಲಿ ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರು ತುರ್ತು ಪರಿಸ್ಥಿತಿ ಘೋಷಿಸಿದಾಗ ಜಯಪ್ರಕಾಶ್ ನಾರಾಯಣ್ ನೇತೃತ್ವದ ಚಳವಳಿಯಲ್ಲಿ ಸಕ್ರಿಯವಾಗಿ ಭಾಗವಹಿಸುವ ಮೂಲಕ ಯುವ ರಾಜಕಾರಣಿಯಾಗಿ ಹೊರ ಹೊಮ್ಮತೊಡಗಿದರು.




1978ರಲ್ಲಿ ಕೆಆರ್ ಕ್ಷೇತ್ರದ ಎಐಡಿಎಂಕೆ ಬೆಂಬಲಿತ ಪಕ್ಷೇತರ ಅಭ್ಯರ್ಥಿಯಾಗಿ ಮೊದಲ ಚುನಾವಣೆ ಎದುರಿಸಿದಾಗ ಪ್ರಸಾದ್ ಹೊರಡಿಸಿದ್ದ ಕರಪತ್ರ



ತಮ್ಮಿಂದ ಗೌರವಿಸಲ್ಪಡುತ್ತಿದ್ದ ರಾಷ್ಟ್ರೀಯ ನಾಯಕ ಜಾರ್ಜ್ ಫರ್ನಾಂಡಿಸ್ ಜೊತೆ ಪ್ರಸಾದ್



ಆಪ್ತ ಸ್ನೇಹಿತ ರಾಮವಿಲಾಸ್ ಪಾಸ್ವಾನ್ ಅವರೊಂದಿಗೆ ರ್‍ಯಾಲಿಯಲ್ಲಿ ಪ್ರಸಾದ್

### ಗುಂಪುಗಾರಿಕೆಗೆ ಸೆಡ್ಡು

**1**996ರ ಲೋಕಸಭಾ ಚುನಾವಣೆಯಲ್ಲಿ ಗುಂಪುಗಾರಿಕೆ ಕಾರಣದಿಂದಾಗಿಯೇ ಶ್ರೀನಿವಾಸಪ್ರಸಾದ್ ಅವರಿಗೆ ಕಾಂಗ್ರೆಸ್ ಟಿಕೆಟ್ ನಿರಾಕರಿಸಲ್ಪಟ್ಟಾಗ ಸಿಡಿದೆದ್ದ ಅವರು, ಬಂಡಾಯ ಅಭ್ಯರ್ಥಿಯಾಗಿ ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಕಣಕ್ಕಿಳಿದರು. ಈ ಚುನಾವಣೆಯಲ್ಲಿ ಜನತಾ ದಳದ ಎ.ಸಿದ್ದರಾಜು ಗೆಲುವು ಸಾಧಿಸಿದರೆ, ಶ್ರೀನಿವಾಸ ಪ್ರಸಾದ್ ಎರಡನೇ ಸ್ಥಾನ ಪಡೆದಿದ್ದರು. ಕಾಂಗ್ರೆಸ್‌ನ ಬಾಲಕೃಷ್ಣ ಹೀನಾಯವಾಗಿ ಸೋಲನನುಭವಿಸಿದ್ದರು. ಚುನಾವಣೆಯ ನಂತರ ಕಾಂಗ್ರೆಸ್‌ನ ಹಿರಿಯ ನಾಯಕರು ಪ್ರಸಾದ್ ಅವರೊಂದಿಗೆ ಸಂಧಾನ ನಡೆಸಿದ್ದರು. ಇದರ ಪರಿಣಾಮವಾಗಿ 1998ರಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಪ್ರಸಾದ್ ಅವರಿಗೆ ಕಾಂಗ್ರೆಸ್ ಟಿಕೆಟ್ ದೊರೆಯಿತಾದರೂ, ರಾಜ್ಯ ಕಾಂಗ್ರೆಸ್‌ನಲ್ಲಿ ಗುಂಪುಗಾರಿಕೆ ಪರಿಣಾಮವಾಗಿ ಅವರು ಎರಡನೇ ಬಾರಿಗೆ ಎ.ಸಿದ್ದರಾಜು ವಿರುದ್ಧ ಸೋಲನನುಭವಿಸಿದರು.



ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣರ ಜೊತೆ ಶ್ರೀನಿವಾಸ ಪ್ರಸಾದ್



ಕಳೆದ ಏ.13ರಂದು ತಮ್ಮ ನಿವಾಸಕ್ಕೆ ಭೇಟಿ ನೀಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಜೊತೆಗಿನ ಮುನಿಸು ಮರೆತು ಹಿಂದಿನ ಸ್ನೇಹದ ದಿನಗಳನ್ನು ಮೆಲುಕು ಹಾಕುತ್ತಿರುವುದು.



ಇತ್ತೀಚೆಗೆ ಪ್ರಸಾದ್ ಅವರನ್ನು ಭೇಟಿ ಮಾಡಿದ್ದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ

### ಕೇಂದ್ರ ಸಚಿವ

**ಕಾಂ**ಗ್ರೆಸ್‌ನ ಗುಂಪುಗಾರಿಕೆಯಿಂದ ಶ್ರೀನಿವಾಸಪ್ರಸಾದ್ ಅವರು ತೀವ್ರವಾಗಿ ಬೇಸರಗೊಂಡಿದ್ದರು. ಅದೇ ವೇಳೆ ಅವರ ರಾಜಕೀಯ ಗುರುಗಳಾದ ರಾಮಕೃಷ್ಣ ಹೆಗಡೆಯವರು ಲೋಕಶಕ್ತಿ ಪಕ್ಷ ಸ್ಥಾಪಿಸಿದಾಗ ಆ ಪಕ್ಷಕ್ಕೆ ಶ್ರೀನಿವಾಸಪ್ರಸಾದ್ ಸೇರ್ಪಡೆಯಾದರು. ಲೋಕಶಕ್ತಿ ಪಕ್ಷದ ಉದ್ಘಾಟನಾ ಸಮಾರಂಭವನ್ನು ಚಾಮರಾಜನಗರದಲ್ಲಿ ಅದ್ಧೂರಿಯಾಗಿ ನೆರವೇರಿಸಲಾಗಿತ್ತು. ನಂತರ 1999ರಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ರಾಮಕೃಷ್ಣ ಹೆಗಡೆಯವರ ಲೋಕಶಕ್ತಿ ಪಕ್ಷವು ಜೆಡಿಯು ಜೊತೆ ಮೈತ್ರಿ ಮಾಡಿಕೊಂಡಿತ್ತು. ಲೋಕಶಕ್ತಿ ಪಕ್ಷ ಸ್ಥಾಪನೆಯಾದ ಕೆಲವೇ ತಿಂಗಳಲ್ಲಿ ಚುನಾವಣೆ ಬಂದ ಕಾರಣ ಆ ಪಕ್ಷವನ್ನು ಇನ್ನೂ ಚುನಾವಣಾ ಆಯೋಗವು ಪ್ರಾದೇಶಿಕ ಇಲ್ಲವೇ ರಾಷ್ಟ್ರೀಯ ಪಕ್ಷವಾಗಿ ಅಂಗೀಕರಿಸಿರಲಿಲ್ಲ. ಈ ಕಾರಣದಿಂದ ಪ್ರಸಾದ್ ಚಾಮರಾಜನಗರದಿಂದ ಲೋಕಸಭೆಗೆ ಜೆಡಿಯು ಅಭ್ಯರ್ಥಿಯಾಗಿ ಸ್ಪರ್ಧಿಸಿ ತನ್ನನ್ನು ಎರಡು ಬಾರಿ ಸೋಲಿಸಿದ್ದ ಎ.ಸಿದ್ದರಾಜು ವಿರುದ್ಧ ಜಯಭೇರಿ ಬಾರಿಸಿದರು. ಅಲ್ಲದೇ ಅಟಲ್ ಬಿಹಾರಿ ವಾಜಪೇಯಿ ನೇತೃತ್ವದ ಕೇಂದ್ರ ಮೈತ್ರಿ ಸರ್ಕಾರದಲ್ಲಿ ಪ್ರಸಾದ್ ಸಚಿವರಾದರು.

## ಆಸ್ಕರ್ ಸೆಳೆತ

**ಈ** ಸಂದರ್ಭದಲ್ಲಿ ರಾಜ್ಯದಲ್ಲಿ ಡಿ.ದೇವರಾಜ ಅರಸು ಅವರ ಪದಚ್ಯುತಿಯಾಗಿ ರಾಷ್ಟ್ರೀಯ ಮಟ್ಟದಲ್ಲಿ ಕಾಂಗ್ರೆಸ್ ಇಬ್ಭಾಗವಾಗಿತ್ತು. ಇಂದಿರಾ ಗಾಂಧಿ ನೇತೃತ್ವದಲ್ಲಿ ಕಾಂಗ್ರೆಸ್-ಐ ಹಾಗೂ ದೇವರಾಜ ಅರಸು ಅವರ ನೇತೃತ್ವದಲ್ಲಿ ಕಾಂಗ್ರೆಸ್-ಯು ಅಸ್ತಿತ್ವಕ್ಕೆ ಬಂದವು. ಈ ವೇಳೆ ರಾಜ್ಯದಲ್ಲಿ ಬಹುತೇಕ ನಾಯಕರು ಕಾಂಗ್ರೆಸ್-ಯು ಜೊತೆ ಗುರುತಿಸಿಕೊಂಡರು. ಇತ್ತ ಕಾಂಗ್ರೆಸ್-ಐ ನಾಯಕರು ಲೋಕಸಭಾ ಚುನಾವಣೆಯಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ಹುಡುಕಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿತ್ತು. ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಸತತವಾಗಿ 3 ಬಾರಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಗೆಲುವು ಸಾಧಿಸಿದ್ದ ಬಿ.ರಾಚಯ್ಯನವರು 1980ರ ಚುನಾವಣೆಯಲ್ಲಿ ದೇವರಾಜ ಅರಸು ನೇತೃತ್ವದ ಕಾಂಗ್ರೆಸ್-ಯು ಅಭ್ಯರ್ಥಿಯಾಗಿ ಕಣಕ್ಕಿಳಿದರು. ಆ ಚುನಾವಣೆಯಲ್ಲಿ ಸತತವಾಗಿ 4 ಬಾರಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಗೆದ್ದಿದ್ದ ಎಸ್.ಎಂ.ಸಿದ್ದಯ್ಯ ಜನತಾ ಪಕ್ಷದ ಅಭ್ಯರ್ಥಿಯಾಗಿದ್ದರು. ಕಾಂಗ್ರೆಸ್-ಐಗೆ ಅಭ್ಯರ್ಥಿಯನ್ನು ಹುಡುಕುವ ತಲೆನೋವು ಎದುರಾಗಿತ್ತು. ಈ ಸಂದರ್ಭದಲ್ಲಿ ಶ್ರೀನಿವಾಸ ಪ್ರಸಾದ್ ಜನತಾ ಪಕ್ಷದಲ್ಲಿ ಇದ್ದರೂ ಅದಾಗಲೇ ಅವರ ಸಂಪರ್ಕ ಹೊಂದಿದ್ದ ಆಸ್ಕರ್ ಫರ್ನಾಂಡಿಸ್ ಅವರು ಪ್ರಸಾದ್ ಅವರ ಮನವೊಲಿಸಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಕಣಕ್ಕಿಳಿಸಿದ್ದರು.

ಒಮ್ಮೆ 4 ಬಾರಿ, ಒಮ್ಮೆ 3 ಬಾರಿ ಸತತವಾಗಿ ಗೆಲುವು ಸಾಧಿಸಿದ್ದ ಎಸ್.ಎಂ.ಸಿದ್ದಯ್ಯ ಮತ್ತು ಬಿ.ರಾಚಯ್ಯ ವಿರುದ್ಧ ಕಾಂಗ್ರೆಸ್‌ನಿಂದ ಹೊಸ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದ ಶ್ರೀನಿವಾಸಪ್ರಸಾದ್, ಈ ಚುನಾವಣೆಯಲ್ಲಿ ಇಬ್ಬರು ಘಟಾನುಘಟಿಗಳನ್ನು ಮಣಿಸಿ, ವಿಜಯದ ನಗೆ ಬೀರುವ ಮೂಲಕ ಮೊಟ್ಟ ಮೊದಲ ಬಾರಿಗೆ ಸಂಸತ್ ಪ್ರವೇಶಿಸಿದರು. ನಂತರ ನಡೆದ 4 ಚುನಾವಣೆಗಳಲ್ಲೂ ಶ್ರೀನಿವಾಸಪ್ರಸಾದ್ ಸತತವಾಗಿ ಗೆಲುವು ಸಾಧಿಸುತ್ತಾ ಬಂದರು. ಇಂದಿರಾಗಾಂಧಿಯವರ ಹತ್ಯೆಯ ನಂತರ ಆಗ ತಾನೇ ರಾಜಕೀಯ ಪ್ರವೇಶ ಮಾಡಿದ್ದ ರಾಜೀವ್ ಗಾಂಧಿಯವರಿಗೆ ರಾಜಕಾರಣದ ಬಗ್ಗೆ ಅನೇಕ ಸಲಹೆಗಳನ್ನು ನೀಡುತ್ತಾ ದೆಹಲಿ ಮಟ್ಟದಲ್ಲಿ ಶ್ರೀನಿವಾಸಪ್ರಸಾದ್ ಪ್ರಬಲರಾಗತೊಡಗಿದರು. ರಾಜೀವ್ ಗಾಂಧಿ ಹತ್ಯೆಯಾದ ನಂತರ ಪಿ.ವಿ.ನರಸಿಂಹ ರಾವ್ ಪ್ರಧಾನಿಯಾಗಿದ್ದ ವೇಳೆ ಸಹಜವಾಗಿಯೇ ಕಾಂಗ್ರೆಸ್‌ನ ಗುಂಪುಗಾರಿಕೆಯಿಂದಾಗಿ ಶ್ರೀನಿವಾಸ ಪ್ರಸಾದ್ ನಿರ್ಲಕ್ಷಿಸಲ್ಪಟ್ಟ ಕಾರಣ ನರಸಿಂಹರಾವ್ ವಿರುದ್ಧ ಮುನಿಸಿಕೊಂಡಿದ್ದರು. ಆಗಲೇ ಕಾಂಗ್ರೆಸ್ ತೊರೆಯುವ ಬಗ್ಗೆಯೂ ಬಹಿರಂಗವಾಗಿ ಮಾತನಾಡಿದ್ದರು. ಈ ವೇಳೆ ನರಸಿಂಹರಾವ್ ಅವರು ಪ್ರಸಾದ್ ಅವರನ್ನು ಕರೆದು ಮಾತನಾಡಿ, ಪ್ರಸಾದ್ ಅವರ ಮುನಿಸನ್ನು ದೂರ ಮಾಡಿದ್ದರಾದರೂ, ಒಂದು ಗುಂಪಂತೂ ಪ್ರಸಾದ್ ವಿರುದ್ಧವೇ ಕಾರ್ಯ ನಿರ್ವಹಿಸುತ್ತಿತ್ತು.



ರಾಷ್ಟ್ರಪತಿಯಾಗಿದ್ದ ಜೈಲ್‌ಸಿಂಗ್ ಅವರಿಗೆ ಹಸ್ತಲಾಘವ ಮಾಡುತ್ತಿರುವ ಪ್ರಸಾದ್



ಲೋಕಸಭಾ ಚುನಾವಣೆಯಲ್ಲಿ ಪ್ರಸಾದ್ ಅವರ ಬೆಂಬಲ ಕೋರುತ್ತಿರುವ ಯದುವೀರ್, ಬಾಲರಾಜ್

## ರಾಜಕೀಯ ಸ್ಥಿತ್ಯಂತರ

**ಪ್ರ**ಸಾದ್ ಅವರು ಕೇಂದ್ರ ಸಚಿವರಾಗಿದ್ದಾಗಲೇ ಚುನಾವಣಾ ರಾಜಕೀಯದಿಂದ ದೂರ ಸರಿಯುವ ಮಾತುಗಳನ್ನಾಡಿದ್ದರು. ಅಲ್ಲದೇ 2004ರ ಮಾರ್ಚ್ 6ರಂದು ಜೆಡಿಯು ತೊರೆದು ಹೆಚ್.ಡಿ.ದೇವೇಗೌಡರ ನೇತೃತ್ವದ ಜೆಡಿಎಸ್‌ಗೆ ಸೇರ್ಪಡೆಗೊಂಡರು. ಅದೇ ವರ್ಷ ಎದುರಾದ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುವಂತೆ ದೇವೇಗೌಡರು ಎಷ್ಟೇ ಒತ್ತಾಯ ಮಾಡಿದರೂ, ಒಪ್ಪದೇ ಪ್ರಸಾದ್ ಅವರು ತಮ್ಮ ಬೆಂಬಲಿಗರಾದ ಕಾಗಲವಾಡಿ ಶಿವಣ್ಣ ಅವರನ್ನು ಚಾಮರಾಜನಗರದ ಜೆಡಿಎಸ್ ಅಭ್ಯರ್ಥಿಯಾಗಿ ಕಣಕ್ಕಿಳಿಸಿದ್ದರು. ಕಾಗಲವಾಡಿ ಶಿವಣ್ಣ ಶ್ರೀನಿವಾಸಪ್ರಸಾದ್ ಅವರ ಕಟ್ಟಾ ಬೆಂಬಲಿಗರು ಎಂಬುದನ್ನು ಬಿಟ್ಟರೆ ರಾಜಕೀಯ ಕ್ಷೇತ್ರದಲ್ಲಿ ಅವರ ಹೆಸರು ಅಷ್ಟೇನೂ ಚಾಲ್ತಿಯಲ್ಲಿರಲಿಲ್ಲ. ಆದರೂ ಪ್ರಸಾದ್ ಅವರ ವರ್ಚಸ್ಸು, ಬಿರುಸಿನ ಪ್ರಚಾರದಿಂದಾಗಿ ಕಾಗಲವಾಡಿ ಶಿವಣ್ಣ ಸಂಸತ್ ಪ್ರವೇಶಿಸುವಂತಾಯಿತು.

ನಂತರ 2009ರ ಲೋಕಸಭಾ ಚುನಾವಣೆ ವೇಳೆಗಾಗಲೇ ಪ್ರಸಾದ್ ಕಾಂಗ್ರೆಸ್‌ಗೆ ಮರಳಿದ್ದರು. ಈ ಚುನಾವಣೆಯಲ್ಲಿ ಕಾಗಲವಾಡಿ ಶಿವಣ್ಣ ಕಾಂಗ್ರೆಸ್ ಅಭ್ಯರ್ಥಿಯಾಗುತ್ತಾರೆ ಎಂದು ಎಲ್ಲರೂ ಭಾವಿಸಿದ್ದರು. ಆದರೆ ಅಚ್ಚರಿ ಎಂಬಂತೆ ಪ್ರಸಾದ್ ಅವರು ಆಗ ಕೊಳ್ಳೇಗಾಲ ಶಾಸಕರಾಗಿದ್ದ ಧ್ರುವನಾರಾಯಣ ಅವರನ್ನು ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕಿಳಿಸಿ ಅವರು ಸತತ ಎರಡು ಬಾರಿ ಲೋಕಸಭೆ ಪ್ರವೇಶಿಸುವಂತೆ ಮಾಡುವಲ್ಲಿ ಯಶಸ್ವಿಯಾದರು.

ಚುನಾವಣಾ ರಾಜಕೀಯವೇ ಬೇಡವೆಂದು ತಮ್ಮ ಬೆಂಬಲಿಗರನ್ನು ಕಣಕ್ಕಿಳಿಸಿ ಲೋಕಸಭೆಗೆ ಕಳುಹಿಸುತ್ತಿದ್ದ ಪ್ರಸಾದ್, ಕ್ಷೇತ್ರ ಪುನರ್ವಿಂಗಡಣೆಯ ನಂತರ ರಾಜ್ಯ ರಾಜಕೀಯದತ್ತ ಹೊರಳಿದರು. 2008ರಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ನಂಜನಗೂಡು ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿ ಬಿಜೆಪಿಯ ಎಸ್.ಮಹದೇವಯ್ಯ ವಿರುದ್ಧ ಗೆಲುವು ಸಾಧಿಸಿದ್ದರು. ನಂತರ 2013ರಲ್ಲಿ ನಡೆದ ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿಯಾಗಿದ್ದ ಕಳಲೆ ಕೇಶವಮೂರ್ತಿ ವಿರುದ್ಧ ಜಯಗಳಿಸಿ ಸಿದ್ದರಾಮಯ್ಯ ಸಂಪುಟದಲ್ಲಿ ಕಂದಾಯ ಸಚಿವರಾದರು. 2013ರಿಂದ 2016ರವರೆಗೆ ಸಚಿವರಾಗಿದ್ದ ಅವರನ್ನು ಸಿದ್ದರಾಮಯ್ಯ, ಸಂಪುಟದಿಂದ ಕೈಬಿಟ್ಟ ಪರಿಣಾಮ ಆಕ್ರೋಶಗೊಂಡ ಅವರು, ಶಾಸಕ ಸ್ಥಾನ ಹಾಗೂ ಕಾಂಗ್ರೆಸ್‌ಗೆ ರಾಜೀನಾಮೆ ಸಲ್ಲಿಸಿ 2016ರ ಡಿಸೆಂಬರ್ 24ರಂದು ಬಿಜೆಪಿ ಸೇರ್ಪಡೆಗೊಂಡರು. 2017ರಲ್ಲಿ ನಡೆದ ನಂಜನಗೂಡು ಉಪ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಪ್ರಸಾದ್ ಕಾಂಗ್ರೆಸ್‌ನ ಕಳಲೆ ಕೇಶವಮೂರ್ತಿ ವಿರುದ್ಧ ಪರಾಭವಗೊಂಡರು. ಅದೇ ವೇಳೆ ಚುನಾವಣಾ ರಾಜಕೀಯಕ್ಕೆ ನಿವೃತ್ತಿಯನ್ನೂ ಘೋಷಿಸಿದ್ದರು. ಈ ನಡುವೆ 2019ರಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಪ್ರಸಾದ್ ಇಚ್ಛಿಸಿರಲಿಲ್ಲವಾದರೂ, ಅಭಿಮಾನಿಗಳು ಅವರ ನಿವಾಸದ ಮುಂದೆ ಜಮಾಯಿಸಿ, ನೀವು (ಪ್ರಸಾದ್) ಸೋಲಿನ ರಾಜಕೀಯದಿಂದ ನಿರ್ಗಮಿಸಬಾರದು. ಈ ಚುನಾವಣೆಯಲ್ಲಿ ಗೆಲುವು ಸಾಧಿಸಿ ಗೆಲುವಿನೊಂದಿಗೆ ನಿರ್ಗಮಿಸಬೇಕು ಎಂದು ಒತ್ತಾಯಿಸಿದಾಗ ಅನ್ಯ ಮಾರ್ಗವಿಲ್ಲದೇ ಅನಾರೋಗ್ಯದ ನಡುವೆಯೂ ಆ ಚುನಾವಣೆಯಲ್ಲಿ ತಾವೇ ಎರಡು ಬಾರಿ ಸಂಸತ್ ಪ್ರವೇಶಿಸಲು ಅವಕಾಶ ಮಾಡಿಕೊಟ್ಟಿದ್ದ ಶಿಷ್ಯ ಧ್ರುವನಾರಾಯಣ್ ವಿರುದ್ಧ ಸ್ಪರ್ಧಿಸಿದರು. ಅನಾರೋಗ್ಯ ಕಾರಣದಿಂದಾಗಿ ಪ್ರಸಾದ್ ಸರಿಯಾಗಿ ಪ್ರಚಾರಕ್ಕೂ ಹೋಗಲು ಸಾಧ್ಯವಾಗಲಿಲ್ಲ. ಆದರೆ ಈ ಚುನಾವಣೆಯಲ್ಲಿ ಅವರು 1817 ಮತಗಳ ಅಂತರದಲ್ಲಿ ಜಯ ಗಳಿಸಿ ಕೊನೆಯ ಬಾರಿಗೆ ಸಂಸತ್ ಪ್ರವೇಶಿಸಿದರು.

### ಅರ್ಧ ಶತಮಾನ ದಾಖಲೆ

ಕಳೆದ ಮಾರ್ಚ್ 17ರಂದು ಶ್ರೀನಿವಾಸಪ್ರಸಾದ್ ಚುನಾವಣಾ ರಾಜಕೀಯ ಪ್ರವೇಶ ಮಾಡಿ 50 ತುಂಬಿದ ಹಿನ್ನೆಲೆಯಲ್ಲಿ ಮೈಸೂರಿನಲ್ಲಿ ನಡೆದ ಅದ್ಧೂರಿ ಕಾರ್ಯಕ್ರಮದಲ್ಲಿ ಅವರು ಅಧಿಕೃತವಾಗಿ ರಾಜಕೀಯ ನಿವೃತ್ತಿ ಘೋಷಿಸಿದರು.

ತಮ್ಮ ರಾಜಕೀಯ ಜೀವನದಲ್ಲಿ ಹೆಚ್ಚಿನ ಕಾಲ ಪ್ರಸಾದ್ ಕಾಂಗ್ರೆಸ್‌ನಲ್ಲಿ ಇದ್ದರು. ಲೋಕಸಭಾ ಸದಸ್ಯರಾಗಿ ಕಾಂಗ್ರೆಸ್‌ನಿಂದ 4 ಬಾರಿ ಹಾಗೂ ವಿಧಾನಸಭಾ ಸದಸ್ಯರಾಗಿ 2 ಬಾರಿ ಆಯ್ಕೆಯಾಗಿದ್ದರು. ಆದರೆ ರಾಜಕೀಯಕ್ಕೆ ಬರುವ ಮುನ್ನ ವಿದ್ಯಾರ್ಥಿ ದೆಸೆಯಲ್ಲಿ ಆರ್‌ಎಸ್‌ಎಸ್ ಮತ್ತು ಎಬಿವಿಪಿ ಮೂಲಕ ಸಂಘಟನೆಯಲ್ಲಿ ತಮ್ಮನ್ನು ತೊಡಗಿಸಿಕೊಂಡು ಸಂಘಟನಾ ಚತುರರಾಗಿ ಬೆಳೆದಿದ್ದ ಪ್ರಸಾದ್, ತಮ್ಮ ರಾಜಕಾರಣದ ಕೊನೆಯ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿ, ಸಂಸತ್ ಪ್ರವೇಶಿಸಿ ನಂತರ ರಾಜಕಾರಣಕ್ಕೆ ನಿವೃತ್ತಿ ಘೋಷಿಸಿದ್ದು ವಿಶೇಷ.

## ನಕ್ಕರೆ ಅದೇ ಸ್ವರ್ಗ

ಮೇಷ್ಟ್ರು : ಮೋಡಗಳು ಏಕೆ ಕಪ್ಪಾಗಿರುತ್ತವೆ?
ಗುಂಡ : ನಾವೇ ಸ್ವಲ್ಪ ಹೊತ್ತು ಬಿಸಿಲಲ್ಲಿ ತಿರುಗಾಡಿದ್ರೆ ಕಪ್ಪಾಗುತ್ತೀವಿ. ಇನ್ನು ದಿನಾ ಬಿಸಿಲಲ್ಲೇ ತಿರುಗಾಡೋ ಮೋಡಗಳು ಕಪ್ಪಾಗಲ್ವಾ ಮೇಷ್ಟ್ರೇ!?


ಮೈಸೂರು ಮಿತ್ರ

ಮಂಗಳವಾರ, 30 ಏಪ್ರಿಲ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.


**ಅಮೃತವಾಹಿನಿ.........**

ಈ ಜಗತ್ತಿನಲ್ಲಿ ಒಳಿತನ್ನು ಸಾಧಿಸಲು ಸಾಧ್ಯ ಎನ್ನುವ ನಂಬಿಕೆ ಇದ್ದರೆ, ಅದಕ್ಕೆ ಬೇಕಾದ ಎಲ್ಲಾ ಶಕ್ತಿಗಳೂ ತನ್ನಷ್ಟಕ್ಕೆ ತಾನೇ ಒದಗುತ್ತವೆ. –ಬೆಂಜಮಿನ್ ಫ್ರಾಂಕ್ಲಿನ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ದುಡುಕಿನ ಮಾತಿಗೆ ಮಾಡಿಕೊಳ್ಳದಿರು ಕೆಡುಕು

## ನಿಮ್ಮ ಪತ್ರಗಳು

### ಶ್ರೀನಿವಾಸಪ್ರಸಾದರ ಆದರ್ಶ ಗುಣ ಸಮಾಜಕ್ಕೆ ಮಾದರಿ

ಮಾನ್ಯರೆ,

ಇಹಲೋಕ ತ್ಯಜಿಸಿದ ಹಿರಿಯ ರಾಜಕಾರಣಿ ಚಾಮರಾಜನಗರ ಹಾಲಿ ಬಿಜೆಪಿ ಸಂಸದ ವಿ.ಶ್ರೀನಿವಾಸ್ ಪ್ರಸಾದ್ (1947–2024) ರಾಷ್ಟ್ರ ರಾಜಕಾರಣದಲ್ಲಿ ರಾಜಕೀಯದ ಬಹು ದೊಡ್ಡ ಅಸ್ಮಿತೆ. ತಮ್ಮ ಐವತ್ತು ವರ್ಷ ಗಳ ಸುದೀರ್ಘ ರಾಜಕಾರಣದಲ್ಲಿ ಯಾವೊಂದು ಕಳಂಕವಿಲ್ಲದ ಶುದ್ಧ ಹಸ್ತ, ನೇರ ನಡೆ–ನುಡಿಯ ವ್ಯಕ್ತಿತ್ವದ ಇವರ ಸಾವು ಇಡೀ ರಾಷ್ಟ್ರ ರಾಜಕಾರಣಕ್ಕೆ ಬಹುದೊಡ್ಡ ನಷ್ಟ ಉಂಟು ಮಾಡಿದೆ. ಅನಿಸಿದ್ದನ್ನು ಸ್ವ ಪಕ್ಷವೇ ಆಗಲಿ ವಿಪಕ್ಷವೇ ಆಗಿರಲಿ ನೇರ ನಿಷ್ಠುರವಾದಿಯಾಗಿ ಹೇಳುತ್ತಿದ್ದ ಗಟ್ಟಿ ವ್ಯಕ್ತಿತ್ವ.



ಅವಿಭಜಿತ ಮೈಸೂರು ಜಿಲ್ಲೆಯಲ್ಲಿ ಅತೀ ಹೆಚ್ಚು ಬಾರಿ ಗೆಲುವು ಸಾಧಿಸಿದ ಕೀರ್ತಿ (ಚಾಮರಾಜನಗರ) ಹೊಂದಿದ್ದಾರೆ. ಆರು ಬಾರಿ ಸಂಸದರಾಗಿ, ನಂಜನಗೂಡು ಕ್ಷೇತ್ರದಿಂದ ಎರಡು ಬಾರಿ ಶಾಸಕರಾಗಿದ್ದವರು. ವಾಜಪೇಯಿ ಸರ್ಕಾರದಲ್ಲಿ ಕೇಂದ್ರ ಸಚಿವರಾಗಿ, ರಾಜ್ಯ ಸರ್ಕಾರದ ಸಿದ್ದರಾಮಯ್ಯ ಸಂಪುಟದಲ್ಲಿ ಪ್ರಭಾವಿ ಕಂದಾಯ ಸಚಿವರಾಗಿ ಸಾಕಷ್ಟು ಕೆಲಸ ಕಾರ್ಯ ಮಾಡಿದ್ದ ಶೋಷಿತ, ಹಿಂದುಳಿದ, ಸಮುದಾಯದ ಜನಪರ ಕಾಳಜಿಯುಳ್ಳ ನಾಯಕ. ರಾಜಕಾರಣದಲ್ಲಿ ಏಳು–ಬೀಳು ಕಂಡಿದ್ದರು ಸೋತಾಗ ಕುಗ್ಗದೆ ಗೆದ್ದಾಗ ಹಿಗ್ಗದೆ ಜನರ ನಡುವಿನ ಕೊಂಡಿಯಾಗಿ ಕೆಲಸ ಮಾಡಿದ ಅಪರೂಪದ ರಾಜಕಾರಣಿ.

ಇಂದಿರಾ ಗಾಂಧಿ ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಅತ್ಯಂತ ಕಿರಿಯ ಪಾರ್ಲಿಮೆಂಟ್ ಸದಸ್ಯರಾಗಿ ಆಯ್ಕೆ. ಇನ್ನೆಲ್ಲವು ಈಗ ಇತಿಹಾಸ.

ಬಹುತೇಕ ಕಾಂಗ್ರೆಸ್ ಪಕ್ಷದಿಂದ ಹೆಚ್ಚು ಬಾರಿ ಗೆಲುವು ಸಾಧಿಸಿದ್ದರು. 1984 ರಲ್ಲಿ ರಾಜ್ಯ ಘಟಕದ ಪ್ರಥಮ ಕಾಂಗ್ರೆಸ್ ಯುವ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ದಾಖಲೆ. ಹಳೇ ಮೈಸೂರು ಭಾಗದಲ್ಲಿ ಅತ್ಯಂತ ಪ್ರಭಾವಿ ನಾಯಕರಾಗಿ ಜನ ಮನ್ನಣೆ ಗಳಿಕೆ. ಇಡೀ ದೇಶದಲ್ಲೇ ರಾಮ್ ವಿಲಾಸ್ ಪಾಸ್ವಾನ್ ಜೊತೆ ರಾಷ್ಟ್ರ ಮಟ್ಟದಲ್ಲಿ ಹೋಲಿಕೆಗೆ ಸಿಗುವ ಏಕೈಕ ರಾಜಕಾರಣಿ. ಅಂಬೇಡ್ಕರ್ ಆಶಯಗಳು, ಸಾಮಾಜಿಕ ನ್ಯಾಯ ಸಂವಿಧಾನ ಪಾಲನೆ ಎಂದಿಗೂ ರಾಜಿಯಾಗದ ಇವರ ತತ್ವಪರ ಸಿದ್ಧಾಂತಗಳು ರಾಜ ಕೀಯದಲ್ಲಿ ಕೆಲವೊಂದು ಅನಿರೀಕ್ಷಿತ ಬೆಳವಣಿಗೆಗಳಿಂದ ಪಕ್ಷಾಂತರಿ ಆಗಿದ್ದರು ತಾವು ನಂಬಿ ಬಂದ ಸಮಾಜವಾದಿ, ಅಂಬೇಡ್ಕರ್ ವಾದಿ ಸಿದ್ಧಾಂತಗಳನ್ನು ಚಾಚೂ ತಪ್ಪದೇ ಪಾಲಿಸಿದ ಪ್ರಸಾದ್ ಶ್ರೇಷ್ಠ ನೆನಪುಗಳ ಆದರ್ಶನೀಯ ಗುಣಗಳು ಸಮಾಜಕ್ಕೆ ಮಾದರಿ. ಉತ್ತಮ ವಾಗ್ಮಿ, ಶ್ರೇಷ್ಠ ಸಂಸದೀಯ ಪಟು.

ಇವರ ಅಧಿಕಾರದ ಅವಧಿಯಲ್ಲಿ ಜಾತಿ ಜನಾಂಗ ಧರ್ಮ ಪ್ರೇರಿತ ಕೋಮು ಗಲಭೆಗಳಿಗೆ ಅವಕಾಶ ಕೊಡದೆ ಸಾಮರಸ್ಯ ಜೀವನ ನಡೆಸಲು ಸಾಕಷ್ಟು ಶ್ರಮಿಸಿದ್ದರು. ಸಮಗ್ರ ಚಾಮರಾಜನಗರ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ ಐದು ದಶಕಗಳಲ್ಲಿ ಇವರ ಅವಧಿಯಲ್ಲೇ ಅತಿ ಹೆಚ್ಚು ಅಂಬೇಡ್ಕರ್ ಭವನಗಳು ಹಾಗೂ ಎಲ್ಲ ವರ್ಗದವರಿಗೂ ಸಮುದಾಯ ಭವನಗಳು ನಿರ್ಮಾಣವಾಗಿದ್ದು. ಕಂದಾಯ ಇಲಾಖೆಯ ಸಚಿವರಾಗಿದ್ದಾಗ ಯಶಸ್ವಿನಿ, ಮನಸ್ವಿನಿ, ವೃದ್ಧೆಯರಿಗೆ ಪಿಂಚಣಿ, ಪಹಣಿ ಪತ್ರ, ಕಂದಾಯ ಅದಾಲತ್ ಕಾರ್ಯಕ್ರಮಗಳು ನೊಂದವರಿಗೆ ನೆರವು, ಪರಿಹಾರ, ವಿಶೇಷವಾಗಿ ದಲಿತ ಸಮೂಹದ ಯುವಕರನ್ನು ಸಮಾಜದ ಮುಖ್ಯ ಸ್ತರಕ್ಕೆ ತರಲು ಅಂಬೇಡ್ಕರ್ ಅವರ ಚಿಂತನೆಗಳು ವೈಚಾರಿಕತೆ, ವಿದ್ಯೆ ಹಾಗೂ ಉದ್ಯೋಗಕ್ಕೆ ಕೊಟ್ಟ ಆದ್ಯತೆ ನಿಜಕ್ಕೂ ಶ್ಲಾಘನೀಯ. ಇವೆಲ್ಲವೂ ಕ್ರಾಂತಿಕಾರಿ ಬದಲಾವಣೆಗೆ ಮುನ್ನುಡಿ ಬರೆದಿತ್ತು. ಅಧಿಕಾರ ಇರಲಿ ಇಲ್ಲದಿರಲಿ ಮೈಸೂರು ಭಾಗದ ಶ್ರೇಷ್ಠ ರಾಜಕಾರಣಿಗಳಲ್ಲಿ ಪ್ರಸಾದ್ ಅಗ್ರ ಪಂಕ್ತಿಯಲ್ಲಿ ಎಂದಿಗೂ ಇರುತ್ತಿದ್ದರು.

ಬಹುಶಃ ಹಳೇ ಮೈಸೂರು ಭಾಗದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಚಿಂತನೆಗಳನ್ನು ಹೆಚ್ಚು ಪಸರಿಸಿದ್ದವರಲ್ಲಿ ಶ್ರೀನಿವಾಸ್ ಪ್ರಸಾದ್ ಮೊದಲಿಗರು. "ನನಗೆ ಯಾವುದೇ ರಾಜಕೀಯ ಪಕ್ಷಕ್ಕಿಂತ ಅಂಬೇಡ್ಕರ್ ಹಾಗೂ ಸಂವಿಧಾನ ಬಹುಮುಖ್ಯ." ಎಂದು ಹೇಳುತ್ತಿದ್ದ ನುಡಿದಂತೆ ನಡೆಯುತ್ತಿದ್ದ ನಮ್ಮ ನಡುವಿನ ಆದರ್ಶ ರಾಜಕಾರಣಿ ಮೈಸೂರಿನ ಶ್ರೀನಿವಾಸ್ ಪ್ರಸಾದ್ ಬಾರದ ಲೋಕಕ್ಕೆ ಹೋಗಿದ್ದು ಅವರ ಲಕ್ಷಾಂತರ ಅನುಯಾಯಿಗಳಲ್ಲಿ ಸಹಜವಾಗಿ ಬೇಸರ ತರಿಸಿದೆ.

– ಅನಿಲ್‌ಕುಮಾರ್, ನಂಜನಗೂಡು.

### ಕಣ್ಮರೆಯಾದ ಶ್ರೀನಿವಾಸ್ ಪ್ರಸಾದ್

ಮಾನ್ಯರೆ,

ಸ್ವಾಭಿಮಾನದ ರಾಜಕಾರಣಿ
ಮರೆಯಾದೆಯ ದಲಿತರ ಮುತ್ತಿನ ಗಿಣಿ
ಶುದ್ಧ ಹಸ್ತ ರಾಜಕಾರಣಕ್ಕೆ ಹೆಸರುವಾಸಿ ನೀವು
ಪ್ರಸ್ತುತ ರಾಜಕಾರಣಕ್ಕೆ ಮಾದರಿಯೇ ತಾವು
ಪಕ್ಷಾಂತರಿಯಾದರು ನೀವು! ತತ್ವಾಂತರಿಯಾಗಲಿಲ್ಲ
ಆಸೆ ಅಮಿಷಗಳಿಗೆ ಎಂದು ತಲೆಬಾಗಲಿಲ್ಲ
ಇಂದು ರಾಜಕಾರಣ ಸ್ವಾಭಿಮಾನಕ್ಕೆ ತೆರೆ ಬೀಳಿತಲ್ಲ
ನೇರ ನುಡಿಗಳಿಂದ ಹಿಂದೆ ಸರಿಯಲಿಲ್ಲ
ಅಂಬೇಡ್ಕರ್ ವಾದ ಬಿಡಲಿಲ್ಲ
ವಿಚಾರವಂತಿಕೆಯ ವಾಗ್ಮಿ ಈ ಚಿಂತಕ
ಸೋಲು ಗೆಲುವುಗಳನ್ನು ಕಂಡ ನಾಯಕ
ರಾಜಕೀಯದಲ್ಲಿ ನೀವು ಅಜಾತಶತ್ರು!
ಕೊನೆವರೆಗೂ ಬಿಡಲಿಲ್ಲ ನಿಮ್ಮ ಗತ್ತು!
ದಲಿತರ ಗಟ್ಟಿ ಧ್ವನಿ! ಇನ್ನಿಲ್ಲ ನಿಮ್ಮ ಧ್ವನಿ.

–ಪಿ.ಸಿ. ಕಂಗಾಣಿಸೋಮು, ಕ್ಯಾತಮಾರನಹಳ್ಳಿ ಮೈಸೂರು

# ಅತಿಯಾಸೆಯ ಜಾಯಮಾನ ಅತಿಯಾಗಿಸಿತು ತಾಪಮಾನ...!



**ಇಂದಿನ ಪರಿಸ್ಥಿತಿ**

ಬಿಸಿಲ ಬೇಗೆಯಲ್ಲಿ ಬಳಲುತ್ತಿದ್ದೇವೆ. ಬೇಸಿಗೆ ಎಂದು ಮುಗಿಯುವುದೋ ಎಂದು ದಿನ ಎಣಿಸತೊಡಗಿದ್ದೇವೆ. ವೃದ್ಧರು, ಗರ್ಭಿಣಿಯರು, ಮಕ್ಕಳು, ಬಾಣಂತಿಯರು, ರೋಗಿಗಳು ತುಂಬಾ ಹುಷಾರಾಗಿರಬೇಕಾದ ಸಂದರ್ಭ ಎದುರಾಗಿದೆ. ಪ್ರಕೃತಿ ಮಾತೆ ಕೋಪಿಸಿಕೊಂಡಿದ್ದಾಳೆ. ಭೂಮಿ ತಾಯಿಯ ತಾಪ ಹೆಚ್ಚುತ್ತಿದೆ. ಮಾನವ ಅಭಿವೃದ್ಧಿ ನೆಪದಲ್ಲಿ ಕಡಿದ ಮರಗಳು, ಮಾಯವಾದ ಕಾಡುಗಳು, ಬೆಳೆಸದ ಗಿಡಗಳು, ಬಿಟ್ಟ ಅನಿಲಗಳು, ಸೃಷ್ಟಿಸಿದ ಕೆಟ್ಟ ಗಾಳಿ, ಹರಿದ ಓಝೋನ್, ಸಿಡಿದ ಜ್ವಾಲಾಮುಖಿ, ಹೆಚ್ಚಿದ ಜನಸಂಖ್ಯೆ ಇಂದು ಆತನನ್ನೇ ಕಾಡುತ್ತಿವೆ. ಇಷ್ಟಕ್ಕೂ ಮನುಜ ಮಾಡಿದ ತಪ್ಪಾದರೂ ಏನು? ಶತ ಶತಮಾನಗಳಿಂದ ಆಗುತ್ತಿರುವ, ಮುಂದೆಯೂ ಆಗುವ ವಾತಾವರಣ ತಾಪಮಾನ ಏರಿಕೆಗೆ ಕಾರಣಗಳನ್ನು ಕಂಡುಹಿಡಿಯಲು ಮಾನವ ದಶಕಗಳನ್ನೇ ಸವೆಸಿದ್ದಾನೆ. ಪಟ್ಟಿ ಮಾಡಿದರೆ ಕಾರಣಗಳು ಕೊನೆಯಿಲ್ಲದ ಬಾಲದಂತೆ ಬೆಳೆಯುತ್ತಲೇ ಹೋಗುತ್ತವೆ.

**ಕಾರಣಗಳು**

ಇಂಧನಗಳು ಮಾಡಿದ ಅವಾಂತರ ಮಾನವ ಇಂಧನಗಳನ್ನು ಉರಿಸಿದ ಪರಿಣಾಮ ಉದ್ಭವಿಸಿದ ಇಂಗಾಲದ ಡೈ ಆಕ್ಸೈಡ್, ಮಿಥೇನ್ ಮುಂತಾದ ಹಾನಿಕಾರಕ ಅನಿಲಗಳು, ಸೂರ್ಯನಿಂದ ಬಂದ ಶಾಖ ಭೂಮಿಯನ್ನು ತಲುಪಿ ವಾಪಸ್ಸು ಮೇಲೆ ಮೇಲೆ ಹೊರಗೆ ಹೋಗುವಾಗ ಅದನ್ನು ತಮ್ಮಲ್ಲೇ ಹಿಡಿದಿಟ್ಟುಕೊಳ್ಳುತ್ತವೆ. ಇದು ಭೂಮಿಯ ವಾತಾವರಣದ ಉಷ್ಣಾಂಶ ಹೆಚ್ಚಲು ಕಾರಣವಾಗಿದೆ.

**ಕಾಡುಗಳೆಲ್ಲ ನಾಡಾಯಿತು**

ಕಾಡುಗಳನ್ನೆಲ್ಲ ಕಡಿದು ಮನುಜ ತನ್ನ ಸಾಮ್ರಾಜ್ಯ ಸ್ಥಾಪಿಸಿಕೊಂಡಿದ್ದು ಅವನಿಗೆ ಮುಳುವಾಗಿದೆ. ಗಿಡ ಮರಗಳು ವಾತಾವರಣದ ಇಂಗಾಲದ ಡೈಆಕ್ಸೈಡ್ ಅನ್ನು ಸೆಳೆದುಕೊಂಡು

ಜೀವವಾಯುವಾದ ಆಮ್ಲಜನಕವನ್ನು ಹೊರ ಬಿಡುತ್ತವೆ.ಗಿಡ ಮರಗಳು ಕಡಿಮೆಯಾದಂತೆ ವಾತಾವರಣದ ಇಂಗಾಲದ ಡೈಆಕ್ಸೈಡ್ ಮಟ್ಟ ಹೆಚ್ಚುತ್ತದೆ. ಹಾಗೂ ಆಮ್ಲಜನಕದ ಮಟ್ಟ ಕುಸಿಯುತ್ತದೆ. ಇದು ಭೂಮಿಯ ಮೇಲಿನ ಸಮತೋಲನ ತಪ್ಪಿಸುತ್ತದೆ. ಅದು ಜೀವಿಗಳ ಬದುಕಿಗೆ ಮುಳುವಾಗುತ್ತದೆ.ಮತ್ತೆ ಭೂಮಿಯ ಮೇಲೆ ಸಮತೋಲನ ತರಲು ಇಡೀ ಮಾನವ ಸಂತತಿ ಸಾಕಷ್ಟು ಪರಿಶ್ರಮ ಪಡಬೇಕಿದೆ.

**ವಾಹನಗಳ ಆರ್ಭಟ**

ವಾಹನಗಳ ಭರಾಟೆ ಇಂದು ಮಾನವನನ್ನು ಮೋಡಿ ಮಾಡಿ ಬಿಟ್ಟಿವೆ. ನಗರ, ಪಟ್ಟಣಗಳಲ್ಲಿ ವಾಹನ ಇಲ್ಲದವರನ್ನು ಹುಡುಕಬೇಕಾದ ಪರಿಸ್ಥಿತಿ ಇದೆ. ನೇಚರ್ ಫ್ರೆಂಡ್ಲಿ ಎಲೆಕ್ಟ್ರಿಕ್ ವಾಹನಗಳು ಈಗೀಗ ಮಾರುಕಟ್ಟೆಗೆ ಬರುತ್ತಿವೆ. ಪೆಟ್ರೋಲ್, ಡೀಸೆಲ್ ವಾಹನಗಳು ಉಗುಳುವ ಹೊಗೆಯಿಂದ ವಾಯು ಮಾಲಿನ್ಯ ಉಂಟಾಗುತ್ತದೆ. ತಾಪಮಾನ ಏರಿಕೆಯಾಗುತ್ತದೆ.

**CFC ಅನಿಲ**

ಮಾರುಕಟ್ಟೆಯಲ್ಲಿ ಇಂದು ತಂಪು ಪಾನೀಯಗಳು ಆಳುತ್ತಿವೆ.ಮನೆ ಮನೆಯಲ್ಲೂ ರೆಫ್ರಿಜರೇಟರ್‌ಗಳು ತಂಪನ್ನೀಯುತ್ತಿವೆ. ಆದರೆ ಅವು ಹೊರ ಸೂಸುವ ಕ್ಲೋರೋಫ್ಲೂರೋಕಾರ್ಬನ್ (Chloro Fluro Carbon -CFC ) ಅನಿಲ ಭೂಮಿಯ ರಕ್ಷಾಕವಚವನ್ನೇ ಹರಿದು ಹಾಕಿದೆ. ಇಂದು ಓಝೋನ್ ಪದರದಲ್ಲಿ ರಂಧ್ರಗಳಾಗಿ ಅವುಗಳ ಮೂಲಕ ಸೂರ್ಯನ ಅತಿ ನೇರಳೆ ಕಿರಣಗಳು ನೇರವಾಗಿ ನುಗ್ಗಿ ಭೂಮಿಗೆ ಅಪ್ಪಳಿಸುತ್ತಿವೆ ಭೂಮಿಯ ಮೇಲ್ಮೈ ಉಷ್ಣಾಂಶ ಹೆಚ್ಚಲು ಕಾರಣವಾಗಿದೆ.

**ಕಾರ್ಖಾನೆಗಳು**

ಅಭಿವೃದ್ಧಿಯ ಸಂಕೇತವಾಗಿ ತಲೆ ಎತ್ತಿದ ಕಾರ್ಖಾನೆಗಳು, ಫ್ಯಾಕ್ಟರಿಗಳು ಮತ್ತೊಂದು ರೀತಿಯಲ್ಲಿ ಪರಿಸರ ಮಾಲಿನ್ಯ ಮಾಡುತ್ತಿವೆ. ಆತಂಕಕಾರಿ ಅನಿಲಗಳನ್ನು ಹೊರಸೂಸುತ್ತಾ ಭೂಮಿಯ ತಾಪಮಾನ ಹೆಚ್ಚಾಗಿಸಿ ಮನುಜನ ಹಾಗೂ ಇತರೆ ಪ್ರಾಣಿಗಳಿಗೆ ಕಂಟಕವೇ ಆಗುತ್ತಿದೆ.

**ಮೀಥೇನ್ ಅನಿಲ**

ಒಂದು ಇಂಗಾಲ ಹಾಗೂ ನಾಲ್ಕು ಹೈಡ್ರೋಜನ್ ಪರಮಾಣುಗಳುಳ್ಳ ಸಂಯುಕ್ತ ವಸ್ತು. ಇದು ಅನಿಲ ರೂಪದಲ್ಲಿ ಇರುತ್ತದೆ.ಇದು ವಾತಾವರಣದ ಉಷ್ಣಾಂಶವನ್ನು ಹೆಚ್ಚಿಸುತ್ತದೆ.ಆಕ್ಸಿಜನ್ ರಹಿತ ಉಸಿರಾಟ ಕ್ರಿಯೆಯಲ್ಲಿ ಇಂಗಾಲದ ಡೈ ಆಕ್ಸೈಡ್ ಮತ್ತು ಜಲಜನಕವನ್ನು ಉಪಯೋಗಿಸಿಕೊಂಡು ಸೂಕ್ಷ್ಮಾಣುಜೀವಿಗಳು ತಮ್ಮ ಉಸಿರಾಟ ಕ್ರಿಯೆಯಲ್ಲಿ ಉಪಯೋಗಿಸಿಕೊಂಡು, ಇದನ್ನು ಸೃಷ್ಟಿಸಿ ವಾತಾವರಣಕ್ಕೆ ಬಿಡುತ್ತವೆ. ಇವು ತಿಪ್ಪೆಗಳಲ್ಲಿ, ಮೆಲುಕು ಹಾಕುವ ಪ್ರಾಣಿಗಳಲ್ಲಿ ಹಾಗೂ ಗೆದ್ದಲುಗಳ ಹೊಟ್ಟೆಯಲ್ಲಿ ಇರುತ್ತವೆ. ಅಲ್ಲದೆ ಕೆಲವು ವ್ಯವಸಾಯ ಪದ್ಧತಿಗಳು ಪರಿಸರಕ್ಕೆ ಹಾನಿ ತರುವ ಮಿಥೇನ್ ಮುಂತಾದ ಅನಿಲಗಳನ್ನು ಹೊರಹಾಕುತ್ತಿವೆ.

**ಜನಸಂಖ್ಯಾ ಸ್ಫೋಟ**

ಭೂಮಿಯ ಮೇಲೆ ಇಂಗಾಲದ ಡೈಆಕ್ಸೈಡ್ ಹೊರ ಹಾಕುವ 800 ಕೋಟಿಗೂ ಅಧಿಕವಾಗಿ ಮನುಷ್ಯ ಜೀವಿ ಹರಡಿಹೋಗಿದ್ದಾನೆ. ವಿಶ್ವದ ಜನಸಂಖ್ಯೆ ಹೆಚ್ಚಳ ಒಂದಲ್ಲ ಒಂದು ರೀತಿಯಲ್ಲಿ ಹಿಂದಿನಿಂದಲೂ ಪರಿಸರ ಮಾಲಿನ್ಯಕ್ಕೆ ತನ್ನ ಕೊಡುಗೆ ನೀಡುತ್ತಲೇ ಬಂದಿದೆ

**ಜ್ವಾಲಾಮುಖಿ**

ಭೂಮಿಯ ಮೇಲೆ ಅಲ್ಲಲ್ಲಿ ಆಗಾಗ ಏಳುತ್ತಿರುವ ಜ್ವಾಲಾಮುಖಿಗಳು ಗ್ಲೋಬಲ್ ವಾರ್ಮಿಂಗ್‌ಗೆ ಕಾರಣವಾಗಿವೆ. ಅವು ತರುವ ಧೂಳು ಹಾಗೂ ಹೊಗೆ, ವಾತಾವರಣ ಹಾಳು ಮಾಡುತ್ತಾ ಉಷ್ಣಾಂಶವನ್ನು ಹೆಚ್ಚಿಸುತ್ತಿವೆ.

**ಆವಿಯಾದ ಜಲ**

ಭೂಮಿಯ ಹೆಚ್ಚಿದ ಉಷ್ಣತೆಯಿಂದಾಗಿ ಜಲ ಮೂಲಗಳಿಂದ ನೀರು ಆವಿಯಾಗಿ ವಾತಾವರಣ ಸೇರುತ್ತದೆ. ಹಾಗೂ ಅದು ಅಲ್ಲಿಯೇ ಉಳಿದು ಜಾಗತಿಕ ತಾಪಮಾನ ಹೆಚ್ಚಿಸುತ್ತದೆ.

**ಕಾಡ್ಗಿಚ್ಚುಗಳು**

ಕಾಡಿಗೆ ಆಗಾಗ ಬೀಳುವ ಕಾಡ್ಗಿಚ್ಚುಗಳು ಮರಗಳನ್ನು ಸುತ್ತು ಹಾಕುತ್ತವೆ. ದೊಡ್ಡ ಪ್ರಮಾಣದಲ್ಲಿ ಹೊಗೆಯ ರೂಪದಲ್ಲಿ ಇಂಗಾಲದ ಅನಿಲಗಳು ವಾತಾವರಣ ಸೇರುತ್ತವೆ. ಹಾಗೂ ಉಷ್ಣಾಂಶ ಹೆಚ್ಚಿಸುತ್ತವೆ.

**ಕರಗುವ ಪರ್ಮಾಪ್ರಾಸ್ಟ್**

ಹಲವಾರು ವರ್ಷಗಳಿಂದ ಪರಿಸರದ ಅನಿಲ ಗಳು ಹೆಪ್ಪುಗಟ್ಟಿದ ಮಣ್ಣಿನಿಂದ ಆವೃತವಾಗಿವೆ. ಇವನ್ನು ಪರ್ಮಾಪ್ರಾಸ್ಟ್ ಎನ್ನುತ್ತೇವೆ. ಇವು ಭೂಮಿಯ ಮೇಲ್ಮೈ ಕೆಳಗೆ ಹಿಮನದಿಗಳಲ್ಲಿ ಇರುತ್ತವೆ. ಪರ್ಮಾ ಪ್ರಾಸ್ಟ್ ಕರಗುತ್ತಿದ್ದಂತೆ ಅವು ಆವರಿಸಿಕೊಂಡಿದ್ದ ಅನಿಲಗಳು ವಾತಾವರಣಕ್ಕೆ ಬಿಡುಗಡೆಯಾಗಿ ಉಷ್ಣಾಂಶ ಹೆಚ್ಚಿಸುತ್ತವೆ.

**ಜಾಗತಿಕ ತಾಪಮಾನ ಹೆಚ್ಚಳದಿಂದಾಗುವ ಅನಾಹುತಗಳು**

- ಪರಿಸರದ ಉಷ್ಣಾಂಶದಲ್ಲಿ ಹೆಚ್ಚಳ
- ಜೀವರಾಶಿಗಳ ಉಳಿವಿಗೆ ಆತಂಕ
- ವಾತಾವರಣದ ಸಮತೋಲನದಲ್ಲಿ ವ್ಯತ್ಯಯ
- ಸಾಂಕ್ರಾಮಿಕ ರೋಗಗಳ ಹರಡುವಿಕೆಯಲ್ಲಿ ಹೆಚ್ಚಳ
- ಸಾವು ನೋವುಗಳಲ್ಲಿ ಹೆಚ್ಚಳ
- ಪರಿಸರ ವ್ಯವಸ್ಥೆಯಲ್ಲಿ ವ್ಯತ್ಯಾಸ ( Ecosystem Imbalance )

**ತೀವ್ರ ಏರಿಕೆ ತಂದ ಆತಂಕ**

ಭೂಮಿಯ ಉಷ್ಣಾಂಶ NASA ಸಂಶೋಧನೆಯ ಅಂಕಿ ಅಂಶಗಳ ಪ್ರಕಾರ 2018 ಹಾಗೂ 2021ರಲ್ಲಿ ಸರಾಸರಿ ಉಷ್ಣಾಂಶಕ್ಕಿಂತ 0.85 ಡಿಗ್ರಿ ಸೆಲ್ಸಿಯಸ್ (1.5ಲಿ ಫಾರೆನ್ ಹೀಟ್) ಹೆಚ್ಚಳವಾಗಿತ್ತು. ಸ್ವಾಭಾವಿಕವಾಗಿ ಜಾಗತಿಕ ತಾಪಮಾನ 100 ವರ್ಷಕ್ಕೆ ಒಂದು ಡಿಗ್ರಿ ಸೆಲ್ಸಿಯಸ್ ಹೆಚ್ಚಳವಾಗುತ್ತಿತ್ತು. ಆದರೀಗ ಅದು ಕೇವಲ ಇಪ್ಪತ್ತು ವರ್ಷಗಳಲ್ಲೇ ಒಂದು ಡಿಗ್ರಿ ಸೆಲ್ಸಿಯಸ್ ನಷ್ಟು ತಾಪಮಾನ ಏರಿಕೆಯಾಗಿದೆ. ಪರಿಸ್ಥಿತಿ ಹೀಗೆಯೇ ಮುಂದುವರೆದಿದ್ದಾದರೆ ತಾಪಮಾನ ಇನ್ನಷ್ಟು ಏರಿಕೆಯಾಗುವುದರಲ್ಲಿ ಸಂಶಯವಿಲ್ಲ

**ಹೆಚ್ಚಾದ ತಾಪಮಾನ ತರುವ ರೋಗ ಲಕ್ಷಣಗಳು**

ವಯಸ್ಕರಲ್ಲಿ,

- ದೇಹದ ಉಷ್ಣತೆ ಹೆಚ್ಚಳ
- ದೇಹದ ಮೇಲೆ ಗುಳ್ಳೆಗಳು
- ಮೂರ್ಛೆ
- ತಲೆ ತಿರುಗುವಿಕೆ
- ತಲೆನೋವು
- ಸುಸ್ತು
- ದೌರ್ಬಲ್ಯ
- ಸ್ನಾಯು ಸೆಳೆತ
- ವಾಕರಿಕೆ,
- ವಾಂತಿ
- ಉಸಿರಾಟದಲ್ಲಿ ವ್ಯತ್ಯಯ
- ಪ್ರಜ್ಞಾಹೀನ ಸ್ಥಿತಿ
- ಮೂತ್ರ ವಿಸರ್ಜನೆ ಪ್ರಮಾಣ ಕಡಿಮೆಯಾಗುವುದು
- ಮೂತ್ರ ಹಳದಿ ಬಣ್ಣಕ್ಕೆ ತಿರುಗುವುದು.
- ಬಾಯಿ ಒಣಗುವಿಕೆ
- ಹೆಚ್ಚಿದ ಹೃದಯ ಬಡಿತ

ಮಕ್ಕಳಲ್ಲಿ

- ಬಾಯಿ ಒಣಗುವಿಕೆ
- ಗುಳಿ ಬಿದ್ದ ಕಣ್ಣುಗಳು
- ಅತಿಯಾಗಿ ಸಿಡಿಮಿಡಿಗೊಳ್ಳುವುದು
- ಆತಂಕ
- ಆಹಾರ ಸೇವಿಸಲು ನಿರಾಕರಣೆ
- ಅರೆ ಪ್ರಜ್ಞಾವಸ್ಥೆ
- ದೇಹದ ಯಾವುದೇ ಭಾಗದಲ್ಲಿ ರಕ್ತಸ್ರಾವ ಮುಂತಾದವುಗಳು

**ವಹಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳು**

- ಹೆಚ್ಚೆಚ್ಚು ನೀರು ಕುಡಿಯುವುದು
- ನಿಂಬೆ ಹಣ್ಣಿನ ಶರಬತ್ತು, ಮಜ್ಜಿಗೆ, ಲಸ್ಸಿ, ಹಣ್ಣಿನ ಜ್ಯೂಸ್, ಒಂದು ಚಿಟಿಕೆ ಉಪ್ಪಿನೊಂದಿಗೆ ಸೇವಿಸುವುದು
- ನೀರಿನಾಂಶ ಹೆಚ್ಚಿರುವ ಕಲ್ಲಂಗಡಿ, ಕರಬೂಜ, ಕಿತ್ತಳೆ, ದ್ರಾಕ್ಷಿ, ಅನಾನಸ್, ಸೌತೆಕಾಯಿ, ಎಳನೀರು ಹೆಚ್ಚಾಗಿ ಸೇವಿಸುವುದು.
- ತೆಳು ಬಣ್ಣದ ಹತ್ತಿಯ ಉಡುಪು ಧರಿಸುವುದು.
- ತಲೆಗೆ ನೇರ ಬಿಸಿಲು ಬೀಳದಂತೆ ಛತ್ರಿ, ಟೋಪಿ ಮುಂತಾದವನ್ನು ಬಳಸುವುದು
- ಮನೆಯ ಕಿಟಕಿ ಬಾಗಿಲು ತೆರೆದು ಗಾಳಿ ಸಂಚಾರಕ್ಕೆ ಅನುವು ಮಾಡಿಕೊಡುವುದು
- ಮಧ್ಯಾಹ್ನದಲ್ಲಿ ಹೊರಾಂಗಣ ಕೆಲಸಗಳನ್ನು ಮಾಡದಿರುವುದು
- ದೇಹದಿಂದ ನೀರಿನಾಂಶ ಹೀರಿಕೊಳ್ಳುವ ಮದ್ಯಪಾನ, ಕಾಫಿ–ಟೀ ಕಾರ್ಬೋನೇಟೆಡ್ ಪಾನೀಯಗಳಿಂದ ದೂರವಿರುವುದು
- ಹೆಚ್ಚು ಪ್ರೊಟೀನ್‌ಯುಕ್ತ ಆಹಾರ ಸೇವಿಸದಿರುವುದು
- ಸುಲಭವಾಗಿ ಪಚನಗೊಳ್ಳುವ ಸರಳ, ನೀರಿನಾಂಶ ಹೆಚ್ಚಿರುವ ಅಹಾರ ಸೇವಿಸುವುದು.
- ಲಘು ಆಹಾರ ಸೇವನೆ ಒಳ್ಳೆಯದು
- ಮಾಮೂಲಿ ಎರಡರಿಂದ ಮೂರು ಬಾರಿ ಸೇವಿಸುವ ಆಹಾರದ ಪ್ರಮಾಣವನ್ನು ಸಣ್ಣ ಸಣ್ಣ ಪ್ರಮಾಣ ಮಾಡಿ ಹೆಚ್ಚು ಬಾರಿ (ದಿನಕ್ಕೆ ನಾಲ್ಕರಿಂದ ಐದು ಸಲ) ಸೇವಿಸುವುದನ್ನು ರೂಢಿಸಿಕೊಳ್ಳುವುದು.
- ರಸ್ತೆ ಬದಿಯಲ್ಲಿ ಶುಚಿತ್ವ ಇರದ ಅಹಾರ ಹಾಗೂ ನೀರನ್ನು ಸೇವಿಸದಿರುವುದು.
- ಕುದಿಸಿ ಆರಿಸಿದ ನೀರು ಆರೋಗ್ಯಕ್ಕೆ ಒಳ್ಳೆಯದು

**ಆತಂಕಕಾರಿ ಸನ್ನಿವೇಶ ನಿಭಾವಣೆ**

- ವ್ಯಕ್ತಿಯು ಪ್ರಜ್ಞೆ ತಪ್ಪಿದ್ದರೆ, ಗೊಂದಲದ ಅರೆ ಪ್ರಜ್ಞಾವಸ್ಥೆಯಲ್ಲಿದ್ದರೆ 108/102ಗೆ ಕರೆ ಮಾಡಿ. ಶೀಘ್ರ ವೈದ್ಯಕೀಯ ಚಿಕಿತ್ಸೆ ಪಡೆಯುವುದು
- ಅತಿಯಾದ ತಾಪಮಾನದಿಂದ ಬಳಲುತ್ತಿದ್ದವರನ್ನು ಬೇಗ ತಂಪಾದ ಪ್ರದೇಶಕ್ಕೆ ಸ್ಥಳಾಂತರಿಸುವುದು
- ದೇಹದ ಭಾಗಗಳಿಗೆ ಹಾಗೂ ಬಟ್ಟೆ ಮೇಲೆ ತಣ್ಣಗಿನ ನೀರನ್ನು ಹಾಕುವುದು
- ವ್ಯಕ್ತಿಯ ದೇಹದ ಮೇಲೆ ಹೆಚ್ಚು ಗಾಳಿಯನ್ನು ಬೀಸುವುದು
- ದ್ರವಾಹಾರವನ್ನು ನೀಡುವುದು
- ನೀರಿನ ಸೇವನೆ ಅತ್ಯುತ್ತಮ
- ಜಾಗತಿಕ ತಾಪಮಾನ ಏರಿಕೆ ಕಡಿಮೆ ಮಾಡುವ ಬಗೆ
- ವಾತಾವರಣಕ್ಕೆ ಇಂಗಾಲದ ಡೈಆಕ್ಸೈಡ್ ಮಿಥೇನ್,ಇನ್ನಿತರ ಹಸಿರು ಮನೆ ಅನಿಲಗಳು ಬಿಡುಗಡೆಯಾಗದಂತೆ ನಿಗಾ ವಹಿಸುವುದು.
- ಸಾವಯವ ತ್ಯಾಜ್ಯದಿಂದ ಜೈವಿಕ ಇಂಧನ ಉತ್ಪಾದನೆಯನ್ನು ಹೆಚ್ಚಿಸುವುದು.
- ಸೌರಶಕ್ತಿಯ ಬಳಕೆ ಹೆಚ್ಚಿಸುವುದು
- ವಾಯು ಶಕ್ತಿಯ ಬಳಕೆ ಹೆಚ್ಚಿಸುವುದು
- ಅರಣ್ಯಗಳನ್ನು ರಕ್ಷಿಸುವುದು.
- ಗಿಡಗಳನ್ನು ಬೆಳೆಸುವುದು ಹಾಗೂ ಮರಗಳನ್ನು ಕಾಪಾಡಿಕೊಳ್ಳುವುದು.
- ಇಂಧನ ವಾಹನಗಳನ್ನು ಕಡಿಮೆ ಮಾಡಿ ಕ್ರಮೇಣ ಎಲೆಕ್ಟ್ರಿಕ್ ವಾಹನಗಳಿಗೆ ಬಲಾಯಿಸಿಕೊಳ್ಳುವುದರ ಮೂಲಕ ಜಾಗತಿಕ ತಾಪಮಾನ ಏರಿಕೆಯಾಗದಂತೆ ಎಚ್ಚರ ವಹಿಸೋಣ.

**ಸಂಕಲ್ಪ**

ಸ್ನೇಹಿತರೆ, ಇಂದು ಹಿಂದೆಂದಿಗಿಂತಲೂ ಬಳಲುತ್ತಿದ್ದೇವೆ. ನಮ್ಮ ಸಾಮೂಹಿಕ ಪ್ರಯತ್ನ ನಮ್ಮನ್ನು ಉಳಿಸುತ್ತದೆ.ಇತಿಹಾಸದ ಪುಟ ತೆರೆದು ಇಣುಕಿದರೆ ಹಲವಾರು ಜೀವ ಸಂತತಿಗಳು ಅಳಿದುಹೋಗಿವೆ. ನಾಗರಿಕತೆಯ ಕತೆಯೂ ಇತಿಹಾಸ ಸೇರಿರುವುದನ್ನು ನೋಡಿದ್ದೇವೆ.

ಮನುಜ ಬೀಗದೆ ಬಗ್ಗಿ ಭೂಮಿತಾಯಿಯ ಕ್ಷಮೆ ಕೇಳಬೇಕಿದೆ. ನಿಸರ್ಗದೊಂದಿಗೆ ಸಮರಸವಾಗಿ ಬದುಕುವ ಜೀವನಶೈಲಿ ರೂಪಿಸಿಕೊಳ್ಳಬೇಕಿದೆ. ಆ ದಿಕ್ಕಿನಲ್ಲಿ ಮುನ್ನಡೆಯೋಣ.

ನೋಡಿ, ನಮ್ಮ ಮನೆಯ ಮುಂದಿನ ಗಿಡಗಳಿಗೆ ನೀರು ಹಾಕುವ ಸಮಯ ಬಂದಿದೆ ಈಗಲೇ ಎದ್ದು ಹೋಗಿ ಅವುಗಳಿಗೆ ನೀರುಣಿಸೋಣ . ಗಿಡಗಳನ್ನು ಮರವಾಗಿಸೋಣ. ಗಿಡ ಇಲ್ಲದಿದ್ದರೆ ಇಂದೇ ಒಂದೆರಡು ಗಿಡ ನೆಡೋಣ. ಅವನ್ನು ಬೆಳೆಸೋಣ. ನಮ್ಮ ಜವಾಬ್ದಾರಿ ನಿರ್ವಹಿಸೋಣ...




ಡಾ.ಮಧುಸೂದನ್ ಎನ್.
ಹಿರಿಯ ವೈದ್ಯಾಧಿಕಾರಿಗಳು,
ಮಾಲಂಗಿ 571442








## ಚುನಾವಣೆಯಿಂದ ನರೇಂದ್ರ ಮೋದಿ ಅನರ್ಹತೆ: ಅರ್ಜಿ ವಜಾಗೊಳಿಸಿದ ದೆಹಲಿ ಹೈಕೋರ್ಟ್

**ನವದೆಹಲಿ:** ಮಾದರಿ ನೀತಿ ಸಂಹಿತೆ (ಎಂಸಿಸಿ) ಉಲ್ಲಂಘಿಸಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಚುನಾವಣೆಯಲ್ಲಿ ಸ್ಪರ್ಧಿಸಲು ಅನರ್ಹಗೊಳಿಸುವಂತೆ ಕೋರಿ ಸಲ್ಲಿಸಲಾದ ಮನವಿಯನ್ನು ದೆಹಲಿ ಹೈಕೋರ್ಟ್ ಸೋಮವಾರ ವಜಾಗೊಳಿಸಿದೆ.

ಹಿಂದೂ ಹಾಗೂ ಸಿಖ್ ದೇವರುಗಳು ಮತ್ತು ಆರಾಧನಾ ಸ್ಥಳಗಳ ಹೆಸರಿನಲ್ಲಿ ಬಿಜೆಪಿಗೆ ಮತ ಕೇಳಿದ ಆರೋಪದ ಮೇಲೆ ಪ್ರಧಾನಿ ಮೋದಿ ಅವರನ್ನು ಆರು ವರ್ಷಗಳ ಕಾಲ ಅನರ್ಹಗೊಳಿಸುವಂತೆ ಕೋರಿ ವಕೀಲ ಆನಂದ್ ಎಸ್ ಜೊಂಧಲೆ ಸಲ್ಲಿಸಿದ್ದ ಅರ್ಜಿಯನ್ನು ದೆಹಲಿ ಹೈಕೋರ್ಟ್ ವಜಾಗೊಳಿಸಿದೆ. ವಕೀಲ ಆನಂದ್ ಎಸ್ ಜೊಂದಳೆ ಅವರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಚಿನ್ ದತ್ತಾ ನೇತೃತ್ವದ ಪೀಠ ಅರ್ಜಿದಾರರು ನೀತಿ ಸಂಹಿತೆಯ ಉಲ್ಲಂಘನೆಯಾಗಿದೆ ಎಂದು ಊಹಿಸಿರುವುದರಿಂದ ಅರ್ಜಿಯನ್ನು ಸಂಪೂರ್ಣ ವಾಗಿ ತಪ್ಪಾಗಿ ಗ್ರಹಿಸಲಾಗಿದೆ ಎಂದು ಗಮನಿಸಿ ಯಾವುದೇ ದೂರಿನ ಬಗ್ಗೆ ನಿರ್ದಿಷ್ಟ ಕ್ರಮ ತೆಗೆದುಕೊಳ್ಳುವಂತೆ ಆಯೋಗಕ್ಕೆ ಸೂಚಿಸಲು ಸಾಧ್ಯವಿಲ್ಲ ಎಂದು ಕೋರ್ಟ್ ಹೇಳಿದೆ.

ಆಯೋಗವು ಜೊಂಧಲೆ ಅವರ ದೂರನ್ನು ಕಾನೂನಿನ ಪ್ರಕಾರ ಪರಿಶೀಲಿಸುತ್ತದೆ ಎಂದು ಕೇಂದ್ರ ಚುನಾವಣಾ ಆಯೋಗದ ಪರವಾಗಿ ವಕೀಲ ಸಿದ್ಧಾಂತ್ ಕುಮಾರ್ ಹೇಳಿದರು. ಆಯೋಗವು ನಿತ್ಯವು ಇಂತಹ ದೂರುಗಳನ್ನು ಸ್ವೀಕರಿಸುತ್ತದೆ, ಪರಿಶೀಲಿಸುತ್ತದೆ ಮತ್ತು ಕ್ರಮ ತೆಗೆದುಕೊಳ್ಳುತ್ತದೆ. ಆಯೋಗವು ಒಂದು ಸಾಂವಿಧಾನಿಕ ಸಂಸ್ಥೆ ಎಂದು ವಾದಿಸಿದರು. ಚುನಾವಣಾ ಆಯೋಗದ ಪರವಾದ ಮಂಡಿಸಿದ ವಕೀಲ ಸಿದ್ಧಾಂತ್ ಕುಮಾರ್ ದೂರನ್ನು ಕ್ರಮಬದ್ಧವಾಗಿ ವಿಚಾರಣೆ ನಡೆಸಿ ಆದೇಶ ಹೊರಡಿಸಲಾಗುವುದು ಎಂದು ತಿಳಿಸಿದ್ದಾರೆ.

## ಆಂಧ್ರಪ್ರದೇಶದಲ್ಲಿ ಲಾರಿ-ಆಟೋ ಡಿಕ್ಕಿ, ನಾಲ್ವರು ಸಾವು

ಕೋನಸೀಮಾ: ಆಟೋ–ಲಾರಿ ಡಿಕ್ಕಿಯಾಗಿ ನಾಲ್ವರು ಸಾವನ್ನಪ್ಪಿರುವ ಘಟನೆ ಆಂಧ್ರಪ್ರದೇಶದ ಕೋನಸೀಮಾ ಜಿಲ್ಲೆಯಲ್ಲಿ ನಡೆದಿದೆ. ಲಾರಿ ಆಟೋಗೆ ಡಿಕ್ಕಿ ಹೊಡೆದ ಪರಿಣಾಮ ನಾಲ್ವರು ಸಾವನ್ನಪ್ಪಿದ್ದು, ಅಷ್ಟೇ ಸಂಖ್ಯೆಯ ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಗಾಯಾಳುಗಳನ್ನು ಆಸ್ಪತ್ರೆಗೆ ರವಾನಿಸಲಾಗಿದೆ. ತಕ್ಷಣ ಪೊಲೀಸರು ಸ್ಥಳಕ್ಕೆ ಆಗಮಿಸಿ ತನಿಖೆ ಕೈಗೊಂಡಿದ್ದಾರೆ ಎಂದು ಅಮಲಾಪುರ ಗ್ರಾಮಾಂತರ ವೃತ್ತ ನಿರೀಕ್ಷಕ ವೀರಬಾಬು ತಿಳಿಸಿದ್ದಾರೆ. ಅಪಘಾತ ಸಂಬಂಧ ಹೆಚ್ಚಿನ ತನಿಖೆ ನಡೆಯುತ್ತಿದೆ.


Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ



# ಪ್ರಸಾದರು ಸರ್ವಜನ ನಾಯಕ: ತತ್ವಾದರ್ಶಗಳಲ್ಲಿ ಎಂದೂ ರಾಜಿಯಾಗದ ಅಪರೂಪದ ರಾಜಕಾರಣಿ

## ಸಂಸದ ವಿ.ಶ್ರೀನಿವಾಸ ಪ್ರಸಾದ್ ನಿಧನಕ್ಕೆ ಸುತ್ತೂರು ಶ್ರೀಗಳು ಸೇರಿದಂತೆ ಗಣ್ಯಾತಿಗಣ್ಯರ ಭಾವಪೂರ್ಣ ಶ್ರದ್ಧಾಂಜಲಿ




**ಮೈಸೂರು, ಏ.29(ಬಿಎಲ್‌ಯು)– ಚಾಮರಾಜನಗರ ಸಂಸದರೂ ಆದ ಹಿರಿಯ ರಾಜಕಾರಣಿ ವಿ.ಶ್ರೀನಿವಾಸ ಪ್ರಸಾದ್ ಅವರ ನಿಧನಕ್ಕೆ ಸುತ್ತೂರು ಶ್ರೀಗಳು ಸೇರಿದಂತೆ ಹಲವು ಗಣ್ಯರು ತೀವ್ರ ಸಂತಾಪ ಸೂಚಿಸಿದ್ದಾರೆ. ಸರಳ–ಸಜ್ಜನಿಕೆಯ ನೇರ ಮಾತಿನ ರಾಜಕಾರಣಿ ಶ್ರೀನಿವಾಸಪ್ರಸಾದ್ ಅವರ ಅಗಲಿಕೆಗೆ ಭಾವಪೂರ್ಣ ಶ್ರದ್ಧಾಂಜಲಿ ಅರ್ಪಿಸಿದ್ದಾರೆ.**



ಸುದೀರ್ಘ ರಾಜಕೀಯ ಜೀವನ ಕಂಡ ಶ್ರೀನಿವಾಸ ಪ್ರಸಾದ್ ಕೇಂದ್ರ ಹಾಗೂ ರಾಜ್ಯ ಸಚಿವರಾಗಿ ಕೆಲಸ ನಿರ್ವಹಿಸಿದ್ದ ಹಿರಿಯ ಮುತ್ಸದ್ಧಿ. ದಲಿತರು ಹಾಗೂ ಶೋಷಿತರ ಗಟ್ಟಿ ಧ್ವನಿಯಾಗಿ ತಮ್ಮ ರಾಜಕೀಯ ಜೀವನದುದ್ದಕ್ಕೂ ಹೋರಾಟ ಮಾಡಿಕೊಂಡು ಬಂದಿದ್ದರು. **– ಡಾ.ಜಿ.ಪರಮೇಶ್ವರ್, ಗೃಹ ಸಚಿವರು.**



ದಲಿತರು, ಶೋಷಿತರ ಗಟ್ಟಿ ಧ್ವನಿಯಾಗಿದ್ದ ಶ್ರೀನಿವಾಸ ಪ್ರಸಾದ್ ತಮ್ಮ ಸುದೀರ್ಘ ರಾಜಕೀಯ ಜೀವನದಲ್ಲಿ ಅನೇಕ ಸಾಧನೆಗಳನ್ನು ಮಾಡುವ ಮೂಲಕ ಮಾದರಿಯಾಗಿದ್ದಾರೆ. ಕೇಂದ್ರ ಹಾಗೂ ರಾಜ್ಯ ಸಚಿವರಾಗಿ ಸಮರ್ಥವಾಗಿ ಕಾರ್ಯ ನಿರ್ವಹಿಸಿದ್ದಾರೆ. ಶ್ರೀನಿವಾಸಪ್ರಸಾದ್ ನಿಧನದಿಂದ ರಾಜಕೀಯ ಕ್ಷೇತ್ರಕ್ಕೆ ದೊಡ್ಡ ನಷ್ಟ ಉಂಟಾಗಿದೆ. **– ಎನ್.ಚಲುವರಾಯಸ್ವಾಮಿ, ಕೃಷಿ ಸಚಿವ**



ಶ್ರೀನಿವಾಸಪ್ರಸಾದ್ ಅವರ ಜೊತೆ ನನಗೆ 50 ವರ್ಷಗಳ ಸ್ನೇಹ ಸಂಬಂಧವಿತ್ತು ರಾಷ್ಟ್ರ, ರಾಜ್ಯ ಹಾಗೂ ಸಮಾಜ ಸೇವಾ ಕಾರ್ಯಗಳ ಬಗ್ಗೆ ಚಿಂತನೆ ಮಾಡುವ ಸಮಾನ ಮನಸ್ಕರಾಗಿದ್ದೆವು. ಕೇಂದ್ರ ಆಹಾರ ಮತ್ತು ನಾಗರಿಕ ಸಚಿವರಾಗಿದ್ದ ಸಂದರ್ಭದಲ್ಲಿ ಕರ್ನಾಟಕದಲ್ಲಿ ಶಾಲಾ ಮಕ್ಕಳಿಗೆ ಬಿಸಿಯೂಟ ನೀಡುವ ಯೋಜನೆಗೆ ಅಕ್ಕಿ ನೀಡಲು ಶ್ರೀನಿವಾಸ ಪ್ರಸಾದ್ ನೆರವಾಗಿದ್ದರು. ಇದರಿಂದ 84 ಲಕ್ಷ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ನೀಡಲು ಸಾಧ್ಯವಾಯಿತು.

**–ಎ.ಹೆಚ್.ವಿಶ್ವನಾಥ್, ವಿಧಾನಪರಿಷತ್ ಸದಸ್ಯರು**



ಶ್ರೀನಿವಾಸಪ್ರಸಾದ್ ನನ್ನ ಜೊತೆ ಉತ್ತಮ ಬಾಂಧವ್ಯ ಹೊಂದಿದ್ದರು. ನನ್ನ ಚುನಾವಣೆಯಲ್ಲಿ ತನು, ಮನ, ಧನ ಕಲ್ಪಿಸಿದ್ದರು. ಒಳ್ಳೆಯ ನಿರ್ಧಾರಗಳಿಗೆ ಸದಾ ಬೆಂಬಲ ಸೂಚಿಸುತ್ತಿದ್ದ ಅಪರೂಪದ ರಾಜಕಾರಣಿಯಾಗಿದ್ದರು.

**–ಟಿ.ಎಸ್.ಶ್ರೀವತ್ಸ, ಶಾಸಕ, ಕೆ.ಆರ್. ವಿಧಾನಸಭಾ ಕ್ಷೇತ್ರ**



ನಮ್ಮ ವಿದ್ಯಾರ್ಥಿ ಜೀವನದ ಚಳವಳಿಯ ಬಹುಪಾಲು ಸ್ಫೂರ್ತಿ ಚಿಲುಮೆ ಶ್ರೀನಿವಾಸ ಪ್ರಸಾದ್ ಅವರಾಗಿದ್ದರು. ಅನೇಕ ಚಳವಳಿಗಳಲ್ಲಿ ನಮಗೆ ದೊಡ್ಡ ಮಟ್ಟದ ನೈತಿಕ ಬಲ ತುಂಬಿದ ಮಹಾ ಚೇತನ ಅಸ್ತಂಗತವಾಗಿರುವುದು ಚಳವಳಿಗಳಿಗೆ ತುಂಬಲಾರದ ನಷ್ಟವಾಗಿದೆ. ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಆದರ್ಶಗಳನ್ನು ಪರಿಪೂರ್ಣವಾಗಿ ಮೈಗೂಡಿಸಿಕೊಂಡಿದ್ದ ಶ್ರೀನಿವಾಸ ಪ್ರಸಾದ್, ಎರಡನೇ ತಲೆಮಾರಿನ ಸಮಾಜಮುಖಿ ಯುವ ರಾಜಕಾರಣಿಗಳಿಗೆ ಶ್ರೇಷ್ಠ ಆದರ್ಶ ಹಾಗೂ ಪ್ರೇರಣೆಯಾಗಿದ್ದಾರೆ.

**– ಡಾ.ಬಿ.ಜೆ.ವಿಜಯಕುಮಾರ್, ಅಧ್ಯಕ್ಷರು, ಜಿಲ್ಲಾ ಕಾಂಗ್ರೆಸ್, ಮೈಸೂರು.**



ಶ್ರೀನಿವಾಸಪ್ರಸಾದ್ ಯಾವುದೇ ಪಕ್ಷದಲ್ಲಿದ್ದರೂ ತಾನು ನಂಬಿದ್ದ ತತ್ವ ಸಿದ್ಧಾಂತಗಳಲ್ಲಿ ಎಂದೂ ರಾಜೀ ಮಾಡಿಕೊಳ್ಳದ ಅಪರೂಪದ ವ್ಯಕ್ತಿತ್ವದ ರಾಜಕಾರಣಿಯಾಗಿದ್ದರು. ಭೂಮಿ, ಮನಸ್ವಿನಿಯಂತಹ ಯೋಜನೆಗಳನ್ನು ಜಾರಿಗೆ ತಂದಿದ್ದ ಶ್ರೀನಿವಾಸ ಪ್ರಸಾದ್ ನಿಧನದಿಂದ ಸಮುದಾಯಕ್ಕೆ ತುಂಬಲಾರದ ನಷ್ಟವಾಗಿದೆ.

**– ಸಿ.ನಾರಾಯಣ ಗೌಡ, ಅಧ್ಯಕ್ಷರು, ಮೈಸೂರು ಹೋಟೆಲ್ ಮಾಲೀಕರ ಸಂಘ.**



ನೇರನುಡಿ, ನಿಷ್ಠುರವಾದಿಯಾಗಿದ್ದ ಸಂಸದ ಶ್ರೀನಿವಾಸ ಪ್ರಸಾದ್ ಅವರ ನಿಧನ ರಾಜ್ಯಕ್ಕೆ ಮಾತ್ರವಲ್ಲದೆ ದೇಶಕ್ಕೆ ತುಂಬಲಾರದ ನಷ್ಟ ಉಂಟುಮಾಡಿದೆ. ಯಾವುದೇ ಪಕ್ಷದಲ್ಲಿದ್ದರೂ ತಮ್ಮ ತತ್ವ ಸಿದ್ಧಾಂತಗಳನ್ನು ಬಿಡದೆ ಅನುಸರಿಸುತ್ತಿದ್ದ ಅವರ ವ್ಯಕ್ತಿತ್ವ ಇಂದಿನ ಯುವ ರಾಜಕಾರಣಿಗಳಿಗೆ ಮಾರ್ಗದರ್ಶನವಾಗಿದೆ. ಸುದೀರ್ಘ ಐವತ್ತು ವರ್ಷ ಕಾಲ ರಾಜಕಾರಣದಲ್ಲಿದ್ದು ಆರು ಬಾರಿ ಸಂಸದರು, ಎರಡು ಬಾರಿ ಶಾಸಕರು ಹಾಗೂ ಕೇಂದ್ರ ಮತ್ತು ರಾಜ್ಯ ಸಂಪುಟದಲ್ಲಿ ಸಚಿವರಾಗಿದ್ದರೂ ಯಾವುದೇ ಕಪ್ಪು ಚುಕ್ಕೆ ಇಲ್ಲದೆ ಭ್ರಷ್ಟಾಚಾರರಹಿತ ರಾಜಕಾರಣಿಯಾಗಿದ್ದ ಶ್ರೀನಿವಾಸ ಪ್ರಸಾದ್ ಅವರಿಗೆ ಅಂತಿಮ ನಮನ.

**–ಗುರುಪಾದ ಸ್ವಾಮಿ, ಬಿಜೆಪಿ ಮುಖಂಡರು.**



ಶ್ರೀನಿವಾಸಪ್ರಸಾದ್ ನನ್ನ ರಾಜಕೀಯ ಗುರುಗಳಾಗಿದ್ದರು. ಮೇರು ವ್ಯಕ್ತಿತ್ವದ ರಾಜಕಾರಣಿ ಶ್ರೀನಿವಾಸ ಪ್ರಸಾದ್ ಅಗಲಿಕೆಯಿಂದ ದೇಶಕ್ಕೆ ತುಂಬಲಾರದ ನಷ್ಟವಾಗಿದೆ. ಶ್ರೀನಿವಾಸ ಪ್ರಸಾದ್ ಆತ್ಮಕ್ಕೆ ಭಗವಂತ ಚಿರ ಶಾಂತಿ ಕರುಣಿಸಲಿ. **–ಎನ್.ಆರ್.ನಾಗೇಶ್, ಅಧ್ಯಕ್ಷ, ಕಾಂಗ್ರೆಸ್ ಹಿಂದುಳಿದ ವರ್ಗ**



ಶ್ರೀನಿವಾಸಪ್ರಸಾದ್ ಅವರ ನಿಧನದಿಂದ ದಲಿತ ಧ್ವನಿ ನಿಶ್ಯಬ್ಧವಾಗಿದೆ. ಶ್ರೀನಿವಾಸಪ್ರಸಾದ್ ಅವರ ಅಗಲಿಕೆಯಿಂದ ತುಂಬಲಾರದ ನಷ್ಟವಾಗಿದೆ. ಕಳೆದ 10 ದಿನದ ಹಿಂದೆ ಶ್ರೀನಿವಾಸಪ್ರಸಾದ್ ಭೇಟಿ ಮಾಡಿದ್ದೆ, ನಿನ್ನೆ ಕೂಡ ಆಸ್ಪತ್ರೆಗೆ ಭೇಟಿ ನೀಡಿದ್ದೆ, ಆದರೆ ಅವರು ಮಾತನಾಡುವ ಸ್ಥಿತಿಯಲ್ಲಿರಲಿಲ್ಲ. ಕುಟುಂಬಸ್ಥರ ಅಪೇಕ್ಷೆಯಂತೆ ಎಲ್ಲಾ ಕಾರ್ಯಗಳು ನಡೆಯಲಿದ್ದು, ನಾಳೆ ಮಧ್ಯಾಹ್ನದ ವೇಳೆಗೆ ಅಂತ್ಯಸಂಸ್ಕಾರ ಕಾರ್ಯ ನೆರವೇರಲಿದೆ.

**–ಡಾ.ಹೆಚ್.ಸಿ.ಮಹದೇವಪ್ಪ, ಜಿಲ್ಲಾ ಉಸ್ತುವಾರಿ ಸಚಿವ**



ಶ್ರೀನಿವಾಸಪ್ರಸಾದ್ ನಮ್ಮ ತಂದೆಯ ಆತ್ಮೀಯ ಸ್ನೇಹಿತರಾಗಿದ್ದರು. ನನ್ನ ಬಾಲ್ಯದಿಂದ ಅವರೊಂದಿಗೆ ನನಗೆ ಒಡನಾಟವಿತ್ತು ನನಗೆ ಮಾರ್ಗದರ್ಶನ ಕೂಡ ಮಾಡುತ್ತಿದ್ದರು. ಇವತ್ತಿನ ರಾಜಕಾರಣಿಗಳು ಶ್ರೀನಿವಾಸ ಪ್ರಸಾದ್ ಅವರಿಂದ ತಾಳ್ಮೆ, ಸಂಯಮ ಕಲಿಯಬೇಕಾಗಿದೆ. ಅವರ ಅಗಲಿಕೆಯಿಂದ ನನಗೆ ನೋವಾಗಿದೆ.

**– ಗಣೇಶ್‌ಪ್ರಸಾದ್, ಶಾಸಕ, ಗುಂಡ್ಲುಪೇಟೆ**



ಜಿಲ್ಲಾ ಪಂಚಾಯಿತಿ ಚುನಾವಣೆಯಲ್ಲಿ ನನ್ನ ಗೆಲುವಿಗೆ ಶ್ರೀನಿವಾಸಪ್ರಸಾದ್ ಅವರೇ ಕಾರಣ ಕರ್ತರಾಗಿದ್ದರು. ನನ್ನನ್ನು ರಾಜಕೀಯವಾಗಿ ಬೆಳೆಸಿದ ಶ್ರೀನಿವಾಸಪ್ರಸಾದ್ ಜೊತೆಗೆ ಸಹೋದರನಂತೆ ಉತ್ತಮ ಒಡನಾಟವಿತ್ತು. ಶ್ರೀನಿವಾಸಪ್ರಸಾದ್ ಕಾಂಗ್ರೆಸ್ ಬಿಟ್ಟ ಸಂದರ್ಭದಲ್ಲಿ ನಾನು ಕಣ್ಣೀರು ಹಾಕಿದ್ದೆ. ಈಗ ಅವರ ಅಗಲಿಕೆಯಿಂದ ಸಮುದಾಯಕ್ಕೆ ತುಂಬಲಾರದ ನಷ್ಟವಾಗಿದೆ. ಕುಟುಂಬಸ್ಥರಿಗೆ ದೇವರು ದುಃಖ ಭರಿಸುವ ಶಕ್ತಿ ನೀಡಲಿ.

**– ಪುಟ್ಟರಂಗಶೆಟ್ಟಿ, ಶಾಸಕ, ಚಾಮರಾಜನಗರ**



ಶ್ರೀನಿವಾಸಪ್ರಸಾದ್ ತಮ್ಮ ಜೀವನದ ಉದ್ದಕ್ಕೂ ಶೋಷಿತರ ಧ್ವನಿಯಾಗಿ ಸಾರ್ವಜನಿಕ ಬದುಕಿನಲ್ಲಿ ಸಾರ್ಥಕ ಸೇವೆ ಸಲ್ಲಿಸಿದ್ದಾರೆ. ಭ್ರಷ್ಟಾಚಾರದ ಸೋಂಕಿಲ್ಲದೆ ರಾಜಕೀಯಕ್ಕೆ ಆದರ್ಶಪ್ರಾಯರಾಗಿದ್ದ ಶ್ರೀನಿವಾಸ ಪ್ರಸಾದ್ ನಿಧನದಿಂದ ಕರ್ನಾಟಕ ರಾಜ್ಯ ಒಬ್ಬ ಶ್ರೇಷ್ಠ ರಾಜಕೀಯ ಚಿಂತಕನನ್ನು ಕಳೆದುಕೊಂಡಿದೆ. ಮೃತರ ಆತ್ಮಕ್ಕೆ ಶಾಂತಿ ದೊರೆಯಲಿ ಎಂದು ಕೋರುತ್ತೇನೆ. **–ಹೆಚ್.ಎ.ವೆಂಕಟೇಶ್, ವಕ್ತಾರ, ಕೆಪಿಸಿಸಿ**



ವಿ.ಶ್ರೀನಿವಾಸ್‌ಪ್ರಸಾದ್ ಅವರು ಯುವ ರಾಜಕಾರಣಿಗಳಿಗೆ ಮಾದರಿಯಾಗಿದ್ದವರು. ಹಿರಿಯ ನಾಯಕರಾಗಿ ನೈತಿಕತೆಯ ಮಾರ್ಗದರ್ಶಕರಾಗಿ ಕಂಡು ಬರುತ್ತಾರೆ. ಇಂತಹ ಉತ್ತಮ ವ್ಯಕ್ತಿತ್ವದ ಅವರು ನಿಧನ ಹೊಂದಿದ್ದು ತುಂಬಲಾರದ ನಷ್ಟ ಉಂಟು ಮಾಡಿದೆ. ಶ್ರೀನಿವಾಸ್‌ಪ್ರಸಾದ್ ಅವರು ಪಕ್ಷ ರಾಜಕಾರಣದಲ್ಲಿದ್ದರೂ ಎಲ್ಲರ ವಿಶ್ವಾಸಗಳಿಸಿದ್ದ ಸ್ನೇಹಜೀವಿ ವ್ಯಕ್ತಿಯಾಗಿದ್ದರು. ಅಂತಹ ವ್ಯಕ್ತಿತ್ವಗಳು ಇಂದು ಅಪರೂಪ. ಹಾಗಾಗಿ ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ಕುಟುಂಬಕ್ಕೆ ನೀಡಲಿ.

**–ಮಧು ಜಿ.ಮಾದೇಗೌಡ, ವಿಧಾನಪರಿಷತ್ ಸದಸ್ಯರು.**



ಕೇಂದ್ರ ಹಾಗೂ ರಾಜ್ಯ ಸಚಿವರಾಗಿ ಶ್ರೀನಿವಾಸ ಪ್ರಸಾದ್ ಸಮರ್ಥವಾಗಿ ಕಾರ್ಯನಿರ್ವಹಿಸಿದ್ದಾರೆ. ಪ್ರಸಾದ್ ಕುಟುಂಬಸ್ಥರಿಗೆ, ಬಂಧು ಮಿತ್ರರಿಗೆ ಹಾಗೂ ಅಭಿಮಾನಿಗಳಿಗೆ ಅಗಲಿಕೆಯ ನೋವು ಸಹಿಸುವ ಶಕ್ತಿಯನ್ನು ಭಗವಂತ ನೀಡಲಿ. ಅವರ ಆತ್ಮಕ್ಕೆ ಚಿರ ಶಾಂತಿ ದೊರೆಯಲಿ ಎಂದು ಪ್ರಾರ್ಥಿಸುತ್ತೇನೆ.

**–ಡಾ.ಈ.ಸಿ.ನಿಂಗರಾಜ್‌ಗೌಡ, ಮಾಜಿ ಸಿಂಡಿಕೇಟ್ ಸದಸ್ಯ**



ಯಾವುದೇ ಪಕ್ಷದಲ್ಲಿದ್ದರೂ, ಹುದ್ದೆಯಲ್ಲಿದ್ದರೂ ಕನ್ನಡದ ಹೋರಾಟಕ್ಕೆ ಬೆಂಬಲವಾಗಿ ನಿಂತ ರಾಜಕಾರಣಿ. ಮಹಾರಾಣಿ ಮಾದರಿ ಶಾಲೆ ಉಳಿಸಿ ಹೋರಾಟದಲ್ಲಿ ಕೊನೆಯವರೆಗೂ ಶಾಲೆ ಉಳಿಸಲು ಪ್ರಯತ್ನಿಸಿದ್ದು ಅದಕ್ಕೆ ಸಾಕ್ಷಿ. ಮೊದಲಿನಿಂದಲೂ ಕನ್ನಡ ಮಾಧ್ಯಮವನ್ನು ಪ್ರತಿಪಾದಿಸುತ್ತಾ ಬಂದವರು. ಕೆಲವು ತಿಂಗಳ ಹಿಂದೆ ಒಂದರಿಂದ ಐದನೇ ತರಗತಿವರೆಗೆ ಮಾತೃಭಾಷಾ ಮಾಧ್ಯಮವನ್ನು ಜಾರಿಗೆ ತರಲು ಕರ್ನಾಟಕದ ಶಾಸನಸಭೆಗಳು ಅಂಗೀಕರಿಸಿದ ಉಚಿತ ಶಿಕ್ಷಣ ಮಸೂದೆಗೆ ರಾಷ್ಟ್ರಪತಿಗಳ ಒಪ್ಪಿಗೆ ಪಡೆಯಬೇಕೆಂದು ಪ್ರಧಾನಿ ಮೋದಿ ಅವರಿಗೆ ಪತ್ರ ಬರೆದಿದ್ದನ್ನು ನಾನು ಇಲ್ಲಿ ಸ್ಮರಿಸ ಬಯಸುತ್ತೇನೆ.

**–ಸ.ರ.ಸುದರ್ಶನ, ಪ್ರಧಾನ ಕಾರ್ಯದರ್ಶಿ, ಕನ್ನಡ ಕ್ರಿಯಾ ಸಮಿತಿ**

ಸುದೀರ್ಘ ರಾಜಕೀಯ ಜೀವನದಲ್ಲಿ ಸಂಸದ ವಿ.ಶ್ರೀನಿವಾಸ ಪ್ರಸಾದ್ ಸ್ಮರಣೀಯ ಸಮಾಜ ಸೇವಾ ಕಾರ್ಯ ಮಾಡಿದ್ದಾರೆ. ಈ ಮೂಲಕ ಅಪಾರ ಜನಪ್ರಿಯತೆ ಹೊಂದಿದ್ದ ಶ್ರೀನಿವಾಸಪ್ರಸಾದ್ ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ದೇವರು ಅವರ ಕುಟುಂಬಸ್ಥರು, ಅಭಿಮಾನಿಗಳಿಗೆ ನೀಡಲಿ. ಅವರ ಆತ್ಮಕ್ಕೆ ಚಿರ ಶಾಂತಿ ದೊರೆಯಲಿ.

**–ಬಿ.ಎಂ.ರಘು, ನಗರ ಬಿಜೆಪಿ ಪ್ರಧಾನ ಕಾರ್ಯದರ್ಶಿ**



ಹಾಲಿ ಚಾಮರಾಜನಗರ ಸಂಸದರಾಗಿರುವ ವಿ.ಶ್ರೀನಿವಾಸಪ್ರಸಾದ್ ಕಳೆದ ಐದು ದಶಕಗಳಿಂದ ರಾಜಕಾರಣದಲ್ಲಿ ಸಕ್ರಿಯರಾಗಿದ್ದರು. ಹೋದ ತಿಂಗಳಷ್ಟೆ ಸಕ್ರಿಯ ರಾಜಕಾರಣದಿಂದ ನಿವೃತ್ತಿ ಹೊಂದಿದ್ದ ಶ್ರೀನಿವಾಸ ಪ್ರಸಾದ್, ಹಲವು ಜವಾಬ್ದಾರಿಯುತ ಸ್ಥಾನಗಳನ್ನು ಸಮರ್ಥವಾಗಿ ನಿಭಾಯಿಸಿದ್ದರು.

ಆರು ಬಾರಿ ಸಂಸದರಾಗಿ, ಎರಡು ಬಾರಿ ವಿಧಾನಸಭಾ ಸದಸ್ಯರಾಗಿ, ಕೇಂದ್ರ ಹಾಗೂ ರಾಜ್ಯದ ಸಚಿವರಾಗಿದ್ದ ಶ್ರೀನಿವಾಸಪ್ರಸಾದ್ ಅವರ ಈ ಯಶಸ್ಸು ಜನಪ್ರಿಯತೆಯ ದ್ಯೋತಕವಾಗಿದೆ. ವಾಜಪೇಯಿ ಸಂಪುಟದಲ್ಲಿ ಕೇಂದ್ರ ಸಚಿವರಾಗಿದ್ದರು. ಇತ್ತ ಸಿದ್ದರಾಮಯ್ಯ ಮಂತ್ರಿ ಮಂಡಲದಲ್ಲಿ ಕಂದಾಯ ಸಚಿವರಾಗಿದ್ದ ಶ್ರೀನಿವಾಸ ಪ್ರಸಾದ್ ನಿಸ್ಪೃಹ ಸೇವೆ ಸಲ್ಲಿಸಿದ್ದರು.

ಶುದ್ಧ ಹಸ್ತ ರಾಜಕಾರಣಿಯಾಗಿ ಜನ ಸೇವೆ ಮಾಡಿದ ಶ್ರೀನಿವಾಸ ಪ್ರಸಾದ್ ಅವರನ್ನು ಜನರು ದಲಿತ ಸೂರ್ಯ ಎಂದೇ ಕರೆಯುತ್ತಿದ್ದರು. ಅವರು ನಿಜವಾದ ಅರ್ಥದಲ್ಲಿ ಸರ್ವರ ಜನ ನಾಯಕರಾಗಿದ್ದರು. ಸಮನ್ವಯ ದೃಷ್ಟಿ, ಮೆಲುಮಾತು, ವಿನಯ ಶ್ರೀನಿವಾಸಪ್ರಸಾದ್ ಅವರ ವ್ಯಕ್ತಿತ್ವದ ಭಾಗಗಳಾಗಿದ್ದವು. ಉತ್ತಮ ವಾಗ್ಮಿಯಾಗಿದ್ದ ಶ್ರೀನಿವಾಸ ಪ್ರಸಾದ್, ವಿಷಯಗಳನ್ನು ಮನಮುಟ್ಟುವಂತೆ ಹೇಳುವ ಕಲೆ ಕರಗತ ಮಾಡಿಕೊಂಡಿದ್ದರು. ಅಗತ್ಯ ಬಿದ್ದಾಗ ಸಿಡಿದೇಳುವ ಸ್ವತಂತ್ರ ವ್ಯಕ್ತಿತ್ವ ಅವರಿಗಿತ್ತು.

ಶ್ರೀ ರಾಜೇಂದ್ರ ಸ್ವಾಮೀಜಿ ಅವರ ಕಾಲದಿಂದಲೂ ಶ್ರೀಮಠದೊಂದಿಗೆ ಆತ್ಮೀಯ ಸಂಬಂಧ ಹೊಂದಿದ್ದ ಶ್ರೀನಿವಾಸ ಪ್ರಸಾದ್ ಅವರು ಶ್ರೀಮಠ ಹಾಗೂ ಸಂಸ್ಥೆಗಳ ಎಲ್ಲಾ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿದ್ದರು. ನಾಡು ಒಬ್ಬ ಸಜ್ಜನ ಸಂಭಾವಿತ ರಾಜಕರಾಣಿ ಕಳೆದುಕೊಂಡಿದೆ.

ದಿವಂಗತರ ಆತ್ಮಕ್ಕೆ ಶಾಂತಿ ದೊರೆಯಲಿ. ಕುಟುಂಬಸ್ಥರು, ಬಂಧು ಮಿತ್ರರು, ಅವರ ಅಪಾರ ಸಂಖ್ಯೆ ಅಭಿಮಾನಿಗಳಿಗೆ ದುಃಖ ಭರಿಸುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಹಾರೈಸುತ್ತೇನೆ. **– ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸುತ್ತೂರು ಮಠ, ಮೈಸೂರು.**



ಸೋಮವಾರ ನಿಧನರಾದ ಮಾಜಿ ಕೇಂದ್ರ ಸಚಿವರು, ಹಾಲಿ ಸಂಸದರಾದ ಶ್ರೀನಿವಾಸ್ ಪ್ರಸಾದ್ ಅವರಿಗೆ ಮೈಸೂರು ವಕೀಲ ಸಂಘದ ಅಧ್ಯಕ್ಷ ಲೋಕೇಶ್, ಮಾಜಿ ಕಾರ್ಪೊರೇಟರ್ ಸುನಿಲ್ ಇನ್ನಿತರರು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು.



**ಮೈಸೂರು ತಾಲೂಕಿನ ಹುಯಿಲಾಳು ಗ್ರಾಮದ ಶ್ರೀ ಮನೆ ಮಂಚಮ್ಮ ದೇವಸ್ಥಾನ ಸೇವಾ ಟ್ರಸ್ಟ್ ವತಿಯಿಂದ ಶ್ರೀನಿವಾಸ ಪ್ರಸಾದ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಈ ವೇಳೆ ಟ್ರಸ್ಟ್ ಅಧ್ಯಕ್ಷ ಹುಯಿಲಾಳು ರಾಮಸ್ವಾಮಿ, ಸವಿತಾ ಸಮಾಜದ ನಗರ ಅಧ್ಯಕ್ಷ ಹರೀಶ್‌ರೆಡ್ಡಿ, ಜಟ್ಟಿಹುಂಡಿ ರಾಚಪ್ಪ, ಬೋಗಾದಿ ಮಾದೇವ ಪ್ರಸಾದ್ ಇನ್ನಿತರರು ಉಪಸ್ಥಿತರಿದ್ದರು.**

### ಶ್ರೀನಿವಾಸ ಪ್ರಸಾದ್ ಫ್ಲೆಕ್ಸ್, ಬ್ಯಾನರ್ ಅಳವಡಿಸಿ ಶ್ರದ್ಧಾಂಜಲಿ

ಮೈಸೂರು, ಏ.29(ಬಿಎಲ್‌ಯು)– ಚಾಮರಾಜನಗರ ಸಂಸದ ವಿ.ಶ್ರೀನಿವಾಸ ಪ್ರಸಾದ್ ಹುಟ್ಟಿ, ಬೆಳೆದ ಅಶೋಕಪುರಂನಲ್ಲಿ ಇಂದು ನೀರವ ಮೌನ ಆವರಿಸಿದೆ.

ಅಶೋಕಪುರಂನ ರಸ್ತೆ ರಸ್ತೆಗಳಲ್ಲಿ ಶ್ರೀನಿವಾಸ ಪ್ರಸಾದ್ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಅರ್ಪಿಸುವ ಫ್ಲೆಕ್, ಬ್ಯಾನರ್‌ಗಳನ್ನು ಹಾಕಲಾಗಿತ್ತು.

ನಗರದ ವಿದ್ಯಾರಣ್ಯಪುರಂನ ಸ್ಟರ್ಲಿಂಗ್ ಥಿಯೇಟರ್ ಬಳಿಯ ಸರ್ಕಲ್‌ನಲ್ಲಿ ಮಂಟಪವೊಂದರಲ್ಲಿ ಶ್ರೀನಿವಾಸ ಪ್ರಸಾದ್ ಅವರ ಭಾವಚಿತ್ರ ಇಟ್ಟು ಶ್ರದ್ಧಾಂಜಲಿ ಅರ್ಪಿಸಲಾಯಿತು. ನಗರದ ಸಿಲ್ಕ್ ಫ್ಯಾಕ್ಟರಿ ಸರ್ಕಲ್, ಅಶೋಕ ವೃತ್ತ, ಆರ್‌ಟಿಓ ವೃತ್ತ ಸೇರಿದಂತೆ ಹಲವೆಡೆ ಶ್ರೀನಿವಾಸ ಪ್ರಸಾದ್ ಭಾವಚಿತ್ರ ಅಳವಡಿಕೆ ಶ್ರದ್ಧಾಂಜಲಿ ಅರ್ಪಿಸಲಾಯಿತು. ಜಾತ್ಯಾತೀತ ಹಾಗೂ ಧರ್ಮಾತೀತವಾಗಿ ಶ್ರೀನಿವಾಸ ಪ್ರಸಾದ್ ಅವರ ಅಗಲಿಕೆಗೆ ಜನರು ಸಂತಾಪ ಸೂಚಿಸಿದರು.



ಸತ್ಯನಿಷ್ಠ ರಾಜಕಾರಣಿ, ದಲಿತರ ಏಳಿಗೆಗಾಗಿ ಸತತ 50 ವರ್ಷಗಳಿಂದ ಶ್ರಮಿಸಿದ್ದ, ಕಳಂಕ ರಹಿತ ರಾಜಕಾರಣಿ ವಿ.ಶ್ರೀನಿವಾಸ್‌ಪ್ರಸಾದ್ ಅವರ ಅಕಾಲಿಕ ನಿಧನದಿಂದ ಆಘಾತವಾಗಿದೆ. ಪ್ರಸಾದ್ ಅವರ ಸಾವು ದಲಿತರಿಗಲ್ಲದೆ, ಇತರ ಶೋಷಿತರ ಸಮುದಾಯಕ್ಕೆ ತುಂಬಲಾರದ ನಷ್ಟ ಉಂಟಾಗಿದೆ. ಪ್ರಸಾದ್ ಅವರು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳಲ್ಲಿ ಮಂತ್ರಿಯಾಗಿ ಯಾವುದೇ ಕಳಂಕವಿಲ್ಲದೆ, ಅವರಿಗೆ ಕೊಟ್ಟ ಖಾತೆಗಳನ್ನು ಜವಾಬ್ದಾರಿಯಿಂದ ನಿರ್ವಹಿಸಿದ್ದಾರೆ. ರಾಜ್ಯದ ಕಂದಾಯ ಸಚಿವರಾಗಿದ್ದಾಗ ಅವಿವಾಹಿತ, 45 ವರ್ಷ ಮೇಲ್ಪಟ್ಟ ಮಹಿಳೆಯರಿಗೆ ಮನಸ್ವಿನಿ ವೇತನ ಎಂಬ ಯೋಜನೆಯನ್ನು ಜಾರಿಗೆ ತಂದಿದ್ದು, ಹಾಗೂ ರಾಜ್ಯದ ಎಲ್ಲ ಸ್ಮಶಾನಗಳನ್ನು ಸಾರ್ವಜನಿಕ ಸ್ಮಶಾನವೆಂದು ಜಾರಿಗೆ ತಂದದ್ದು ಅವರಿಗೆ ಸಂದ ಕೀರ್ತಿ, ಇಂತಹ ಒಬ್ಬ ನಾಯಕರನ್ನು ಕಳೆದುಕೊಂಡಿದ್ದು ನಮ್ಮ ದೌರ್ಭಾಗ್ಯ, ನನ್ನ ಆತ್ಮೀಯರಾಗಿದ್ದ ಶ್ರೀನಿವಾಸ್‌ಪ್ರಸಾದ್ ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು, ದೇವರು ಅವರ ಕುಟುಂಬಕ್ಕೆ ನೀಡಲಿ.

**–ಡಿ.ಸಿ.ತಮ್ಮಣ್ಣ, ಮಾಜಿ ಶಾಸಕ**



**ಕರ್ನಾಟಕ ರಾಜ್ಯ ಸಿದ್ದರಾಮಯ್ಯನವರ ಅಭಿಮಾನಿ ಬಳಗದ ವತಿಯಿಂದ ಇಹಲೋಕ ತ್ಯಜಿಸಿದ ಚಾಮರಾಜನಗರ ಸಂಸದ ವಿ.ಶ್ರೀನಿವಾಸಪ್ರಸಾದ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಈ ವೇಳೆ ಬಳಗದ ಮೈಸೂರು ಜಿಲ್ಲಾ ಅಧ್ಯಕ್ಷ ಬೋಗಾದಿ ಕೆ.ಮಹದೇವಸ್ವಾಮಿ, ರಾಜ್ಯಾಧ್ಯಕ್ಷ ಹಿನಕಲ್ ಪ್ರಕಾಶ್, ಮಾಧುಸ್ವಾಮಿ, ಮಣಿಕಂಠ, ಜೆಟ್ಟಿಹುಂಡಿ ರಾಚಪ್ಪ, ಮೈಸೂರು ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ, ಛಲವಾದಿ ನಾಗರಾಜು, ಅರ್ಜುನಹಳ್ಳಿ ಕೀರ್ತಿರಜು, ಕೆ.ಪ್ರಸಾದ್, ಬಿಂದುಸಾಗರ್ ಇನ್ನಿತರರು ಉಪಸ್ಥಿತರಿದ್ದರು.**



ಅನ್ಯಾಯ, ಅಸಮಾನತೆಯ ವಿರುದ್ಧದ ಹೋರಾಟವನ್ನೆ ಬದುಕಾಗಿಸಿಕೊಂಡಿದ್ದ ಶ್ರೀನಿವಾಸ ಪ್ರಸಾದ್ ದೀನ ದಲಿತರ ಗಟ್ಟಿ ದನಿಯಾಗಿದ್ದರು. ಅಂಬೇಡ್ಕರ್ ತತ್ವಾದರ್ಶಗಳನ್ನೆ ಉಸಿರಾಗಿಸಿಕೊಂಡಿದ್ದ ಪ್ರಸಾದ್, ಪಕ್ಷಾಂತರ ಮಾಡಿದರೂ ಎಂದಿಗೂ ತತ್ವಾಂತರಿಯಾಗಲಿಲ್ಲ ಸಂವಿಧಾನ, ಅಂಬೇಡ್ಕರ್ ವಿಚಾರಧಾರೆಗಳನ್ನು ಜನರಿಗೆ ತಲುಪಿಸುವ ಕೆಲಸ ಮಾಡುತ್ತಲೆ ಬಂದರು. ಈಗ ಶ್ರೀನಿವಾಸ ಪ್ರಸಾದ್ ಅಗಲಿಕೆಯಿಂದ ದಕ್ಷಿಣ ಕರ್ನಾಟಕದ ದಲಿತ ಸೂರ್ಯ ಅಸ್ತಂಗತ ಆದಂತಿದೆ. ರಾಷ್ಟ್ರ ರಾಜಕಾರಣದಲ್ಲಿ ಕೂಡ ಕೊರತೆ ಸೃಷ್ಟಿಯಾದಂತಾಗಿದೆ.

**–ಬಿ.ಸುಬ್ರಹ್ಮಣ್ಯ, ಮಾಜಿ ಅಧ್ಯಕ್ಷರು, ಕರ್ನಾಟಕ ಪ್ರದೇಶ ಕುರುಬರ ಸಂಘ**

ದಲಿತರ ಧೀಮಂತ ನಾಯಕ, ಯಾವುದೇ ರೀತಿಯ ಆರೋಪ, ಕಪ್ಪುಚುಕ್ಕೆ ಇಲ್ಲದೆ, ಕಳಂಕರಹಿತ ರಾಜಕಾರಣ ಮಾಡಿದ ಧೀಮಂತ ಮಹಾನ್ ಪುರುಷ ಸಂಸದ ಶ್ರೀನಿವಾಸ್ ಪ್ರಸಾದ್ ಅವರ ನಿಧನವು ಹಿಂದುಳಿದ ಹಾಗೂ ದೀನ ದಲಿತರಿಗೆ ತುಂಬಲಾರದ ನಷ್ಟ ಉಂಟುಮಾಡಿದೆ. ಕರ್ನಾಟಕ ಸರ್ಕಾರವು ಧೀಮಂತ ನಾಯಕರಾದ ವಿ.ಶ್ರೀನಿವಾಸ ಪ್ರಸಾದ್ ಅವರ ಹೆಸರನ್ನು ಯಾವುದಾದರೂ ವಿಶ್ವವಿದ್ಯಾಲಯಕ್ಕೆ ನಾಮಕರಣ ಮಾಡಬೇಕು. ಇವರಿಗೆ ಗೌರವ ಡಾಕ್ಟರೇಟ್ ನೀಡುವುದರ ಮೂಲಕ ಗೌರವವನ್ನು ಸೂಚಿಸಬೇಕು.

**–ಪೈಲ್ವಾನ್ ಎಸ್.ಚಂದ್ರಶೇಖರ್, ನವ ಉದಯ ಯುವಕರ ಸಂಘದ ಯುವ ಮುಖಂಡ, ಅಶೋಕಪುರಂ.**



ಶ್ರೀನಿವಾಸ ಪ್ರಸಾದ್ ಅಪರೂಪದ ವ್ಯಕ್ತಿತ್ವದ ರಾಜಕಾರಣಿಯಾಗಿದ್ದರು. ಸಮಾಜವಾದಿಯಾಗಿ ಪ್ರಾಮಾಣಿಕತೆಯಿಂದ ರಾಜಕೀಯ ಕ್ಷೇತ್ರದಲ್ಲಿ ಆದರ್ಶರಾಗಿದ್ದರು. ಮೈಸೂರು ನಗರಕ್ಕೆ ಶ್ರೀನಿವಾಸ ಪ್ರಸಾದ್ ನೀಡಿರುವ ಹಲವು ಕೊಡುಗೆಗಳು ಅವಿಸ್ಮರಣೀಯವಾಗಿದೆ.

**–ಜಿ.ಟಿ.ದೇವೇಗೌಡ, ಶಾಸಕ, ಚಾಮುಂಡೇಶ್ವರಿ ಕ್ಷೇತ್ರ**



ಚಾಮರಾಜನಗರ ಲೋಕಸಭಾ ಕ್ಷೇತ್ರದ ಸಂಸದರು, ಹಿರಿಯ ಮುತ್ಸದ್ಧಿಗಳಾದ ವಿ. ಶ್ರೀನಿವಾಸ್ ಪ್ರಸಾದ್ ಅವರು ಅನಾರೋಗ್ಯದಿಂದ ನಮ್ಮನ್ನು ಅಗಲಿರುವುದು ತೀವ್ರ ಆಘಾತ ಉಂಟುಮಾಡಿದೆ. ಶೋಷಿತ ವರ್ಗದ ಧ್ವನಿಯಾಗಿ, ಶಾಸಕರಾಗಿ, ಸಂಸದರಾಗಿ ರಾಜ್ಯ ಮತ್ತು ಕೇಂದ್ರ ಸಚಿವರಾಗಿ ರಾಜಕೀಯ ಕ್ಷೇತ್ರದಲ್ಲಿ ಅವರು ಸಲ್ಲಿಸಿದ ಜನ ಸೇವೆ ಸದಾ ಸ್ಮರಣೀಯ. ಭಗವಂತ ಅವರ ಆತ್ಮಕ್ಕೆ ಚಿರಶಾಂತಿ ನೀಡಲಿ ಹಾಗೂ ಅವರ ಕುಟುಂಬದವರಿಗೆ, ಅಭಿಮಾನಿಗಳಿಗೆ ಹಿರಿಯರ ಅಗಲಿಕೆಯ ನೋವು ಸಹಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆ.

**–ಜಿ.ಡಿ.ಹರೀಶ್‌ಗೌಡ, ಶಾಸಕ, ಹುಣಸೂರು.**



ನಮ್ಮ ತಂದೆ ಬಿ.ರಾಚಯ್ಯ ಅವರ ವಿರುದ್ಧ ಲೋಕಸಭಾ ಚುನಾವಣೆಯಲ್ಲಿ 1980ರಲ್ಲಿ ಶ್ರೀನಿವಾಸಪ್ರಸಾದ್‌ರು ಜಯಗಳಿಸಿದ್ದರು. ತಮ್ಮ ರಾಜಕೀಯದ ಆರಂಭದ ದಿನದಿಂದ ಇಲ್ಲಿ ತನಕ ನೇರವಾದಿಯಾಗಿ ರಾಜಕೀಯದಲ್ಲಿ ಗುರುತಿಸಿಕೊಂಡಿದ್ದರು. ಯಾವುದೇ ತೀರ್ಮಾನವಾದರೂ ಶ್ರೀನಿವಾಸ ಪ್ರಸಾದ್ ಅವರದೇ ಅಂತಿಮವಾಗಿತ್ತು. ಸಮುದಾಯದವರು ಕೂಡ ಶ್ರೀನಿವಾಸ ಪ್ರಸಾದ್ ಅವರನ್ನು ಅಷ್ಟೆ ಗೌರವದಿಂದ ಕಂಡಿದ್ದಾರೆ.

**– ಎ.ಆರ್.ಕೃಷ್ಣಮೂರ್ತಿ, ಶಾಸಕ, ಕೊಳ್ಳೇಗಾಲ**



ಶ್ರೀನಿವಾಸಪ್ರಸಾದ್ ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷರಾಗಿದ್ದ ಸಂದರ್ಭದಲ್ಲಿ 35 ಮಂದಿಗೆ ವಿಧಾನಸಭಾ ಚುನಾವಣೆಯಲ್ಲಿ ಟಿಕೆಟ್ ಕೊಡಿಸಿದ್ದರು. ಡಾ.ಅಂಬೇಡ್ಕರ್ ಅನುಯಾಯಿಯಾಗಿದ್ದ ಶ್ರೀನಿವಾಸ ಪ್ರಸಾದ್ ದಲಿತರ ಹಾಗೂ ಬಡವರ ಪರ ಹೋರಾಟ ಮಾಡಿದ್ದರು. ಶ್ರೀನಿವಾಸ ಪ್ರಸಾದ್ ನಿಧನದಿಂದ ದೀನ–ದಲಿತರಿಗೆ ಅಪಾರ ನಷ್ಟವಾಗಿದೆ.

**–ಆರ್.ಧರ್ಮಸೇನ, ಮಾಜಿ ವಿಧಾನಪರಿಷತ್ ಸದಸ್ಯ**



ಅಂಬೇಡ್ಕರ್ ಅವರ ವಿಚಾರಧಾರೆಯ ಅನುಯಾಯಿಗಳು, ದಲಿತ ಮುಖಂಡರು, ಹಿಂದುಳಿದ ವರ್ಗಗಳ ಧ್ವನಿಯಾಗಿದ್ದ ಸ್ವಾಭಿಮಾನಿ ರಾಜಕಾರಣಿ ಶ್ರೀನಿವಾಸ ಪ್ರಸಾದ್ ನಿಧನದಿಂದ ರಾಜ್ಯಕ್ಕೆ, ಅದರಲ್ಲೂ ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗೆ ತುಂಬಲಾರದ ನಷ್ಟವಾಗಿದೆ.

**–ಸುಧಾಕರ್ ಎಸ್.ಶೆಟ್ಟಿ, ಮಾಜಿ ಅಧ್ಯಕ್ಷರು, ಎಫ್‌ಕೆಸಿಸಿಐ**



ಸ್ವಾಭಿಮಾನಿ ಚಕ್ರವರ್ತಿ, ದಲಿತರ ಆಶಾಕಿರಣ, ಮಾಜಿ ಕೇಂದ್ರ ಹಾಗೂ ರಾಜ್ಯ ಸಚಿವರಾದ ವಿ.ಶ್ರೀನಿವಾಸ್ ಪ್ರಸಾದ್ ಅವರ ಅಗಲಿಕೆಯಿಂದ ದಲಿತ ಸಮಾಜಕ್ಕೆ ಆಘಾತ ಉಂಟು ಮಾಡಿದೆ, ದಲಿತ ಸಮಾಜ ಇವತ್ತು ಒಂದು ಶಕ್ತಿಯನ್ನು ಕಳೆದುಕೊಂಡಿದೆ, ಹಾಗೂ ರಾಜಕೀಯ ರಂಗಕ್ಕೆ ತುಂಬಲಾರದ ನಷ್ಟ, ಹಳೆ ಮೈಸೂರು ಭಾಗದಲ್ಲಿ ಒಬ್ಬ ಧ್ರುವತಾರೆಯನ್ನು ಕಳೆದುಕೊಂಡಿದ್ದೇವೆ, ಇವರದೇ ಆದ ಅಭಿಮಾನಿಗಳ ಪಡೆಯನ್ನ ಹೊಂದಿದ್ದರು. ಇವರ ಜೀವನ ರಾಜಕೀಯ ರಂಗದ ಶೈಲಿ ಅನೇಕ ನಾಯಕರಿಗೆ ಮಾರ್ಗದರ್ಶನವಾಗಿತ್ತು. ಇವರ ಐವತ್ತು ವರ್ಷಗಳ ರಾಜಕೀಯ ವೃತ್ತಿಯಲ್ಲಿ ಒಂದು ಕಪ್ಪು ಚುಕ್ಕಿ ಇಲ್ಲದ ಹಾಗೆ ರಾಜಕೀಯ ಮಾಡಿದಂತ ಮೇರು ವ್ಯಕ್ತಿ, ಇಂತಹ ವ್ಯಕ್ತಿಯ ಅಗಲಿಕೆಯಿಂದ ಅವರ ಅಭಿಮಾನಿಗಳಾದ ನಮ್ಮಗಳಿಗೆ ದುಃಖವನ್ನು ಉಂಟುಮಾಡಿದೆ ಹಾಗೂ ಅವರ ಕುಟುಂಬದವರಿಗೆ, ಅವರ ಅಭಿಮಾನಿಗಳಿಗೆ ದುಃಖವನ್ನು ಸಹಿಸುವ ಶಕ್ತಿಯನ್ನು ಆ ಭಗವಂತ ಕರುಣಿಸಲಿ ಹಾಗೂ ಅವರ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. **–ವಿ.ಶೈಲೇಂದ್ರ**



ಸುಮಾರು ಐದು ದಶಕಗಳ ಕಾಲ ರಾಜಕಾರಣದಲ್ಲಿ ಕಲಂಕರಹಿತರಾಗಿ ಸಕ್ರಿಯವಾಗಿದ್ದ ಶ್ರೀನಿವಾಸಪ್ರಸಾದ್ ರಾಜಕಾರಣದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಬಾಲ್ಯದಿಂದಲೂ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಸ್ವಯಸೇವಕರಾಗಿದ್ದರು. ಅವರು ಸಂಸ್ಕಾರವಂತರು ಆಗಿದ್ದರು. ನನಗೆ ಅವರು ಆತ್ಮೀಯರು ಆಗಿದ್ದರು. ಅವರು ಸಮಾಜದಲ್ಲಿ ಸಾಮರಸ್ಯ ಮೂಡಿಸಲು ಬಹಳವಾಗಿ ಶ್ರಮಿಸಿದ್ದರು. ಸಜ್ಜನ ರಾಜಕಾರಣಿ ಎನಿಸಿಕೊಂಡಿದ್ದರು. ಅವರ ಸಾವು ನೋವು ತಂದಿದೆ. ಅವರ ಆತ್ಮಕ್ಕೆ ಶಾಂತಿ ದೊರಕಲಿ ಎಂದು ಪ್ರಾರ್ಥಿಸುತ್ತೇನೆ.

**–ತೋಂಟದಾರ್ಯ, ವಿಧಾನಪರಿಷತ್ತಿನ ಮಾಜಿ ಸದಸ್ಯರು.**

ಅಂಬೇಡ್ಕರ್, ಬುದ್ಧನ ಅನುಯಾಯಿಯಾಗಿ ಅವರ ತತ್ವಾದರ್ಶವನ್ನು ಜೀವನದುದ್ದಕ್ಕೂ ಅಳವಡಿಸಿಕೊಂಡಿದ್ದ ಮಹಾನ್ ಚೇತನ ಶ್ರೀನಿವಾಸಪ್ರಸಾದ್ ಅವರ ನಿಧನದಿಂದ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ. ಶ್ರೀನಿವಾಸ ಪ್ರಸಾದ್ ಹಾಕಿಕೊಟ್ಟ ಹಾದಿಯಲ್ಲಿ ಸಾಗಿ, ಅವರ ಆತ್ಮಕ್ಕೆ ಶಾಂತಿ ಕೋರೋಣ. **– ಕೆ.ಮಹೇಶ್, ವಕ್ತಾರ, ಮೈಸೂರು ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಸಮಿತಿ**

ನಿಷ್ಕಳಂಕ ರಾಜಕಾರಣಿ, ಅಪ್ಪಟ ಹೋರಾಟಗಾರ, ಸಂಸದರಾದ ವಿ.ಶ್ರೀನಿವಾಸಪ್ರಸಾದ್ ಅವರ ಅಗಲಿಕೆ ರಾಜಕೀಯ ಕ್ಷೇತ್ರಕ್ಕೆ ತುಂಬಲಾರದ ನಷ್ಟವನ್ನುಂಟು ಮಾಡಿದೆ. ಮೈಸೂರು ಭಾಗದಲ್ಲಿ ದೀನ ದಲಿತರ, ಬಡವರ ಆಶಾಕಿರಣವಾಗಿದ್ದ ಅವರು ತಮ್ಮ ರಾಜಕೀಯ ಜೀವನದುದ್ದಕ್ಕೂ ತುಳಿತಕ್ಕೊಳಗಾದವರ ಶ್ರೇಯೋಭಿವೃದ್ಧಿಗಾಗಿ ಅವಿರತವಾಗಿ ಶ್ರಮಿಸುತ್ತಿದ್ದರು. ಅವರ ಆತ್ಮಕ್ಕೆ ದೇವರು ಶಾಂತಿ ನೀಡಲಿ ಎಂದು ಪ್ರಾರ್ಥನೆ.

**–ತಾಯೂರು ವಿಠಲಮೂರ್ತಿ, ಕನ್ನಡ ಹೋರಾಟಗಾರ**

# ಆರೋಗ್ಯಕರ ಸಮಾಜಕ್ಕೆ ಅಸಮಾನತೆ ನಿವಾರಣೆ ಅಗತ್ಯ

## ಪ್ರಗತಿಪರ ಚಿಂತಕ ಡಾ.ಕಾಳೇಗೌಡ ನಾಗವಾರ ಅಭಿಪ್ರಾಯ



ಮಂಡ್ಯ, ಏ.29– ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಅಸಮಾನತೆ, ಅಸ್ಪೃಶ್ಯತೆ ನಿವಾರಣೆ ಮಾಡುವುದು ಅಗತ್ಯ ಎಂದು ಪ್ರಗತಿಪರ ಚಿಂತಕ ಡಾ.ಕಾಳೇಗೌಡ ನಾಗವಾರ ತಿಳಿಸಿದರು.

ಸೋಮವಾರ ನಗರದ ಅನನ್ಯ ಕ್ರಿಯೇಷನ್ಸ್‌ಗೆ 10 ವರ್ಷ ತುಂಬಿದ ಹಿನ್ನೆಲೆಯಲ್ಲಿ ನಡೆದ ಸಂಗೀತ, ಸಾಹಿತ್ಯ, ಕೃಷಿ ಸಂವಾದ ಕಾರ್ಯಕ್ರಮದಲ್ಲಿ ಸಂವಿಧಾನ ಮತ್ತು ಮುಂದೇನು ಕುರಿತು ಮಾತನಾಡಿದ ಅವರು, ಪ್ರಸ್ತುತ ಪ್ರಜಾಪ್ರಭುತ್ವ ಹಾಗೂ ಸಂವಿಧಾನದಡಿ ದೇಶ ಸಮಾನತೆಯಿಂದ ಸಾಗಬೇಕಾಗಿದೆ. ತೊಂದರೆ, ಸಮಸ್ಯೆಗಳು ನಮ್ಮ ಅವಿವೇಕತನದಿಂದಲೇ ಹುಟ್ಟಿಕೊಳ್ಳುತ್ತವೆ. ತೊಂದರೆಗೆ ಅವಿವೇಕತನವೇ ಮುಖ್ಯ ಕಾರಣ. ಆದ್ದರಿಂದ ವಿವೇಕದಿಂದ ಉತ್ತಮ ಸಮಾಜ ಕಟ್ಟಬೇಕಾಗಿದೆ ಎಂದರು.

ಯುವಜನತೆ ಹೊಸ ಸಮಾಜ ಕಟ್ಟಲು ಅರ್ಪಣಾ ಮನೋಭಾವ ಅಗತ್ಯ. ಜಿಲ್ಲೆಯಲ್ಲಿ ಮೌಢ್ಯ, ಅಸಮಾನತೆ, ಹೆಣ್ಣು ಭ್ರೂಣ ಹತ್ಯೆ, ಮರ್ಯಾದೆ ಹತ್ಯೆಗಳು ನಡೆಯುತ್ತಿವೆ. ಇದಕ್ಕೆ ಅರಿವಿನ ಕೊರತೆಯೇ ಕಾರಣ. ನಿತ್ಯ ಸಚಿವ ಕೆ.ವಿ.ಶಂಕರಗೌಡರಂತಹ ನಾಯಕರು ಜಿಲ್ಲೆಯಲ್ಲಿ ಶಿಕ್ಷಣ ಹಾಗೂ ಸಹಕಾರ ಕ್ಷೇತ್ರಕ್ಕೆ ಕೊಡುಗೆ ನೀಡಿದ್ದಾರೆ. ಇದರಿಂದ ಜಿಲ್ಲೆ ಸುಶಿಕ್ಷಿತವಾಗಿದೆ. ಅಂಥವರ ಮಾರ್ಗದಲ್ಲಿ ಎಲ್ಲರೂ ನಡೆಯಬೇಕಾಗಿದೆ ಎಂದರು.

ಮೌಢ್ಯ, ಅವಿವೇಕತನ ಪ್ರಸ್ತುತ ಹೆಚ್ಚಾಗಿದೆ. ನಮಗೆ ಸಮಸ್ಯೆ ಬಂದಾಗ ನಮ್ಮನ್ನು ಕಾಪಾಡುವುದು ಸಂವಿಧಾನ ಹೊರತು ಬೇರೆ ಯಾರೂ ಕಾಪಾಡಲು ಸಾಧ್ಯವಿಲ್ಲ. ಸಂವಿಧಾನದ ಕಾನೂನಿನ ಚೌಕಟ್ಟಿನಲ್ಲಿಯೇ ಎಲ್ಲರೂ ನಡೆದುಕೊಳ್ಳಬೇಕಾಗಿದೆ. ಎಷ್ಟೇ ದೊಡ್ಡವರಾದರೂ ಕೆಟ್ಟದ್ದನ್ನು ಮಾಡಿದರೆ ತಿಪ್ಪೆಗುಂಡಿಯಲ್ಲಿ ಕೊಳೆಯುಬೇಕಾಗುತ್ತದೆ. ಅದಕ್ಕಾಗಿ ಪ್ರತಿಯೊಬ್ಬರೂ ಒಳ್ಳೆಯ ಕೆಲಸಗಳನ್ನು ಮಾಡಬೇಕು ಎಂದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಹಿಂದುಳಿದ, ದಲಿತ ಹಾಗೂ ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡಿದರು. ಬ್ರಿಟಿಷರು ದೇಶಕ್ಕೆ ಬಂದಿದ್ದರಿಂದ ಒಳ್ಳೆಯದು ಹಾಗೂ ಕೆಟ್ಟದ್ದು ಎರಡೂ ಆಗಿವೆ. ಸಮಾಜದಲ್ಲಿ ಮೌಢ್ಯ, ಅಸಮಾನತೆ ತೊಲಗಬೇಕು. ಅಪರಾಧ ಇಲ್ಲದೆ ಇದ್ದರೆ ಆಗ ಎಲ್ಲರೂ ನೆಮ್ಮದಿಯಿಂದ ಬದುಕಬಹುದು. ಇದರಿಂದ ಒಬ್ಬ ಮನುಷ್ಯ 120 ವರ್ಷ ಜೀವನ ಮಾಡಬಹುದಾಗಿದೆ. ಅದಕ್ಕಾಗಿ ಶಿವನ ತತ್ವಗಳನ್ನು ಅಳವಡಿಸಿಕೊಳ್ಳಬೇಕು. ಶಿವ ತ್ಯಾಗಮಯಿ, ಎಲ್ಲರೂ ಒಂದೇ ಎಂದು ಪ್ರತಿಪಾದನೆ ಮಾಡಿದ್ದಾನೆ. ಹೆಣ್ಣು ಸಹ ನಮ್ಮಲ್ಲಿ ಅರ್ಧ ಭಾಗ ಎಂದು ಅರ್ಧ ನಾರೀಶ್ವರನಾಗಿದ್ದಾನೆ. ಇನ್ನೊಬ್ಬರಿಗೆ ತೊಂದರೆ ಕೊಡಬಾರದು. ಎಲ್ಲರಿಗೂ ಒಳ್ಳೆಯದನ್ನೇ ಮಾಡಬೇಕು ಎಂದು ಉದ್ಧಾರಕ್ಕಾಗಿ ತತ್ವ ಸಂದೇಶಗಳನ್ನು ನೀಡಿದ್ದಾನೆ ಎಂದು ತಿಳಿಸಿದರು.

ಅನನ್ಯ ಕ್ರಿಯೇಷನ್ಸ್ ಇಂತಹ ಸಂವಾದಗಳನ್ನು ಜಿಲ್ಲೆಯಲ್ಲಿ ಮಾಡುತ್ತಿರುವುದು ಶ್ಲಾಘನೀಯ. ಇಂಥ ಕಾರ್ಯಕ್ರಮಗಳು ಹೆಚ್ಚೆಚ್ಚು ನಡೆಯಬೇಕು. ಆಗ ಜನರಿಗೆ ಅರಿವು ಮೂಡಿಸಲು ಸಾಧ್ಯ ಎಂದರು.

ಚಿಂತಕ ಡಿ.ಶಿವಶಂಕರ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಅನನ್ಯ ಕ್ರಿಯೇಷನ್ಸ್ ಸಂಸ್ಥಾಪಕ ಕಾರ್ಯದರ್ಶಿ ರಾಜೇಶ್ ರಾಂಪುರ, ಗೌರ ವಾಧ್ಯಕ್ಷ ಗೋಪಾಲಕೃಷ್ಣ, ಬರಹಗಾರ ರವಿ ಮರಿಯಪ್ಪ, ಕ್ರಿಯೇಷನ್ಸ್‌ನ ಜಗದೀಶ್, ಎಂ. ಸಿದ್ದಯ್ಯ ಸೇರಿದಂತೆ ಮತ್ತಿತರರಿದ್ದರು.

# ಕುಡಿಯುವ ನೀರು ಪೂರೈಕೆಗೆ ಆಗ್ರಹಿಸಿ ಪ್ರತಿಭಟನೆ



ಕುಡಿಯುವ ನೀರು ಪೂರೈಕೆಗೆ ಆಗ್ರಹಿಸಿ ಪಟ್ಟಣದ 11ನೇ ವಾರ್ಡ್ ನಿವಾಸಿಗಳು ಪ್ರತಿಭಟನೆ ನಡೆಸಿದರು.

ಪಾಂಡವಪುರ, ಏ.29– ಸಮರ್ಪಕ ಕುಡಿಯುವ ನೀರು ಪೂರೈಕೆಗೆ ಆಗ್ರಹಿಸಿ ಪಟ್ಟಣದ ಹೇಮಾವತಿ ಬಡಾವಣೆ ಹಿಂಭಾಗದ 11ನೇ ವಾರ್ಡ್ ನಿವಾಸಿಗಳು ಪುರಸಭೆಗೆ ಮುತ್ತಿಗೆ ಹಾಕಿ ಸೋಮವಾರ ಪ್ರತಿಭಟನೆ ನಡೆಸಿದರು.

ಪುರಸಭೆ ಸದಸ್ಯ ಶಿವಕುಮಾರ್ ನೇತೃತ್ವದಲ್ಲಿ ಪುರಸಭೆ ಎದುರು ಜಮಾಯಿಸಿದ ವಾರ್ಡ್ ನಿವಾಸಿಗಳು ಖಾಲಿ ಬಿಂದಿಗೆ ತಲೆ ಮೇಲೆ ಹೊತ್ತು ಮುಖ್ಯಾಧಿಕಾರಿ ವೀಣಾ, ಇಂಜಿನಿಯರ್ ಚೌಡಪ್ಪ ಹಾಗೂ ಜಲಮಂಡಳಿ ಎಇಇ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪುರಸಭೆ ಸದಸ್ಯ ಶಿವಕುಮಾರ್ ಮಾತನಾಡಿ, ಪಟ್ಟಣದ 11ನೇ ವಾರ್ಡ್ ನಿವಾಸಿಗಳಿಗೆ ಕುಡಿಯುವ ನೀರಿನ ಸಮಸ್ಯೆಯಾದ ಹಿನ್ನೆಲೆಯಲ್ಲಿ 2019ರಲ್ಲಿ ಶಾಸಕರಾಗಿದ್ದ ಸಿ.ಎಸ್.ಪುಟ್ಟರಾಜು ಅವರು 4.10 ಕೋಟಿ ರೂ. ಅನುದಾನ ಬಿಡುಗಡೆ ಮಾಡಿಸಿ 5 ಲಕ್ಷ ಲೀಟರ್ ಸಾಮರ್ಥ್ಯದ 2 ಓವರ್‌ಹೆಡ್ ಟ್ಯಾಂಕ್ ಮಂಜೂರು ಮಾಡಿಸಿದ್ದರು. ಕಾಮಗಾರಿ ಗುತ್ತಿಗೆ ಪಡೆದ ಜಲಮಂಡಳಿ ನಿಗಮ ಕಾಮಗಾರಿಯನ್ನು 2021ರ ನವೆಂಬರ್‌ನಲ್ಲಿ ಪೂರ್ಣಗೊಳಿಸಿದೆ. ಪುರಸಭೆ ಮುಖ್ಯ ಇಂಜಿನಿಯರ್ ಪುರಸಭೆಯ 15ನೇ ಹಣಕಾಸು ಎಸ್‌ಎಫ್‌ಸಿ ಯೋಜನೆಯಿಂದ 71 ಲಕ್ಷ ಹಣ ಮಂಜೂರು ಮಾಡಿಸಿಕೊಂಡು ಓವರ್‌ಹೆಡ್ ಟ್ಯಾಂಕ್ ಪೈಪ್‌ಲೈನ್ ಕಾಮಗಾರಿ ಪೂರ್ಣಗೊಳಿಸಿದ್ದಾರೆ. ಆದರೆ ಪುರಸಭೆ ಮುಖ್ಯ ಇಂಜಿನಿಯರ್ ಚೌಡಪ್ಪ ಜಲಮಂಡಳಿ ನಿಗಮದಿಂದ ಓವರ್‌ಹೆಡ್ ಟ್ಯಾಂಕ್ ಅನ್ನು ವಶಕ್ಕೆ ಪಡೆದು ಜನರಿಗೆ ನೀರು ಪೂರೈಕೆ ಮಾಡುವುದರಲ್ಲಿ ತಾರತಮ್ಯ ಎಸಗುತ್ತಿದ್ದಾರೆ ಎಂದು ಆಕ್ರೋಶ ಹೊರ ಹಾಕಿದರು.

ಪುರಸಭೆ ಅಧಿಕಾರಿಗಳ ತಾರತಮ್ಯದಿಂದಾಗಿ ಬಡಾವಣೆ ನಿವಾಸಿಗಳು ಕುಡಿಯುವ ನೀರಿಗೆ ಹಾಹಾಕಾರ ಎದುರಿಸುವಂತಾಗಿದೆ. ಕಳೆದ 2 ತಿಂಗಳಿಂದ ಕುಡಿಯುವ ನೀರಿಗೆ ತೊಂದರೆಯಾಗಿದ್ದು, ನನ್ನ ಸ್ವಂತ ಹಣದಿಂದ ಟ್ಯಾಂಕರ್‌ನಲ್ಲಿ ನೀರು ಸರಬರಾಜು ಮಾಡುತ್ತಿದ್ದೇನೆ ಎಂದರು.

ಈ ಕೂಡಲೇ ಶಾಸಕರು ಹಾಗೂ ಜಿಲ್ಲಾಡಳಿತ ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸದಿದ್ದರೆ ಬಡಾವಣೆ ನಿವಾಸಿಗಳು ಪುರಸಭೆಗೆ ಎದುರು ಅಹೋರಾತ್ರಿ ಧರಣಿ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಬಡಾವಣೆ ನಿವಾಸಿಗಳಾದ ಬಾಲಣ್ಣ ರಾಜೇಶ್, ಮಂಗಮ್ಮ ಲಕ್ಷ್ಮಿ ದೇವಿ, ಭಾಗ್ಯ, ಶಿವರಾಜು ಸೇರಿದಂತೆ ಇತರರಿದ್ದರು.

## ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಹಿನ್ನೆಲೆ

# ಅಕ್ಷರ ಜಾತ್ರೆಗೆ ಕವನಗಳು, ಪ್ರಶಸ್ತಿಗೆ ಹೆಸರುಗಳ ಆಹ್ವಾನ

ಮಂಡ್ಯ, ಏ.29– ಡಾ.ಜೀಶಂಪ ಸಾಹಿತ್ಯ ವೇದಿಕೆ, ಶ್ರೀರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಫಿಲಂ ವತಿಯಿಂದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಅಂಗವಾಗಿ ಜೂ.16 ರಂದು ನಗರದ ಗಾಂಧಿ ಭವನದಲ್ಲಿ 6ನೇ ಅಖಿಲ ಕರ್ನಾಟಕ ಕನ್ನಡ ಅಕ್ಷರಜಾತ್ರೆ ಆಯೋಜಿಸಿದ್ದು, ಆಸಕ್ತ ಕವಿಗಳಿಂದ ಕವನಗಳನ್ನು ಹಾಗೂ ವಿವಿಧ ಪ್ರಶಸ್ತಿಗೆ ಸಾಧಕರ ಹೆಸರನ್ನು ಆಹ್ವಾನಿಸಲಾಗಿದೆ.

ಆಸಕ್ತರು 25 ಸಾಲಿನ ಎರಡು ಕವನಗಳು, ಕಿರು ಪರಿಚಯ, ಫೋಟೋ, ಮೊಬೈಲ್ ಸಂಖ್ಯೆ, ವಿಳಾಸವನ್ನು ಮತ್ತು ಸಾಧಕರು ಸಾಧನೆಯ ವಿವರಗಳನ್ನು ಮೇ 10ರೊಳಗೆ ಕಳುಹಿಸಬೇಕು. ವಾಟ್ಸಪ್‌ನಲ್ಲಿ ಮೊದಲು ನೋಂದಣಿ ಮಾಡಿಕೊಂಡು ನಂತರ ಅಂಚೆ ಮೂಲಕ ಕಳುಹಿಸಬೇಕು. ಕವನಗಳು ಯಾವುದಾದರೂ ವಿಷಯ ಒಳಗೊಂಡಿರಬಹುದು. ಆಯ್ಕೆಯಾದ ಕವಿತೆಗಳನ್ನು ಪುಸ್ತಕ ರೂಪ ದಲ್ಲಿ ಹೊರತರಲಾಗುವುದು. 50 ಕವಿಗಳಿಗೆ ಕವಿಗೋಷ್ಠಿಯಲ್ಲಿ ಅವಕಾಶ ಕಲ್ಪಿಸಲಾಗುವುದು. ಉತ್ತಮ ಸಾಧಕರನ್ನು ಅಖಿಲ ಕರ್ನಾಟಕ ಕನ್ನಡ ಅಕ್ಷರ ಜಾತ್ರೆ ಸಮ್ಮೇಳನಾಧ್ಯಕ್ಷರನ್ನಾಗಿ ಆಯ್ಕೆ ಮಾಡಿ ಗೌರವಿಸಲಾಗುವುದು. ಕವಿಗೋಷ್ಠಿಯಲ್ಲಿ ಭಾಗವಹಿಸುವವರಿಗೆ ಕವನ ವಾಚನಕ್ಕೆ ಅವಕಾಶ, ಪ್ರಮಾಣ ಪತ್ರ, ನೆನಪಿನ ಕಾಣಿಕೆ ನೀಡಿ ಗೌರವಿಸಲಾಗುವುದು. 10 ಉತ್ತಮ ಕವನಗಳಿಗೆ 'ಕಾವ್ಯಶ್ರೀ' ಹಾಗೂ ತಲಾ 10 ಮಂದಿ ಸಾಧಕರಿಗೆ 'ನಾಲ್ವಡಿ ಕೃಷ್ಣರಾಜ ಒಡೆಯರ್' 'ಕನ್ನಡ ರತ್ನ', 'ಸಮಾಜ ಸೇವಾ ರತ್ನ' ರಾಜ್ಯ ಮಟ್ಟದ ಪ್ರಶಸ್ತಿಗಳನ್ನು ನೀಡಲಾಗುವುದು. ಕವಿಗಳು, ಕವನಗಳು, ಸಾಧಕರು ಪರಿಚಯವನ್ನು ವಿಳಾಸ: ಎಸ್.ಕೃಷ್ಣಸ್ವರ್ಣ ಸಂದ್ರ, ಕವಿಮಿತ್ರ, ನಂ–767, ಸ್ವರ್ಣಸಂದ್ರ, ಮಂಡ್ಯ–2 ಕಳುಹಿಸಬೇಕು. ವಾಟ್ಸಾಪ್ ನಂ–9448424380ಗೆ ಕಳುಹಿಸಬೇಕಾಗಿ ಪ್ರಕಟಣೆ ತಿಳಿಸಿದೆ.

# ಆಲಂಬಾಡಿಕಾವಲು ಪಿಎಸಿಎಸ್‌ಗೆ ಸುರೇಶ್ ಅಧ್ಯಕ್ಷ



ಆಲಂಬಾಡಿಕಾವಲು ಪಿಎಸಿಎಸ್ ಅಧ್ಯಕ್ಷರಾಗಿ ಆಯ್ಕೆಯಾದ ಡಿ.ಸುರೇಶ್ ಅವರನ್ನು ನಿರ್ದೇಶಕರು, ಮುಖಂಡರು ಅಭಿನಂದಿಸಿದರು.

ಕೆ.ಆರ್.ಪೇಟೆ, ಏ.29– ತಾಲೂಕಿನ ಆಲಂಬಾಡಿಕಾವಲು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಐಪನಹಳ್ಳಿ ಡಿ.ಸುರೇಶ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಅಧ್ಯಕ್ಷ ಎ.ಎಂ.ಪುಟ್ಟಶೆಟ್ಟಿ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಡಿ.ಸುರೇಶ್ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿ ಜಗದೀಶ್ ಅವಿರೋಧ ಆಯ್ಕೆ ಘೋಷಿಸಿದರು. ನೂತನ ಅಧ್ಯಕ್ಷರನ್ನು ಉಪಾಧ್ಯಕ್ಷ ನಾಗೇಗೌಡ, ನಿರ್ದೇಶಕರಾದ ಎ.ಎಂ.ಸಂಜೀವಪ್ಪ, ಎ.ಟಿ.ಕರಿಶೆಟ್ಟಿ, ಜಿ.ಎಸ್.ಕುಮಾರ್, ರಾಜೇಗೌಡ, ಆಶಾ, ರಾಜಾನಾಯಕ್, ಮಹಾದೇವಪ್ಪ, ಶಾಂತಮ್ಮ, ಡಿಸಿಸಿ ಬ್ಯಾಂಕ್ ಮೇಲ್ವಿಚಾರಕ ಜೆ.ಆರ್.ಜಲೇಂದ್ರ, ಸಂಘದ ಕಾರ್ಯದರ್ಶಿ ಪಿ.ಎಂ.ಕಾಳೇಗೌಡ, ಮಾರಾಟ ಗುಮಾಸ್ತರಾದ ಎ.ಜೆ. ಧರ್ಮ, ನಾಗಮಣಿ, ರಾಣಿ ಹಾಗೂ ಸಂಘದ ಮುಖಂಡರು ಅಭಿನಂದಿಸಿದರು.

ನೂತನ ಅಧ್ಯಕ್ಷ ಡಿ.ಸುರೇಶ್ ಮಾತನಾಡಿ, ಅಧ್ಯಕ್ಷನನ್ನಾಗಿ ಆಯ್ಕೆ ಮಾಡಿದ ನಿರ್ದೇಶಕರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ನನ್ನ ಅಧಿಕಾರವಧಿಯಲ್ಲಿ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಂಘದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸುತ್ತೇನೆ. ಸಂಘದಿಂದ ಷೇರುದಾರರು ಸಕಾಲಕ್ಕೆ ಸಾಲ ಮರುಪಾವತಿಸಬೇಕು. ಸಹಕಾರ ಸಂಘದಲ್ಲಿ ಯಾವುದೇ ರಾಜಕೀಯ ಬೆರೆಸದೆ ಸಂಘದ ಅಭಿವೃದ್ಧಿಗೆ ಎಲ್ಲರೂ ಕೈ ಜೋಡಿಸಬೇಕು. ಸಂಘದ ಬ್ಯಾಂಕಿಂಗ್ ಶಾಖೆಯಲ್ಲಿ ಮಹಿಳಾ ಸಂಘಗಳು, ಎಲ್ಲಾ ಷೇರುದಾರರು ಹಾಗೂ ಜನಸಾಮಾನ್ಯರು ಸಹ ಉಳಿತಾಯ ಖಾತೆ ತೆರೆದು ವ್ಯವಹರಿಸುವ ಮೂಲಕ ಬ್ಯಾಂಕಿಂಗ್ ಶಾಖೆ ಅಭಿವೃದ್ಧಿಗೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

# ಭಾರತೀನಗರದಲ್ಲಿ ಸಂಸದ ವಿ.ಶ್ರೀನಿವಾಸ್‌ಪ್ರಸಾದ್‌ಗೆ ಶ್ರದ್ಧಾಂಜಲಿ

ಭಾರತೀನಗರ, ಏ.29– ಇಲ್ಲಿನ ಅಂಬೇಡ್ಕರ್ ಭವನದಲ್ಲಿ ದಲಿತ ಮುಖಂಡರು ಸಂಸದ ವಿ.ಶ್ರೀನಿವಾಸ್ ಪ್ರಸಾದ್ ನಿಧನರಾದ ಹಿನ್ನೆಲೆಯಲ್ಲಿ ಶ್ರದ್ಧಾಂಜಲಿ ಸಲ್ಲಿಸಿದರು.

ದಲಿತ ಮುಖಂಡ ಕಬ್ಬಾಳಯ್ಯ ಮಾತನಾಡಿ, ವಿ.ಶ್ರೀನಿವಾಸ್ ಪ್ರಸಾದ್ ಅವರ ನಿಧನ ನಮ್ಮ ಸಮುದಾಯಕ್ಕೆ ಅಪಾರ ನಷ್ಟ ಉಂಟಾಗಿದೆ. ಹಲವು ಹೋರಾಟಗಳಲ್ಲಿ ಭಾಗಿಯಾಗಿ ನಮ್ಮೊಟ್ಟಿಗೆ ಕೈ ಜೋಡಿಸುತ್ತಿದ್ದ ಅವರ ಆತ್ಮಕ್ಕೆ ಭಗವಂತ ಶಾಂತಿ ನೀಡಲಿ ಎಂದರು.

ಈ ವೇಳೆ ಸಮತ ಸೈನಿಕ ದಳದ ಜಿಲ್ಲಾಧ್ಯಕ್ಷ ಯೋಗೇಶ, ತಾಪಂ ಮಾಜಿ ಸದಸ್ಯ ಭರತೇಶ್, ಬಸವರಾಜು, ತಿಮ್ಮಯ್ಯ, ಶಿವಲಿಂಗಯ್ಯ, ರಾಮಣ್ಣ, ಮರಿಸ್ವಾಮಿ, ರುದ್ರಯ್ಯ, ಪುಟ್ಟಸ್ವಾಮಿ, ಪ್ರಸಾದ್, ಬಸವರಾಜು, ನಿರಂಜನ್, ರುದ್ರೇಶ್, ಪುಟ್ಟಯ್ಯ, ಶಿವಣ್ಣ, ರುದ್ರಯ್ಯ ಇತರರಿದ್ದರು.



ಭಾರತೀನಗರದಲ್ಲಿ ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.



ಸೋಮವಾರ ಮಧ್ಯಾಹ್ನ ಮೈಸೂರಿನ ಜಯಲಕ್ಷ್ಮಿಪುರಂನಲ್ಲಿರುವ ಭೀಮಸದನ ನಿವಾಸದಿಂದ ಶ್ರೀನಿವಾಸ ಪ್ರಸಾದ ಅವರ ಪಾರ್ಥಿವ ಶರೀರವನ್ನು ಅಲಂಕೃತ ವಾಹನದಲ್ಲಿ ಅಶೋಕಪುರಂನ ಎನ್‌ಟಿಎಂ ಶಾಲೆಯ ಆವರಣಕ್ಕೆ ಮೆರವಣಿಗೆ ಮೂಲಕ ಕೊಂಡೊಯ್ಯಲಾಯಿತು




ಅಶೋಕಪುರಂನ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದ ಗೋಡೆಗೆ ಚಾಮರಾಜನಗರ ಸಂಸದ ವಿ.ಶ್ರೀನಿವಾಸ ಪ್ರಸಾದ ಅವರ ಫ್ಲೆಕ್ಸ್ ಅಳವಡಿಸುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.

# ಸಿದ್ದರಾಮಯ್ಯರಿಗೆ ಆಪದ್ಬಾಂಧವರಾಗಿದ್ದ ಪ್ರಸಾದ್!



ಮೈಸೂರು, ಏ. 29– ಸಂಸದ ವಿ. ಶ್ರೀನಿವಾಸಪ್ರಸಾದ್ ಅವರು ಪುಟ್ಟರಂಗಶೆಟ್ಟಿ ಹಾಗೂ ಧ್ರುವನಾರಾಯಣ ಅವರಂತಹ ಶಿಷ್ಯಂದಿರಿಗೆ ರಾಜಕೀಯ ಅಸ್ತಿತ್ವ ಕಲ್ಪಿಸಿಕೊಟ್ಟಿದ್ದು ಮಾತ್ರವಲ್ಲ, ಇಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅಗ್ನಿ ಪರೀಕ್ಷೆಗೆ ಗುರಿಯಾದಾಗ ಅವರನ್ನು ಪಾರು ಮಾಡಿದ್ದೇ ಶ್ರೀನಿವಾಸಪ್ರಸಾದ್.

ಸಿದ್ದರಾಮಯ್ಯನವರು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಜೆಡಿಎಸ್‌ನಿಂದ ಕಾಂಗ್ರೆಸ್‌ಗೆ ಸೇರ್ಪಡೆಯಾದ ನಂತರ ಚಾಮುಂಡೇಶ್ವರಿ ಕ್ಷೇತ್ರದಲ್ಲಿ 2006ರಲ್ಲಿ ನಡೆದ ಉಪ ಚುನಾವಣೆ ಅವರ ರಾಜಕೀಯ ಅಸ್ತಿತ್ವದ ಪ್ರಶ್ನೆಯಾಗಿತ್ತು. ಆ ಚುನಾವಣೆಯಲ್ಲಿ ಅವರು ಸೋತರೆ ಅಷ್ಟಕ್ಕೇ ಅವರ ರಾಜಕೀಯ ಜೀವನ ಕೊನೆಗೊಳ್ಳುತ್ತದೆ ಎಂದು ವಿಶ್ಲೇಷಿಸಲಾಗುತ್ತಿತ್ತು.

ಆಗ ರಾಜ್ಯದಲ್ಲಿದ್ದದ್ದು ಬಿಜೆಪಿ–ಜೆಡಿಎಸ್ ಸಮ್ಮಿಶ್ರ ಸರ್ಕಾರ. ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಶಿವಬಸಪ್ಪ ಅವರನ್ನು ಕಣಕ್ಕಿಳಿಸಲಾಗಿತ್ತು. ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಖರ್ಗೆಯವರು ಶ್ರೀನಿವಾಸಪ್ರಸಾದ್ ಅವರ ಮನೆಗೆ ಭೇಟಿ ನೀಡಿ ಸಿದ್ದರಾಮಯ್ಯ ಅವರಿಗೆ ಸಹಕರಿಸುವಂತೆ ಕೋರಿದ್ದರು. ವಿಶೇಷವೆಂದರೆ ಆಗ ಶ್ರೀನಿವಾಸಪ್ರಸಾದ್ ಇದ್ದದ್ದು ಜೆಡಿಎಸ್‌ನಲ್ಲಿ. ಆದರೆ, ರಾಜ್ಯ ಮಟ್ಟದಲ್ಲಿ ಬೆಳೆದಿದ್ದ ಸಿದ್ದರಾಮಯ್ಯನವರ ರಾಜಕೀಯ ಅಂತ್ಯಗೊಳ್ಳಬಾರದು ಎಂಬ ದೃಷ್ಟಿಯಿಂದ ಪ್ರಸಾದ್ ಬಹಿರಂಗವಾಗಿಯೇ ಸಿದ್ದರಾಮಯ್ಯ ಪರ ಕೆಲಸ ಮಾಡಲು ಆರಂಭಿಸಿದರು. ಈ ಚುನಾವಣೆಯಲ್ಲಿ ಸಿದ್ದರಾಮಯ್ಯ ಗೆದ್ದದ್ದು ಕೇವಲ 257 ಮತಗಳ ಅಂತರದಲ್ಲಿ. ಅಂದು ಶ್ರೀನಿವಾಸಪ್ರಸಾದ್ ಸಹಕರಿಸದೇ ಹೋಗಿದ್ದರೆ ಸಿದ್ದರಾಮಯ್ಯನವರ ರಾಜಕೀಯ ಅಂದಿಗೇ ಕೊನೆಗೊಳ್ಳುತ್ತಿತ್ತು ಎಂದು ರಾಜಕೀಯ ಪಂಡಿತರು ವಿಶ್ಲೇಷಿಸಿದ್ದರು.

ಸಿದ್ದರಾಮಯ್ಯ ಮತ್ತು ಶ್ರೀನಿವಾಸ ಪ್ರಸಾದ್ ಬೇರೆ ಬೇರೆ ಪಕ್ಷದಲ್ಲಿದ್ದರೂ, ಅವರ ನಡುವೆ ಉತ್ತಮ ಬಾಂಧವ್ಯವಿತ್ತು. ಆ ಕಾರಣದಿಂದಲೇ ಹಿರಿಯ ರಾಜಕೀಯ ಮುತ್ಸದ್ಧಿ ಸೋಲಬಾರದು ಎಂದು ತಾವು ಬೇರೆ ಪಕ್ಷದಲ್ಲಿದ್ದರೂ ಕೂಡ ಪ್ರಸಾದ್ ಸಿದ್ದರಾಮಯ್ಯ ನೆರವಿಗೆ ನಿಂತಿದ್ದರು.

ಶ್ರೀನಿವಾಸಪ್ರಸಾದ್ ಅವರು ಸ್ನೇಹಕ್ಕಾಗಿ ಏನನ್ನು ಬೇಕಾದರೂ ಮಾಡುವಂತಹ ಮನಸ್ಥಿತಿವುಳ್ಳವರಾಗಿದ್ದರು. ಅದೇ ರೀತಿ ವಿರೋಧಿಸಲಾರಂಭಿಸಿದರೆ ಅವರ ಮುಂದೆ ಯಾರೂ ನಿಲ್ಲಲಾಗುತ್ತಿರಲಿಲ್ಲ. ಬೇರೆ ಪಕ್ಷದಲ್ಲಿದ್ದರೂ ಚಾಮುಂಡೇಶ್ವರಿ ಉಪ ಚುನಾವಣೆಯಲ್ಲಿ ಸಿದ್ದರಾಮಯ್ಯ ನೆರವಿಗೆ ನಿಂತಿದ್ದ ಪ್ರಸಾದ್ ಅವರನ್ನು ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಸಚಿವ ಸಂಪುಟದಿಂದ ತೆಗೆದು ಹಾಕಿದಾಗ ಕೆರಳಿ ಕೆಂಡವಾದ ಪ್ರಸಾದ್, ಸಿದ್ದರಾಮಯ್ಯರನ್ನು ಚುನಾವಣೆಯಲ್ಲಿ ಸೋಲಿಸಿಯೇ ತೀರುತ್ತೇನೆ ಎಂದು ಬಹಿರಂಗವಾಗಿಯೇ ಸವಾಲು ಹಾಕಿದ್ದರು. ಅದರಂತೆ 2018ರ ವಿಧಾನಸಭಾ ಚುನಾವಣೆಯಲ್ಲಿ ಅದೇ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸ್ಪರ್ಧಿಸಿದ್ದ ಸಿದ್ದರಾಮಯ್ಯ ವಿರುದ್ಧ ಜಿ.ಟಿ.ದೇವೇಗೌಡರ ಪ್ರಸಾದರ ಪಾತ್ರವಿದೆ ಎಂದು ಹೇಳಲಾಗುತ್ತಿತ್ತು.

ಪ್ರಸಾದ್ ರಾಜಕೀಯ ನಿವೃತ್ತಿ ಘೋಷಿಸಿದ ನಂತರ ಇದೀಗ ನಡೆದ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಅವರಿಗೆ ಚಾಮರಾಜನಗರ ಕ್ಷೇತ್ರದಲ್ಲಿ ಸಹಕರಿಸಬೇಕೆಂದು ಸಿದ್ದರಾಮಯ್ಯನವರು ಪ್ರಸಾದ್ ಅವರ ಮನೆಗೆ ಭೇಟಿ ನೀಡಿ, ಕೋರಿದಾಗ ರಾಜಕೀಯ ವೈಷಮ್ಯ ಮರೆತು ಮುಖ್ಯಮಂತ್ರಿಗಳನ್ನು ಆಹ್ವಾನಿಸಿ ಸುಮಾರು 20 ನಿಮಿಷ ಕಾಲ ಪ್ರತ್ಯೇಕವಾಗಿ ಚರ್ಚಿಸಿದ ನಂತರ ಪ್ರಸಾದ್ ಅವರು, ತಾವು ರಾಜಕೀಯ ನಿವೃತ್ತಿ ಘೋಷಿಸಿದ್ದು, ಯಾರ ಪರವಾಗಿಯೂ ಮತ ಕೇಳುವುದಿಲ್ಲ ಎಂದು ಹೇಳಿದ್ದರು. ಆದರೆ, ಚಾಮರಾಜನಗರದಲ್ಲಿ ಕಾಂಗ್ರೆಸ್‌ಗೆ ಗೆಲುವಿನ ವಾತಾವರಣ ಇದೆ ಎಂದು ಬಹಿರಂಗವಾಗಿ ಹೇಳಿಕೆ ನೀಡಿದ್ದರು. ಅವರ ಹೇಳಿಕೆಯನ್ನೇ ಉಲ್ಲೇಖಿಸಿ ಪ್ರಸಾದ್ ನಮ್ಮನ್ನು ಬೆಂಬಲಿಸುತ್ತಿದ್ದಾರೆ ಎಂದು ಕಾಂಗ್ರೆಸ್ಸಿಗರು ಪ್ರಚಾರ ಮಾಡಿದರೆ, ಮರುದಿನವೇ ಪ್ರಸಾದ್ ನಿವಾಸಕ್ಕೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಭೇಟಿ ನೀಡಿ ಮಾತುಕತೆ ನಡೆಸಿದ್ದರು. ಪ್ರಸಾದ್ ನಮ್ಮ ಪಕ್ಷದ ಸಂಸದರು. ಅವರು ಕಾಂಗ್ರೆಸ್‌ನ್ನು ಬೆಂಬಲಿಸಿಲ್ಲ ಎಂದು ಯಡಿಯೂರಪ್ಪ ಹೇಳಿಕೆ ನೀಡಿದ್ದರು. ಶ್ರೀನಿವಾಸಪ್ರಸಾದ್ ರಾಜಕೀಯ ನಿವೃತ್ತಿ ಘೋಷಿಸಿದ್ದರೂ ಅವರ ಬೆಂಬಲಕ್ಕಾಗಿ ರಾಜಕೀಯ ಪಕ್ಷಗಳು ದುಂಬಾಲು ಬಿದ್ದದ್ದು ವಿಶೇಷ.



ಸಾರ್ವಜನಿಕ ಬಹಿರಂಗ ಸಭೆಯೊಂದರಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಸಂಸದ ವಿ.ಶ್ರೀನಿವಾಸ ಪ್ರಸಾದ್

# ಕೋಟಾದಲ್ಲಿ NEET ಆಕಾಂಕ್ಷಿ ನೇಣು ಬಿಗಿದುಕೊಂಡು ಆತ್ಮಹತ್ಯೆ!

**ಕೋಟ:** ವೃತ್ತಿಪರ ಶಿಕ್ಷಣ ಪರೀಕ್ಷೆಗಳಿಗೆ ತಯಾರಿ ನಡೆಸುವ ಕೋಚಿಂಗ್ ಹಬ್ ಎಂದೇ ಖ್ಯಾತಿಯಾಗಿರುವ ರಾಜಸ್ಥಾನದ ಕೋಟಾದಲ್ಲಿ ಮತ್ತೋರ್ವ ವಿದ್ಯಾರ್ಥಿ ಆತ್ಮಹತ್ಯೆಗೆ ಶರಣಾಗಿದ್ದಾರೆ.

ಕುನ್ಹಾರಿ ಪ್ರದೇಶದಲ್ಲಿನ ಹಾಸ್ಟೆಲ್ ರೂಮ್‌ನಲ್ಲಿ ಎನ್‌ಇಇಟಿ ಆಕಾಂಕ್ಷಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಈ ವಿದ್ಯಾರ್ಥಿಯ ಪೋಷಕರು ಆತನದ್ದು ಹತ್ಯೆ ಎಂದು ಶಂಕಿಸಿದ್ದಾರೆ.

ಜನವರಿ ತಿಂಗಳಿನಿಂದ ಈ ಭಾಗದಲ್ಲಿ ವಿದ್ಯಾರ್ಥಿಗಳ ಪೈಕಿ ವರದಿಯಾಗಿರುವ 8ನೇ ಆತ್ಮಹತ್ಯೆ ಪ್ರಕರಣ ಇದಾಗಿದೆ. 2023 ರಲ್ಲಿ ಕೋಟಾದಲ್ಲಿ 26 ವಿದ್ಯಾರ್ಥಿಗಳು ಆತ್ಮಹತ್ಯೆಗೆ ಶರಣಾಗಿದ್ದರು. ಹರ್ಯಾಣದ ರೋಹ್ಟಕ್ ಮೂಲದ ಸುಮಿತ್ ಪಾಂಚಾಲ್ ಎನ್‌ಇಇಟಿಗೆ ತರಬೇತಿ ಪಡೆಯುವುದಕ್ಕಾಗಿ ಕೋಚಿಂಗ್ ಕೇಂದ್ರಕ್ಕೆ ಸೇರಿದ್ದರು ಒಂದು ವರ್ಷದಿಂದ ತರಬೇತಿ ಪಡೆಯುತ್ತಿದ್ದರು ಎಂದು ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ.



ಮೈಸೂರಿನ ಜಯಲಕ್ಷ್ಮಿಪುರಂನಲ್ಲಿರುವ ಭೀಮಸದನ ನಿವಾಸದಲ್ಲಿ ಸೋಮವಾರ ಬೆಳಗ್ಗೆ ನಿಡುಮಾಮಿಡಿ ಸ್ವಾಮಿಗಳು ಚಾಮರಾಜನಗರ ಸಂಸದರಾದ ಹಿರಿಯ ರಾಜಕೀಯ ಮುತ್ಸದ್ದಿ ವಿ.ಶ್ರೀನಿವಾಸ ಪ್ರಸಾದ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದರು.

## ವಿ.ಶ್ರೀನಿವಾಸ್ ಪ್ರಸಾದ್‌ರಿಗೆ ಅಶೋಕಪುರಂನ ಆದಿಕರ್ನಾಟಕ ಮಹಾಸಂಸ್ಥೆಯಿಂದ ಶ್ರದ್ಧಾಂಜಲಿ



ಮೈಸೂರು, ಏ.29– ಕೇಂದ್ರ ಹಾಗೂ ರಾಜ್ಯ ಮಾಜಿ ಸಚಿವರು, ರಾಷ್ಟ್ರ ರಾಜಕಾರಣಿ ವಿ.ಶ್ರೀನಿವಾಸ್‌ಪ್ರಸಾದ್ ಅವರ ನಿಧನ ರಾಜ್ಯಕ್ಕೆ ತುಂಬಲಾರದ ನಷ್ಟ ಎಂದು ಅಶೋಕಪುರಂ ಆದಿಕರ್ನಾಟಕ ಮಹಾಸಂಸ್ಥೆ ಅಧ್ಯಕ್ಷ ಸಿದ್ದರಾಜು ಪಿ(ಸುನಿಲ್) ಶ್ರದ್ಧಾಂಜಲಿ ಸಲ್ಲಿಸಿದ್ದಾರೆ.

ದಲಿತರ ಪರವಾದ ದಿಟ್ಟದನಿ, ಅನ್ಯಾಯ, ಅಸಮಾನತೆಯ ವಿರುದ್ಧದ ಹೋರಾಟವನ್ನೇ ಬದುಕನ್ನಾಗಿಸಿಕೊಂಡಿದ್ದ ಚಾಮರಾಜನಗರ ಮತ್ತು ಮೈಸೂರು ಭಾಗದ ದಲಿತರ ಸೂರ್ಯ ಇಂದು ನಮ್ಮನ್ನೆಲ್ಲ ಅಗಲಿರುವುದು ದುಃಖಕರ ಸಂಗತಿ. ಸಮಾಜದಲ್ಲಿ ದೀನ, ದಲಿತರ, ತೀರ ಹಿಂದುಳಿದವರ, ಬಡವರ ಏಳಿಗೆಗೆ ಶ್ರಮಿಸಿದ ಪ್ರಸಾದ್‌ರವರು ದಲಿತರು ಕೂಡ ಅಕ್ಷರವನ್ನು ಬಲ್ಲವರಾಗಿರಬೇಕು ಎಂಬ ಸಿದ್ಧಾಂತದಲ್ಲಿ ನಂಬಿಕೆ ಇರಿಸಿ ಅದಕ್ಕಾಗಿಯೇ ಹಗಲಿರುಳು ದಲಿತ ಸಮುದಾಯದಲ್ಲಿ ಸ್ವಾಭಿಮಾನದ ಕಿಚ್ಚನ್ನು ಮೂಡಿಸಿ ಅಕ್ಷರವನ್ನು ಕಲಿಯುವಂತೆ ಮಾಡಿದ ಮಹಾನ್ ವ್ಯಕ್ತಿತ್ವ ಎಂದು ಸಂತಾಪ ಸೂಚಿಸಿದರು.

ಉಪಾಧ್ಯಕ್ಷ ಶಿವಸ್ವಾಮಿ ಶ್ರದ್ಧಾಂಜಲಿ ಸಲ್ಲಿಸಿ ಮಾತ ನಾಡಿ, ಪ್ರಸಾದ್‌ರವರು ತಮ್ಮ ರಾಜಕೀಯದ ಜೀವನದುದ್ದಕ್ಕೂ ಸ್ವಾಭಿಮಾನಿಯಾಗಿ ತಾವು ನಂಬಿದ ತತ್ವ, ಸಿದ್ಧಾಂತದೊಂದಿಗೆ ಬೆಳೆದು, ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್‌ರವರ ಜೀವನದ ಆದರ್ಶಗಳನ್ನು ಅಳವಡಿಸಿಕೊಂಡು ಮಾದರಿಯಾಗಿ ಬದುಕಿದ್ದ ಮಹಾನ್ ಚೇತನ ಎಂದು ಕಂಬನಿ ಮಿಡಿದರು. ಮೈಸೂರಿನ ಪ್ರಮುಖ ಸರ್ಕಾರಿ ಕಟ್ಟಡ ಹಾಗೂ ಮುಖ್ಯರಸ್ತೆಗೆ ಇವರ ಹೆಸರನ್ನು ನಾಮಕರಣ ಮಾಡುವುದರ ಮೂಲಕ ಶಾಶ್ವತವಾಗಿ ಅವರ ಹೆಸರನ್ನು ಉಳಿಸಬೇಕೆಂದು ಆಗ್ರಹಿಸಿದ್ದಾರೆ. ಆದಿ ಕರ್ನಾಟಕ ಮಹಾಸಂಸ್ಥೆಯ ಸಂಘದ ಕಚೇರಿಯಲ್ಲಿ ಇಂದು ಸಭೆ ಸೇರಿ ಎರಡು ನಿಮಿಷಗಳ ಕಾಲ ಮೌನ ಆಚರಿಸಿ ಅಗಲಿದ ಧೀಮಂತ ನಾಯಕನಿಗೆ ಅಂತಿಮ ನಮನ ಸಲ್ಲಿಸಲಾಯಿತು.

ಸಭೆಯಲ್ಲಿ ಸಂಸ್ಥೆಯ ಕಾರ್ಯ ದರ್ಶಿ ರಾಜ್‌ಮೊಗ, ಸಹಕಾರ್ಯದರ್ಶಿ ಜಯಕುಮಾರ್, ಖಜಾಂಚಿ ಕೃಷ್ಣಮೂರ್ತಿ, ಸಲಹೆಗಾರರಾದ ಮಹಾಲಿಂಗಯ್ಯ ಹಾಗೂ ಅಶೋಕಪುರಂನ ಜನತೆ ಉಪಸ್ಥಿತರಿದ್ದರು.

## ಒಂದೇ ಕುಟುಂಬದ ನಾಲ್ವರ ಹತ್ಯೆ ಪ್ರಕರಣ: ಆರೋಪಿ ಕಾಲಿಗೆ ಗುಂಡೇಟು

**ಗದಗ:** ನಗರದ ಒಂದೇ ಕುಟುಂಬದ ನಾಲ್ವರ ಹತ್ಯೆ ಪ್ರಕರಣದ ಆರೋಪಿಯೊಬ್ಬ ಸ್ಥಳ ಮಹಜರಿಗೆ ತೆರಳಿದ್ದ ವೇಳೆ ಪೊಲೀಸರ ಮೇಲೆ ಹಲ್ಲೆಗೆ ಯತ್ನಿಸಿದ್ದು, ಪೊಲೀಸರು ಆರೋಪಿಯ ಕಾಲಿಗೆ ಗುಂಡು ಹಾರಿಸಿದ್ದಾರೆ.

ಸ್ಥಳ ಮಹಜರಿಗೆ ತೆರಳಿದ್ದ ವೇಳೆ ಎ-2 ಆರೋಪಿ ಫೈರೋಜ್ ಶಲವಡಿ–ನರಗುಂದ ಮಾರ್ಗ ಮಧ್ಯೆ ಮೂತ್ರ ವಿಸರ್ಜನೆ ನೆಪ ಹೇಳಿ ಜೀಪ್ ನಿಲ್ಲಿಸಲು ಹೇಳಿದ್ದಾನೆ. ಬಳಿಕ ಕೆಳಗಿಳಿದು ಸ್ಥಳದಲ್ಲಿದ್ದ ಬಾಟಲ್ ಒಂದನ್ನು ತೆಗೆದುಕೊಂಡು ಪಿಎಸ್‌ಐ ಶಿವಾನಂದ ಪಾಟೀಲ್ ಮೇಲೆ ಹಲ್ಲೆ ನಡೆಸಿ ಪರಾರಿಯಾಗಲು ಯತ್ನಿಸಿದ್ದಾನೆ. ಈ ವೇಳೆ ಪೊಲೀಸರು ಆರೋಪಿಯ ಕಾಲಿಗೆ ಗುಂಡು ಹಾರಿಸಿದ್ದಾರೆ. ಆರೋಪಿ ನರಗುಂದ ಬಳಿ ಮೊಬೈಲ್ ಎಸೆದು ಹೋಗಿದ್ದ. ಈ ಸಂಬಂಧ ಪೊಲೀಸರು ಆರೋಪಿಯನ್ನು ಸ್ಥಳ ಮಹಜರಿಗೆ ಕರೆದೊಯ್ದಿದ್ದಾಗ ಈ ಘಟನೆ ನಡೆದಿದೆ. ನರಗುಂದ ತಾಲೂಕು ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ, ಹೆಚ್ಚಿನ ಚಿಕಿತ್ಸೆಗೆ ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಗೆ ದಾಖಲಿಸಿದ್ದಾರೆ.

**ಏನಿದು ಪ್ರಕರಣ:** ಏ.19 ರಂದು ದಾಸರ ಓಣಿಯಲ್ಲಿ ದುಷ್ಕರ್ಮಿಗಳು, ಬಿಜೆಪಿ ನಾಯಕಿ, ಗದಗ, ಬೆಟಗೇರಿ ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆಯವರ ಮನೆಗೆ ನುಗ್ಗಿ ನಾಲ್ವರ ಹತ್ಯೆ ಮಾಡಿದ್ದರು. ತನಿಖೆ ವೇಳೆ ಕುಟುಂಬವನ್ನು ಮುಗಿಸಲು ಅದೇ ಕುಟುಂಬದ ಪ್ರಕಾಶ್ ಬಾಕಳೆ ಮಗ ವಿನಾಯಕ ಎಂಬಾತ ಸುಪಾರಿ ಕೊಟ್ಟಿರುವುದು ಬೆಳಕಿಗೆ ಬಂದಿತ್ತು.

ಮನೆಗೆ ನುಗ್ಗಿದ್ದ ಹಂತಕರು ಕಾರ್ತಿಕ್ ಬಾಕಳೆ (28), ಪರಶುರಾಮ್ ಹಾದಿಮನಿ (55), ಲಕ್ಷ್ಮೀ ಹಾದಿಮನಿ (45) ಆಕಾಂಕ್ಷಾ (16) ಹತ್ಯೆಮಾಡಿದ್ದರು. ಕೊಲೆಯಾದ ದಿನ ಸ್ಥಳದಲ್ಲಿಯೇ ಆರೋಪಿ ವಿನಾಯಕ ಇದ್ದ. ಅಲ್ಲದೇ ಆತನೇ ಪೊಲೀಸರಿಗೆ ಖುದ್ದಾಗಿ ಮಾಹಿತಿ ಕೊಟ್ಟಿದ್ದ. ಈ ವೇಳೆ ತನಗೆ ಏನು ಗೊತ್ತಿಲ್ಲದಂತೆ ವರ್ತಿಸಿದ್ದ. ಆರೋಪಿ ವಿನಾಯಕ ಪ್ರಕಾಶ್ ಬಾಕಳೆ ಮೊದಲ ಹೆಂಡತಿ ಮಗನಾಗಿದ್ದು, ಆಸ್ತಿ ವಿಚಾರದ ವೈಷಮ್ಯದಿಂದ ಮಹಾರಾಷ್ಟ್ರ ಮೂಲದ ಫಯಾಜ್ ಗ್ಯಾಂಗ್‌ಗೆ ಸುಪಾರಿ ಕೊಟ್ಟಿದ್ದ ಎಂದು ತಿಳಿದು ಬಂದಿತ್ತು ಈ ಸಂಬಂಧ ಆರೋಪಿಗಳಾದ ವಿನಾಯಕ ಫೈರೋಜ್ ಖಾಜಿ, ಜಿಶಾನ್ ಖಾಜಿ, ಸಾಹಿಲ್ ಖಾಜಿ, ಸೊಹೇಲ್ ಖಾಲಿ, ಸುಲ್ತಾನ್ ಶೇಖ್, ಮಹೇಶ್ ಸಾಳೊಂಕೆ, ವಾಹಿದ್ ಬೇಪಾರಿ ಎಂಬುವರನ್ನು ಬಂಧಿಸಿದ್ದರು.

## ಬೈರತಿ ಬಸವರಾಜ್ ಕಾರು ಪಲ್ಟಿ: ಚಾಲಕ, ಗನ್‌ಮ್ಯಾನ್‌ಗೆ ಗಾಯ

**ಯಾದಗಿರಿ:** ಸುರಪುರ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ರಾಜೂಗೌಡ ಪರವಾಗಿ ಪ್ರಚಾರಕ್ಕೆ ತೆರಳಿದ್ದ ಶಾಸಕ ಬೈರತಿ ಬಸವರಾಜ್ ಕಾರು ಅಪಘಾತಕ್ಕೀಡಾಗಿದ್ದು, ಕಾರು ಚಾಲಕ ಹಾಗೂ ಗನ್‌ಮ್ಯಾನ್ ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನ ಕಾಮನಟಗಿ ಗ್ರಾಮದ ಎರೆ ಕೆನಾಲ್ ಬಳಿ ಈ ಘಟನೆ ನಡೆದಿದೆ. ಈ ವೇಳೆ ಕಾರಿನಲ್ಲಿ ಬೈರತಿ ಬಸವರಾಜ್ ಇರಲಿಲ್ಲ. ಅವರು ಬೇರೆಯವರ ಕಾರಿನಲ್ಲಿ ತೆರಳುತ್ತಿದ್ದರು ಎಂದು ತಿಳಿದು ಬಂದಿದೆ. ಆ ಕಾರನ್ನು ಹಿಂದೆ ಅಪಘಾತಕ್ಕೀಡಾದ ಕಾರು ಚಲಿಸುತ್ತಿತ್ತು. ಈ ವೇಳೆ ಕಾರು ರಸ್ತೆಯ ಪಕ್ಕದಲ್ಲಿದ್ದ ಕಂದಕಕ್ಕೆ ಉರುಳಿ ಬಿದ್ದಿದೆ.

## ನಾನೆಲ್ಲೂ ಓಡಿ ಹೋಗಿಲ್ಲ; ನನ್ನ, ಪುತ್ರನ ವಿರುದ್ಧದ ಲೈಂಗಿಕ ಕಿರುಕುಳ ಆರೋಪ ರಾಜಕೀಯ ಪ್ರೇರಿತ



**ಬೆಂಗಳೂರು:** ತಮ್ಮ ಪುತ್ರ, ಸಂಸದ ಪ್ರಜ್ವಲ್ ರೇವಣ್ಣ ಅವರ ರಾಸಲೀಲೆ ವಿಡಿಯೋಗಳ ಪೆನ್ ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಮೊದಲ ಬಾರಿಗೆ ಪ್ರತಿಕ್ರಿಯಿಸಿರುವ ಜೆಡಿಎಸ್ ನಾಯಕ, ಶಾಸಕ ಎಚ್.ಡಿ. ರೇವಣ್ಣ ಅವರು, ಇಂಥ ಆರೋಪಗಳು ದೇವೇಗೌಡರ ಕುಟುಂಬಕ್ಕೆ ಹೊಸದಲ್ಲ. ಇದೆಲ್ಲಾ ರಾಜಕೀಯ ಪ್ರೇರಿತ ಎಂದು ಸೋಮವಾರ ಹೇಳಿದ್ದಾರೆ.

ನಗರದಲ್ಲಿ ತಮ್ಮ ಹಾಗೂ ಪುತ್ರ ಪ್ರಜ್ವಲ್ ವಿರುದ್ಧದ ಆರೋಪಗಳನ್ನು ಸ್ಪಷ್ಟವಾಗಿ ತಳ್ಳಿಹಾಕಿದ ರೇವಣ್ಣ, ಸರ್ಕಾರ ಅವರದ್ದೇ ತನಿಖೆ ಮಾಡಲಿ. ಕಾನೂನಿನ ಪ್ರಕಾರ ಏನಿದೆಯೋ ಹಾಗೆ ಆಗಲಿ ಎಂದರು.

ಇದೇ ವೇಳೆ ತಮ್ಮ ಮಗ ಪ್ರಜ್ವಲ್ ನಾಪತ್ತೆಯಾಗಿರುವ ಬಗ್ಗೆ ಪ್ರತಿಕ್ರಿಯಿಸಿದ ರೇವಣ್ಣ, ತಾವೆಲ್ಲೂ ಓಡಿ ಹೋಗಿಲ್ಲ. ಆತ ವಿಚಾರಣೆಗೆ ಕರೆದರೆ ಬರುತ್ತಾನೆ ಎಂದಿದ್ದಾರೆ. ನಾನು ಎಲ್ಲೂ ಓಡಿ ಹೋಗಿಲ್ಲ. ತನಿಖೆ ನಡೆಸಿ ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳಲಿ. ನಾವು ಕಾನೂನು ರೀತಿ ಈ ಪ್ರಕರಣವನ್ನು ಎದುರಿಸುತ್ತೇವೆ. ಪ್ರಜ್ವಲ್ ವಿದೇಶಕ್ಕೆ ಹೋಗಬೇಕಿತ್ತು ಹೋಗಿದ್ದಾನೆ. ಕರೆದರೆ ಬರುತ್ತಾನೆ ಎಂದು ಎಚ್.ಡಿ. ರೇವಣ್ಣ ಹೇಳಿದ್ದಾರೆ. ದೇವೇಗೌಡರ ಕುಟುಂಬದ ವಿರುದ್ಧ ಆರೋಪಗಳು ಹೊಸದಲ್ಲ. ಮೊದಲಿಂದಲೂ ಇಂಥವನ್ನು ಎದುರಿಸಿದ್ದೇವೆ. ದೇವೇಗೌಡರ ಕುಟುಂಬದ ಮೇಲೆ ಲೋಕಾಯುಕ್ತ, ಸಿಐಡಿ ತನಿಖೆ ಇವೆಲ್ಲವನ್ನೂ ಎದುರಿಸಿದ್ದೇವೆ ಎಂದು ಹೊಳೆನರಸೀಪುರ ಶಾಸಕ ಹೆಚ್.ಡಿ. ರೇವಣ್ಣ ತಿಳಿಸಿದ್ದಾರೆ.

## ಮಾಜಿ ಕಾರ್ಪೊರೇಟರ್ ರಂಗಸ್ವಾಮಿ ಪತ್ನಿ ಎಂ.ಜಿ.ನೇತ್ರಾವತಿ ನಿಧನ

ಮೈಸೂರು, ಏ.29– ಮೈಸೂರು ತಿಲಕನಗರದ ನಿವಾಸಿ, ಮಾಜಿ ಕಾರ್ಪೊರೇಟರ್ ಆರ್.ರಂಗಸ್ವಾಮಿ ಅವರ ಪತ್ನಿ ಎಂ.ಜಿ.ನೇತ್ರಾವತಿ(45) ಅವರು ಅನಾರೋಗ್ಯದಿಂದ ಸೋಮವಾರ ಮಧ್ಯಾಹ್ನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.



ಎಂ.ಜಿ.ನೇತ್ರಾವತಿ

ಇವರು ಪತಿ, ಪುತ್ರಿಯರಾದ ನೈದಿಲೆ ಮತ್ತು ಗಾನವಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಬನ್ನಿಮಂಟಪದ ಜೋಡಿ ತೆಂಗಿನಮರ ರುದ್ರಭೂಮಿಯಲ್ಲಿ ಮಂಗಳವಾರ ಮಧ್ಯಾಹ್ನ 1 ಗಂಟೆಗೆ ಅಂತ್ಯಸಂಸ್ಕಾರ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

**ಸಾಂತ್ವನ:** ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸಂಜೆ ನೇತ್ರಾವತಿ ಅವರಿಗೆ ಅಂತಿಮ ನಮನ ಸಲ್ಲಿಸಿ, ಕುಟುಂಬದವರಿಗೆ ಸಾಂತ್ವನ ಹೇಳಿದರು. ಶಾಸಕ ಟಿ.ಎಸ್.ಶ್ರೀವತ್ಸ, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ, ಮಾಜಿ ಶಾಸಕ ನಿರಂಜನ್ ಕುಮಾರ್, ಮೈ.ವಿ.ರವಿಶಂಕರ್ ಸೇರಿದಂತೆ ಹಲವು ರಾಜಕೀಯ ಮುಖಂಡರು, ಮಾಜಿ ಕಾರ್ಪೊರೇಟರ್‌ಗಳು ಅಂತಿಮ ದರ್ಶನ ಪಡೆದರು.

# ಯಾವ ಪಕ್ಷದ ಆಸರೆಯಲ್ಲಿರದೇ ಇದ್ದಂತಹ ಪಕ್ಷಕ್ಕೆ ಆಸ್ತಿಯಾಗಿದ್ದರು!



ರಾಜಕೀಯ ಚದುರಂಗದಾಟದಲ್ಲಿ ಹಿರಿಯ ರಾಜಕೀಯ ಮುತ್ಸದ್ಧಿ ವಿ.ಶ್ರೀನಿವಾಸಪ್ರಸಾದ್ ಅವರಿಗೆ ಯಾರೂ ಸಾಟಿ ಇಲ್ಲ. ಅವರ 50 ವರ್ಷ ಚುನಾವಣಾ ರಾಜಕೀಯ ಜೀವನದಲ್ಲಿ ಬೆಚ್ಚಿ ಬೀಳುವಂತಹ ರಾಜಕೀಯ ನಿರ್ಧಾರಗಳನ್ನು ತೆಗೆದುಕೊಂಡು ತಮ್ಮದೇ ಆದ ತಂತ್ರಗಾರಿಕೆಯಿಂದ ಯಶಸ್ವಿಯಾಗಿದ್ದಾರೆ.



ಶ್ರೀನಿವಾಸಪ್ರಸಾದ್ ಅವರು ಯಾವುದೇ ರಾಜಕೀಯ ಪಕ್ಷದ ಆಸರೆಯಲ್ಲಿರಲಿಲ್ಲ. ಅವರು ಇರುವ ಪಕ್ಷಕ್ಕೆ ಆಸ್ತಿಯಾಗಿದ್ದರು ಎಂಬುದಕ್ಕೆ ಹಲವಾರು ಉದಾಹರಣೆಗಳಿವೆ. ಚುನಾವಣೆಯಲ್ಲಿ ತಾವು ಸ್ಪರ್ಧಿಸದೇ ಇದ್ದರೂ ತಾವಿದ್ದ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸುವ ತಂತ್ರಗಾರಿಕೆ ಹಾಗೂ ಯಾವುದಾದರೂ ಪಕ್ಷವನ್ನು ತಾವು ವಿರೋಧಿಸಿದರೆ, ಆ ಪಕ್ಷದ ಅಭ್ಯರ್ಥಿಗಳಿಗೆ ಸೋಲಿನ ರುಚಿ ಉಣಿಸದೇ ಬಿಡುತ್ತಿರಲಿಲ್ಲ.

1994ರ ವೇಳೆಗೆ ರಾಜ್ಯ ಕಾಂಗ್ರೆಸ್‌ನಲ್ಲಿ ಗುಂಪುಗಾರಿಕೆ ಉತ್ತುಂಗಕ್ಕೆ ತಲುಪಿತ್ತು. ಆ ವರ್ಷ ನಡೆದ ವಿಧಾನಸಭೆ ಸಾರ್ವತ್ರಿಕ ಚುನಾವಣೆಯಲ್ಲಿ ಆಗ ಅವಿಭಜಿತ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಒಟ್ಟು 16 ವಿಧಾನಸಭಾ ಕ್ಷೇತ್ರಗಳಿದ್ದವು. ರಾಷ್ಟ್ರ ಮಟ್ಟದಲ್ಲಿ ಪ್ರಬಲರಾಗಿದ್ದ ಶ್ರೀನಿವಾಸಪ್ರಸಾದ್ ಅವರನ್ನು ಮೂಲೆಗುಂಪು ಮಾಡಲೇಬೇಕೆಂದು ತೀರ್ಮಾನಿಸಿದ್ದ ಕಾಂಗ್ರೆಸ್‌ನ ಒಂದು ಗುಂಪು ಮೈಸೂರು ಅವಿಭಾಜ್ಯ ಜಿಲ್ಲೆಯ 16 ಕ್ಷೇತ್ರಗಳ ಪೈಕಿ ಸಂತೇಮರಹಳ್ಳಿಯಲ್ಲಿ ಪ್ರಸಾದ್ ಅವರ ಆಪ್ತ ಕಾಗಲವಾಡಿ ಶಿವಣ್ಣ ಅವರಿಗೆ ಮಾತ್ರ ಟಿಕೆಟ್ ಕೊಟ್ಟು ಉಳಿದ 15 ಕ್ಷೇತ್ರಗಳಲ್ಲಿ ಒಂದನ್ನೂ ಕೂಡ ಪ್ರಸಾದ್ ಬೆಂಬಲಿಗರಿಗೆ ಕೊಟ್ಟಿರಲಿಲ್ಲ.

ಈ ಸಂದರ್ಭದಲ್ಲಿ ಕಾಗಲವಾಡಿ ಶಿವಣ್ಣ ತಮಗೆ ನೀಡಿದ್ದ ಬಿ–ಫಾರಂ ಅನ್ನು ಕೆಪಿಸಿಸಿ ನಾಯಕರ ಮುಂದೆಯೇ ಹರಿದು ಬಿಸಾಡಿ ಬಂದಿದ್ದರು. ಈ ಸಂದರ್ಭದಲ್ಲಿ ಪ್ರಸಾದ್ ಅವರು ಮೈಸೂರು ಜಿಲ್ಲೆಯ ಒಂದೂ ಕ್ಷೇತ್ರದಲ್ಲೂ ಕಾಂಗ್ರೆಸ್ ಗೆಲ್ಲದಂತೆ ನೋಡಿಕೊಳ್ಳುತ್ತೇನೆ ಎಂದು ಘರ್ಜಿಸಿದ್ದರು. ಅದೇ ರೀತಿ ಕಾರ್ಯತಂತ್ರ ರೂಪಿಸಿದ ಅವರು, ಮೈಸೂರು ಅವಿಭಾಜ್ಯ ಜಿಲ್ಲೆಯ ಎಲ್ಲಾ 16 ಕ್ಷೇತ್ರಗಳಲ್ಲೂ ಕಾಂಗ್ರೆಸ್ ಅಭ್ಯರ್ಥಿಗಳನ್ನು ಮಣ್ಣು ಮುಕ್ಕಿಸಿದ್ದರು.

ಕ್ಷೇತ್ರ ಪುನರ್ವಿಂಗಡಣೆಯ ನಂತರ ಸಂತೇಮರಹಳ್ಳಿ ಕ್ಷೇತ್ರ ಇಲ್ಲದಾಯಿತು. ಈ ಕ್ಷೇತ್ರದಿಂದ ಕೇವಲ ಒಂದು ಮತದ ಅಂತರದಲ್ಲಿ ಗೆದ್ದಿದ್ದ ಧ್ರುವನಾರಾಯಣ್ ಅವರಿಗೆ ಕ್ಷೇತ್ರವೇ ಇಲ್ಲದಂತಹ ಪರಿಸ್ಥಿತಿ. ಆ ಸಂದರ್ಭದಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿದ್ದ ಮಲ್ಲಿಕಾರ್ಜುನ ಖರ್ಗೆ ಅವರು ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ತಮ್ಮ ಆಪ್ತರೊಬ್ಬರಿಗೆ ಕೊಡಲು ತಯಾರಿ ನಡೆಸಿದ್ದರು. ಆದರೆ ಸ್ಕ್ರೀನಿಂಗ್ ಕಮಿಟಿಯಲ್ಲಿದ್ದ (ಪರಿಶೀಲನಾ ಸಮಿತಿ) ಶ್ರೀನಿವಾಸಪ್ರಸಾದ್ ಅವರು ತಮ್ಮ ಆಪ್ತನಾಗಿದ್ದ ಧ್ರುವನಾರಾಯಣ್ ಅವರಿಗೆ ಕೊಳ್ಳೇಗಾಲ ಟಿಕೆಟ್ ಕೊಡಿಸುವಲ್ಲಿ ಯಶಸ್ವಿಯಾದರು. ಆ ಸಂದರ್ಭದಲ್ಲಿ ಕೊಳ್ಳೇಗಾಲ ಕ್ಷೇತ್ರದಲ್ಲಿ ಸ್ವಲ್ಪ ಮಟ್ಟಿನ ಬಂಡಾಯವೂ ಎದ್ದಿತ್ತು. ಆದರೆ ಪ್ರಸಾದ್ ಅವರ ತಂತ್ರಗಾರಿಕೆಯಿಂದಾಗಿ ಧ್ರುವನಾರಾಯಣ್ ಎರಡನೇ ಬಾರಿಗೆ ವಿಧಾನ ಸಭೆ ಪ್ರವೇಶಿಸಿದರು. ನಂತರ ಬಂದ ಲೋಕಸಭಾ ಚುನಾವಣೆಯಲ್ಲಿ ಹಾಲಿ ಜನತಾ ದಳದ ಸಂಸದರಾಗಿದ್ದ ಶ್ರೀನಿವಾಸ ಪ್ರಸಾದ್ ಪರಮಾಪ್ತ ಕಾಗಲವಾಡಿ ಶಿವಣ್ಣ ಅವರಿಗೆ ಕಾಂಗ್ರೆಸ್ ಟಿಕೆಟ್ ದೊರೆಯುತ್ತದೆ ಎಂಬ ನಿರೀಕ್ಷೆ ಎಲ್ಲರದ್ದು. ಶಿವಣ್ಣ ಹೊರತುಪಡಿಸಿ ಬೇರೆ ಆಕಾಂಕ್ಷಿಗಳು ಅಲ್ಲಿರಲಿಲ್ಲ. ಆದರೆ ಪ್ರಸಾದ್ ಅಭ್ಯರ್ಥಿಯಾಗಿ ಆಯ್ಕೆ ಮಾಡಿದ್ದಂತೂ ಕೊಳ್ಳೇಗಾಲ ಶಾಸಕರಾಗಿದ್ದ ಧ್ರುವನಾರಾಯಣ್ ಅವರನ್ನು. ಈ ಚುನಾವಣೆಯಲ್ಲಿ ಧ್ರುವನಾರಾಯಣ್ ಗೆದ್ದು, ಮೊದಲ ಬಾರಿಗೆ ಸಂಸತ್ ಪ್ರವೇಶಿಸಿದರು. ಚಾಮರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ 2008ರವರೆಗೂ ಲಿಂಗಾಯಿತ ಅಭ್ಯರ್ಥಿಗಳೇ ಗೆದ್ದು ಬರುತ್ತಿದ್ದರು. ಎಲ್ಲಾ ರಾಜಕೀಯ ಪಕ್ಷಗಳೂ ಲಿಂಗಾಯಿತರಿಗೇ ಟಿಕೆಟ್ ನೀಡುತ್ತಿದ್ದರು. 2008ರಲ್ಲಿ ಕ್ಷೇತ್ರ ಪುನರ್ವಿಂಗಡಣೆಯಾಗಿ ನಂಜನಗೂಡು ಪರಿಶಿಷ್ಟ ಜಾತಿಗೆ ಮೀಸಲಾದ ಕಾರಣ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರಾಗಿ ಪ್ರಭಾವಿ ರಾಜಕಾರಣಿಯಾಗಿದ್ದ ಎಂ. ಮಹದೇವು ಅವರು ಬಿಜೆಪಿ ಅಭ್ಯರ್ಥಿಯಾಗಿ ಘೋಷಿಸಲ್ಪಟ್ಟಿದ್ದರು. ಆಗ ಅವರ ವಿರುದ್ಧ ಸ್ಪರ್ಧಿಸಲು ಕಾಂಗ್ರೆಸ್‌ನಿಂದ ಸಮರ್ಥ ಅಭ್ಯರ್ಥಿಯೇ ಇಲ್ಲ ಎಂಬಂತಹ ಪರಿಸ್ಥಿತಿ ನಿರ್ಮಾಣವಾಗಿತ್ತು. ಆದರೆ ಶ್ರೀನಿವಾಸಪ್ರಸಾದ್ ಅವರು ಕಿಂಚಿತ್ತೂ ಯೋಚಿಸದೇ ಯಳಂದೂರಿನ ಜಿಲ್ಲಾ ಪಂಚಾಯ್ತಿ ಮಾಜಿ ಸದಸ್ಯ ಉಪ್ಪಾರ ಜನಾಂಗದ ಸಿ.ಪುಟ್ಟರಂಗಶೆಟ್ಟಿ ಅವರನ್ನು ಕಾಂಗ್ರೆಸ್ ಅಭ್ಯರ್ಥಿಯಾಗಿ ಆಯ್ಕೆ ಮಾಡಿದರು. ಎಂ.ಮಹದೇವು ವಿರುದ್ಧ ಪುಟ್ಟರಂಗಶೆಟ್ಟಿ ಆಯ್ಕೆಯನ್ನು ಹಿರಿಯ ರಾಜಕಾರಣಿಗಳು, ರಾಜಕೀಯ ವಿಶ್ಲೇಷಕರು ಮಾತ್ರವಲ್ಲದೇ, ರಾಜಕೀಯ ಪಕ್ಷಗಳ ಕಾರ್ಯಕರ್ತರೂ ಹಾಸ್ಯಾಸ್ಪದವಾಗಿ ಮಾತನಾಡ ತೊಡಗಿದರು. ಆದರೆ ಪ್ರಸಾದ್ ಅವರಂತೂ ಧೃತಿಗೆಡಲಿಲ್ಲ. ಪ್ರಭಾವಿ ರಾಜಕೀಯ ನಾಯಕ ಎಂ.ಮಹದೇವು ವಿರುದ್ಧ ಪುಟ್ಟರಂಗಶೆಟ್ಟಿ ಜಯಭೇರಿ ಬಾರಿಸಿ, ವಿಧಾನಸಭೆ ಪ್ರವೇಶಿಸಿಯೇ ಬಿಟ್ಟರು. ಅಂದು ಶ್ರೀನಿವಾಸ ಪ್ರಸಾದ್ ಅವರು ಟಿಕೆಟ್ ನೀಡದಿದ್ದರೆ ಪುಟ್ಟರಂಗಶೆಟ್ಟಿ ತಮ್ಮ ಜೀವನಾವಧಿಯಲ್ಲಿ ವಿಧಾನಸಭೆ ಕ್ಷೇತ್ರಕ್ಕೆ ಯಾವ ಪಕ್ಷದಿಂದಲೂ ಟಿಕೆಟ್ ಪಡೆಯಲು ಸಾಧ್ಯವಾಗುತ್ತಿರಲಿಲ್ಲ. ಆದರೆ ಅಂದು ಶ್ರೀನಿವಾಸ ಪ್ರಸಾದ್ ಅವರಿಂದ ಅಭ್ಯರ್ಥಿಯಾಗಿ ಆಯ್ಕೆಯಾದ ಪುಟ್ಟರಂಗಶೆಟ್ಟಿ ಸೋಲಿಲ್ಲದ ಸರದಾರರಾಗಿ ಸತತ ನಾಲ್ಕನೇ ಬಾರಿ ಚಾಮರಾಜನಗರ ವಿಧಾನಸಭಾ ಕ್ಷೇತ್ರದಿಂದ ಜಯಭೇರಿ ಬಾರಿಸಿ, ದಾಖಲೆ ನಿರ್ಮಿಸಿದ್ದಾರೆ.

### ಒಂದೇ ವರ್ಷದ ಅವಧಿಯಲ್ಲಿ ಗುರು–ಶಿಷ್ಯರು ಇಹಲೋಕ ತ್ಯಜಿಸಿದರು

ಚಾಮರಾಜನಗರ, ಏ.29– ಇಂದು ವಿಧಿವಶರಾದ ಚಾಮರಾಜನಗರ ಸಂಸದ ವಿ. ಶ್ರೀನಿವಾಸ ಪ್ರಸಾದ್ ಮತ್ತು ಇದೇ ಕ್ಷೇತ್ರದ ಮಾಜಿ ಸಂಸದ ಆರ್. ಧ್ರುವನಾರಾಯಣ್ ರಾಜಕೀಯದಲ್ಲಿ ಗುರು–ಶಿಷ್ಯರು. ಇಬ್ಬರೂ ಚಾಮರಾಜನಗರ ಲೋಕಸಭಾ ಕ್ಷೇತ್ರದ ಜನತೆಯ ಎರಡು ಕಣ್ಣುಗಳಂತಿದ್ದರು. ವಿಪರ್ಯಾಸವೆಂದರೆ 2019ರ ಲೋಕಸಭಾ ಚುನಾವಣೆಯೇ ಈ ಗುರುಶಿಷ್ಯರಿಗೆ ಕೊನೆಯ ಚುನಾವಣೆಯಾಗಿ ಪರಿಣಮಿಸಿತು.

ಜಿಲ್ಲೆಯ ಜನರ ಅಪಾರ ಅಭಿಮಾನ ಹೊಂದಿದ್ದ ಶ್ರೀನಿವಾಸಪ್ರಸಾದ್ ಮತ್ತು ಧ್ರುವನಾರಾಯಣ್ 2019ರ ಚುನಾವಣೆಯಲ್ಲಿ ಪರಸ್ಪರ ಸ್ಪರ್ಧೆಗಿಳಿದಾಗ ಇಡೀ ಲೋಕಸಭಾ ಕ್ಷೇತ್ರದ ಮತದಾರರಲ್ಲೇ ಗೊಂದಲದ ವಾತಾವರಣ ನಿರ್ಮಾಣವಾಗಿತ್ತು. ಪ್ರಸಾದ್ ಅವರಿಂದಲೇ ರಾಜಕೀಯವಾಗಿ ಬೆಳೆದಿದ್ದ ಧ್ರುವನಾರಾಯಣ್ ತಮ್ಮ ಗುರು ಪ್ರಸಾದ್ ಅವರಂತೆಯೇ ಜನಾನುರಾಗಿಯಾಗಿ ಜನತೆಯ ಮನಗೆದ್ದಿದ್ದರು. ಹೀಗಿರುವಾಗ ಇವರಿಬ್ಬರೇ ಪರಸ್ಪರ ಸ್ಪರ್ಧಿಗಳಾದಾಗ ಮತದಾರರು ಯಾರನ್ನು ಆಯ್ಕೆ ಮಾಡುವುದು ಎಂಬ ಗೊಂದಲಕ್ಕೆ ಬಿದ್ದಿದ್ದರು. ಆ ಚುನಾವಣೆ ಪ್ರಸಾದ್ ಅವರ ಕೊನೆಯ ಚುನಾವಣೆಯಾಗಿತ್ತು. ಈ ಚುನಾವಣೆಯಲ್ಲಿ ಧೀಮಂತ ನಾಯಕ ಪ್ರಸಾದ್ ಸೋಲಬಾರದು ಎಂದು ಬಹುತೇಕ ಮತದಾರರು ನಿರ್ಧರಿಸಿದ್ದರೆ, ಪ್ರಸಾದ್ ಹಾದಿಯಲ್ಲಿ ಜನಾನುರಾಗಿಯಾಗಿ ಅತ್ಯುತ್ತಮ ಸಂಸದರಾಗಿ ಕಾರ್ಯ ನಿರ್ವಹಿಸುತ್ತಿದ್ದ ಧ್ರುವನಾರಾಯಣ್ ಅವರನ್ನು ಪುನರಾಯ್ಕೆ ಮಾಡಬೇಕು ಎಂದು ಹಲವರು ಕಂಕಣ ಬದ್ಧವಾಗಿದ್ದರು. ಗುರುಶಿಷ್ಯರ ನಡುವಿನ ಜಿದ್ದಾಜಿದ್ದಿ ಹೋರಾಟದಲ್ಲಿ ಶ್ರೀನಿವಾಸಪ್ರಸಾದ್ ತಮ್ಮ ಶಿಷ್ಯನನ್ನು ಕೇವಲ 1,817 ಮತಗಳ ಅಂತರದಲ್ಲಿ ಮಣಿಸಿ, ಲೋಕಸಭೆ ಪ್ರವೇಶಿಸಿದ್ದರು.

ಆ ಚುನಾವಣೆಯಲ್ಲಿ ಧ್ರುವನಾರಾಯಣ್ ಸೋತರೂ ಎಂದಿನಂತೆ ಜನಸೇವೆಯಲ್ಲಿ ತೊಡಗಿದ್ದರು. ಮುಂದಿನ ಸಂಸದರು ಅವರೇ ಎಂದು ಜಿಲ್ಲೆಯ ಜನ ಮಾತನಾಡಿಕೊಳ್ಳುತ್ತಿದ್ದರು. ಈ ಮಧ್ಯೆ 2023ರ ಮಾರ್ಚ್ 11ರಂದು ಮುಂಜಾನೆ ಧ್ರುವನಾರಾಯಣ್ ಹಠಾತ್ತನೇ ಕೊನೆಯುಸಿರೆಳೆದರು. ಇಂದು ಶ್ರೀನಿವಾಸಪ್ರಸಾದ್ ಅವರು ವಿಧಿವಶರಾಗಿದ್ದು, ಒಂದು ವರ್ಷದ ಅಂತರದಲ್ಲಿ ಇಬ್ಬರೂ ಧೀಮಂತ ನಾಯಕರನ್ನು ಚಾಮರಾಜನಗರ ಲೋಕಸಭಾ ಕ್ಷೇತ್ರ ಕಳೆದುಕೊಂಡಿದೆ. ಜಿಲ್ಲೆ ಜನತೆಗೆ ಈಗ ಅನಾಥಪ್ರಜ್ಞೆ ಮೂಡಿದೆ. ಪ್ರಸಾದ್ ನಂತರ ಧ್ರುವನಾರಾಯಣ್ ಎಂಬ ನಂಬಿಕೆಯಲ್ಲಿದ್ದ ಜನ ಇದೀಗ ಇಬ್ಬರನ್ನೂ ಕಳೆದುಕೊಂಡು ಇವರ ಸ್ಥಾನವನ್ನು ತುಂಬುವವರು ಯಾರೂ ಎಂದು ಪ್ರಶ್ನಿಸಿಕೊಳ್ಳುವಂತಾಗಿದೆ.

# ಕಾಂಗ್ರೆಸ್ ಕರ್ನಾಟಕವನ್ನು ಲೂಟಿಯ ಎಟಿಎಂ ಮಾಡಿಕೊಂಡಿದೆ; ಇವರ ಕೈಯ್ಯಲ್ಲಿ ದೇಶ ಕೊಡಲು ಸಾಧ್ಯವೇ?

● ಪ್ರಧಾನಿ ಮೋದಿ ಜನತೆಯಲ್ಲಿ ಪ್ರಶ್ನೆ ● ರಾಜ್ಯದಲ್ಲಿ 2ನೇ ಹಂತದ ಚುನಾವಣೆಗೆ ಬಿರುಸಿನ ಪ್ರಚಾರ ● ಕಳೆದ ಹತ್ತು ವರ್ಷದಲ್ಲಿ ಮೂಲಸೌಕರ್ಯಕ್ಕೆ ಒತ್ತು



ಬೆಂಗಳೂರು, ಏ.29(ಕೆಎಂಶಿ)– ಲೂಟಿಗೆ ಮತ್ತೊಂದು ಹೆಸರೇ ಕಾಂಗ್ರೆಸ್, ಇಂತಹ ಪಕ್ಷದ ಕೈಯಲ್ಲಿ ದೇಶ ಕೊಡಲು ಸಾಧ್ಯವೇ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರಶ್ನಿಸಿದ್ದಾರೆ.

ರಾಜ್ಯದಲ್ಲಿ ನಡೆಯುತ್ತಿರುವ ಎರಡನೇ ಹಂತದ ಲೋಕಸಭಾ ಚುನಾವಣಾ ಪ್ರಚಾರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಕರ್ನಾಟಕವನ್ನು ಲೂಟಿಯ ಎಟಿಎಂ ಮಾಡಿಕೊಂಡಿದೆ, ಆಡಳಿತಕ್ಕೆ ಬಂದ ಅತ್ಯಂತ ಕಡಿಮೆ ಸಮಯದಲ್ಲೇ ಸರ್ಕಾರಿ ಖಜಾನೆ ಖಾಲಿಯಾಗಿದೆ, ರಾಜ್ಯ ಸರಕಾರಿ ನೌಕರರಿಗೆ ವೇತನ ಕೊಡಲೂ ಸಾಧ್ಯವಾಗದ ಸ್ಥಿತಿ ಬರಲಿದೆ ಎಂದರು.

ಮುಂದೆ ರಾಜ್ಯದ ಜನತೆಯ ಮಕ್ಕಳೂ ಹಸಿವಿನಿಂದ ಒದ್ದಾಡುವ ಸ್ಥಿತಿ ಬಂದೀತು ಎಂದು ಎಚ್ಚರಿಸಿದರು. ಕೇಂದ್ರದ ಎನ್‌ಡಿಎ ಸರ್ಕಾರ ಕರ್ನಾಟಕದಲ್ಲಿ ಹಲವು ವಿಮಾನ ನಿಲ್ದಾಣಗಳನ್ನು ನಿರ್ಮಿಸುತ್ತಿದೆ. ರಾಷ್ಟ್ರೀಯ ಹೆದ್ದಾರಿ ನಿರ್ಮಿಸಲಾಗುತ್ತಿದೆ. ಕಳೆದ 10 ವರ್ಷಗಳಲ್ಲಿ ಮೂಲ ಸೌಕರ್ಯ ಅಭಿವೃದ್ಧಿಗೆ ಒತ್ತು ಕೊಡಲಾಗಿದೆ. ವಂಚಿತ ವರ್ಗದ ಏಳಿಗೆಗೆ ಆದ್ಯತೆ ಕೊಟ್ಟಿದ್ದೇವೆ. ತಾವು ಅಧಿಕಾರಕ್ಕೆ ಬರುವ ಮೊದಲು ದೇಶದ 18 ಸಾವಿರ ಗ್ರಾಮಗಳಿಗೆ ವಿದ್ಯುತ್ ಸಂಪರ್ಕವೇ ಇರಲಿಲ್ಲ. ಈ ಎಲ್ಲಾ ಗ್ರಾಮಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲಾಗಿದೆ.

ದೇಶದಲ್ಲಿನ ನೀರಿನ ಸಮಸ್ಯೆ ಪರಿಹಾರಕ್ಕೆ ಜಲಜೀವನ್ ಮಿಷನ್ ಕಾರ್ಯಕ್ರಮ ಅನುಷ್ಠಾನ ಮಾಡಿದ್ದು, ಶೇ.75ಕ್ಕೂ ಹೆಚ್ಚು ಅಂದರೆ, 11 ಕೋಟಿ ಮನೆಗಳಿಗೆ ನಲ್ಲಿ ನೀರಿನ ಸಂಪರ್ಕ ಒದಗಿಸಲಾಗಿದೆ.

ಅಭಿವೃದ್ಧಿ ಎಂಬುದು ದೇಶದ ಎಲ್ಲ ಗ್ರಾಮಗಳನ್ನು ತಲುಪುತ್ತಿದೆ, ಎಸ್‌ಸಿ, ಎಸ್‌ಟಿ ಸಮುದಾಯ ಅಭಿವೃದ್ಧಿ ವಂಚಿತವಾಗಿತ್ತು, ಗ್ಯಾಸ್ ಸಿಲಿಂಡರ್‌ಗಳನ್ನು ನೀಡಿದ್ದು, ಎಸ್‌ಸಿ, ಎಸ್‌ಟಿ ಒಬಿಸಿ ಸಮುದಾಯದವರಿಗೆ ಗರಿಷ್ಠ ಪ್ರಯೋಜನ ಲಭಿಸಿದೆ ಎಂದು ಹೇಳಿದರು.

ಯಡಿಯೂರಪ್ಪ ಅವರು ರೈತರಿಗೆ ನೆರವಾದವರು, ನಾವು ಇಥೇನಾಲ್ ಮೂಲಕ ರೈತರಿಗೆ ನೆರವಾಗಿದ್ದೇವೆ. ಕಾಂಗ್ರೆಸ್ಸಿಗೆ ಬಡವರ, ದಲಿತರ, ವಂಚಿತರ ಕಡೆ ಗಮನ ನೀಡಲು ಪುರುಸೊತ್ತಿಲ್ಲ, ಕರ್ನಾಟಕದಲ್ಲಿ ಕಾಂಗ್ರೆಸ್ ವಸೂಲಿ ಗ್ಯಾಂಗ್ ನಡೆಸುತ್ತಿದೆ, ಭ್ರಷ್ಟಾಚಾರದ ಮೂಲಕ ವಸೂಲಿ ಮಾಡುವುದೇ ಇವರ ದಂಧೆಯಾಗಿದೆ. ಟೆಕ್ ಹಬ್ ಎಂಬ ಖ್ಯಾತಿಗಳಿಸಿದ್ದ ಬೆಂಗಳೂರನ್ನು ಟ್ಯಾಂಕರ್ ಹಬ್ ಮಾಡಿದ್ದಾರೆ, ನೀರಿಗಾಗಿ ಟ್ಯಾಂಕರ್ ಮಾಫಿಯಾ ಮೂಲಕ ಕಾಂಗ್ರೆಸ್ ಕಮಿಷನ್ ಪಡೆಯುತ್ತಿದೆ.

ಕಾಂಗ್ರೆಸ್ಸಿಗರು 2ಜಿ ಹಗರಣದಂಥ ಭ್ರಷ್ಟಾಚಾರದ ದೊಡ್ಡ ಹಗರಣ ಮಾಡಲು ಕಾಯುತ್ತಿದ್ದಾರೆ, ಭ್ರಷ್ಟಾಚಾರಿ ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠ ಕಲಿಸಿ ಎಂದು ಮೋದಿ ಮನವಿ ಮಾಡಿದರು. ಕಾಂಗ್ರೆಸ್ಸಿಗರು ಮುಸ್ಲಿಮರಿಗೆ ಒಬಿಸಿ ಮೀಸಲಾತಿಯಡಿ ಅವಕಾಶ ಕೊಟ್ಟಿದ್ದಾರೆ. ದಲಿತರನ್ನು ವಂಚಿಸುವ ಹುನ್ನಾರವಿದು, ಧರ್ಮದ ಆಧಾರದಲ್ಲಿ ತಮ್ಮ ಮತಬ್ಯಾಂಕ್ ರಕ್ಷಿಸಲು ಮುಂದಾಗಿದ್ದಾರೆ.

ಎಸ್‌ಸಿ, ಎಸ್‌ಟಿ, ಒಬಿಸಿ ಸಂಸದರು ಹೆಚ್ಚಾಗಿ ಬಿಜೆಪಿಯಲ್ಲಿದ್ದಾರೆ. ಈ ಕಾರಣಕ್ಕೆ ಅಲ್ಪಸಂಖ್ಯಾತರನ್ನು ಪ್ರೋತ್ಸಾಹಿಸಲು ಕಾಂಗ್ರೆಸ್ಸಿಗರು ಮುಂದಾಗಿದ್ದಾರೆ, ಕಾಂಗ್ರೆಸ್‌ನ ಇಂಥ ಹುನ್ನಾರ ಅನುಷ್ಠಾನಕ್ಕೆ ಮೋದಿ ಅವಕಾಶ ಕೊಡುವುದಿಲ್ಲ ಎಂದರು.

ವಿರೋಧ ಪಕ್ಷದವರು ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ಮೂಲಕ ನನ್ನ ಧ್ವನಿಯಲ್ಲಿ ಡೀಪ್ ಫೇಕ್ (ನಕಲಿ) ವಿಡಿಯೋ ಮಾಡುತ್ತಿದ್ದಾರೆ. ಇಂಥ ವಿಡಿಯೋ ಕಂಡರೆ ನಮ್ಮ ಪಕ್ಷದವರ ಗಮನಕ್ಕೆ ತನ್ನಿ, ಅವರ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ ಎಂದು ಎಚ್ಚರಿಸಿದರು.

ಯುವತಿಯನ್ನು ಚಾಕುವಿನಿಂದ ಚುಚ್ಚಿ ಹತ್ಯೆ ಮಾಡಿದ ಹುಬ್ಬಳ್ಳಿ ಘಟನೆ ಆತಂಕಕಾರಿಯಾಗಿದೆ. ಕಾಂಗ್ರೆಸ್ ಈ ಘಟನೆಯನ್ನು ಮತಬ್ಯಾಂಕ್‌ಗಾಗಿ, ತುಷ್ಟೀಕರಣಕ್ಕಾಗಿ ಪ್ರಮುಖ ವಿಚಾರವಾಗಿ ಪರಿಗಣಿಸುತ್ತಿಲ್ಲ. ಹನುಮಾನ್ ಚಾಲೀಸ ಹಾಕಿದ ಅಂಗಡಿ ಮಾಲೀಕನ ಮೇಲೆ ಹಲ್ಲೆ ಆಗುತ್ತದೆ. ಕೆಫೆಯಲ್ಲಿ ಬಾಂಬ್ ಸ್ಫೋಟಿಸಿದರೆ ಸಿಲಿಂಡರ್ ಸ್ಫೋಟ ಎಂದು ಸರ್ಕಾರದ ಪ್ರತಿನಿಧಿ ಹೇಳುತ್ತಾರೆ. ಇವೆಲ್ಲವೂ ಆತಂಕವಾದ, ಭಯೋತ್ಪಾದನೆಯ ಮಾನಸಿಕವಾದದ ಪ್ರತಿಬಿಂಬ. ಕಾಂಗ್ರೆಸ್ ಪಕ್ಷ ಮತಕ್ಕಾಗಿ ಇಂಥವರನ್ನು ಬೆಂಬಲಿಸುತ್ತದೆ, ದೇಶದ ನಿರ್ದೋಷಿ ನಾಗರಿಕರನ್ನು ಕೊಲ್ಲಲು ಬಯಸುವವರನ್ನು ಸುಮ್ಮನೆ ಬಿಡುವುದಿಲ್ಲ ಎಂದರು.

ವಿಕಸಿತ ಕರ್ನಾಟಕ, ವಿಕಸಿತ ಭಾರತಕ್ಕಾಗಿ ಮತ ಕೊಡಿ, 2024ರ ಚುನಾವಣೆಯು ವಿಕಸಿತ ಭಾರತದ ಸಂಕಲ್ಪ ಹೊಂದಿದ ಚುನಾವಣೆಯಾಗಿದೆ, ಆತ್ಮನಿರ್ಭರ ಭಾರತದ ಚುನಾವಣೆ.

ಭಾರತವು ವಿಶ್ವದ 3ನೇ ಪ್ರಮುಖ ಆರ್ಥಿಕ ಶಕ್ತಿಯಾಗಲು ಇದು ಪೂರಕ ಚುನಾವಣೆ. ನಿಮ್ಮ ಒಂದು ಮತ ಈ ಸಂಕಲ್ಪ ಸಾಧನೆಗೆ ಸಹಕಾರಿಯಾಗಲಿದೆ. ಮೋದಿಗೆ ಶಕ್ತಿ ಕೊಡಲು ಬಿಜೆಪಿಗೆ ಮತ ನೀಡಿ ಎಂದು ಮನವಿ ಮಾಡಿದರು.

ಭಾರತವನ್ನು ಕೌಶಲ್ಯಯುಕ್ತ ದೇಶ, ಉತ್ಪಾದನಾ ಹಬ್ ಆಗಿ ಪರಿವರ್ತಿಸಲು ದೂರದೃಷ್ಟಿ ಬೇಕು. ಇದು ಮೋಜು ಮಾಡುವವರಿಂದ ಸಾಧ್ಯವಿಲ್ಲ. ಒಂದು ಸಂಕಲ್ಪಕ್ಕಾಗಿ 24x7 ಗಂಟೆ ಕೆಲಸ ಮಾಡುವವರ ಅಗತ್ಯವಿದೆ, ಮೋದಿಯ ದೂರದೃಷ್ಟಿ ಸ್ಪಷ್ಟವಾಗಿದೆ. ಮೋದಿಯ ಜೀವನವೂ ಸುಸ್ಪಷ್ಟವಾಗಿದೆ ಎಂದರು.

ಕೇಂದ್ರದ ಮಾಜಿ ಸಚಿವ ಹಾಗೂ ಹಾಲಿ ನಮ್ಮ ಸಂಸದರಾದ ಶ್ರೀನಿವಾಸಪ್ರಸಾದ್ ಅವರ ನಿಧನ ದುಃಖದ ವಿಚಾರ. ನೈಜ ಜನಸೇವಕರೊಬ್ಬರನ್ನು ನಾವು ಕಳೆದುಕೊಂಡಿದ್ದೇವೆ ಎಂದು ನುಡಿದರು.

ಮೈಸೂರು ಮಿತ್ರ ಮಂಗಳವಾರ 30 ಏಪ್ರಿಲ್ 2024

# ಕನ್ನಡಕ್ಕೆ ಕೊಡಗಿನ ಕವಿಗಳ ಕೊಡುಗೆ ಅಪಾರ

## ಕರ್ನಾಟಕ ಸುವರ್ಣ ಸಂಭ್ರಮದಲ್ಲಿ ಕನ್ನಡ ಅಧ್ಯಾಪಕ ಎಂ.ಎನ್.ವೆಂಕಟನಾಯಕ್ ಮೆಚ್ಚುಗೆ

ಕುಶಾಲನಗರ, ಏ.29–ಕನ್ನಡ ಭಾಷೆಯನ್ನು ಶ್ರೀಮಂತಗೊಳಿಸಲು ಕೊಡಗಿನ ಕವಿಗಳು ಮತ್ತು ಸಾಹಿತಿಗಳ ಕೊಡುಗೆ ಅಪಾರವಾಗಿದೆ ಎಂದು ಹೆಬ್ಬಾಲೆ ಪದವಿ ಪೂರ್ವ ಕಾಲೇಜಿನ ಕನ್ನಡ ಅಧ್ಯಾಪಕ ಎಂ.ಎನ್.ವೆಂಕಟನಾಯಕ್ ಮೆಚ್ಚುಗೆ ವ್ಯಕ್ತಪಡಿಸಿದರು.

ಕೂಡ್ಲೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾವರಣದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಹಾಗೂ ಕೂಡುಮಂಗಳೂರು ಸರ್ಕಾರಿ ಪ್ರೌಢಶಾಲೆಯ ಕುವೆಂಪು ಕನ್ನಡ ಭಾಷಾ ಸಂಘದ ವತಿಯಿಂದ ಆಯೋಜಿಸಿದ್ದ ಕರ್ನಾಟಕ ಸುವರ್ಣ ಸಂಭ್ರಮ ಹಾಗೂ ಕೆ.ಟಿ.ಸುಬ್ಬರಾವ್ ದತ್ತಿ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೊಡಗಿನ ಜನರು ಕನ್ನಡ ಸಾಹಿತ್ಯಕ್ಕೆ ಉತ್ತಮ ಕೊಡುಗೆ ನೀಡಿದ್ದಾರೆ. ಜಿಲ್ಲೆಯ ಇಂದಿನ ಉದಯೋನ್ಮುಖ ಕವಿಗಳು ಮತ್ತು ಲೇಖಕರು ಕೂಡ ಉತ್ತಮ ಸಾಹಿತ್ಯ ರಚನೆಯಲ್ಲಿ ತೊಡಗಿರುವುದರಿಂದ ಕೊಡಗಿನ ಸಾಹಿತ್ಯಕ್ಕೆ ವಿಶೇಷ ಮನ್ನಣೆ ಲಭಿಸಿದೆ ಎಂದರು.

ನಾಡಿನ ಹಿರಿಯ ಕಥೆಗಾರ್ತಿ ಕೊಡಗಿನ ಗೌರಮ್ಮ ಶ್ರೇಷ್ಠ ಕಥೆಗಾರ್ತಿಯಾಗಿ ಕನ್ನಡದಲ್ಲಿ ಮಹತ್ವ ಪೂರ್ಣವಾದ ಕಥೆಗಳನ್ನು ರಚಿಸಿದ್ದಾರೆ. ನಡಿಕೇರಿಯಂಡ ಚಿಣ್ಣಪ್ಪ ಅವರ ಪಟ್ಟೋಲೆ ಪಳಮೆ ಕೃತಿಯು ಕನ್ನಡ ಜಾನಪದ ಸಂಗ್ರಹ ಕೃತಿಗಳಲ್ಲೇ ಅಮೂಲ್ಯವಾದುದು ಎಂದು ಬಣ್ಣಿಸಿದರು.



ಕೂಡ್ಲೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾವರಣದಲ್ಲಿ ಆಯೋಜಿಸಿದ್ದ ಕರ್ನಾಟಕ ಸುವರ್ಣ ಸಂಭ್ರಮ ಹಾಗೂ ಕೆ.ಟಿ.ಸುಬ್ಬರಾವ್ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಕನ್ನಡ ಅಧ್ಯಾಪಕ ಎಂ.ಎನ್.ವೆಂಕಟನಾಯಕ್ ಉದ್ಘಾಟಿಸಿದರು.

ಹೊರ ಜಿಲ್ಲೆಗಳಿಂದ ಬಂದು ಕೊಡಗಿನಲ್ಲಿ ನೆಲೆಸಿದವರೂ ಕನ್ನಡಕ್ಕೆ ವಿಶೇಷ ಕೊಡುಗೆ ಕೊಟ್ಟಿದ್ದಾರೆ. ಅವರಲ್ಲಿ ಮಾಸ್ತಿ ವೆಂಕಟೇಶ್ ಅಯ್ಯಂಗಾರ್, ಪಂಜೆ ಮಂಗೇಶರಾಯರ ಕೊಡುಗೆ ಅಪಾರ. ಪಂಜೆ ಮಂಗೇಶರಾಯರ ಎಲ್ಲಿ ಭೂರಮೆ ದೇವಸನ್ನಿಧಿ ಬಯಸಿ ಬಿಮ್ಮನೆ ಬಂದಳೋ, ಎಲ್ಲಿ ಮೋಹನ ಗಿರಿಯ ಬೆಡಗಿನ ರೂಪಿನಿಂದಲಿ ನಿಂದಳೋ ಎಂಬ ಅವರ ಹುತ್ತರಿ ಹಾಡುಗಳ ಕೃತಿಯ ಪದ್ಯವನ್ನು ಉಲ್ಲೇಖಿಸಿದರು.

ಕನ್ನಡ ಹೆಸರಾಂತ ಕಾದಂಬರಿಗಾರರಾಗಿದ್ದ ಭಾರತೀಸುತ, ಕೋಡಿ ಕುಶಾಲಪ್ಪ, ಡಿ.ಎನ್.ಕೃಷ್ಣಯ್ಯ ಯದುರ್ಕಲ ಶಂಕರನಾರಾಯಣ ಭಟ್, ಬಿ.ಡಿ.ಸುಬ್ಬಯ್ಯ, ಕುಶಾಲನಗರದ ವಿ.ಎಸ್.ರಾಮಕೃಷ್ಣ, ಸುಂಟಿಕೊಪ್ಪದ ಅಬ್ದುಲ್ ರಶೀದ್, ಕಣಿವೆ ಭಾರದ್ವಾಜ ಕೆ.ಆನಂದ ತೀರ್ಥ ಮೊದಲಾದವರ ಕೊಡುಗೆಯನ್ನು ವೆಂಕಟನಾಯಕ್ ಸ್ಮರಿಸಿದರು.

> ವಿದ್ಯಾರ್ಥಿಗಳು ನಿತ್ಯವೂ ಕನ್ನಡ ಪುಸ್ತಕಗಳನ್ನು ಓದುವ ಅಭ್ಯಾಸಕ್ಕೆ ಒಂದಿಷ್ಟು ಸಮಯ ಮೀಸಲಿಟ್ಟು ಸಾಹಿತ್ಯ ಅಭಿರುಚಿ ಬೆಳೆಸಿಕೊಳ್ಳಬೇಕು.
> –ಟಿ.ಜಿ.ಪ್ರೇಮಕುಮಾರ್, ಮಾಜಿ ಅಧ್ಯಕ್ಷ, ತಾಲೂಕು ಕನ್ನಡ ಸಾಹಿತ್ಯ ಪರಿಷತ್

ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್.ನಾಗೇಶ್ ಮಾತನಾಡಿ, ನಮ್ಮ ಜಿಲ್ಲೆಯ ಅನೇಕ ಕವಿಗಳು, ಸಾಹಿತಿಗಳು ಕನ್ನಡ ಸಾಹಿತ್ಯಕ್ಕೆ ನೀಡಿರುವ ಕೊಡುಗೆಗಳ ಬಗ್ಗೆ ನಾವು ಇಂದಿನ ಯುವ ಪೀಳಿಗೆ ಹಾಗೂ ವಿದ್ಯಾರ್ಥಿ ಸಮುದಾಯಕ್ಕೆ ತಿಳಿಸಿದಾಗ ಅವರು ಸಾಹಿತ್ಯ ಪ್ರೇಮ ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ತಾಲೂಕು ಕಸಾಪ ಗೌರವ ಕೋಶಾಧಿಕಾರಿ ಕೆ.ವಿ.ಉಮೇಶ್, ಪದಾಧಿಕಾರಿ ಡಿ.ಆರ್.ಸೋಮಶೇಖರ್, ಹೆಬ್ಬಾಲೆ ಹೋಬಳಿ ಘಟಕದ ಅಧ್ಯಕ್ಷ ಎಂ.ಎನ್.ಮೂರ್ತಿ, ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯಶಿಕ್ಷಕ ಎಚ್.ಎಸ್. ಸುಜಾತ, ಶಿಕ್ಷಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಜ್ಞಾನದ ಹುಡುಕಾಟವೇ ಸಂಶೋಧನೆ

ವಿರಾಜಪೇಟೆ, ಏ.29–ಜ್ಞಾನದ ಸಲುವಾಗಿ ಹುಡುಕಾಟ ನಡೆಸುವುದೇ ಸಂಶೋಧನೆ. ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡರೆ ಸಂಶೋಧನೆಯಾಗುತ್ತದೆ ಎಂದು ಹುಣಸೂರು ಮಹಿಳಾ ಕಾಲೇಜಿನ ಸಹ ಪ್ರಾಧ್ಯಾಪಕ ಡಾ.ಕೆ.ಪಿ.ಪ್ರಸನ್ನ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಕಾಲೇಜಿನ ಐಕ್ಯೂಎಸಿ ಘಟಕ ಮತ್ತು ಕನ್ನಡ ವಿಭಾಗದ ಸಹಯೋಗದಲ್ಲಿ ಆಯೋಜಿಸಿದ್ದ ಸಂಶೋಧನೆ ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮನುಷ್ಯನ ಕ್ರಿಯಾಶೀಲ ಮನಸ್ಸು ಸಂಶೋಧನೆಗೆ ಪ್ರೇರಣೆಯಾಗಿದೆ. ಹೊಸ ಜ್ಞಾನ ಪಡೆಯಲು ಸಂಶೋಧನೆ ಅಗತ್ಯವಾಗಿದೆ ಎಂದು ಶಂಶೋಧನೆಯ ಉದ್ದೇಶ ಮತ್ತು ಸ್ವರೂಪದ ಬಗ್ಗೆ ಉಪನ್ಯಾಸ ನೀಡಿದರು.

ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ಡಾ.ಕೆ.ಬಸವರಾಜು ಮಾತನಾಡಿ, ವಿದ್ಯಾರ್ಥಿಗಳ ಚಿಂತನಾ ಮಟ್ಟ ಹೆಚ್ಚಿಸಿ ಪ್ರತಿಭಾ ಸಾಮರ್ಥ್ಯವನ್ನು ಅಭಿವ್ಯಕ್ತಪಡಿಸಲು ಒಂದು ವಿಷಯದ ಕುರಿತು ರಚಿಸುವ ಸಂಶೋಧನಾ ಕಿರುಪ್ರಬಂಧ ಸಹಕರಿಸುತ್ತದೆ ಎಂದರು.



ವಿರಾಜಪೇಟೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ನಡೆದ ಉಪನ್ಯಾಸ ಕಾರ್ಯಕ್ರಮದಲ್ಲಿ ಸಹ ಪ್ರಾಧ್ಯಾಪಕ ಡಾ.ಕೆ.ಪಿ.ಪ್ರಸನ್ನ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರಾದ ರಘುರಾಜ್, ಡಾ.ಪ್ರಭು, ವಿದ್ಯಾರ್ಥಿಗಳಾ ಪ್ರತಿನಿಧಿ ಅಜಿತ್, ಕೀರ್ತನಾ ಮತ್ತಿತರರು ಉಪಸ್ಥಿತರಿದ್ದರು.

# ಬರ ಪರಿಹಾರದಲ್ಲಿ ಕೇಂದ್ರದಿಂದ ರಾಜಕೀಯ

ಮಡಿಕೇರಿ, ಏ.29–ರಾಜ್ಯ ಭೀಕರ ಬರ ಪರಿಸ್ಥಿತಿ ಎದುರಿಸುತ್ತಿದ್ದು, ಇಂತಹ ಸಂದರ್ಭದಲ್ಲೂ ಮಾನವೀಯತೆ ಇಲ್ಲದ ಕೇಂದ್ರ ಸರ್ಕಾರ ಬರ ಪರಿಹಾರ ಬಿಡುಗಡೆಯಲ್ಲೂ ರಾಜಕೀಯ ಮಾಡುತ್ತಿದೆ. ಇದು ಖಂಡನೀಯ ಎಂದು ವಿರಾಜಪೇಟೆ ಶಾಸಕ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ ಹೇಳಿದರು.



ಎಸ್.ಪೊನ್ನಣ್ಣ

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ಚುನಾವಣೆ ವೇಳೆ ಸಣ್ಣ ಪ್ರಮಾಣದ ಬರ ಪರಿಹಾರ ಬಿಡುಗಡೆಗೊಳಿಸಿದೆ. ಕೇಂದ್ರದ ಬಳಿ ರಾಜ್ಯ ಸರ್ಕಾರ 18 ಸಾವಿರ ಕೋಟಿ ರೂ. ಬರ ಪರಿಹಾರ ಕೇಳಿತ್ತು. ಆದರೆ, ಕೇಂದ್ರ ಕೇವಲ 3 ಸಾವಿರ ಕೋಟಿ ರೂ. ಬಿಡುಗಡೆಗೊಳಿಸಿದೆ. ಅದೂ ರಾಜ್ಯ ಸರ್ಕಾರ ಹಾಗೂ ನ್ಯಾಯಾಲಯದ ಒತ್ತಡದಿಂದ 3 ಸಾವಿರ ಕೋಟಿ ರೂ. ಬಿಡುಗಡೆಗೊಳಿಸಿದ್ದು, ರಾಜ್ಯಕ್ಕೆ ಬರಬೇಕಾದ ಬರ ಪರಿಹಾರ ಹಾಗೂ ಬಜೆಟ್‌ನಲ್ಲಿ ಘೋಷಿಸಿದ ಹಣವನ್ನು ಸಹ ಇನ್ನೂ ಬಿಡುಗಡೆ ಮಾಡಿಲ್ಲ ಎಂದು ಆರೋಪಿಸಿದರು.

ಎಲ್ಲಾ ವಿಷಯಗಳಲ್ಲೂ ರಾಜಕೀಯ ಮಾಡುವ ಕೇಂದ್ರ ಸರ್ಕಾರದ ನಡೆಯನ್ನು ಜನರು ಗಮನಿಸುತ್ತಿದ್ದು, ತಕ್ಕ ಪಾಠ ಕಲಿಸಲಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಜಿಲ್ಲೆಯಲ್ಲಿ ಉತ್ತಮ ಮತದಾನವಾಗಿದ್ದು, ಮೈಸೂರು–ಕೊಡಗು ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಬಹಿರಂಗ ಕ್ಷಮೆಯಾಚನೆಗೆ ಮೆಕ್ಯಾನಿಕ್‌ಗಳ ಆಗ್ರಹ



ಮಡಿಕೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮೆಕ್ಯಾನಿಕ್ ವೃತ್ತಿಯ ಮಣಿ ದೇವರಾಜು ಮಾತನಾಡಿದರು.

ಮಡಿಕೇರಿ, ಏ.29– ದೃಶ್ಯ ವಾಹಿನಿಯೊಂದರ ರಿಯಾಲಿಟಿ ಶೋ ಒಂದರಲ್ಲಿ ಮೆಕ್ಯಾನಿಕ್ ವೃತ್ತಿಯ ಕುರಿತು ಅವಹೇಳನಕಾರಿ ಸಂಭಾಷಣೆಯನ್ನು ಪ್ರಸಾರ ಮಾಡಲಾಗಿದೆ. ಈ ಬಗ್ಗೆ ವಾಹಿನಿಯವರು ಬಹಿರಂಗ ಕ್ಷಮೆಯಾಚಿಸಬೇಕು ಎಂದು ನಗರದ ಮೆಕ್ಯಾನಿಕ್ ವೃತ್ತಿಯ ಮಣಿ ದೇವರಾಜು ಆಗ್ರಹಿಸಿದರು.

ನಗರದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೃಶ್ಯ ವಾಹಿನಿಯೊಂದರಲ್ಲಿ ವಾರದ ಹಿಂದೆ ಪ್ರಸಾರವಾದ 'ಮಹಾನಟಿ' ರಿಯಾಲಿಟಿ ಶೋನಲ್ಲಿ ಕಲಾವಿದರೊಬ್ಬರಿಂದ ಮೆಕ್ಯಾನಿಕ್ ಸಮುದಾಯವನ್ನು ಅತ್ಯಂತ ಕೀಳಾಗಿ ಕಾಣುವ ಸಂಭಾಷಣೆಯನ್ನು ಹೇಳಿಸಿದ್ದಾರೆ. ಈ ಸಂದರ್ಭ ತೀರ್ಪುಗಾರರ ಸ್ಥಾನದಲ್ಲಿದ್ದ ಹಿರಿಯ ನಟರು, ನಿರೂಪಕರು ಚಪ್ಪಾಳೆ ತಟ್ಟಿ ಪ್ರೋತ್ಸಾಹಿಸಿರುವುದು ಮೆಕ್ಯಾನಿಕ್ ವೃತ್ತಿಯಲ್ಲಿ ತೊಡಗಿಸಿಕೊಂಡವರಿಗೆ ಮಾಡಿರುವ ಅಪಮಾನ ಎಂದು ಬೇಸರ ವ್ಯಕ್ತಪಡಿಸಿದರು.

ಬದುಕಿಗಾಗಿ ಒಬ್ಬೊಬ್ಬರು ಒಂದೊಂದು ವೃತ್ತಿಯಲ್ಲಿ ತೊಡಗುತ್ತಾರೆ. ಅದೇ ರೀತಿ ನಾವುಗಳು ವಾಹನಗಳ ಮೆಕ್ಯಾನಿಕ್ ವೃತ್ತಿಯನ್ನು ಸಾಮಾಜ ಸೇವೆ ಎನ್ನುವಂತೆ ಅತ್ಯಂತ ಪ್ರಾಮಾಣಿಕವಾಗಿ ನಡೆಸಿಕೊಂಡು ಬರುತ್ತಿದ್ದೇವೆ. ಹೀಗಿರುವಾಗ ಮೆಕ್ಯಾನಿಕ್ ವೃತ್ತಿಯ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವುದು ನಮಗೆ ನೋವನ್ನುಂಟು ಮಾಡಿದೆ. ಈ ಬಗ್ಗೆ ದೃಶ್ಯ ವಾಹಿನಿ, ಸಂಭಾಷಣೆ ಬರಹಗಾರರು ಸೇರಿದಂತೆ ಸಂಬಂಧಪಟ್ಟವರ ವಿರುದ್ಧ ಮಡಿಕೇರಿ ನಗರ ಪೊಲೀಸ್ ಠಾಣೆ ಮತ್ತು ಕೊಡಗು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ದೂರು ಸಲ್ಲಿಸಲಾಗುವುದು ಎಂದರು.

ತಮ್ಮ ತಪ್ಪನ್ನು ಅರಿತು ಸಂಬಂಧಪಟ್ಟ ದೃಶ್ಯ ವಾಹಿನಿಯವರು ಬಹಿರಂಗ ಕ್ಷಮೆಯಾಚಿಸಬೇಕು. ಇಲ್ಲವಾದರೆ ರಾಜ್ಯಾದ್ಯಂತ ಮೆಕ್ಯಾನಿಕ್ ವೃತ್ತಿಯಲ್ಲಿ ತೊಡಗಿರುವವರು ಬೃಹತ್ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಮೆಕ್ಯಾನಿಕ್ ವೃತ್ತಿಯ ಚಂದ್ರು, ವಿ.ಯು.ಅನಂತು, ಎಸ್.ಬಿ.ಕಿರಣ್, ಬಿ.ಎಸ್.ಗಣೇಶ್, ಪಿ.ಎಂ.ಉಮ್ಮರ್ ಉಪಸ್ಥಿತರಿದ್ದರು.

## ಕಾರ್ಮಿಕರಿಂದ ಹಲ್ಲೆ: ಇಬ್ಬರಿಗೆ ಗಾಯ

**ವಿರಾಜಪೇಟೆ:** ಕ್ಷುಲ್ಲಕ ಕಾರಣಕ್ಕೆ ಮೂವರು ಕಾರ್ಮಿಕರು ಇಬ್ಬರ ಮೇಲೆ ಮಾರಕಾಸ್ತ್ರದಿಂದ ಹಲ್ಲೆ ನಡೆಸಿರುವ ಘಟನೆ ಪಟ್ಟಣದ ಪಂಜರುಪೇಟೆಯಲ್ಲಿ ಸೋಮವಾರ ನಡೆದಿದೆ. ಇಲ್ಲಿನ ಪಂಜರುಪೇಟೆ ನಿವಾಸಿ ರತ್ನಾಕರ (ಬೋಸು) ಹಾಗೂ ದಿನೇಶ್ ಹಲ್ಲೆಗೊಳಗಾಗಿ ಪಟ್ಟಣ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಹಲ್ಲೆ ನಡೆಸಿದ ಮೈಸೂರಿನ ಉದಯಗಿರಿಯ ಕಾರ್ಮಿಕರಾದ ರೆಹಮಾನ್, ಸಲ್ಮಾನ್ ಹಾಗೂ ಇಮ್ರಾನ್‌ನನ್ನು ಪೊಲೀಸರು ಬಂಧಿಸಿದ್ದಾರೆ.

ಈ ಕಾರ್ಮಿಕರು 2 ವರ್ಷಗಳಿಂದ ವಿರಾಜಪೇಟೆಯಲ್ಲೇ ಕೂಲಿ ಕೆಲಸ ಮಾಡಿಕೊಂಡಿದ್ದರು. ಆದರೆ, ಕ್ಷುಲ್ಲಕ ಕಾರಣಕ್ಕೆ ಮಾರಕಾಸ್ತ್ರದಿಂದ ರತ್ನಾಕರ ಹಾಗೂ ದಿನೇಶ್ ಮೇಲೆ ಹಲ್ಲೆ ನಡೆಸಿದ್ದಾರೆ. ಈ ಸಂಬಂಧ ವಿರಾಜಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬೈತೂರಪ್ಪ ಪೊವ್ವದಿ ಬಸವೇಶ್ವರ ಹಬ್ಬ

ಸುಂಟಿಕೊಪ್ಪ, ಏ.29–ಕೊಡಗರಹಳ್ಳಿಯಲ್ಲಿ ನೆಲೆಸಿರುವ ಶ್ರೀ ಬೈತೂರಪ್ಪ ಪೊವ್ವದಿ ಬಸವೇಶ್ವರ ವಾರ್ಷಿಕ ಹಬ್ಬ ಧಾರ್ಮಿಕ ವಿಧಿವಿಧಾನಗಳೊಂದಿಗೆ ಭಕ್ತಿಯಿಂದ ಸೋಮವಾರ ನೆರವೇರಿತು.

ಸೂರ್ಯೋದಯ ವೇಳೆಗೆ ಗಣ ಹೋಮದೊಂದಿಗೆ ಹಬ್ಬಕ್ಕೆ ಚಾಲನೆ ನೀಡಲಾಯಿತು. ಬೈತೂರಪ್ಪ ಪೊವ್ವದಿ ಪರಿವಾರ ದೇವರುಗಳಿಗೆ ವಿಶೇಷ ಪೂಜೆ ಮತ್ತು ರುದ್ರಾಭಿಷೇಕವನ್ನು ದೇವಾಲಯದ ಪ್ರಧಾನ ಅರ್ಚಕರಾದ ನರಸಿಂಹ ಭಟ್, ಚಂದ್ರಶೇಖರ್ ಭಟ್, ರವಿಶಂಕರ್ ಮಂಜುನಾಥ್ ಭಟ್ ಹಾಗೂ ಕೃಷ್ಣಭಟ್ ತಂಡ ನೆರವೇರಿಸಿತು.

ದೇವತಕ್ಕರಾದ ಜಗ್ಗರಂಡ ಹ್ಯಾರಿ ಕಾರ್ಯಪ್ಪ ಅವರ ಮನೆಯಿಂದ ದೇವರ ಭಂಡಾರವನ್ನು ಅರ್ಚಕ ನರಸಿಂಹ ಭಟ್ ನೇತೃತ್ವದಲ್ಲಿ ಪೂಜೆ ಮತ್ತು ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿ ದುಡಿಕೊಟ್ ಪಾಟ್ ಸಹಿತ ಸಾಂಪ್ರದಾಯಿಕ ಕೊಡವ ಓಲಗದೊಂದಿಗೆ ದೇವಾಲಯಕ್ಕೆ ತಂದು ಪೂಜೆ ನೆರವೇರಿಸಲಾಯಿತು. ಮಾಹಾ ಪೂಜೆ ಬಳಿಕ ತೀರ್ಥ ಪ್ರಸಾದದೊಂದಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

ದೇವಾಲಯಕ್ಕೆ ಒಳಪಟ್ಟ ಕುಟುಂಬಗಳು ಸಾಂಪ್ರದಾಯಿಕ ವೇಷಭೂಷಣದೊಂದಿಗೆ ದೇವಾಲಯ ಆವರಣದಲ್ಲಿ ಸೇರಿ ಸಾಂಪ್ರದಾಯಿಕ ಬೊಳಕಾಟ್ ನೃತ್ಯ ಸೇವೆ ಸಲ್ಲಿಸಿದರು. ವಿಶೇಷವೆಂದರೆ ಹಬ್ಬದ ಕಟ್ಟಿನ ಮರು ದಿನದಿಂದ 11 ದಿನ ಮುಂಜಾನೆ ದೀಪದ ಬೆಳಕಿನಲ್ಲಿ ದೇವರಿಗೆ ಬೊಳಕಾಟ್ ನೃತ್ಯ ಸೇವೆ ಸಾಂಪ್ರದಾಯಿಕ ಉಡುಪಿನಲ್ಲಿ ಸಲ್ಲಿಸುವುದು ವಿಶೇಷವಾಗಿದೆ. ಈ ಸಂದರ್ಭ ಕೊಡಗರಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಸ್ಥರು ಪಾಲ್ಗೊಂಡಿದ್ದರು.



# ಇಂಡಿಗನತ್ತದಲ್ಲಿ ಶೇ.13.45ರಷ್ಟು ಮತದಾನ

ಹನೂರು, ಏ.29–ತಾಲೂಕಿನ ಮಲೆಮಹದೇಶ್ವರಬೆಟ್ಟದ ಇಂಡಿಗನತ್ತ ಗ್ರಾಮದಲ್ಲಿ ಸೋಮವಾರ ನಡೆದ ಮರು ಮತದಾನದಲ್ಲಿ ಶೇ.13.45ರಷ್ಟು ಮತದಾನವಾಗಿದೆ.

ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮತಗಟ್ಟೆ ಸಂಖ್ಯೆ 146ರಲ್ಲಿ ಬೆಳಗ್ಗೆ 7 ರಿಂದ ಸಂಜೆ 6 ಗಂಟೆವರೆಗೆ ಮರು ಮತದಾನಕ್ಕೆ ಅವಕಾಶ ನೀಡಲಾಗಿತ್ತು. ಆದರೆ, ಬೆಳಗ್ಗೆಯಿಂದ ಸಂಜೆವರೆಗೆ ಅಧಿಕಾರಿಗಳು ಮತಗಟ್ಟೆ ಕೇಂದ್ರದಲ್ಲಿ ಕಾದು ಕುಳಿತರು ಕೂಡ ನಿರೀಕ್ಷಿತ ಪ್ರಮಾಣದಲ್ಲಿ ಮತದಾರರು ಬಂದು ತಮ್ಮ ಹಕ್ಕು ಚಲಾವಣೆ ಮಾಡಲಿಲ್ಲ.

ಈ ಮತಗಟ್ಟೆಯ ವ್ಯಾಪ್ತಿಗೆ ಇಂಡಿಗನತ್ತ, ತೇಕಣೆ, ಮೆಂದಾರೆ, ತುಳಸಿಕೆರೆ ಹಾಗೂ ಪಡಸಲನತ್ತ ಗ್ರಾಮಗಳು ಒಳಪಟ್ಟಿದ್ದು, ಈ ಬಾರಿ ಚುನಾವಣೆಯಲ್ಲಿ 279 ಪುರುಷರು, 249 ಮಹಿಳೆಯರು ಸೇರಿ ಒಟ್ಟು 528 ಮತದಾರರಿದ್ದಾರೆ.

**71 ಮಂದಿ ಹಕ್ಕು ಚಲಾವಣೆ:** ಚುನಾವಣಾ ಆಯೋಗದ ಆದೇಶದಂತೆ ಸೋಮವಾರ ನಡೆದ ಮರು ಮತದಾನದಲ್ಲಿ 32 ಪುರುಷರು, 39 ಮಹಿಳೆಯರು ಸೇರಿದಂತೆ ಒಟ್ಟು 71 ಮತದಾರರು ಮಾತ್ರ ತಮ್ಮ ಹಕ್ಕು ಚಲಾಯಿಸಿದರು. ಹೀಗಾಗಿ 400ಕ್ಕೂ ಹೆಚ್ಚು ಮತದಾರರು ಮತದಾನ ಪ್ರಕ್ರಿಯೆಯಿಂದ ದೂರು ಉಳಿದಿದ್ದಾರೆ.



ಮಲೆಮಹದೇಶ್ವರಬೆಟ್ಟದ ಇಂಡಿಗನತ್ತ ಗ್ರಾಮದಲ್ಲಿ ಸೋಮವಾರ ನಡೆದ ಮರು ಮತದಾನಕ್ಕೆ ಹೆಚ್ಚಿನ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿತ್ತು.

**ಬಿಗಿ ಬಂದೋಬಸ್ತ್:** ಏ.26ರಂದು ಇಂಡಿಗನತ್ತ ಗ್ರಾಮದಲ್ಲಿ ಕಲ್ಲು ತೂರಾಟ, ಲಾಠಿ ಚಾರ್ಜ್, ಮತಗಟ್ಟೆ ಧ್ವಂಸ, ಇವಿಎಂ ಯಂತ್ರಕ್ಕೆ ಹಾನಿಯಂತಹ ಘಟನೆ ನಡೆದು ಮತದಾನ ಸ್ಥಗಿತಗೊಂಡಿದ್ದ ಹಿನ್ನೆಲೆಯಲ್ಲಿ ಸೋಮವಾರ ನಡೆದ ಮರುಮತದಾನ ಪ್ರಕ್ರಿಯೆಯಲ್ಲಿ ಹೆಚ್ಚಿನ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿತ್ತು.

**ಮೂಲಸೌಕರ್ಯ ವಚಿಂತ ಗ್ರಾಮ:** ದೇಶಕ್ಕೆ ಸ್ವಾತಂತ್ರ್ಯ ಬಂದು 76 ವರ್ಷ ಪೂರ್ಣಗೊಂಡಿದ್ದರು. ಇಂಡಿಗನತ್ತ, ತೇಕಣೆ, ಮೆಂದಾರೆ, ತುಳಸಿಕೆರೆ ಹಾಗೂ ಪಡಸಲನತ್ತ ಗ್ರಾಮದಲ್ಲಿ ಕುಡಿಯಲು ಶುದ್ಧ ನೀರು, ವಿದ್ಯುತ್ ಸೌಲಭ್ಯ, ಸಮರ್ಪಕ ರಸ್ತೆ ಸೇರಿದಂತೆ ಮೂಲ ಸೌಕರ್ಯಗಳಿಲ್ಲ. ಇದರಿಂದ ಗ್ರಾಮಸ್ಥರು ನಿತ್ಯ ಸಂಕಷ್ಟದಲ್ಲಿ ಜೀವನ ನಡೆಸುತ್ತಿದ್ದಾರೆ.

ಕಳೆದೊಂದು ತಿಂಗಳಿನಿಂದ ಗ್ರಾಮಸ್ಥರು ಮೂಲಸೌಲಭ್ಯ ಕಲ್ಪಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿ, ಮತದಾನ ಬಹಿಷ್ಕರಿಸುವ ನಿರ್ಧಾರ ಮಾಡಿದ್ದರು. ಆದರೆ, ಏ.26ರಂದು ಉಂಟಾದ ಘರ್ಷಣೆಯಿಂದ ಸೋಮವಾರ ಮರು ಮತದಾನ ನಡೆಯಿತು.

## ಶ್ರೀನಿವಾಸಪ್ರಸಾದ್ ಇಹಲೋಕ ತ್ಯಜಿಸಿದ ಸುದ್ದಿ ಕೇಳುತ್ತಿದ್ದಂತೆ

# ಜಿಲ್ಲೆಯಲ್ಲಿ ಆವರಿಸಿದ ನೀರವ ಮೌನ

ಚಾಮರಾಜನಗರ, ಏ.29– ಸೋಮವಾರ ಬೆಳಗ್ಗೆಯೇ ಶ್ರೀನಿವಾಸಪ್ರಸಾದ್ ಇನ್ನಿಲ್ಲ ಎಂಬ ಸುದ್ದಿ ಜಿಲ್ಲೆಯಲ್ಲಿ ಕೇಳುತ್ತಿದ್ದಂತೆ ಎಲ್ಲೆಡೆ ನೀರವ ಮೌನ ಆವರಿಸಿತ್ತು. ಅವರ ಬೆಂಬಲಿಗರು, ಅಭಿಮಾನಿಗಳು ನೂರಾರು ಸಂಖ್ಯೆಯಲ್ಲಿ ಮೈಸೂರಿನ ಪ್ರಸಾದ್ ಅವರ ನಿವಾಸಕ್ಕೆ ತೆರಳಿ ನೆಚ್ಚಿನ ನಾಯಕನ ಅಂತಿಮ ದರ್ಶನ ಪಡೆದು ಕಣ್ಣೀರಿಟ್ಟರು.

ಇನ್ನೂ ಜಿಲ್ಲಾದ್ಯಂತ ಪಕ್ಷ ಭೇದ ಮರೆತು ಎಲ್ಲಾ ಪಕ್ಷಗಳ ರಾಜಕೀಯ ಮುಖಂಡರು ಪ್ರಸಾದ್ ಅವರನ್ನು ನೆನೆದು ಗೌರವ ಸಲ್ಲಿಸಿದರು. ಕನ್ನಡ ಸಂಘಟನೆಗಳು ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳ ಕಚೇರಿಗಳಲ್ಲಿ ದಲಿತ ನಾಯಕ ಸ್ಮರಿಸುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಿದರು.



ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸಂಸದ ಶ್ರೀನಿವಾಸಪ್ರಸಾದ್‌ಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಪ್ರಧಾನ ಕಾರ್ಯದರ್ಶಿ ಚಿಕ್ಕಮಹಾದೇವು, ಎಪಿಎಂಸಿ ಸದಸ್ಯ ಎ.ಎಸ್.ಪ್ರದೀಪ್, ಕೆಪಿಸಿಸಿ ಸದಸ್ಯ ಸಯ್ಯದ್ ರಫಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮಹಮದ್ ಅಸ್ಗರ್, ಎ.ಎಸ್.ಗುರುಸ್ವಾಮಿ ಮತ್ತಿತರರಿದ್ದರು.

**ಹಲವು ಕೊಡುಗೆಗಳು:** ಶ್ರೀನಿವಾಸ ಪ್ರಸಾದ್ ಕಳೆದ ಡಿಸೆಂಬರ್‌ನಲ್ಲಿ ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ವೇ ನಡೆಸಿ, ತಮ್ಮ ಸಂಸದರ ನಿಧಿಯಿಂದ ಅಂದಾಜು 1.20 ಕೋಟಿ ರೂ. ವೆಚ್ಚದಡಿ 2000ಕ್ಕೂ ಹೆಚ್ಚು ವಿಕಲಚೇತನರಿಗೆ ಉಚಿತ ಸಾಧನ–ಸಲಕರಣೆ ವಿತರಿಸುವ ಮೂಲಕ ಅವರ ಬಾಳಿಗೆ ಆಶಾ ಜ್ಯೋತಿಯಾಗಿದ್ದರು.

ಕ್ಷೇತ್ರಗಳಲ್ಲಿ ಶಾಲೆಯ ಕಟ್ಟಡ, ಕೊಠಡಿ, ಕಾಂಪೌಂಡ್ ನಿರ್ಮಾಣ ಕಾಮಗಾರಿಗಳಿಗೆ ಚಾಲನೆ ನೀಡುವ ಮೂಲಕ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದರು. ಎಲ್ಲಾ ತಾಲೂಕು ಕೇಂದ್ರಗಳು ಸೇರಿದಂತೆ ಗ್ರಾಮೀಣ ಪ್ರದೇಶಗಳಲಿ ಅಂಬೇಡ್ಕರ್ ಸಮುದಾಯ ಭವನ ನಿರ್ಮಾಣವಾಗಲು ಪ್ರಸಾದ್ ಕೊಡುಗೆ ಅಪಾರವಾಗಿದೆ.

**ಆರೋಗ್ಯ ಕ್ಷೇತ್ರಕ್ಕೂ ಅನುದಾನ:** ಕೊವೀಡ್ ಸಂದರ್ಭದಲ್ಲಿ ಜಿಲ್ಲೆಯ ಆರೋಗ್ಯ ಇಲಾಖೆಗೆ ಅಗತ್ಯ ವೈದ್ಯಕೀಯ ಸಲಕರಣೆ ಖರೀದಿಗೆ ಅನುದಾನ ಬಿಡುಗಡೆ ಮಾಡುವ ಮೂಲಕ ಸೋಂಕು ನಿಯಂತ್ರಣಕ್ಕೆ ಶ್ರಮಿಸಿದರು. ಜಿಲ್ಲೆಯ ಹಾಡಿಗಳಲ್ಲಿ ವಾಸಿಸುವ ಜನರಿಗೆ ಆರೋಗ್ಯ ಸೌಲಭ್ಯ ನೀಡಲು ಗೂರ್ಕ್ ವಾಹನ ಖರೀದಿ. ಆಂಬುಲೆನ್ಸ್ ಸೌಲಭ್ಯ ಸೇರಿದಂತೆ ಹಲವು ಕೊಡುಗೆಗಳನ್ನು ಜಿಲ್ಲೆಗೆ ನೀಡಿದರು.

# ಫೆ.26 ಚಾ.ನಗರಕ್ಕೆ ಪ್ರಸಾದ್ ಕೊನೆಯ ಭೇಟಿ



ಚಾಮರಾಜನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಫೆ.26ರಂದು ನಡೆದ ಸುದ್ದಿಗೋಷ್ಠಿಯಲ್ಲಿ ವಿ.ಶ್ರೀನಿವಾಸಪ್ರಸಾದ್ ಮಾತನಾಡಿದರು.

ಚಾಮರಾಜನಗರ, ಏ.29–ಸಂಸದ ವಿ.ಶ್ರೀನಿವಾಸಪ್ರಸಾದ್ ಕಳೆದ ಫೆ.26ರಂದು ಚಾಮರಾಜನಗರ ಜಿಲ್ಲಾ ಕೇಂದ್ರಕ್ಕೆ ಭೇಟಿ ನೀಡಿದ್ದೇ ಕೊನೆಯ ಭೇಟಿ.

ಅಂದು ಅವರು ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಸುದ್ದಿಗೋಷ್ಠಿ ಪತ್ರಕರ್ತರೊಂದಿಗೆ ಆತ್ಮೀಯವಾಗಿ ಮಾತನಾಡಿ, ಚುನಾವಣಾ ರಾಜಕೀಯಕ್ಕೆ ಬಂದು 50 ವರ್ಷ ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ 'ಚುನಾವಣಾ ರಾಜಕೀಯ ಸುವರ್ಣ ಮಹೋತ್ಸವ ಕಾರ್ಯಕ್ರಮಕ್ಕೆ ಆಹ್ವಾನ ಪತ್ರಿಕೆಯನ್ನು ನೀಡಿದ್ದರು. ಅಲ್ಲದೆ, ಅಂದು ಚಾಮರಾಜನಗರ ಕ್ಷೇತ್ರದ ಬಗ್ಗೆಯೂ ಪ್ರೀತಿಪೂರ್ವಕವಾಗಿಯೂ ಮಾತನಾಡಿ, ಸಂಸತ್ ಸದಸ್ಯನಾಗಿ ಐದು ವರ್ಷಗಳ ನನ್ನ ಕೆಲಸ ನನಗೆ ತೃಪ್ತಿ ತಂದಿದೆ ಎಂದು ಹೆಮ್ಮೆಯಿಂದ ತಿಳಿಸಿದರು.

ಸಂಸದರ ಪ್ರದೇಶಾಭಿವೃದ್ಧಿ ನಿಧಿಗೆ 17.5 ಕೋಟಿ ರೂ. ಅನುದಾನ ಬಿಡುಗಡೆಯಾಗಿದ್ದು, ಇದನ್ನು ಸಮರ್ಪಕವಾಗಿ ಬಳಕೆ ಮಾಡಿಕೊಂಡಿದ್ದೇನೆ ಅಂಗವಿಕಲರು, ಹಿರಿಯ ನಾಗರಿಕರಿಗೆ ಅಗತ್ಯ ಸಾಧನ–ಸಲಕರಣೆಗಳನ್ನು ವಿತರಣೆ ಮಾಡಿದ್ದೇನೆ. ಕ್ಷೇತ್ರದಲ್ಲಿ ರಸ್ತೆಗಳ ಅಭಿವೃದ್ಧಿ, ಭವನಗಳ ನಿರ್ಮಾಣ ಸೇರಿದಂತೆ ಅನೇಕ ಕೆಲಸಗಳನ್ನು ಮಾಡಿದ್ದೇನೆ ಎಂದು ಹೇಳಿದರು.

ಲೋಕಸಭೆ ಚುನಾವಣೆಯಲ್ಲಿ ಚಾಮರಾಜನಗರ ಕ್ಷೇತ್ರಕ್ಕೆ ನಾನು ಯಾರ ಹೆಸರನ್ನು ಶಿಫಾರಸು ಮಾಡುವುದಿಲ್ಲ. ನಮ್ಮದ್ದು ರಾಷ್ಟ್ರೀಯ ಪಕ್ಷವಾಗಿದ್ದು, ಅಭ್ಯರ್ಥಿಗಳ ಆಯ್ಕೆಗೂ ಮೊದಲು ಬಿಜೆಪಿ ಸಮೀಕ್ಷೆ ನಡೆಸುತ್ತದೆ. ರಾಜ್ಯದ ವರಿಷ್ಠರು ಹಾಗೂ ಹೈಕಮಾಂಡ್ ಅಭ್ಯರ್ಥಿಯನ್ನು ಆಯ್ಕೆ ಮಾಡುತ್ತದೆ. ಈ ಸಂಬಂಧ ನಾನು ಯಾರನ್ನು ಶಿಫಾರಸು ಮಾಡುವುದಿಲ್ಲ. ಒಂದು ವೇಳೆ ನನ್ನ ಅಭಿಪ್ರಾಯವನ್ನು ಕೇಳಿದರೇ ಅದನ್ನು ಗೌಪ್ಯವಾಗಿ ತಿಳಿಸುತ್ತೇನೆ. ಬಹಿರಂಗಪಡಿಸುವ ಅಗತ್ಯವಿಲ್ಲ ಎಂದು ತಿಳಿಸಿದರು. ಹೀಗೆ ಗಂಟೆಗೂ ಹೆಚ್ಚು ಕಾಲ ಪತ್ರಕರ್ತರೊಂದಿಗೆ ಖುಷಿಯಿಂದ ಮಾತನಾಡಿದ್ದು, ನೆನಪಾಗಿ ಉಳಿದುಕೊಂಡಿದೆ.


# ಪಣ್ಯದಹುಂಡಿಯಲ್ಲಿ ಚಿರತೆ ಸೆರೆ



ಬದನಗುಪ್ಪೆ, ಏ.29–ಚಾಮರಾಜನಗರ ತಾಲೂಕಿನ ಪಣ್ಯದಹುಂಡಿ ಗ್ರಾಮದ ಜಮೀನಿನಲ್ಲಿ ಇರಿಸಲಾಗಿದ್ದ ಬೋನಿಗೆ ಗಂಡು ಚಿರತೆ ಸೆರೆಯಾಗಿದೆ.

ಕೆಲ ವಾರಗಳಿಂದ ಈ ಭಾಗದಲ್ಲಿ ಚಿರತೆ ಜಾನುವಾರುಗಳ ಮೇಲೆ ದಾಳಿ ಮಾಡುತ್ತಿತ್ತು. ಗ್ರಾಮಸ್ಥರು ಚಿರತೆ ಸೆರೆಗೆ ಆಗ್ರಹಿಸಿದ್ದರು. ಬಳಿಕ ಅರಣ್ಯ ಇಲಾಖೆ ಸಿಬ್ಬಂದಿ ಬೋನು ಇರಿಸಿದ್ದರು. ಗ್ರಾಮದ ವಿವಿಧ ಭಾಗಗಳಲ್ಲಿ ಚಿರತೆಯ ಓಡಾಟ ಕಂಡು ಬಂದಿತ್ತು. ಸೆರೆಗಾಗಿ ಬೋನು ಇಟ್ಟಿದ್ದೆವು. ಭಾನುವಾರ ರಾತ್ರಿ ಚಿರತೆ ಬೋನಿಗೆ ಬಿದ್ದಿದೆ. ಇದಕ್ಕೆ ನಾಲ್ಕು ವರ್ಷವಾಗಿರಬಹುದು ಎಂದು ಬಿಆರ್‌ಟಿ ಚಾಮರಾಜನಗರ ಪ್ರಾದೇಶಿಕ ವಲಯ ಅರಣ್ಯಾಧಿಕಾರಿ ಉಮೇಶ್ ಮಾಹಿತಿ ನೀಡಿದರು.

# ಶ್ರೀನಿವಾಸಪ್ರಸಾದ್ ಮೌಲ್ಯಯುತ ರಾಜಕಾರಣಿ



ಚಾಮರಾಜನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ವಿ.ಶ್ರೀನಿವಾಸ ಪ್ರಸಾದ್‌ಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಚಾಮರಾಜನಗರ, ಏ.29–ಸಂಸದ ವಿ.ಶ್ರೀನಿವಾಸಪ್ರಸಾದ್ ಅವರು ಮೌಲ್ಯಯುತ ರಾಜಕಾರಣಿಯಾಗಿದ್ದು, ಬಡವರು, ದಲಿತರು, ಶೋಷಿತರ ಧ್ವನಿಯಾಗಿದ್ದರು ಎಂದು ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಶ್ರದ್ಧಾಂಜಲಿ ಸಭೆಯಲ್ಲಿ ವಿ.ಶ್ರೀನಿವಾಸ ಪ್ರಸಾದ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಶ್ರೀನಿವಾಸಪ್ರಸಾದ್ ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ 6 ಬಾರಿ ಸಂಸದರಾಗಿದ್ದರು. ಜೊತೆಗೆ ಸಚಿವರಾಗಿ ಸಾರ್ವಜನಿಕರ ಸೇವೆ ಸಲ್ಲಿಸಿದ್ದಾರೆ. ಸದಾ ಬಡವರು, ದಲಿತರು, ಶೋಷಿತರ ಪರ ಅಪಾರ ಕಾಳಜಿ ಹೊಂದಿದ ಮಹಾನಾಯಕರು ಎಂದು ಸ್ಮರಿಸಿದರು.

ಸಭೆಯಲ್ಲಿ ಬಿಜೆಪಿ ಜಿಲ್ಲಾ ನಿಕಟಪೂರ್ವ ಅಧ್ಯಕ್ಷ ಆರ್.ಸುಂದರ್, ಪ್ರಧಾನ ಕಾರ್ಯದರ್ಶಿ ಹೊನ್ನೂರು ಮಹದೇವಸ್ವಾಮಿ, ನಗರ ಮಂಡಲ ಅಧ್ಯಕ್ಷ ಶಿವರಾಜು, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸೂರ್ಯಕುಮಾರ್, ಪ್ರಧಾನ ಕಾರ್ಯದರ್ಶಿ ಆನಂದ್ ಭಗೀರಥ್, ಎಸ್‌ಸಿ ಮೋರ್ಚಾ ಜಿಲ್ಲಾಧ್ಯಕ್ಷ ಮೂಡಹಳ್ಳಿ ಮೂರ್ತಿ, ಪ್ರಧಾನ ಕಾರ್ಯದರ್ಶಿ ಮುತ್ತಿಗೆ ಮೂರ್ತಿ, ನಗರ ಮಂಡಲ ಅಧ್ಯಕ್ಷ ಪರಶಿವಯ್ಯ, ರಾಜಪ್ಪ, ಕೂಸಣ್ಣ, ಚೂಡಾ ಮಾಜಿ ಅಧ್ಯಕ್ಷ ಕುಲಗಾಣ ಶಾಂತಮೂರ್ತಿ, ಚಂದ್ರಶೇಖರ್, ವೇಣುಗೋಪಾಲ್, ಬಲವೀರ್‌ಸಿಂಗ್, ಹೈಟೆಕ್ ಶಿವು, ಚಂದ್ರಶೇಖರ್, ಸಿ.ಡಿ.ಪ್ರಕಾಶ್, ಗಿರೀಶ್, ಶಿವಣ್ಣ, ಮಹದೇವಯ್ಯ ಇತರರು ಭಾಗವಹಿಸಿದ್ದರು.



## ಕಡವೆ ಚರ್ಮ ಸಾಗಿಸುತ್ತಿದ್ದ ಇಬ್ಬರ ಬಂಧನ

ಯಳಂದೂರು, ಏ.29–ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಯಳಂದೂರು ವಲಯದ ಕೂಳಿಗುಂಡಿ ಅರಣ್ಯ ಪ್ರದೇಶದಲ್ಲಿ ಕಡವೆ ಚರ್ಮ ಸಾಗಿಸುತ್ತಿದ್ದ ಇಬ್ಬರನ್ನು ಅರಣ್ಯಾಧಿಕಾರಿಗಳು ಬಂಧಿಸಿದ್ದಾರೆ. ಬಿಆರ್ ಹಿಲ್ಸ್‌ನ ಯರಕನಗದ್ದೆ ಗ್ರಾಮದ ಬಸವಣ್ಣ ಹಾಗೂ ಬಂಗ್ಲೆಪೋಡಿನ ಕೇತೇಗೌಡ ಬಂಧಿತರಾಗಿದ್ದು, ಬಂಗ್ಲೆಪೋಡಿನ ಬಂಗೀಜಡೇಗೌಡ ಹಾಗೂ ಕೇತೇಗೌಡ ಪರಾರಿಯಾಗಿದ್ದಾರೆ.

ಈ ನಾಲ್ವರು ಕಡವೆ ಚರ್ಮ ಸಾಗಿಸುತ್ತಿದ್ದ ಮಾಹಿತಿ ಮೇರೆಗೆ ಯಳಂದೂರು ಆರ್‌ಎಫ್‌ಓ ನಾಗೇಂದ್ರ ನಾಯಕರ ನೇತೃತ್ವದಲ್ಲಿ ದಾಳಿ ನಡೆಸಿ ಬಂಧಿಸಿ, ಕಡವೆ ಚರ್ಮ ವಶಪಡಿಸಿಕೊಳ್ಳಲಾಯಿತು. ಬಂಧಿತರನ್ನು ನ್ಯಾಯಂಗ ವಶಕ್ಕೆ ಒಪ್ಪಿಸಲಾಯಿತು.



ಚಾಮರಾಜನಗರದ ರಾಮಸಮುದ್ರದಲ್ಲಿ ಸಂಸದ ವಿ.ಶ್ರೀನಿವಾಸಪ್ರಸಾದ್‌ಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು. ನಗರಸಭಾ ಮಾಜಿ ಸದಸ್ಯ ಬಿ.ನಾಗರಾಜು, ಯಜಮಾನರಾದ ಪಾಪಣ್ಣ, ನಂಜುಂಡ, ಬಸವರಾಜು, ಮಹದೇವ, ಡಿ.ನಂಜಯ್ಯ ಶ್ರೀನಿವಾಸಪ್ರಸಾದ್ ಅಭಿಮಾನಿ ಬಳಗದ ಎನ್.ಪ್ರಸನ್ನ, ಚಿಗುರಿ ಬಂಗಾರು, ರಾಮು, ಶ್ರೀಧರ್, ಮಂಜು ಇದ್ದರು.

# ಪ್ರಜ್ವಲ್ ರೇವಣ್ಣ ವಿದೇಶಕ್ಕೆ ಹಾರುವುದನ್ನು ಕೇಂದ್ರ ಸರ್ಕಾರ ಏಕೆ ತಡೆಯಲಿಲ್ಲ?



**ಶಿವಮೊಗ್ಗ:** ನೂರಾರು ಮಹಿಳೆಯರ ಜೊತೆ ರಾಸಲೀಲೆ ನಡೆಸಿದ ವಿಡಿಯೋಗಳು ಬಹಿರಂಗವಾದ ಬೆನ್ನಲ್ಲೇ ವಿದೇಶಕ್ಕೆ ಹಾರಿರುವ ಜೆಡಿಎಸ್ ಸಂಸದ, ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡರ ಮೊಮ್ಮಗ ಪ್ರಜ್ವಲ್ ರೇವಣ್ಣ ದೇಶ ತೊರೆಯದಂತೆ ತಡೆಯುವಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಏಕೆ ವಿಫಲವಾಯಿತು ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಸೋಮವಾರ ಪ್ರಶ್ನಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜಕುಮಾರ್ ಪರ ಪ್ರಚಾರಕ್ಕಾಗಿ ಇಂದು ಶಿವಮೊಗ್ಗಕ್ಕೆ ಆಗಮಿಸಿದ್ದ ಸಂತೋಷ್ ಲಾಡ್ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಪ್ರಜ್ವಲ್ ರೇವಣ್ಣ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ರಾಜ್ಯ ಸರ್ಕಾರ ಯಾವುದೇ ವಿಳಂಬ ಮಾಡಿಲ್ಲ ಎಂದರು.

ಯಾವುದೇ ಆರೋಪಿಗಳ ವಿರುದ್ಧ ಕ್ರಮ ಕೈಗೊಳ್ಳುವ ಮುನ್ನ ಅವರ ವಿರುದ್ಧ ದೂರು ದಾಖಲಿಸಬೇಕು. ದೂರು ದಾಖಲಾದ ಕ್ಷಣವೇ ಸರ್ಕಾರ ಕ್ರಮ ಕೈಗೊಂಡಿದೆ. ಕೇಂದ್ರ ಸರ್ಕಾರ ಪ್ರಜ್ವಲ್ ವಿರುದ್ಧ ರೆಡ್ ಕಾರ್ನರ್ ನೋಟಿಸ್ ಜಾರಿ ಮಾಡಬಹುದಿತ್ತು. ಏರ್‌ಪೋರ್ಟ್‌ಗಳನ್ನು ಮ್ಯಾನೇಜ್ ಮಾಡ್ತಿರೋದ್ಯಾರು? ಪ್ರಜ್ವಲ್ ದೇಶದಿಂದ ಹಾರುವುದನ್ನು ಕೇಂದ್ರ ಏಕೆ ತಡೆಯಲಿಲ್ಲ? ಆರೋಪಿಯನ್ನು ಬಂಧಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ಎಂಬುದು ನನಗೆ ತಿಳಿದಿಲ್ಲ. ಆದರೆ, ನಮ್ಮ ಸರ್ಕಾರ ಎಸ್‌ಐಟಿ ರಚನೆಯಾಗುತ್ತಿದ್ದಂತೆ ಆರೋಪಿ ವಿರುದ್ಧ ಕ್ರಮ ಕೈಗೊಳ್ಳಲಿದೆ ಎಂದರು.

ಮೋದಿಯವರ ಬಳಿ ಸುಳ್ಳುಗಳ ಸರಮಾಲೆಯೇ ಇದೆ. ದೇಶ ಕಂಡ ಎಲ್ಲ ಪ್ರಧಾನಿಗಳಲ್ಲಿ ಪ್ರತಿ ಬಾರಿಯೂ ಸುಳ್ಳು ಹೇಳುವ ಮೊದಲ ಪ್ರಧಾನಿ ಎಂದರೆ ಅದು ಮೋದಿ. ಮೋದಿಯವರ ಸುಳ್ಳುಗಳು ನಮ್ಮ ಗೆಲುವಿಗೆ ಸಹಾಯ ಮಾಡುತ್ತವೆ ಎಂದು ಸಂತೋಷ್ ಲಾಡ್ ಹೇಳಿದರು.

ಮೋದಿ ಅವರು ಹಿಂದೂಗಳು ಬಹಳ ಅಪಾಯದಲ್ಲಿದ್ದಾರೆ ಎಂದು ಹೇಳುತ್ತಿದ್ದಾರೆ. ಮೋದಿಯವರೇ, ಕಳೆದ 10 ವರ್ಷ ಆಡಳಿತ ನಡೆಸಿದ್ದೀರಿ. ನಿಮ್ಮದೇ ಅವಧಿಯಲ್ಲಿ ಹಿಂದೂಗಳ ಅಪಾಯದಲ್ಲಿದ್ದಾರೆಯೇ ಎಂದು ಲಾಡ್ ಪ್ರಶ್ನಿಸಿದರು.

ನಮ್ಮ ಅವಧಿಯಲ್ಲಿ ಹಿಂದೂಗಳು ಅರಾಮವಾಗಿದ್ದರು. ಈಗ ಮೋದಿ ಅವರು ತಮ್ಮ ಅಭಿವೃದ್ಧಿ ಬಗ್ಗೆ ಮಾತನಾಡದೇ, ಪಾಕಿಸ್ತಾನ, ಅಫ್ಘಾನಿಸ್ತಾನ, ಮುಸಲ್ಮಾನ ಎಂದು ಭಾಷಣ ಮಾಡುತ್ತಿದ್ದಾರೆ. ಮೋದಿ ಅವರು ನಮ್ಮ ಗ್ಯಾರಂಟಿಯನ್ನು ಕಾಪಿ ಮಾಡಿದ್ದಾರೆ ಎಂದರು. ದೇಶದ ಶೇ. 40 ರಷ್ಟು ಸಂಪತ್ತು ಕೇವಲ ಶೇ.1 ರಷ್ಟು ಜನರ ಬಳಿ ಇದೆ. ಇದು ಮೋದಿ ಅವರ ಸಾಧನೆ ಎಂದು ವಾಗ್ದಾಳಿ ನಡೆಸಿದರು.



ಶ್ರೀನಿವಾಸ ಪ್ರಸಾದರ ಅಂತಿಮ ದರ್ಶನಕ್ಕೆ ಸರದಿ ಸಾಲಿನಲ್ಲಿ ನಿಂತಿರುವುದು.

ಒಂದನೇ ಪುಟದಿಂದ

## ಶ್ರೀನಿವಾಸ ಪ್ರಸಾದ್ ಇನ್ನಿಲ್ಲ

ಉದ್ಯಮಿ ಸುಧಾಕರ್ ಎಸ್.ಶೆಟ್ಟಿ, ಮಾಜಿ ಶಾಸಕರಾದ ಅಶ್ವಿನ್‌ಕುಮಾರ್, ಎಂ.ಕೆ.ಸೋಮಶೇಖರ್, ಸಾ.ರಾ. ಮಹೇಶ್ ಸೇರಿದಂತೆ ನೂರಾರು ರಾಜಕೀಯ ಮುಖಂಡರು, ಸಾಹಿತಿಗಳು, ಉದ್ಯಮಿಗಳು ಎನ್‌ಟಿಎಂ ಶಾಲೆಯಲ್ಲಿ ಪ್ರಸಾದ್ ಅವರ ಅಂತಿಮ ದರ್ಶನ ಪಡೆದರು. ಪ್ರಸಾದ್ ಅವರ ಪಾರ್ಥಿವ ಶರೀರ ಎನ್‌ಟಿಎಂ ಶಾಲೆ ತಲುಪುತ್ತಿದ್ದಂತೆಯೇ ಅದಾಗಲೇ ನೆರೆದಿದ್ದ ಅವರ ಅಭಿಮಾನಿಗಳ ಆಕ್ರಂದನ ಮುಗಿಲು ಮುಟ್ಟಿತು. ತಮ್ಮ ನೆಚ್ಚಿನ ನಾಯಕನನ್ನು ಅಂತಿಮವಾಗಿ ಕಣ್ತುಂಬಿಕೊಳ್ಳಲು ಮುಗಿಬಿದ್ದ ಅಭಿಮಾನಿಗಳನ್ನು ನಿಯಂತ್ರಿಸಲು ಪೊಲೀಸರು ಹರಸಾಹಸ ಪಡಬೇಕಾಯಿತು.

ಶ್ರೀನಿವಾಸಪ್ರಸಾದ್ ಪತ್ನಿ ಶ್ರೀಮತಿ ಭಾಗ್ಯಲಕ್ಷ್ಮಿ, ಪುತ್ರಿಯರಾದ ಪ್ರತಿಮಾ, ಪೂರ್ಣಿಮಾ, ಸೋನಂ, ಅಳಿಯಂದಿರಾದ ಐಆರ್‌ಎಸ್ ಅಧಿಕಾರಿ ದೇವರಾಜ್, ನಂಜನಗೂಡು ಮಾಜಿ ಶಾಸಕ ಬಿ. ಹರ್ಷವರ್ಧನ್, ಡಾ. ಮೋಹನ್, ಮೊಮ್ಮಕ್ಕಳು, ಹಿತೈಷಿಗಳು ಹಾಗೂ ಅಪಾರ ಅಭಿಮಾನಿಗಳನ್ನು ಅಗಲಿದ್ದಾರೆ.

**ಅಂತಿಮ ದರ್ಶನ ಪಡೆದ ಇನ್ನಿತರ ಗಣ್ಯರು:** ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ, ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ, ಮಾಜಿ ಎಂಎಲ್‌ಸಿ ಧರ್ಮಸೇನ, ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್, ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿ ಎಸ್.ಪಿ.ಮಂಜುನಾಥ್ ಅಂತಿಮ ದರ್ಶನ ಪಡೆದರು. ಶಾಸಕ ಟಿ.ಎಸ್.ಶ್ರೀವತ್ಸ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಎಂ.ರಾಜೇಂದ್ರ, ನಗರಾಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಮಾಜಿ ಶಾಸಕ ನಿರಂಜನಕುಮಾರ್, ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್, ಬಿಜೆಪಿ ಮುಖಂಡರೂ ಆದ ವಕೀಲ ಅರುಣ್ ಕುಮಾರ್, ಮಾಜಿ ಉಪಮೇಯರ್ ಶೈಲೇಂದ್ರ, ಕಾಂಗ್ರೆಸ್ ಮುಖಂಡ ಹೆಚ್.ವಾಸು, ಮಾಜಿ ಮೇಯರ್ ಪುರುಷೋತ್ತಮ್, ರಂಗಾಯಣ ಮಾಜಿ ನಿರ್ದೇಶಕ ಹೆಚ್.ಜನಾರ್ಧನ್ (ಜನ್ನಿ), ಕಾಂಗ್ರೆಸ್ ಮುಖಂಡ ಹೆಚ್.ಎ.ವೆಂಕಟೇಶ್, ಕಾಂಗ್ರೆಸ್ ಓಬಿಸಿ ವಿಭಾಗದ ನಗರಾಧ್ಯಕ್ಷ ನಾಗೇಶ್ ಇನ್ನಿತರರು ಅಂತಿಮ ದರ್ಶನ ಪಡೆದರು.

## ನಾವಿಬ್ಬರು ಒಟ್ಟಿಗೆ ರಾಜಕಾರಣಕ್ಕೆ ಬಂದವರು

ರಾಜಕಾರಣದಿಂದ ನಿವೃತ್ತರಾಗಿದ್ದರು. ನಾನು ಅವರನ್ನು ಭೇಟಿ ಯಾಗಿದ್ದಾಗ ನಮ್ಮ ಅಭ್ಯರ್ಥಿಗೆ ಸಪೋರ್ಟ್ ಮಾಡುವಂತೆ ಕೇಳಿದ್ದಕ್ಕೆ ನಾನು ಸಕ್ರೀಯ ರಾಜಕಾರಣದಿಂದ ನಿವೃತ್ತನಾಗಿದ್ದೇನೆ. ಯಾರ ಪರವೂ ಪ್ರಚಾರ ಮಾಡುವುದಿಲ್ಲ ಎಂದಿದ್ದರು. ಇವತ್ತು ಅವರು ನಮ್ಮನ್ನು ಅಗಲಿದ್ದಾರೆ. ಅವರ ಸಾವು ಕರ್ನಾಟಕ ರಾಜಕಾರಣಕ್ಕೆ ಬಹುದೊಡ್ಡ ನಷ್ಟ ಎಂದರು. ಶ್ರೀನಿವಾಸ್ ಪ್ರಸಾದ್ ಅವರು, ನಿಮ್ಮನ್ನು ಭೇಟಿಯಾಗಿದ್ದು, ಸಂತೋಷದ ಕ್ಷಣ ಎಂದಿದ್ದರು ಎಂಬುದಕ್ಕೆ ಪ್ರಕ್ರಿಯಿಸಿ, ಅವರು-ನಾನು ಬಹಳ ವರ್ಷಗಳ ಕಾಲ ಭೇಟಿಯಾಗಿರಲಿಲ್ಲ. ನನಗೂ ಅವರನ್ನು ಭೇಟಿಯಾಗಿದ್ದು ಸಂತಸ ತಂದಿತ್ತು ರಾಜಕೀಯದಲ್ಲಿ ಸಂತೋಷದ ಕ್ಷಣ ಎಂಬುದು ಕಡಿಮೆ. ಅವರು-ನಾನು ಜೊತೆಗೆ ರಾಜಕಾರಣ ಮಾಡಿದವರು. ನನ್ನ ಮಂತ್ರಿ ಮಂಡಲದಲ್ಲಿ ಮಂತ್ರಿಯಾಗಿ, ನನ್ನ ಸಹೋದ್ಯೋಗಿಯಾಗಿದ್ದ ಅವರನ್ನು ಕಳೆದುಕೊಂಡಿದ್ದು ದುಃಖವಾಗಿದೆ. ಶುಗರ್ ಇರುವುದರಿಂದ ಕಾಲಿನ ಗಾಯದ ಬಗ್ಗೆ ನಿರ್ಲಕ್ಷ್ಯ ಮಾಡಬೇಡಿ ಎಂದಿದ್ದೆ ಎಂದು ಸ್ಮರಿಸಿದರು.

**ಸ್ಮಾರಕ ನಿರ್ಮಾಣ:** ಶ್ರೀನಿವಾಸ್ ಪ್ರಸಾದ್ ಅವರ ಸ್ಮಾರಕ ನಿರ್ಮಾಣ ಕುರಿತು ಅವರ ಕುಟುಂಬಸ್ಥರು ಕೇಳಿದ್ದಾರ ಎಂಬ ಮಾಧ್ಯಮಗಳ ಪ್ರಶ್ನೆಗೆ, ಯಾರೋ ಒಬ್ಬರು ಕೇಳಿದಂತೆ ಇತ್ತು. ಮೊದಲು ಅಂತ್ಯಕ್ರಿಯೆ ಕಾರ್ಯಗಳು ಮುಗಿಯಲಿ. ನಂತರ ಸ್ಮಾರಕ ಕುರಿತು ಮಾತಾಡೋಣ. ನಾಳೆ(ಏ.30) ಮೈಸೂರು ಮತ್ತು ಚಾ.ನಗರ ಜಿಲ್ಲೆಗೆ ಸಾರ್ವತ್ರಿಕ ರಜೆ ಘೋಷಣೆ ಮಾಡಲಾಗಿದ್ದು, ರಾಜ್ಯಮಟ್ಟದಲ್ಲಿ ಸಕಲ ಗೌರವ ಸಲ್ಲಿಸಲಾಗುವುದು. ಒಬ್ಬ ಸ್ನೇಹಿತನ್ನು ಕಳೆದುಕೊಂಡು ದುಃಖವಾಗಿದೆ. ಅವರ ಆತ್ಮಕ್ಕೆ ಚಿರಶಾಂತಿ ಕರುಣಿಸಲೆಂದು ಪಾರ್ಥನೆ ಮಾಡುತ್ತೇನೆ ಎಂದು ಸಂತಾಪ ಸೂಚಿಸಿದರು.

## ಐವರು ವಿದ್ಯಾರ್ಥಿಗಳು ಜಲಸಮಾಧಿ

ನೇಮಿಸಿದ್ದು, ಅದು ನೆಪ ಮಾತ್ರಕ್ಕೆ ಎಂಬಂತೆ ಇದ್ದು ರಾಜ್ಯ ಸರ್ಕಾರ ಹಾಗೂ ಸ್ಥಳೀಯ ಆಡಳಿತ ಪ್ರವಾಸಕ್ಕೆ ಎಂದು ಬರುವ ಪ್ರವಾಸಿಗರಿಗೆ ಎಚ್ಚರಿಕೆ ನೀಡುವುದರ ಜೊತೆಗೆ ನೀರಿನ ಅಪಾಯದ ಮುನ್ಸೂಚನೆಯ ಬಗ್ಗೆ ನಾಮಫಲಕಗಳನ್ನು ಹಾಕಿ ನಿಯಮ ಮೀರಿದವರಿಗೆ ಕಠಿಣ ಕಾನೂನು ಕ್ರಮ ಕೈಗೊಳ್ಳುವ ಮೂಲಕ ಅಮಾಯಕ ಜೀವಗಳ ರಕ್ಷಣೆಗೆ ಮುಂದಾಗುವಂತೆ ಆಗ್ರಹಿಸಿದ್ದಾರೆ.


## ಮೌಲ್ಯಮಾಪನಕ್ಕೆ ಪರಿಗಣಿಸಲ್ಲ

ಕೆಇಎ ಸರಿಯಾದ ಉತ್ತರಗಳೊಡನೆ ಪಠ್ಯಕ್ರಮದ ಹೊರತಾದ ಪ್ರಶ್ನೆಗಳನ್ನು ತನ್ನ ವೆಬ್‌ಸೈಟ್‌ನಲ್ಲಿ ಬಿಡುಗಡೆ ಮಾಡು ವುದು. ಸಿಇಟಿ ಪರೀಕ್ಷೆಯಲ್ಲಿ ಅಭ್ಯರ್ಥಿ ಗಳ ಅಂಕಗಳನ್ನು ಉಳಿದ ಪ್ರಶ್ನೆಗಳ ಆಧಾರದ ಮೇಲೆ ಮೌಲ್ಯಮಾಪನ ಮಾಡುವುದರಿಂದ ಅಭ್ಯರ್ಥಿಗಳ ಹಿತ ಕಾಪಾಡಲಾಗುವುದು. ಮರು ಪರೀಕ್ಷೆ ಮಾಡಬಾರದೆಂದು ಸರ್ಕಾರ ತೀರ್ಮಾನಿಸಿದೆ, ಮೇ ಮತ್ತು ಜೂನ್ ಮಾಹೆ ಯಲ್ಲಿ ಕಾಮೆಡ್-ಕೆ, ಜೆಇಇ ಮುಖ್ಯ ಪರೀಕ್ಷೆ, ನೀಟ್, ನಾಟಾ ಮತ್ತು ಎರಡನೇ ಪಿಯುಸಿಯ 2 ಮತ್ತು 3ನೇ ಪರೀಕ್ಷೆ ನಡೆಯಲಿವೆ. ಇಂತಹ ಸಂದರ್ಭದಲ್ಲಿ ಸಿಇಟಿಗೆ ಮರುಪರೀಕ್ಷೆ ಸೂಕ್ತವಲ್ಲವೆಂದು ಹಾಗೂ ವಿದ್ಯಾರ್ಥಿಗಳಿಗೆ ಹೊರೆಯಾಗು ವುದನ್ನು ಗಮನಿಸಿ, ಇಂತಹ ತೀರ್ಮಾನ ಕೈಗೊಳ್ಳಲಾಗಿದೆ. ವಿದ್ಯಾರ್ಥಿಗಳು ಮುಂದೆ ಇನ್ನೂ ಅನೇಕ ಪರೀಕ್ಷೆಗಳನ್ನು ಬರೆಯಬೇಕಿರುವುದರಿಂದ ಸಿಇಟಿಗೆ ಒತ್ತು ನೀಡಲು ಸಾಧ್ಯವಿಲ್ಲ. ಪರೀಕ್ಷೆ ನಡೆಸಿದರೆ ವೃತ್ತಿ ಕೋರ್ಸ್‌ಗಳ ಶೈಕ್ಷಣಿಕ ವೇಳಾಪಟ್ಟಿ ವಿಳಂಬವಾಗುತ್ತದೆ, ಇಂತಹ ಘಟನೆಗಳು ಭವಿಷ್ಯದಲ್ಲಿ ಮರು ಕಳಿಸದಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ಪ್ರಶ್ನೆ ಪತ್ರಿಕೆಗಳನ್ನು ಸಿದ್ಧಪಡಿಸಲು ನಿಗದಿತ ಮಾನ ದಂಡಗಳನ್ನು ರೂಪಿಸಬೇಕು. ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ಪಠ್ಯಕ್ರಮದ ಹೊರತಾದ ಪ್ರಶ್ನೆಗಳನ್ನು ಹೊರತುಪಡಿಸಿ ಮೌಲ್ಯಮಾಪನ ನಡೆ ಸಲು ತೀಮಾನಿಸಲಾಗಿದೆ ಎಂದರು.

### ಜೆ.ಎಸ್.ಎಸ್ ಮಹಿಳಾ ಕಾಲೇಜಲ್ಲಿ ಪದವೀಧರರ ದಿನಾಚರಣೆ

# ವಿದ್ಯಾರ್ಥಿಗಳು ಉನ್ನತ ಹುದ್ದೆ ಪಡೆಯುವ ಗುರಿ ಹೊಂದಿರಬೇಕು

### ವಾಣಿಜ್ಯ ತೆರಿಗೆ ಇಲಾಖೆ ಆಯುಕ್ತೆ ಸಿ.ಶಿಖಾ ಸಲಹೆ



ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಸೋಮವಾರ ನಡೆದ ಕಾಲೇಜಿನ 16ನೇ ಪದವೀಧರರ ದಿನಾಚರಣೆಯಲ್ಲಿ ನೂತನ ಪದವೀಧರರಿಗೆ ವಾಣಿಜ್ಯ ತೆರಿಗೆಗಳ ಇಲಾಖೆಯ ಆಯುಕ್ತೆ ಸಿ. ಶಿಖಾ ಪ್ರಮಾಣ ಪತ್ರ ನೀಡಿದರು.

ಮೈಸೂರು,ಏ.29(ಎಂಟಿವೈ)- ಎಲ್ಲಾ ವೃತ್ತಿಗಳು ತನ್ನದೇ ಆದ ಶ್ರೇಷ್ಠತೆ ಹೊಂದಿದ್ದರೂ, ವಿದ್ಯಾರ್ಥಿಗಳು ಉನ್ನತ ಹುದ್ದೆ ಪಡೆಯುವ ಗುರಿಯೊಂದಿಗೆ ಕಠಿಣ ಪರಿಶ್ರಮದೊಂದಿಗೆ ಓದಬೇಕು ಎಂದು ವಾಣಿಜ್ಯ ತೆರಿಗೆಗಳ ಇಲಾಖೆಯ ಆಯುಕ್ತೆ ಸಿ. ಶಿಖಾ ಸಲಹೆ ನೀಡಿದ್ದಾರೆ.

ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಸೋಮವಾರ ನಡೆದ ಕಾಲೇಜಿನ 16ನೇ ಪದವೀಧರರ ದಿನಾಚರಣೆಯಲ್ಲಿ ಮಾತನಾಡಿದ ಅವರು, ಯಾವುದೇ ತಂತ್ರಜ್ಞಾನ ಬಂದರು ಅದನ್ನು ನಿರ್ವಹಿಸಲು ಮಾನವ ಅತ್ಯಗತ್ಯ. ಆಧುನಿಕ ತಂತ್ರಜ್ಞಾನ ಬಂದರು ಯಾರೂ ಕೆಲಸ ಕಳೆದುಕೊಳ್ಳುವುದಿಲ್ಲ. ಹೀಗಾಗಿ, ಕೌಶಲ್ಯವನ್ನು ಕಾಲ ಕಾಲಕ್ಕೆ ಅಪ್ಡೇಟ್ ಮಾಡಿಕೊಳ್ಳುವುದು ಅಗತ್ಯ. 17 ವರ್ಷಗಳ ಹಿಂದೆ ಎಲ್ಲರ ಬಳಿ ಮೊಬೈಲ್ ಇರಲಿಲ್ಲ. ಈಗ ಎಲ್ಲರ ಬಳಿಯೂ ಮೊಬೈಲ್ ಇದೆ. ಈ ಹಿಂದಿನ 2 ಸಾವಿರ ವರ್ಷಗಳಲ್ಲಿ ಕಳೆದ 17 ವರ್ಷಗಳಲ್ಲಿ ಮಾತ್ರ ತಂತ್ರಜ್ಞಾನ ಸಾಕಷ್ಟು ಅಭಿವೃದ್ಧಿ ಹೊಂದಿದೆ ಎಂದು ಅಭಿಪ್ರಾಯಪಟ್ಟರು.

ಯಾವುದೇ ಕೆಲಸ ಹೆಚ್ಚೂ ಅಲ್ಲ, ಕಡಿಮೆಯೂ ಅಲ್ಲ. ಎಲ್ಲಾ ಕೆಲಸಗಳು ಶ್ರೇಷ್ಠ. ಆದರೆ, ನಿಮ್ಮ ಗುರಿ ಉನ್ನತ ಹುದ್ದೆಗಳತ್ತ ಇರಬೇಕು. ಅದಕ್ಕಾಗಿ ಕಠಿಣ ಪರಿಶ್ರಮ ಅಗತ್ಯ. ನೀವು ಒಬ್ಬರು ಕೆಲಸ ತೆಗೆದುಕೊಂಡರೇ ಆ ಸಂಬಳದಿಂದ ನಿಮ್ಮ ಕುಟುಂಬ ಜೀವನ ನಡೆಸಬಹುದು. ಆದರೆ, ನೀವು ಸ್ಟಾರ್ಟ್ ಅಪ್, ಉದ್ಯಮಿಗಳಾದರೇ ಒಂದಷ್ಟು ಜನರಿಗೆ ಕೆಲಸ ನೀಡಬಹುದು. ಅದು ಅವರ ಕುಟುಂಬಗಳು ಜೀವನ ನಡೆಸಲು ಅನುಕೂಲವಾಗುತ್ತದೆ. ಹೀಗಾಗಿ, ನಿಮ್ಮ ಗುರಿ ಉನ್ನತವಾಗಿರಬೇಕು. ವೃತ್ತಿಯೊಂದಿಗೆ ಕುಟುಂಬ ಸದಸ್ಯರೊಂದಿಗೆ ಸಮಯ ವ್ಯಯಿಸಬೇಕು. ಯಾರೋ ಟೀಕೆ ಮಾಡುತ್ತಾರೆಂದು ಭಯ ಪಡಬೇಡಿ. ಟೈಮ್ ಟೇಬಲ್ ಹಾಕಿಕೊಂಡು ಯಾವುದೇ ಕೆಲಸ ಮಾಡಿದರೂ ಅದರಲ್ಲಿ ಗಮನ ಇಟ್ಟು ಮಾಡಬೇಕು ಎಂದು ಅವರು ಸಲಹೆ ನೀಡಿದರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ. ಬೆಟಸೂರಮಠ ಪ್ರತಿಜ್ಞಾ ವಿಧಿ ಬೋಧಿಸಿದರು. ಪದವೀಧರರಾದ ಎಸ್.ಯು. ಛಂದೋಶ್ರೀ, ಆರ್. ಶಾಂಭವಿ, ಸೌಜನ್ಯ ಎಸ್. ಗಂಗಾವತಿ ಅವರು ತಮ್ಮ ಅನಿಸಿಕೆ ಹಂಚಿಕೊಂಡರು. ಪೋಷಕರಾದ ಡಾ.ಎಲ್. ನಂಜುಂಡಸ್ವಾಮಿ, ಎನ್.ಸಿ. ನಾಗರಾಜು ಅವರು ತಮ್ಮ ಅನಿಸಿಕೆ ಹಂಚಿಕೊಂಡರು.

**649 ವಿದ್ಯಾರ್ಥಿನಿಯರಿಗೆ ಪದವಿ ಪ್ರದಾನ:** 2022- 23ರ ಶೈಕ್ಷಣಿಕ ವರ್ಷದಲ್ಲಿ 649 ವಿದ್ಯಾರ್ಥಿನಿಯರು ಪದವಿ ಪಡೆದರು. 329 ವಿದ್ಯಾರ್ಥಿನಿಯರು ಅತ್ಯುನ್ನತ ಶ್ರೇಣಿ, 221 ವಿದ್ಯಾರ್ಥಿನಿಯರು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಸ್ನಾತಕೋತ್ತರ ವಿಭಾಗದಲ್ಲಿ 14 ವಿದ್ಯಾರ್ಥಿನಿಯರು ಅತ್ಯುನ್ನತ ಶ್ರೇಣಿ, 85 ವಿದ್ಯಾರ್ಥಿನಿಯರು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ.

**21 ವಿದ್ಯಾರ್ಥಿನಿಯರು ಪದಕ ಮತ್ತು ನಗದು ಬಹುಮಾನ:** ಕಾರ್ಯಕ್ರಮದಲ್ಲಿ ಬಿಎ ವಿಭಾಗದಲ್ಲಿ ಎನ್. ಲಕ್ಷ್ಮಿ, ಎಂ.ಕೆ. ತನ್ಮಯಿ, ಕೆ. ಪಲ್ಲವಿ, ಬಿಎಸ್ಸಿ ವಿಭಾಗದ ಪಿ.ಆರ್. ಲಾವಣ್ಯ, ಎಂ. ರಂಜಿತಾ, ಕೆ. ಮೇಘಾ, ಬಿ.ಕಾಂನಲ್ಲಿ ಪಿ. ಕವನಾ, ಎಸ್.ಪಿ. ಲಿಷಾ ನಂದಿನಿ, ಎಸ್.ಯು, ಛಂದೋಶ್ರೀ, ಬಿಬಿಎಯಲ್ಲಿ ಆರ್. ಲಾವಣ್ಯ, ಕೆ.ಎ. ನಯನ, ಎ.ಎಸ್. ಸರಸ್ವತಿ, ಬಿಸಿಎ ವಿಭಾಗದಲ್ಲಿ ಎಸ್. ಅನುಷಾ, ವಿ.ಪಿ. ಸುಚಿತ್ರಾ, ಎಂ. ಅನನ್ಯ ಅವರು ಕ್ರಮವಾಗಿ ಮೊದಲ ಮೂರು ಸ್ಥಾನ ಪಡೆದರು.

ಸ್ನಾತಕೋತ್ತರ ವಿಭಾಗದಲ್ಲಿ ಎಂಎ (ಅರ್ಥಶಾಸ್ತ್ರ) ಅಂಜನಾ, ಎ.ಎಸ್. ಅನುಪಮ, ಎಂ.ಕಾಂನಲ್ಲಿ ಬಿ. ಹರ್ಷಿತಾ, ಸಿ.ಎಂ. ಭವ್ಯ, ಎಂಎಸ್ಸಿ (ರಸಾಯನಶಾಸ್ತ್ರ)ದಲ್ಲಿ ಎಂ. ವರ್ಷಾ ಮತ್ತು ಸೌಜನ್ಯ ಎಸ್. ಗಂಗಾವತಿ ಅವರು ಕ್ರಮವಾಗಿ ಮೊದಲ ಎರಡು ಸ್ಥಾನ ಪಡೆದರು.

ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದ ಕಾರ್ಯಕ್ರಮದಲ್ಲಿ ಯುಎಸ್‌ಎ ಸಿಪಿಎ ಶಾಲಿನಿ ಗುಪ್ತ, ಅನುಪಮ ವಸಿಷ್ಠ ಇದ್ದರು. ಎಸ್. ವೈಷ್ಣವಿ ಮತ್ತು ವೃಂದ ಪ್ರಾರ್ಥಿಸಿದರು. ಕಾಲೇಜಿನ ಪ್ರಾಂಶುಪಾಲೆ ಡಾ.ಎಂ. ಪೂರ್ಣಿಮಾ ಸ್ವಾಗತಿಸಿದರು. ಡೀನ್ ಡಾ. ರೇಚಣ್ಣ ವಂದಿಸಿದರು. ಜೆ. ಪುಷ್ಪಲತಾ ನಿರೂಪಿಸಿದರು.

# ಯುವಕನ ಕಾರಿನೊಂದಿಗೆ ಅಪಹರಿಸಿ ಚಿನ್ನಾಭರಣ, ನಗದು ದೋಚಿದ ಖದೀಮರ ತಂಡ

- ತಂದೆ-ತಾಯಿ ಕರೆದೊಯ್ಯಲು ರೈಲು ನಿಲ್ದಾಣಕ್ಕೆ ಹೋಗುತ್ತಿದ್ದ ಯುವಕನ ಸಿನಿಮೀಯ ಅಪಹರಣ
- ರಾತ್ರಿಯೆಲ್ಲಾ ಸತ್ತಾಯಿಸಿ ಮುಂಜಾನೆ ಬಿಟ್ಟು ಕಳಿಸಿದ ಸುಲಿಗೆಕೋರರು

ಮೈಸೂರು, ಏ.29- ತಡರಾತ್ರಿ ಕಾರು ಅಡ್ಡಗಟ್ಟಿ ಅದೇ ಕಾರಿನಲ್ಲಿ ಬೇರೊಂದು ಜಾಗಕ್ಕೆ ಕರೆದೊಯ್ದು ಯುವಕನ ದೋಚಿ, ಮುಂಜಾನೆ ಬಿಟ್ಟು ಕಳುಹಿಸಿರುವ ಘಟನೆ ಮೈಸೂರಿನಲ್ಲಿ ನಡೆದಿದೆ.

ಇಲ್ಲಿನ ಸಿದ್ಧಾರ್ಥನಗರ ನಿವಾಸಿ ಚಿರಾಗ್ ಜೈನ್(23) ಶನಿವಾರ ತಡರಾತ್ರಿ ರೈಲ್ವೆ ನಿಲ್ದಾಣಕ್ಕೆ ಹೋಗುವಾಗ ಈ ಘಟನೆ ನಡೆದಿದ್ದು, ಒಟ್ಟು 38 ಗ್ರಾಂ ತೂಕದ 2 ಚಿನ್ನದ ಚೈನ್, ಮೊಬೈಲ್ ಹಾಗೂ 2 ಸಾವಿರ ರೂ. ನಗದನ್ನು ದೋಚಲಾಗಿದೆ.

ರಾಜಸ್ತಾನದಿಂದ ಅಜ್ಮೀರ್ ಎಕ್ಸ್‌ಪ್ರೆಸ್‌ನಲ್ಲಿ ಬಂದಿದ್ದ ತಂದೆ-ತಾಯಿಯನ್ನು ಕರೆದುಕೊಂಡು ಹೋಗಲು ಹೊಂಡೈ ಐ-10 ಕಾರಿನಲ್ಲಿ(ಕೆಎ-51, ಪಿ.6075) ಶನಿವಾರ ತಡರಾತ್ರಿ 2.30ರ ಸಮಯದಲ್ಲಿ ರೈಲ್ವೆ ನಿಲ್ದಾಣದ ಹಿಂಭಾಗದ ಗೇಟ್‌ಗೆ ಹೋಗುತ್ತಿದ್ದಾಗ ವಾಣಿ ವಿಲಾಸ ವಾಟರ್ ವರ್ಕ್ಸ್ ಬಳಿ ಆಕ್ಸೆಸ್ ಸ್ಕೂಟರ್‌ನಲ್ಲಿ ನಿಂತಿದ್ದ ಮೂವರು ಅಡ್ಡಗಟ್ಟಿ ನಿಲ್ಲಿಸಿದ್ದಾರೆ. ಬಳಿಕ ಕಾರಿಗೆ ಕೈಯಿಂದ ಬಡಿದು ಹೆದರಿಸಿ, ಚಿರಾಗ್‌ನನ್ನು ಬಲವಂತವಾಗಿ ಕಾರಿನಿಂದ ಇಳಿಸಿದ್ದಾರೆ.


ಆ ವೇಳೆ ಮೂವರಲ್ಲಿ ಒಬ್ಬ ಕೀ ಕಿತ್ತುಕೊಂಡು ತಾನೇ ಡ್ರೈವಿಂಗ್ ಸೀಟ್‌ನಲ್ಲಿ ಕುಳಿತು, ಚಿರಾಗ್‌ನನ್ನು ಪಕ್ಕದ ಸೀಟ್‌ನಲ್ಲಿ ಕೂರಿಸಿಕೊಂಡು ವೇಗವಾಗಿ ಕಾಳಿದಾಸ ರಸ್ತೆ ಮೂಲಕ ಹುಣಸೂರು ಮುಖ್ಯರಸ್ತೆಯಲ್ಲಿರುವ ಯಶಸ್ವಿನಿ ಕಲ್ಯಾಣ ಮಂಟಪದ ಹಿಂಭಾಗ ಪೊದೆಗಳಿರುವ ಜಾಗದಲ್ಲಿ ನಿಲ್ಲಿಸಿದ್ದಾನೆ. ಸ್ಕೂಟರ್‌ನಲ್ಲಿ ಹಿಂಬಾಲಿಸಿಕೊಂಡು ಬಂದ ಇನ್ನಿಬ್ಬರೂ ಸೇರಿಕೊಂಡು ಹೆದರಿಸಿ, ಚಿನ್ನದ ಸರಗಳನ್ನು ಕಸಿದು ಕೊಂಡು, ಪರ್ಸ್‌ನಲ್ಲಿದ್ದ 2 ಸಾವಿರ ಕಿತ್ತು ಕೊಂಡಿದ್ದಾರೆ. ಚಿರಾಗ್ ತಂದೆ ಪದೇ ಪದೇ ಫೋನ್ ಮಾಡುತ್ತಿದ್ದ ಕಾರಣ ಮೊಬೈಲ್ ಕಸಿದುಕೊಂಡು ನಿಮ್ಮ ಮಗನನ್ನು ಕರೆದು ಕೊಂಡು ಬಂದಿದ್ದೇವೆ ಎಂದು ಬೆದರಿಸಿ, ಇತ್ತ ಚಿರಾಗ್‌ನಿಂದ ಮೊಬೈಲ್ ಪಾಸ್ ವರ್ಡ್ ಹಾಗೂ ಫೋನ್‌ಪೇ ಪಾಸ್‌ವರ್ಡ್ ಪಡೆದುಕೊಂಡಿದ್ದಾರೆ. ಮುಂಜಾನೆ 5.50 ರವರೆಗೂ ಕಾರಿನಲ್ಲೇ ಕೂರಿಸಿಕೊಂಡು ನಂತರ ಕೀ ಕೊಟ್ಟು ಬಿಟ್ಟು ಕಳುಹಿಸಿದ್ದಾರೆ.

ಈ ಬಗ್ಗೆ ಚಿರಾಗ್ ಜೈನ್ ನೀಡಿರುವ ದೂರಿನ ಮೇರೆಗೆ ವಿವಿ ಪುರಂ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ.

### ನಾಳೆಯಿಂದ ವೃದ್ಧಾಶ್ರಮ ಕಾರ್ಯಾರಂಭ

ಮೈಸೂರು,ಏ.29(ಪಿಎಂ)- ಮೈಸೂರಿನ ಶ್ರೀ ಕಾವೇರಿ ಕೊಡಗು ಮಹಿಳಾ ಸಂಘದ ವತಿಯಿಂದ ನಗರದ ಲಿಂಗಾಂಬುದಿ ಪಾಳ್ಯದ ಶಕ್ತಿ ಬಡಾವಣೆಯಲ್ಲಿ (ರಿಂಗ್ ರಸ್ತೆ ಸಮೀಪ) ನೂತನವಾಗಿ ನಿರ್ಮಿಸಿರುವ ವೃದ್ಧಾಶ್ರಮವು ಮೇ 1ರಿಂದ ಕಾರ್ಯಾರಂಭ ಮಾಡಲಿದೆ. 60 ವರ್ಷಕ್ಕಿಂತ ಮೇಲ್ಪಟ್ಟು, ನೈಜವಾಗಿ ಆಶ್ರಯದ ಅಗತ್ಯವಿರುವ ಹಿರಿಯ ನಾಗರಿಕರು ಮೊ.ಸಂ. 63606 17467 ಅನ್ನು ಸಂಪರ್ಕಿಸಬಹುದು ಎಂದು ಸಂಘದ ಪ್ರಕಟಣೆ ತಿಳಿಸಿದೆ.

# ರಾಜ್ಯದ 18 ಜಿಲ್ಲೆಗಳಿಗೆ ಬಿಸಿ ಗಾಳಿ ಎಚ್ಚರಿಕೆ



**ಬೆಂಗಳೂರು:** ರಾಜ್ಯದಲ್ಲಿ ದಿನೇ ದಿನೆ ಬಿಸಿಲಿನ ತೀವ್ರತೆ ಹೆಚ್ಚುತ್ತಿದೆ. ರಾಜಧಾನಿ ಬೆಂಗಳೂರಿನಲ್ಲಿ 38 ಡಿಗ್ರಿ ಸೆಲ್ಸಿಯಸ್ ಗರಿಷ್ಠ ತಾಪಮಾನವಿದ್ದು, ಇದು ಸಾರ್ವಕಾಲಿಕ ದಾಖಲೆಯಾಗಿದೆ ಎಂದು ಹವಾಮಾನ ತಜ್ಞರು ತಿಳಿಸಿದ್ದಾರೆ. ಈ ಬೆನ್ನಲ್ಲೇ 18 ಜಿಲ್ಲೆಗಳಿಗೆ ಮುಂದಿನ 4 ದಿನಗಳ ಕಾಲ ಹವಾಮಾನ ಇಲಾಖೆ ಹೀಟ್ ವೇವ್ ಎಚ್ಚರಿಕೆ ನೀಡಿದೆ.

ಮೇ 3 ರವರೆಗೆ ಬೀದರ್, ಕಲಬುರಗಿ, ವಿಜಯಪುರ, ಯಾದಗಿರಿ, ರಾಯಚೂರು, ಬಾಗಲಕೋಟೆ, ಬೆಳಗಾವಿ, ಗದಗ, ಹಾವೇರಿ, ಕೊಪ್ಪಳ, ಬಳ್ಳಾರಿ, ವಿಜಯನಗರ, ದಾವಣಗೆರೆ, ಚಿತ್ರದುರ್ಗ, ತುಮಕೂರು, ಕೋಲಾರ, ಮಂಡ್ಯ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಶಾಖದ ಅಲೆಗಳು ಹೆಚ್ಚಾಗುವ ಸಾಧ್ಯತೆ ಇದೆ. ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಬಿಸಿ ಮತ್ತು ಆರ್ದ್ರತೆಯ ಪರಿಸ್ಥಿತಿಗಳು ಮೇಲುಗೈ ಸಾಧಿಸುವ ಸಾಧ್ಯತೆ ಇದೆ ಎಂದು ಮಾಹಿತಿ ನೀಡಿದೆ.

ಮುಂದಿನ 5 ದಿನಗಳವರೆಗೆ ರಾಜ್ಯಾದ್ಯಂತ ಗರಿಷ್ಠ ತಾಪಮಾನದಲ್ಲಿ ಯಾವುದೇ ದೊಡ್ಡ ಬದಲಾವಣೆ ಇರುವುದಿಲ್ಲ. ಬೆಂಗಳೂರು ನಗರದಲ್ಲಿ ಮುಖ್ಯವಾಗಿ ನಿರ್ಮಲ ಆಕಾಶವಿರಲಿದೆ. ಗರಿಷ್ಠ ಮತ್ತು ಕನಿಷ್ಠ ತಾಪಮಾನವು ಕ್ರಮವಾಗಿ 37 ಡಿಗ್ರಿ ಮತ್ತು 23 ಡಿಗ್ರಿ ಇರಲಿದೆ ಎಂದು ತಿಳಿಸಿದೆ.

**ಹೀಟ್ ಸ್ಟ್ರೋಕ್‌ಗೆ ಒಳಗಾದರೆ ಏನು ಮಾಡಬೇಕು:** ಸ್ಟ್ರೋಕ್‌ಗೆ ಒಳಗಾದ ವ್ಯಕ್ತಿಯನ್ನು ತಂಪಾದ ಸ್ಥಳದಲ್ಲಿ, ನೆರಳಿನ ಕೆಳಗೆ ಕೂರಿಸಿ. ಒದ್ದೆ ಬಟ್ಟೆಯಿಂದ ಒರೆಸಿ. ಆಗಾಗ ದೇಹವನ್ನು ತೊಳೆಯಿರಿ. ತಲೆಯ ಮೇಲೆ ಸಾಮಾನ್ಯ ತಾಪಮಾನದ ನೀರು ಸುರಿಯಿರಿ. ದೇಹದ ಉಷ್ಣತೆಯನ್ನು ಕಡಿಮೆ ಮಾಡುವುದು ಇಲ್ಲಿ ಮುಖ್ಯ ವಿಚಾರ. ಕುಡಿಯಲು ಓ.ಆರ್.ಎಸ್ ಅಥವಾ ನಿಂಬೆ ಶರಬತ್ ಅಥವಾ ದೇಹವನ್ನು ಪುನರ್ಜಲೀಕರಣ ಗೊಳಿಸಲು ಉಪಯುಕ್ತವಾದ ಯಾವುದನ್ನಾದರೂ ನೀಡಬೇಕು. ಸ್ಟ್ರೋಕ್ ಆಗಿ ಮೂರ್ಛೆ ಹೊಂದಿದರೆ ತಕ್ಷಣ ವ್ಯಕ್ತಿಯನ್ನು ಹತ್ತಿರದ ಆರೋಗ್ಯ ಕೇಂದ್ರಕ್ಕೆ ಕರೆದುಕೊಂಡು ಹೋಗಬೇಕು. ಇಲ್ಲದಿದ್ದರೆ ಶಾಖದ ಹೊಡೆತಗಳು ಮಾರಣಾಂತಿಕವಾಗಬಹುದು.

ರೈತರು, ಕೃಷಿ ಕಾರ್ಮಿಕರು ಹೊಲದಲ್ಲಿ ಕೆಲಸ ಮಾಡುತ್ತಿದ್ದರೆ, ಟೋಪಿ ಅಥವಾ ಛತ್ರಿ ಬಳಸಿ ಮತ್ತು ನಿಮ್ಮ ತಲೆ, ಕುತ್ತಿಗೆ, ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಬಳಸಬೇಕು. ಜನರು ಪ್ರಯಾಣಿಸುವಾಗ ಕಡ್ಡಾಯವಾಗಿ ನೀರನ್ನು ತೆಗೆದುಕೊಂಡು ಹೋಗಬೇಕು. ಹೊರಗಿನ ತಾಪಮಾನ ಹೆಚ್ಚಿರುವಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಬೇಕು ಎಂದು ಹವಾಮಾನ ಇಲಾಖೆ ಹೇಳಿದೆ.

# ಚಿತ್ರದುರ್ಗ ನ್ಯಾಯಾಲಯಕ್ಕೆ ಶರಣಾದ ಮುರುಘಾ ಶ್ರೀ

### ನ್ಯಾಯಾಂಗ ಬಂಧನಕ್ಕೆ ಕೋರ್ಟ್ ಆದೇಶ



**ಚಿತ್ರದುರ್ಗ:** ಇಬ್ಬರು ಅಪ್ರಾಪ್ತ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಎದುರಿಸುತ್ತಿರುವ ಚಿತ್ರದುರ್ಗದ ಮುರುಘಾ ಮಠದ ಡಾ. ಶಿವಮೂರ್ತಿ ಶರಣರು ಸೋಮವಾರ ಮತ್ತೆ ಜೈಲು ಪಾಲಾಗಿದ್ದಾರೆ.

ಪೋಕ್ಸೋ ಪ್ರಕರಣದಲ್ಲಿ ಮುರುಘಾ ಶ್ರೀಗೆ ಹೈಕೋರ್ಟ್ ನೀಡಿದ್ದ ಜಾಮೀನನ್ನು ಸುಪ್ರೀಂಕೋರ್ಟ್ ಕಳೆದ ಮಂಗಳವಾರ ರದ್ದು ಮಾಡಿತ್ತು ಮತ್ತು ಒಂದು ವಾರದಲ್ಲಿ ನ್ಯಾಯಾಂಗ ಬಂಧನಕ್ಕೆ ತೆರಳುವಂತೆ ಆರೋಪಿಗೆ ಸೂಚಿಸಿತ್ತು.

ಸುಪ್ರೀಂಕೋರ್ಟ್ ಆದೇಶದಂತೆ ಮುರುಘಾ ಶ್ರೀ ಇಂದು ಚಿತ್ರದುರ್ಗದ 1ನೇ ಹೆಚ್ಚುವರಿ ಸೆಷನ್ಸ್ ಕೋರ್ಟ್‌ಗೆ ಶರಣಾದರು. ಆರೋಪಿ ಶ್ರೀಗಳನ್ನು ಕೋರ್ಟ್ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದು, ಮೇ 27ಕ್ಕೆ ಮುಂದಿನ ವಿಚಾರಣೆ ನಿಗದಿಗೊಳಿಸಿ ಆದೇಶ ಹೊರಡಿಸಿದೆ. 2022 ಆಗಸ್ಟ್ 31 ರಂದು ಇಬ್ಬರು ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಮುರುಘಾ ಶ್ರೀಗಳ ವಿರುದ್ಧ ಪ್ರಕರಣ ದಾಖಲಾಗಿತ್ತು. ಸೆಪ್ಟೆಂಬರ್ 1ರಂದು ಶ್ರೀಗಳ ಬಂಧನವಾಗಿತ್ತು. ಸುಮಾರು 14 ತಿಂಗಳ ಕಾಲ ಜೈಲಿನಲ್ಲಿದ್ದ, ಶ್ರೀಗಳು 2023 ನವೆಂಬರ್ 16ರಂದು ಷರತ್ತು ಬದ್ಧ ಜಾಮೀನಿನ ಮೇಲೆ ಹೊರಗೆ ಬಂದಿದ್ದರು.

### ಅಮಿತ್ ಶಾ ವಿಡಿಯೋ ತಿರುಚಿದ ಪ್ರಕರಣ

# ದೆಹಲಿ ಪೊಲೀಸರಿಂದ ತೆಲಂಗಾಣ ಸಿಎಂ ರೇವಂತ್ ರೆಡ್ಡಿಗೆ ಸಮನ್ಸ್



ನವದೆಹಲಿ: ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಭಾಷಣದ ತಿರುಚಿದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವುದಕ್ಕೆ ಸಂಬಂಧಿಸಿದಂತೆ ಮೇ 1ರಂದು ವಿಚಾರಣೆಗೆ ಹಾಜರಾಗುವಂತೆ ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಅವರಿಗೆ ದೆಹಲಿ ಪೊಲೀಸರು ಸಮನ್ಸ್ ನೀಡಿದ್ದಾರೆ ಎಂದು ಅಧಿಕೃತ ಮೂಲಗಳು ಸೋಮವಾರ ತಿಳಿಸಿವೆ.

ಮೂಲಗಳ ಪ್ರಕಾರ, ಎಕ್ಸ್‌ನಲ್ಲಿ ವಿಡಿಯೋ ಪೋಸ್ಟ್ ಮಾಡಿದ ತೆಲಂಗಾಣ ಕಾಂಗ್ರೆಸ್ ಮುಖ್ಯಸ್ಥ ರೇವಂತ್ ರೆಡ್ಡಿ ಸೇರಿದಂತೆ ಐವರಿಗೆ ಪೊಲೀಸರು ನೋಟಿಸ್ ಜಾರಿ ಮಾಡಿದ್ದಾರೆ. ಎಕ್ಸ್‌ನಲ್ಲಿ ನಕಲಿ ವೀಡಿಯೊವನ್ನು ಪೋಸ್ಟ್ ಮಾಡಲು ಬಳಸಲಾದ ಮೊಬೈಲ್ ಫೋನ್‌ನೊಂದಿಗೆ ಹಾಜರಾಗುವಂತೆ ತೆಲಂಗಾಣ ಸಿಎಂಗೆ ಸೂಚಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಗೃಹ ಸಚಿವಾಲಯದ ಅಧೀನದಲ್ಲಿರುವ ಭಾರತೀಯ ಸೈಬರ್ ಅಪರಾಧ ಸಮನ್ವಯ ಕೇಂದ್ರ, ಅಮಿತ್ ಶಾ ಅವರ ತಿರುಚಿದ ವಿಡಿಯೋದ ಬಗ್ಗೆ ದೂರು ದಾಖಲಿಸಿದ ನಂತರ ದೆಹಲಿ ಪೊಲೀಸರ ವಿಶೇಷ ಘಟಕ ಭಾನುವಾರ ಎಫ್‌ಐಆರ್ ದಾಖಲಿಸಿದೆ. ಇದಕ್ಕೂ ಮುನ್ನ ಬಿಜೆಪಿ ಐಟಿ ವಿಭಾಗದ ಮುಖ್ಯಸ್ಥ ಅಮಿತ್ ಮಾಳವಿಯಾ ಅವರು, ತೆಲಂಗಾಣ ಕಾಂಗ್ರೆಸ್ ಘಟಕವು ಅಮಿತ್ ಶಾ ಅವರ ತಿರುಚಿದ ವಿಡಿಯೋ ಪ್ರಸಾರ ಮಾಡುತ್ತಿದೆ ಎಂದು ಆರೋಪಿಸಿದ್ದರು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ಮೀಸಲಾತಿಯನ್ನು ರದ್ದುಪಡಿಸಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿಕೆದ್ದಾರೆ ಎನ್ನಲಾದ ನಕಲಿ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು.

# ಇರಿತಕ್ಕೊಳಗಾಗಿದ್ದ ಯುವಕ ಸಾವು: ನಾಲ್ವರು ವಶಕ್ಕೆ

ಮೈಸೂರು,ಏ.29(ಎಸ್‌ಪಿಎನ್)- ಹಳೇ ದ್ವೇಷ ಹಿನ್ನೆಲೆಯಲ್ಲಿ ಭಾನುವಾರ ಮಧ್ಯಾಹ್ನ ಇರಿತಕ್ಕೊಳಗಾಗಿದ್ದ 24 ವರ್ಷದ ಯುವಕ ಚಿಕಿತ್ಸೆ ಫಲಕಾರಿಯಾಗದೇ ಸೋಮವಾರ ಸಾವನ್ನಪ್ಪಿದ್ದಾನೆ. ಈ ಪ್ರಕರಣದ ನಾಲ್ವರು ಆರೋಪಿಗಳನ್ನು ಕೃಷ್ಣರಾಜ ಠಾಣೆ ಪೊಲೀಸರು ಮಂಗಳವಾರ ವಶಕ್ಕೆ ಪಡೆದಿದ್ದಾರೆ.



ಮೇದರಕೇರಿಯ ನಿವಾಸಿ, ರಿಕ್ಷಾ ಚಾಲಕ ಕುಮಾರ್(24) ಹತ್ಯೆಯಾದ ಯುವಕ. ಈತನೊಂದಿಗೆ ಪ್ರಜ್ವಲ್, ಅಭಿಷೇಕ್, ಪ್ರಶಾಂತ್ ಸೇರಿದಂತೆ ನಾಲ್ವರು ಕ್ಷುಲ್ಲಕ ವಿಚಾರಕ್ಕೆ ಎಂಟು ತಿಂಗಳ ಹಿಂದೆ ಜಗಳವಾಡಿಕೊಂಡಿದ್ದರು. ಇದೇ ವಿಚಾರಕ್ಕೆ ನಾಲ್ವರು ಜೊತೆಯಾಗಿ ಕುಮಾರ್‌ನನ್ನು 101 ಗಣಪತಿ ದೇವಸ್ಥಾನ ಬಳಿ ಸೋಮವಾರ ಮಧ್ಯಾಹ್ನ ಚಾಕುವಿನಿಂದ ಇರಿದಿದ್ದರು. ತಕ್ಷಣ ವಿಷಯ ತಿಳಿದ ಕೃಷ್ಣರಾಜ ಪೊಲೀಸರು ಸಾರ್ವಜನಿಕರ ಸಹಾಯದಿಂದ ರಕ್ತದ ಮಡುವಿನಲ್ಲಿದ್ದ ಕುಮಾರ್‌ನನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದರು. ಚಿಕಿತ್ಸೆ ಫಲಕಾರಿಯಾಗದೆ ಸೋಮವಾರ ತಡರಾತ್ರಿ ಸಾವನ್ನಪ್ಪಿದ್ದಾನೆ. ಹತ್ಯೆಯಾದ ಕುಮಾರ್ ಪರಿಶಿಷ್ಟ ಪಂಗಡಕ್ಕೆ ಸೇರಿರುವುದರಿಂದ ಜಾತಿ ನಿಂದನೆ, ಚಾಕು ಇರಿದು ಕೊಲೆ ಮಾಡಿದ ಆರೋಪದಡಿ ಪ್ರಕರಣ ದಾಖಲಿಸಿಕೊಂಡು ಕೃಷ್ಣರಾಜ ವಿಭಾಗದ ಎಸಿಪಿ ನೇತೃತ್ವದಲ್ಲಿ ತನಿಖೆ ಪ್ರಾರಂಭಿಸಲಾಗಿದೆ.

# ಬಿರು ಬಿಸಿಲಿಗೆ ಬಳಲಿದ ಸಸ್ಯ ಸಂರಕ್ಷಣೆ; ರಘುಲಾಲ್ ರಾಘವನ್‌ರಿಂದ ಟ್ಯಾಂಕರ್ ಮೂಲಕ ನೀರುಣಿಸುವ ವ್ಯವಸ್ಥೆ




ಮೈಸೂರಿನ ರಘುಲಾಲ್ ಅಂಡ್ ಕಂಪನಿ ಮಾಲೀಕ ರಾಘವನ್ ಅವರ ನೆರವಿನಿಂದ ರಸ್ತೆ ಬದಿ ಗಿಡಗಳಿಗೆ ನೀರುಣಿಸುತ್ತಿರುವುದು.

ಮೈಸೂರು, ಏ.29(ಎಸ್‌ಬಿಡಿ)- ಬಿಸಿಲ ಝಳದಿಂದ ಒಣಗುತ್ತಿರುವ ಸಾವಿರಾರು ಗಿಡ-ಮರಗಳಿಗೆ ನೀರುಣಿಸುವ ರಘುಲಾಲ್ ರಾಘವನ್ ಅವರ ಪರಿಸರ ಪ್ರೇಮ ನಿಜಕ್ಕೂ ಅನುಕರಣೀಯ.

ಮಳೆ ಇಲ್ಲದೆ ಈಗಾಗಲೇ ಗಿಡ-ಮರಗಳು ಒಣಗಲಾರಂಭಿಸಿವೆ. ಇನ್ನು 15-20 ದಿನಗಳಲ್ಲಿ ಮಳೆಯಾಗದಿದ್ದರೆ ಮತ್ತಷ್ಟು ಗಂಭೀರ ಪರಿಸ್ಥಿತಿ ನಿರ್ಮಾಣವಾಗಲಿದೆ. ಮೈಸೂರು ವ್ಯಾಪ್ತಿಯಲ್ಲಿರುವ ಒಂದೆರಡು ವರ್ಷಗಳ ಎಲ್ಲಾ ಗಿಡಗಳಿಗೂ ನೀರುಣಿಸುವುದು ಅರಣ್ಯ ಇಲಾಖೆಗೂ ಸವಾಲಾಗಿ ಪರಿಣಮಿಸಿದೆ. ಈ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆಯವರು ನೈಜ ಪರಿಸರ ಪ್ರೇಮಿಗಳ ಸಹಕಾರಕ್ಕೆ ಮೊರೆ ಹೋಗಿದ್ದಾರೆ.

ಒಣಗುತ್ತಿರುವ ಗಿಡ-ಮರಗಳನ್ನು ಕಂಡು ಮರುಗಿದ ರಘುಲಾಲ್ ಮೆಡಿಕಲ್ಸ್‌ನ ಮಾಲೀಕರಾದ ರಾಘವನ್ ಅವರು, ಟ್ಯಾಂಕರ್‌ಗಳ ಮೂಲಕ ನೀರುಣಿಸುತ್ತಿದ್ದಾರೆ. ತಾವು ನೆಟ್ಟು ರಕ್ಷಿಸಿದ ಗಿಡಗಳಿಗೆ ಮಾತ್ರವಲ್ಲದೆ ಅರಣ್ಯ ಇಲಾಖೆ ವತಿಯಿಂದ ನೆಟ್ಟಿರುವ ಗಿಡ-ಮರಗಳಿಗೂ ಜೀವ ಜಲ ಕರುಣಿಸುವ ಸತ್ಕಾರ್ಯ ಮಾಡುತ್ತಿದ್ದಾರೆ. ರಿಂಗ್ ರಸ್ತೆ ಸೇರಿದಂತೆ ರಾಜೀವ್‌ನಗರ, ಲಾಲ್ ಬಹದ್ದೂರ್ ಶಾಸ್ತ್ರಿನಗರ ಸೇರಿದಂತೆ ಹಲವು ಬಡಾವಣೆಗಳಲ್ಲಿ ಅರಣ್ಯ ಇಲಾಖೆಯಿಂದ ನೆಟ್ಟಿರುವ ಗಿಡಗಳಿಗೂ ನೀರು ಪೂರೈಸುತ್ತಿದ್ದಾರೆ. ಈ ಸತ್ಕಾರ್ಯಕ್ಕೆ ಲಕ್ಷಾಂತರ ರೂ. ಬೇಕಾಗುತ್ತದೆ. ಆದರೆ ಜೀವಜಲ ಉಣಿಸಿ ಗಿಡಗಳನ್ನು ರಕ್ಷಿಸುವುದಕ್ಕೆ ಎಂದೂ ಹಿಂದೇಟು ಹಾಕುವವರಲ್ಲ ಎಂದು ಹಲವು ಅರಣ್ಯ ಇಲಾಖೆ ಸಿಬ್ಬಂದಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

**ಮನವಿಗೆ ಸ್ಪಂದಿಸುತ್ತಾರೆ:** ರಘುಲಾಲ್ ರಾಘವನ್ ಅವರು ಸಾವಿರಾರು ಗಿಡಗಳನ್ನು ನೆಟ್ಟು, ಟ್ರೀ ಗಾರ್ಡ್ ಅಳವಡಿಸಿ, ಅಗತ್ಯವಿದ್ದಾಗ ನೀರುಣಿಸಿ ಬೆಳೆಸಿದ್ದಾರೆ. ಬಿರು ಬೇಸಿಗೆಯಾದ ಕಾರಣ ತಾವು ನೆಟ್ಟಿರುವ ಗಿಡಗಳಿಗೆ ಮಾತ್ರವಲ್ಲದೆ ಆಗಾಗ ಇಲಾಖೆ ವತಿಯಿಂದ ನೆಟ್ಟಿರುವ ಗಿಡಗಳಿಗೂ ನೀರು ಪೂರೈಸುತ್ತಿದ್ದಾರೆ. ಒಂದು ವರ್ಷದ ಗಿಡಕ್ಕೆ ವರ್ಷದಲ್ಲಿ 6 ಬಾರಿ ಹಾಗೂ 2 ವರ್ಷದ ಮರಗಳಿಗೆ ಮೂರು ಬಾರಿ ನೀರುಣಿಸಲು ಅವಕಾಶವಿದೆ. 2ನೇ ವರ್ಷದ ಗಿಡಗಳಿಗೆ ಈಗಾಗಲೇ ನಿಗದಿತ ಅವಧಿಯಲ್ಲಿ ನೀರುಣಿಸಿರುವುದರಿಂದ ಹೆಚ್ಚುವರಿ ಒದಗಿಸಲು ಕಷ್ಟಸಾಧ್ಯವಾಗಿದೆ. ಅಂತಹ ಸಂದರ್ಭದಲ್ಲಿ ರಾಘವನ್ ಅವರ ಗಮನಕ್ಕೆ ತಂದರೆ ಅವರು ನೀರಿನ ವ್ಯವಸ್ಥೆ ಮಾಡುತ್ತಾರೆ ಎಂದು ಡಿಆರ್‌ಎಫ್‌ಓ ಪ್ರಕಾಶ್ ತಿಳಿಸಿದ್ದಾರೆ.

ಮೈಸೂರು ಮಿತ್ರ





ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಅಗಲಿದ ನಾಯಕನಿಗೆ ಅಂತಿಮ ನಮನ ಸಲ್ಲಿಸಿದರು



ಶ್ರೀನಿವಾಸ ಪ್ರಸಾದ್ ಅವರಿಗೆ ಮೈಸೂರು ಜಿಲ್ಲಾಧಿಕಾರಿ ಡಾ.ರಾಜೇಂದ್ರ ಅಂತಿಮ ಗೌರವ ಸಲ್ಲಿಸಿದರು.

# ಸ್ವಾಭಿಮಾನಿ ನೆಲೆ ಅಶೋಕಪುರಂನ ಕ್ರಾಂತಿಕಾರ ನಾಯಕ ಪ್ರಸಾದ್



ಮೈಸೂರು, ಏ.29(ಆರ್‌ಕೆ)– ಹಿರಿಯ ಸಜ್ಜನ ರಾಜಕಾರಣಿ ವಿ.ಶ್ರೀನಿವಾಸ ಪ್ರಸಾದ್ ಅವರನ್ನು ಸ್ವಾಭಿಮಾನಿ ಹೋರಾಟಗಾರ, ಪರಿಪೂರ್ಣ ನಾಯಕನನ್ನಾಗಿ ರೂಪಿಸಿದ್ದು ಮೈಸೂರಿನ ಅಶೋಕಪುರಂ ವಾತಾವರಣ.

ದಲಿತ ಸಮುದಾಯದ ಸ್ವಾಭಿಮಾನ ಹಾಗೂ ನೆಮ್ಮದಿ ಬದುಕಿಗೆ ಮೈಸೂರು ಅಶೋಕಪುರಂನಲ್ಲಿ ಮೂಲಸೌಕರ್ಯ ಕಲ್ಪಿಸಿದ್ದರು. ಈಗಲೂ ಈ ಪ್ರದೇಶ 'ದಲಿತ ಜಾಗೃತಿ' ಎಂದೇ ಖ್ಯಾತಿಯಾಗಿರುವುದು ವಿಶೇಷ.

ಎಲ್ಲರೂ ಸೇರಿ ಅದ್ದೂರಿಯಾಗಿ ಹಬ್ಬ ಹರಿದಿನ ಆಚರಿಸುವ ಅಶೋಕಪುರಂ, ಸಾಂಸ್ಕೃತಿಕವಾಗಿ ಕ್ರಿಯಾಶೀಲ ತಾಣವಾಗಿದ್ದು, ಸ್ವಾಭಿಮಾನ ಈ ನೆಲದ ವಿಶೇಷ ಗುಣ ವಿದೆ. ಅದರ ಪರಿಸರ, ಶ್ರೀನಿವಾಸ ಪ್ರಸಾದ್ ಅವರ ಜೀವನ ರೂಪಿಸುವಲ್ಲಿ ಪ್ರಧಾನ ಪಾತ್ರ ವಹಿಸಿತ್ತು ಎಂದು ಅಶೋಕಪುರಂ ನಿವಾಸಿಗಳು ಹೇಳುತ್ತಾರೆ.

ಮೈಸೂರು ಪುರಸಭೆಯಲ್ಲಿ ಮಣೆಗಾರನ ಕೆಲಸ ಮಾಡುತ್ತಿದ್ದ ಶ್ರೀನಿವಾಸ ಪ್ರಸಾದ್ ಅವರ ತಂದೆ ಎಂ. ವೆಂಕಟಯ್ಯ, ವಿದ್ಯೆ ಕಲಿತಿದ್ದರಿಂದ ಅವರ ಕುಟುಂಬದಲ್ಲಿ ಶೈಕ್ಷಣಿಕ ವಾತಾವರಣ ಸಹಜವಾಗಿ ರೂಪುಗೊಂಡಿತ್ತು. 1ರಿಂದ 8ನೇ ತರಗತಿವರೆಗೂ ಅಶೋಕಪುರಂನ ನ್ಯೂ ಟೈಪ್ ಮಾಡೆಲ್ ಸರ್ಕಾರಿ ಶಾಲೆಯಲ್ಲಿ ಓದಿದ ಪ್ರಸಾದ್ ಅವರಿಗೆ ಫುಟ್‌ಬಾಲ್‌ನಲ್ಲಿ ತೀವ್ರ ಆಸಕ್ತಿ ಇತ್ತು.

ಅದೇ ಕಾರಣಕ್ಕೆ ಗೆಳೆಯರನ್ನು ಸೇರಿಸಿಕೊಂಡು ಅಶೋಕ ಸ್ಪೋರ್ಟ್ಸ್ ಕ್ಲಬ್ ಆರಂಭಿಸಿದ್ದ ಪ್ರಸಾದ್, ಕ್ರೀಡೆಯಲ್ಲಿ ಸದಾ ತೊಡಗಿಸಿಕೊಂಡಿದ್ದರು. ಶಾರದಾವಿಲಾಸ ಪ್ರೌಢಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪೂರೈಸಿದ್ದ ಅವರಿಗೆ ತಂದೆ ವೆಂಕಟಯ್ಯ ಅವರೇ ರೆನ್ ಅಂಡ್ ಮಾರ್ಟಿನ್ ಗ್ರಾಮರ್ ಪುಸ್ತಕದ ಮೂಲಕ ಮಗನಿಗೆ ಇಂಗ್ಲಿಷ್ ವ್ಯಾಕರಣ ಹೇಳಿಕೊಡುತ್ತಿದ್ದರು ಎಂಬುದನ್ನು ಸ್ವತಃ ಶ್ರೀನಿವಾಸಪ್ರಸಾದ್ ಅವರೇ ತಮ್ಮ ಅಭಿನಂದನಾ ಗ್ರಂಥದಲ್ಲಿ ಬರೆದುಕೊಂಡಿದ್ದಾರೆ ಎಂದು ಅವರ ಅನುಯಾಯಿಗಳು ತಿಳಿಸಿದ್ದಾರೆ.

ಸಾಮಾಜಿಕ ಅಸಮಾನತೆ, ಶೋಷಣೆ, ದೌರ್ಜನ್ಯ, ದಬ್ಬಾಳಿಕೆ ವಿರುದ್ಧ ಧ್ವನಿ ಎತ್ತಿ ಖಂಡಿಸುತ್ತಿದ್ದ ಅವರು, ತಮ್ಮ ವಿದ್ಯಾರ್ಥಿ ದಿಸೆಯಲ್ಲೇ ವಿದ್ಯಾರ್ಥಿಗಳ ಸಮಸ್ಯೆ ಬಗ್ಗೆ ಶಿಕ್ಷಕರು, ಪ್ರಾಂಶುಪಾಲರ ಬಳಿ ಧೈರ್ಯವಾಗಿ ಪ್ರತಿಪಾದಿಸುತ್ತಿದ್ದರು. ಆ ಹಿನ್ನೆಲೆಯಲ್ಲಿ ಅಶೋಕಪುರಂ ಯುವಕ ಸಂಘ ಕಟ್ಟಿ ಯುವಕರನ್ನು ಪ್ರೇರೇಪಿಸುತ್ತಿದ್ದರು.

ಸಂಘದ ಅಧ್ಯಕ್ಷರಾಗಿ ಸಕ್ರಿಯವಾಗಿದ್ದ ಪ್ರಸಾದ್, ಗಣಪತಿ ಹಬ್ಬ, ಸ್ವಾಮಿ ವಿವೇಕಾನಂದ ಜಯಂತಿ, ರಕ್ಷಾ ಬಂಧನ್, ಡಾ. ಅಂಬೇಡ್ಕರ್ ಜಯಂತಿಯಂತಹ ಕಾರ್ಯಕ್ರಮಗಳನ್ನು ಸಂಭ್ರಮದಿಂದ ಆಚರಿಸುತ್ತಾ, ಆರಂಭದಿಂದಲೂ ನಾಯಕತ್ವ ಗುಣಗಳನ್ನು ಬೆಳೆಸಿಕೊಂಡಿದ್ದರು.

ಪುಸ್ತಕ ಓದುವ ಅಭ್ಯಾಸ ಬೆಳೆಸಿಕೊಂಡಿದ್ದ ಅವರು, ಡಾ. ಅಂಬೇಡ್ಕರ್, ಬುದ್ಧ, ಬಸವರ ಜೀವನ, ತತ್ವಾದರ್ಶಗಳನ್ನು ಮೈಗೂಡಿಸಿಕೊಂಡಿದ್ದರಲ್ಲದೇ, 15 ವರ್ಷಗಳ ಕಾಲ ರಾಷ್ಟ್ರೀಯ ಸ್ವಯಂ ಸೇವಾ ಸಂಘದಲ್ಲೂ ಸೇವೆ ಸಲ್ಲಿಸಿದ್ದರು.

ಮಾಧ್ಯಮಿಕ ಶಾಲೆಯಲ್ಲಿದ್ದಾಗ 1959ರಲ್ಲಿ ಅಶೋಕಪುರಂನ ಸಿದ್ಧಾರ್ಥ ಹಾಸ್ಟೆಲ್ ಕಟ್ಟಡದ ಶಿಲಾನ್ಯಾಸ ಕಾರ್ಯಕ್ರಮಕ್ಕೆ ಅಂದಿನ ಕೇಂದ್ರ ರೈಲ್ವೆ ಸಚಿವ ಡಾ. ಬಾಬು ಜಗಜೀವನರಾಂ ಅವರು ಬಂದಿದ್ದರು. ಆ ವೇಳೆ ಶಾಲಾ ಬ್ಯಾಂಡ್‌ಸೆಟ್ ಮುಂಚೂಣಿಯಲ್ಲಿದ್ದ ಶ್ರೀನಿವಾಸಪ್ರಸಾದ್, ಜಗಜೀವನರಾಂ ಅವರನ್ನು ಅಶೋಕಪುರಂ ಮುಂಭಾಗದಿಂದ ಮೆರವಣಿಗೆಯಲ್ಲಿ ಕರೆದೊಯ್ದಿದ್ದರಲ್ಲದೇ, ಅವರ ಭಾಷಣ ಕೇಳಿ ಪ್ರೇರೇಪಿತರಾಗಿದ್ದರು ಎಂದು ಅಶೋಕಪುರಂನ ಹಿರಿಯರು ಇಂದು ಸ್ಮರಿಸಿಕೊಂಡರು.

## ದಲಿತ ಚಳುವಳಿ, ಸಾಮಾಜಿಕ ನ್ಯಾಯಕ್ಕೆ ತುಂಬಲಾರದ ನಷ್ಟ

### ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ



ಮೈಸೂರು,ಏ.29(ಪಿಎಂ)– ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರ ನಿಧನದಿಂದ ದಲಿತ ಚಳವಳಿ ಮತ್ತು ಸಾಮಾಜಿಕ ನ್ಯಾಯಕ್ಕೆ ತುಂಬಲಾರದ ನಷ್ಟ ಉಂಟಾಗಿದೆ ಎಂದು ಶಾಸಕ ಎ.ಎಸ್. ಪೊನ್ನಣ್ಣ ಸಂತಾಪ ಸೂಚಿಸಿದರು.

ಮೈಸೂರಿನ ಅಶೋಕಪುರಂನ ಎನ್‌ಟಿಎಂ ಶಾಲೆ ಆವರಣದಲ್ಲಿ ಸೋಮವಾರ ಶ್ರೀನಿವಾಸ ಪ್ರಸಾದ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು ಮಾಧ್ಯಮದವರೊಂದಿಗೆ ಅವರು ಮಾತನಾಡಿದರು.

ದಲಿತ ಸಮುದಾಯದ ಸ್ವಾಭಿಮಾನದ ಧ್ವನಿಯಾಗಿದ್ದ ಶ್ರೀನಿವಾಸ ಪ್ರಸಾದ್ ಅವರ ನಿಧನ ಬಹಳ ದುಃಖ ತಂದಿದೆ ಅವರು ನಮ್ಮ ತಂದೆಯವರ ಸಮಕಾಲೀನರು ಹಾಗೂ ಅವರ ಆತ್ಮೀಯ ಸ್ನೇಹಿತರಾಗಿದ್ದರು. ಆದ್ದರಿಂದ ನನಗೆ ವೈಯಕ್ತಿಕವಾಗಿಯೂ ಮತ್ತು ಸಮಾಜದ ದೃಷ್ಟಿಯಿಂದ ತುಂಬಲಾರದ ನಷ್ಟ ಉಂಟಾಗಿದೆ. ಕರ್ನಾಟಕ ರಾಜಕಾರಣ ವಲಯದಲ್ಲೂ ಬಹುಶಃ ಅವರಂತಹ ನಾಯಕರನ್ನು ಮತ್ತೆ ನೋಡಲಿಕ್ಕೆ ಸಾಧ್ಯವಿಲ್ಲ. ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿಯನ್ನು ದೇವರು ನೀಡಲಿ. ಪ್ರಸಾದ್ ಅವರ ಆತ್ಮಕ್ಕೆ ಚಿರಶಾಂತಿ ದೊರಕಲಿ ಎಂದರು.

## ಅವರು ಎಲ್ಲೆ ಹೋದರೂ ನಮ್ಮ ಸಂಬಂಧ ಚೆನ್ನಾಗಿತ್ತು: ಡಿಕೆಶಿ



ಮೈಸೂರು, ಏ.29(ಎಂಕೆ)– ಧೀಮಂತ ನಾಯಕ, ಅಜಾತಶತ್ರು, ಅತ್ಯಂತ ಪ್ರಾಮಾಣಿಕ ವ್ಯಕ್ತಿಯನ್ನು ಕಳೆದುಕೊಂಡಿದ್ದು ಅತೀವ ದುಃಖ ತಂದಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಹಿರಿಯ ರಾಜಕಾರಣಿ, ಚಾ.ನಗರ ಲೋಕಸಭಾ ಕ್ಷೇತ್ರದ ಸಂಸದರಾದ ವಿ.ಶ್ರೀನಿವಾಸ್ ಪ್ರಸಾದ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಶ್ರೀನಿವಾಸ್ ಪ್ರಸಾದ್ ಅವರು ಚೇತರಿಸಿಕೊಳ್ಳುತ್ತಾರೆ ಎಂಬ ವಿಶ್ವಾಸವಿತ್ತು. ಆದರೆ ಭಗವಂತನ ಲೀಲೆ. ಜೆಡಿಯು ಮತ್ತು ಕಳೆದ ಲೋಕಸಭಾ ಚುನಾವಣೆ ಸೇರಿ ಎರಡು ಅವಧಿ ಬಿಟ್ಟರೆ ಕಾಂಗ್ರೆಸ್ ಮತ್ತು ಶ್ರೀನಿವಾಸ್ ಪ್ರಸಾದ್ ಅವರೊಂದಿಗಿನ ಸಂಬಂಧ ಬಹಳ ಹಳೆಯದು. ಅವರು ಯೂತ್ ಕಾಂಗ್ರೆಸ್ ಅಧ್ಯಕ್ಷರಾಗಿದ್ದಾಗ ನಾನು ಮತ್ತು ವಿಶ್ವನಾಥ್ ಅವರು ಕಾರ್ಯದರ್ಶಿಯಾಗಿದ್ದೆವು ಎಂದು ಸ್ಮರಿಸಿದರು.

1985ರಲ್ಲಿ ಅಸೆಂಬ್ಲಿ ಟಿಕೆಟ್ ಸಿಕ್ಕಿದಾಗ ನನಗೆ ಬೆಂಬಲವಾಗಿದ್ದವರು. ಬಹಳ ಆತ್ಮೀಯರು. ನನ್ನ ಪರವಾಗಿ ಹೋರಾಟ ಮಾಡಿದ ಧೀಮಂತ ನಾಯಕರು, ಅಜಾತಶತ್ರು, ನಂಬಿಕೆ ಹಾಗೂ ಪ್ರಾಮಾಣಿಕತೆಗೆ ಬದ್ಧರಾಗಿದ್ದವರು. ದೀನ ದಲಿತರ ಸೇವೆಗೆ ತಮ್ಮ ಜೀವನ ಮುಡಿಪಾಗಿಟ್ಟವರು. ಪಕ್ಷ ಯಾವುದೇ ಇದ್ದರು ನಮ್ಮ–ಅವರ ಸಂಬಂಧ ಎಂದಿಗೂ ಕಡಿಮೆಯಾಗಿರಲಿಲ್ಲ. ಅವರಿಗೆ ರಾಜ್ಯ ಸರ್ಕಾರದಿಂದ ಎಷ್ಟು ಗೌರವ ಕೊಡಬೇಕೋ ಎಲ್ಲವನ್ನು ಕೊಡಲಾಗುವುದು. ಅವರ ಆತ್ಮಕ್ಕೆ ಶಾಂತಿ ದೊರಕಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದರು.

## ಹಲವು ಉನ್ನತ ಸ್ಥಾನಗಳಲ್ಲಿ ಪ್ರಸಾದ್ ಸೇವೆ

ಮೈಸೂರು, ಏ. 29(ಆರ್‌ಕೆ)– ಸಾಮಾಜಿಕ, ಶೈಕ್ಷಣಿಕ, ಆಧ್ಯಾತ್ಮಿಕ, ರಾಜಕೀಯ ಸೇರಿದಂತೆ ಹಲವು ಕ್ಷೇತ್ರಗಳ ವಿವಿಧ ಸ್ಥಾನಗಳಲ್ಲಿ ಸಂಸದ ವಿ. ಶ್ರೀನಿವಾಸಪ್ರಸಾದ್ ಸೇವೆ ಸಲ್ಲಿಸಿದ್ದರು. 1977ರಿಂದ 78ರವರೆಗೆ ಜನತಾ ಪಕ್ಷದ ಯುವ ಪ್ರಧಾನ ಕಾರ್ಯದರ್ಶಿಯಾಗಿ, 1984ರಿಂದ 85ರವರೆಗೆ ಯುವ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷರಾಗಿ, 1985ರಲ್ಲಿ ಹಕ್ಕು ಬಾಧ್ಯತಾ ಸಮಿತಿ ಸದಸ್ಯರಾಗಿ, 1986ರಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಯಾಗಿ, 1990ರಲ್ಲಿ ಸಾರ್ವಜನಿಕ ಉದ್ದಿಮೆಗಳ ಸಮಿತಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಮಿತಿ ಸದಸ್ಯರಾಗಿದ್ದರು. ಮೈಸೂರಿನ ಸಿದ್ಧಾರ್ಥ ಎಜುಕೇಷನ್ ಸೊಸೈಟಿ, ಡಾ. ಬಿ.ಆರ್. ಅಂಬೇಡ್ಕರ್ ಕಲ್ಚರಲ್ ಸೊಸೈಟಿ, ಸರ್ಕಾರಿ ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷರಾಗಿದ್ದ ಪ್ರಸಾದ್ ಅವರು, ಕೇಂದ್ರ ರೇಷ್ಮೆ ಮಂಡಳಿ, ಕರ್ನಾಟಕ ಕಾಂಗ್ರೆಸ್(ಐ) ಚುನಾವಣಾ ಸಮಿತಿ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದರು.

## ಪರಿಣಾಮ ಲೆಕ್ಕಿಸದೇ ದಲಿತ ಸಮುದಾಯ ಪರ ತೀರ್ಮಾನ ಕೈಗೊಳ್ಳುತ್ತಿದ್ದ ಪ್ರಸಾದ್

### ಮಾಜಿ ಸಂಸದ ಬಿ.ಎಲ್.ಶಂಕರ್ ಸ್ಮರಣೆ



ಮೈಸೂರು,ಏ.29(ಪಿಎಂ)– ತಮ್ಮ ಮೇಲೆ ಯಾವ ರೀತಿ ವ್ಯತಿರಿಕ್ತ ಪರಿಣಾಮ ಉಂಟಾಗುತ್ತದೆ ಎಂಬುದನ್ನೂ ಲೆಕ್ಕಿಸದೇ ಶೋಷಿತ ಸಮುದಾಯದ ಪರ ತೀರ್ಮಾನ ತೆಗೆದುಕೊಳ್ಳುತ್ತಿದ್ದ ಕೆಲವೇ ಕೆಲವು ನಾಯಕರಲ್ಲಿ ವಿ.ಶ್ರೀನಿವಾಸ ಪ್ರಸಾದ್ ಸಹ ಒಬ್ಬರು ಎಂದು ಮಾಜಿ ಸಂಸದ ಬಿ.ಎಲ್.ಶಂಕರ್ ಸ್ಮರಿಸಿದರು.

ಮೈಸೂರಿನ ಅಶೋಕಪುರಂನ ಡಾ.ಬಿ.ಆರ್.ಅಂಬೇಡ್ಕರ್ ರಸ್ತೆಯಲ್ಲಿರುವ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ (ಎನ್‌ಟಿಎಂ ಶಾಲೆ) ಆವರಣದಲ್ಲಿ ಸೋಮವಾರ ಶ್ರೀನಿವಾಸ ಪ್ರಸಾದ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು ಮಾಧ್ಯಮದವರೊಂದಿಗೆ ಮಾತನಾಡಿದರು.

ಶ್ರೀನಿವಾಸ ಪ್ರಸಾದ್ ಅವರೊಂದಿಗೆ ನನ್ನ ಒಡನಾಟ ಸುಮಾರು ನಾಲ್ಕೂವರೆ ದಶಕಕ್ಕೂ ಹಳೆಯದು. ಜೆಪಿ ಚಳವಳಿ ನಂತರ ಜನತಾ ಪಕ್ಷ ರಚನೆಯಾದ ಸಂದರ್ಭದಲ್ಲಿ ಕರ್ನಾಟಕದಲ್ಲಿ ಪ್ರಸಾದ್ ಪ್ರಮುಖ ಪಾತ್ರ ವಹಿಸಿದ್ದರು. ಅವರೊಂದಿಗೆ ನಾನು ಆಗ ಕೆಲಸ ಮಾಡಿದ ನೆನಪಾಗುತ್ತಿದೆ ಎಂದು ತಿಳಿಸಿದರು.

ಅವರು ಪಕ್ಷಗಳನ್ನು ಬದಲಿಸಿದರೂ ಅದು ಅವರ ಸ್ವಾಭಿಮಾನ ಮತ್ತು ಸಮುದಾಯದ ಹಿತಕ್ಕಾಗಿಯೇ ಆಗಿತ್ತು. ಅವರು ಯಾವುದೇ ಪಕ್ಷಕ್ಕೆ ಹೋದರೂ ಅಲ್ಲೆಲ್ಲಾ ನಾಯಕ ಸ್ಥಾನವನ್ನೇ ಅಲಂಕರಿಸಿದ್ದವರು. ಜನತಾ ಪರಿವಾರದಲ್ಲೂ ನಾಯಕರಾಗಿದ್ದರು. ಕಾಂಗ್ರೆಸ್ ಮತ್ತು ಬಿಜೆಪಿಯಲ್ಲೂ ನಾಯಕರಾಗಿದ್ದರು. ತಾವು ಹೋದ ಪಕ್ಷಗಳಲ್ಲೆಲ್ಲಾ ನಾಯಕರಾಗುವುದು ಸಾಮಾನ್ಯ ಸಂಗತಿಯಲ್ಲ. ಆದರೆ ಇವರು ಹೋದ ಪಕ್ಷಗಳಲೆಲ್ಲಾ ನಾಯಕರೇ ಆಗಿದ್ದರು ಎಂದರು.

ತಮ್ಮ ಬದ್ಧತೆ, ಸೈದ್ಧಾಂತಿಕ ನಿಲುವಿನ ಕಾರಣಕ್ಕೆ ಎಂದೆಂದಿಗೂ ನಾಯಕರಾಗಿಯೇ ಇದ್ದರು. ಅವರ ಛಲ ಅತ್ಯಂತ ದೊಡ್ಡದು. ಕಳೆದ 10–12 ವರ್ಷಗಳಿಂದ ಕಿಡ್ನಿ ಅನಾರೋಗ್ಯ ಇದ್ದರೂ ಧೈರ್ಯವಾಗಿ ಎರಡು ಚುನಾವಣೆಗಳನ್ನು ಎದುರಿಸಿದರು. ಸವಾಲುಗಳನ್ನು ಎದುರಿಸಲು ಶ್ರೀನಿವಾಸ ಪ್ರಸಾದ್ ನಮಗೆ ದೊಡ್ಡ ಮಾದರಿ. ಅವರ ಅಗಲಿಕೆ ಶೋಷಿತ ವರ್ಗಕ್ಕೆ ದೊಡ್ಡ ಶೂನ್ಯ ನಿರ್ಮಾಣ ಮಾಡಿದೆ ಎಂದು ಹೇಳಿದರು.



ಮೈಸೂರಿನ ಜಯಲಕ್ಷ್ಮಿಪುರಂನಲ್ಲಿರುವ ಭೀಮಸದನದಲ್ಲಿ ಅಗಲಿದ ನಾಯಕ ವಿ.ಶ್ರೀನಿವಾಸ ಪ್ರಸಾದ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು, ನಂತರ ಕುಟುಂಬ ವರ್ಗದವರಿಗೆ ಸಾಂತ್ವನ ಹೇಳಿದರು



ಪ್ರಸಾದ್ ಅವರಿಗೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಶ್ರದ್ಧಾಂಜಲಿ ಸಲ್ಲಿಸಿದರು

## ಸಾಮಾಜಿಕ ಚಿಂತನಾ ಸೂರ್ಯ ಅಸ್ತಂಗತಗೊಂಡಂತಾಗಿದೆ; ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ಕಂಬನಿ



ಮೈಸೂರು,ಏ.29(ಪಿಎಂ)– ಶ್ರೀನಿವಾಸ ಪ್ರಸಾದ್ ಅವರ ನಿಧನದಿಂದ ಸಾಮಾಜಿಕ ಚಿಂತನಾ ಸೂರ್ಯ ಅಸ್ತಂಗತಗೊಂಡಂತಾಗಿದೆ. ಶೋಷಿತ ವರ್ಗ ಮತ್ತು ಧ್ವನಿ ಇಲ್ಲದವರ ಧ್ವನಿಯಾಗಿ ಶ್ರೀನಿವಾಸ ಪ್ರಸಾದ್ ಕೊಡುಗೆ ಅಪಾರ ಎಂದು ಕರ್ನಾಟಕ ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ಸ್ಮರಿಸಿದರು.

ಮೈಸೂರಿನ ಅಶೋಕಪುರಂನ ಡಾ.ಬಿ.ಆರ್.ಅಂಬೇಡ್ಕರ್ ರಸ್ತೆಯಲ್ಲಿರುವ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ (ಎನ್‌ಟಿಎಂ ಶಾಲೆ) ಆವರಣದಲ್ಲಿ ಸೋಮವಾರ ಶ್ರೀನಿವಾಸ ಪ್ರಸಾದ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು ಮಾಧ್ಯಮದವರೊಂದಿಗೆ ಅವರು ಮಾತನಾಡಿದರು.

ಶ್ರೀನಿವಾಸ ಪ್ರಸಾದ್ ಅವರು ರಾಷ್ಟ್ರಕಂಡ ಸಾಮಾಜಿಕ ಚಿಂತನೆಯ ಹಿರಿಯ ನಾಯಕರು. 70–80ರ ದಶಕದಿಂದಲೂ ಸಮಾಜದಲ್ಲಿನ ಶೋಷಿತ ವರ್ಗ ಮಾತ್ರವಲ್ಲದೆ, ಎಲ್ಲಾ ಸಮುದಾಯದವರಿಗೆ ಸಂವಿಧಾನದ ಆಶಯ ಮತ್ತು ಸಂವಿಧಾನ ಹಕ್ಕುಗಳನ್ನು ಜಾಗೃತಿಗೊಳಿಸುವಲ್ಲಿ ಮಹತ್ವದ ಪಾತ್ರ ವಹಿಸಿದರು. ಸಂವಿಧಾನ ಕೊಟ್ಟ ಹಕ್ಕುಗಳನ್ನು ತಳ ವರ್ಗಗಳು ಪಡೆಯಲಿಕ್ಕೆ ಒಂದು ಪ್ರೇರಣೆ ಮತ್ತು ದಿಕ್ಸೂಚಿಯಾಗಿದ್ದರು ಎಂದರು.

ಸಂವಿಧಾನದ ಆಶಯಕ್ಕೆ ಅನುಗುಣವಾಗಿ ಸರ್ವ ಹಿತ ಕಾಯುವಲ್ಲಿ ಇಂದಿನ ಎಲ್ಲಾ ರಾಜಕಾರಣಿಗಳು ಮತ್ತು ಜನಪ್ರತಿನಿಧಿಗಳಿಗೆ ಪ್ರಸಾದ್ ಮಾದರಿಯಾಗಿದ್ದಾರೆ. ತಮ್ಮ ದೀರ್ಘಾವಧಿ ರಾಜಕಾರಣದಲ್ಲಿ ದೊಡ್ಡ ಮಟ್ಟದ ಸಂದೇಶ ನೀಡಿದ್ದಾರೆ. ಅವರ ಮೇರು ವ್ಯಕ್ತಿತ್ವವೇ ಯುವ ರಾಜಕಾರಣಿಗಳಿಗೆ ದೊಡ್ಡ ಪಾಠ. ಅವರು ನಮ್ಮನ್ನಗಲಿರುವುದು ಸಮಾಜಕ್ಕೆ ದೊಡ್ಡ ನಷ್ಟ, ಅವರ ಆತ್ಮಕ್ಕೆ ಶಾಂತಿ ದೊರಕಲಿ, ಅವರ ಕುಟುಂಬ ಮತ್ತು ಅಭಿಮಾನಿ ವರ್ಗಕ್ಕೆ ಅವರ ಅಗಲಿಕೆಯ ದುಃಖ ಭರಿಸುವ ಶಕ್ತಿಯನ್ನು ದೇವರು ನೀಡಲಿ ಎಂದು ತಿಳಿಸಿದರು.

ಅವರ ಜೊತೆಯಲ್ಲಿ ಸಚಿವನಾಗಿ ಕೆಲಸ ಮಾಡಿದ್ದು, ಉತ್ತಮ ಒಡನಾಟ ಸಹ ಹೊಂದಿದ್ದೆ. ಒಬ್ಬ ಸಚಿವನಾಗಿ ಎಲ್ಲಾ ವರ್ಗದವರಿಗೆ ನ್ಯಾಯ ದೊರೆಕಿಸಬಹುದು ಎಂಬುದಕ್ಕೆ ಅವರು ತೆಗೆದುಕೊಂಡ ಹಲವು ತೀರ್ಮಾನಗಳು ಸಾಕ್ಷಿಯಾಗಿವೆ. ಅವರಿಂದ ನಾನು ಸಾಕಷ್ಟು ಕಲಿತಿದ್ದೇನೆ. ಅಧಿಕಾರಿಗಳು ಬೇರೆ ಬೇರೆ ಅಭಿಪ್ರಾಯ ವ್ಯಕ್ತಪಡಿಸಿದಾಗ ಜನರ ಪರವಾಗಿ ಸಚಿವರು ಹೇಗೆ ತೀರ್ಮಾನ ಮಾಡಬಹುದು ಎಂಬುದಕ್ಕೆ ಶ್ರೀನಿವಾಸ ಪ್ರಸಾದ್ ಮಾದರಿಯಾಗಿದ್ದಾರೆ ಎಂದರು.



ಅಶೋಕ ಪುರಂನ ಎನ್‌ಟಿಎಂ ಶಾಲೆಯ ಆವರಣದಲ್ಲಿ ಅಗಲಿದ ಹಿರಿಯ ಚೇತನ ವಿ.ಶ್ರೀನಿವಾಸ ಪ್ರಸಾದ್ ಅವರಿಗೆ ಶಾಸಕ ಟಿ.ಎಸ್.ಶ್ರೀವತ್ಸ, ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್ ಅಂತಿಮ ನಮನ ಸಲ್ಲಿಸಿದರು

## ದಲಿತ ಸಮುದಾಯಕ್ಕೆ ಅಪಾರ ನಷ್ಟ ; ಗೃಹ ಸಚಿವ ಡಾ.ಜಿ.ಪರಮೇಶ್ವರ್ ಕಂಬನಿ



ಮೈಸೂರು,ಏ.29(ಪಿಎಂ)– ಶ್ರೀನಿವಾಸ ಪ್ರಸಾದ್ ಅವರ ಅಗಲಿಕೆಯಿಂದ ದಲಿತ ಸಮುದಾಯಕ್ಕೆ ಅತೀವ ನೋವಾಗಿರುವುದು ಮಾತ್ರವಲ್ಲದೆ, ಅಪಾರ ನಷ್ಟ ಉಂಟಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಕಂಬನಿ ಮಿಡಿದರು.

ಮೈಸೂರಿನ ಅಶೋಕಪುರಂನ ಡಾ.ಬಿ.ಆರ್.ಅಂಬೇಡ್ಕರ್ ರಸ್ತೆಯಲ್ಲಿರುವ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ (ಎನ್‌ಟಿಎಂ ಶಾಲೆ) ಆವರಣದಲ್ಲಿ ಸೋಮವಾರ ಶ್ರೀನಿವಾಸ ಪ್ರಸಾದ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು ಮಾಧ್ಯಮದವರೊಂದಿಗೆ ಅವರು ಮಾತನಾಡಿದರು.

ಶ್ರೀನಿವಾಸ ಪ್ರಸಾದ್ ಅವರು ನಮ್ಮನ್ನು ಅಗಲಿರುವುದು ನಮ್ಮೆಲ್ಲರಿಗೂ ಅತ್ಯಂತ ನೋವು ಉಂಟು ಮಾಡಿದೆ. ಅವರ ಆತ್ಮಕ್ಕೆ ಶಾಂತಿ ದೊರಕಲಿ. ಅವರ ಕುಟುಂಬ ವರ್ಗದವರಿಗೆ ಅವರ ಅಗಲಿಕೆಯ ದುಃಖ ಭರಿಸುವ ಶಕ್ತಿಯನ್ನು ದೇವರು ನೀಡಲಿ ಎಂದು ಪ್ರಾರ್ಥಿಸಿದರು.

ಶ್ರೀನಿವಾಸ ಪ್ರಸಾದ್ ಅವರು ಸಾರ್ವಜನಿಕ ಬದುಕಿನಲ್ಲಿ ನಮ್ಮೆಲ್ಲರಿಗೂ ಮಾದರಿಯಾಗಿದ್ದವರು. ಅನೇಕ ಹೋರಾಟಗಳನ್ನು ಮಾಡಿ ದಲಿತ ಸಮುದಾಯದ ಧ್ವನಿಯಾಗಿದ್ದವರು. ಇಡೀ ರಾಜ್ಯದಲ್ಲಿ ದಲಿತ ಸಮುದಾಯದ ಹಿತ ಕಾದವರು. ನನಗೆ ನೆನಪು ಇರುವಂತೆ ಬದನವಾಳು ಗಲಾಟೆ ಸಂದರ್ಭದಲ್ಲಿ ಅವರು ಕೇಂದ್ರ ಸಚಿವರಾಗಿದ್ದರು. ಆಗ ಅವರು ನನ್ನ ಸಮುದಾಯದ ರಕ್ಷಣೆಗಾಗಿ ಸಚಿವ ಸ್ಥಾನ ತ್ಯಾಗಕ್ಕೂ ಸಿದ್ಧವೆಂದು ಹೇಳಿದ್ದರು. ಅಂತಹ ಸಹೋದರ ಅಗಲಿರುವುದು ಇಡೀ ಸಮುದಾಯಕ್ಕೆ ಅಪಾರ ನಷ್ಟ ಉಂಟು ಮಾಡಿದೆ ಎಂದು ಭಾವುಕರಾದರು.

## ಪ್ರಸಾದ್ ಅಪಾರ ಜನರ ಬೆಂಬಲ ಗಳಿಸಿದ್ದರು

### ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ



ಮೈಸೂರು,ಏ.29(ಪಿಎಂ)– ತಮ್ಮ 50 ವರ್ಷಗಳ ಸುದೀರ್ಘ ರಾಜಕೀಯ ಜೀವನದಲ್ಲಿ ಅಪಾರ ಜನ ಬೆಂಬಲ, ಜನರ ಪ್ರೀತಿ ಗಳಿಸಿದ್ದ ಶ್ರೀನಿವಾಸ ಪ್ರಸಾದ್ ಅವರ ಅಗಲಿಕೆ ಕೇವಲ ಬಿಜೆಪಿಗೆ ಮಾತ್ರವಲ್ಲ, ಇಡೀ ನಾಡಿಗೆ ತುಂಬಲಾರದ ನಷ್ಟ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸಂತಾಪ ಸೂಚಿಸಿದರು.

ಮೈಸೂರಿನ ಅಶೋಕಪುರಂನ ಡಾ.ಬಿ.ಆರ್.ಅಂಬೇಡ್ಕರ್ ರಸ್ತೆಯಲ್ಲಿರುವ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ (ಎನ್‌ಟಿಎಂ ಶಾಲೆ) ಆವರಣದಲ್ಲಿ ಸೋಮವಾರ ಶ್ರೀನಿವಾಸ ಪ್ರಸಾದ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು ಮಾಧ್ಯಮದವರೊಂದಿಗೆ ಅವರು ಮಾತನಾಡಿದರು.

ರಾಜ್ಯದ ಒಬ್ಬ ಹಿರಿಯ ಮುತ್ಸದ್ದಿ ರಾಜಕಾರಣಿಯಾಗಿ, ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಸಂಸದರಾಗಿ, ಕೇಂದ್ರದ ಸಚಿವರಾಗಿ ತಮ್ಮದೇ ಆದ ವಿಶಿಷ್ಟ ಸೇವೆಯನ್ನು ಈ ನಾಡು ಮತ್ತು ದೇಶಕ್ಕೆ ಶ್ರೀನಿವಾಸ ಪ್ರಸಾದ್ ಕೊಟ್ಟಿದ್ದಾರೆ. ಹಿರಿಯರಾದ ಶ್ರೀನಿವಾಸ ಪ್ರಸಾದ್ ನಮ್ಮಿಂದ ಇಂದು ದೂರವಾಗಿರುವುದು ಅತೀವ ದುಃಖ ಉಂಟು ಮಾಡಿದೆ ಎಂದರು.

ನಮ್ಮ ತಂದೆ ಬಿ.ಎಸ್.ಯಡಿಯೂರಪ್ಪ ಅವರ ಬಗ್ಗೆ ಅವರು ಅತೀವ ಗೌರವ ಹೊಂದಿದ್ದರು. ನಾನು ಈ ಭಾಗದಲ್ಲಿ ಓಡಾಡುತ್ತಿದ್ದ ಪ್ರತಿ ಸಂದರ್ಭದಲ್ಲೂ ಪ್ರಸಾದ್ ಅವರನ್ನು ಭೇಟಿ ಮಾಡುತ್ತಿದ್ದೆ. ನನ್ನನ್ನು ಅತ್ಯಂತ ಪ್ರೀತಿಯಿಂದ ಕಾಣುತ್ತಿದ್ದರು. ಹಳೇ ಮೈಸೂರು ಭಾಗದ ರಾಜಕಾರಣದ ಬಗ್ಗೆ ಹೆಚ್ಚು ಚರ್ಚೆ ಮಾಡಿ, ನನಗೆ ಸಲಹೆಗಳನ್ನೂ ನೀಡುತ್ತಿದ್ದರು. ಅಂತಹ ಹಿರಿಯ ಮುತ್ಸದಿ ರಾಜಕಾರಣಿ ಇಂದು ನಮ್ಮಿಂದ ದೂರವಾಗಿದ್ದಾರೆ ಎಂದು ಕಂಬನಿ ಮಿಡಿದರು. ಅವರ ಆತ್ಮಕ್ಕೆ ಶಾಂತಿ ದೊರಕಲಿ. ಅವರ ಕುಟುಂಬ ಮತ್ತು ಅಭಿಮಾನಿ ವರ್ಗಕ್ಕೆ ಅವರ ಅಗಲಿಕೆಯ ದುಃಖ ಭರಿಸುವ ಶಕ್ತಿಯನ್ನು ದೇವರು ನೀಡಲಿ ಎಂದು ಪ್ರಾರ್ಥಿಸಿದರು.

# ಶ್ರೀನಿವಾಸಪ್ರಸಾದ್ ನಿಧನ ದಲಿತ ಸಮುದಾಯಕ್ಕೆ ತುಂಬಲಾರದ ನಷ್ಟ

ನಂಜನಗೂಡು, ಏ.29– ಮಾಜಿ ಕೇಂದ್ರ ಸಚಿವರೂ ಆದ ಹಿರಿಯ ಮುತ್ಸದ್ದಿ ರಾಜಕಾರಣಿ ವಿ.ಶ್ರೀನಿವಾಸ ಪ್ರಸಾದ್ ಶೋಷಿತ ಸಮುದಾಯದ ಗಟ್ಟಿ ಧ್ವನಿ ಹಾಗೂ ಸಮುದಾಯದ ದೊಡ್ಡ ಆಲದ ಮರದಂತಿದ್ದ ರಾಜಕಾರಣಿ. ಅವರ ಅಗಲಿಕೆ ದಲಿತ ಸಮುದಾಯಕ್ಕೆ ತುಂಬಲಾರದ ನಷ್ಟ ಎಂದು ಶಾಸಕ ದರ್ಶನ್ ಹೇಳಿದರು.

ಮೈಸೂರಿನ ಜಯಲಕ್ಷ್ಮಿಪುರಂನಲ್ಲಿರುವ ವಿ.ಶ್ರೀನಿವಾಸಪ್ರಸಾದ್ ಅವರ ನಿವಾಸ ಭೀಮ ಸದನದಲ್ಲಿ ಅವರ ಅಂತಿಮ ದರ್ಶನ ಪಡೆದು ಮಾತ ನಾಡಿದ ಅವರು, ವಿ.ಶ್ರೀನಿವಾಸಪ್ರಸಾದ್ ಅವರು ನನ್ನ ತಂದೆ ದಿ.ಆರ್.ಧ್ರುವನಾರಾಯಣ್ ಅವರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದರು. ಸುಮಾರು 50 ವರ್ಷಗಳ ಸುದೀರ್ಘ ರಾಜಕಾರಣ ನಡೆಸಿದ ವಿ.ಶ್ರೀನಿವಾಸ ಪ್ರಸಾದ್ ಅವರು ಕಾಂಗ್ರೆಸ್ ಪಕ್ಷದೊಂದಿಗೆ ದೀರ್ಘ ಕಾಲದ ನಂಟು ಹೊಂದಿದ್ದರು. ಅವರು ಎಂದಿಗೂ ಯಾರೊಂದಿಗೂ ರಾಜೀ ಮಾಡಿಕೊಳ್ಳದ ಸ್ವಾಭಿಮಾನಿ ರಾಜಕಾರಣಿ. ತಮ್ಮ ತತ್ವಾ ದರ್ಶಗಳಿಗೆ, ಸ್ವಾಭಿಮಾನಕ್ಕೆ ಧಕ್ಕೆಯಾದಾಗ ತಕ್ಷಣವೇ ಅದರ ವಿರುದ್ಧ ದನಿ ಎತ್ತುವ ಮೂಲಕ ಹೋರಾಟ ನಡೆಸುತ್ತಿದ್ದವರು. ಸಾಮಾಜಿಕ ನ್ಯಾಯದ ವಿಷಯದಲ್ಲಿ ರಾಜೀ ಮಾಡಿಕೊಳ್ಳದೆ ಶೋಷಿತ ಸಮುದಾಯಗಳ ಹಿತಾಸಕ್ತಿಯನ್ನು ಕಾಪಾಡುತ್ತಿದ್ದ ಮೇರು ಸ್ವಾಭಿಮಾನದ ಧ್ವನಿ. ಅವರು ರಾಜಕೀಯ ನಿವೃತ್ತಿ ಹೊಂದಿದ ನಂತರವೂ ಕೂಡ ಪಕ್ಷಾತೀತವಾಗಿ ಎಲ್ಲರನ್ನು ಗೌರವದಿಂದ ಕಾಣುತ್ತಿದ್ದ ಅತ್ಯುತ್ತಮ ರಾಜಕಾರಣಿ. ನನ್ನಂತಹ ಚಿಕ್ಕ ವಯಸ್ಸಿನ ರಾಜಕಾರಣಿಗಳಿಗೂ ಸಹ ಹೇಗೆ ಗೌರವ ನೀಡುತ್ತಿದ್ದರು ಎಂಬುದಕ್ಕೆ ನಾನೇ ಸಾಕ್ಷಿ. ಅವರು ನಮ್ಮಂತಹ ಯುವ ರಾಜಕಾರಣಿಗಳಿಗೆ ಪ್ರೇರಣೆಯಂತಿದ್ದರು. ಅವರ ಅಗಲಿಕೆ ಶೋಷಿತ ಸಮುದಾಯಗಳಿಗೆ ತುಂಬಲಾರದ ನಷ್ಟ, ದೇವರು ಅವರ ಆತ್ಮಕ್ಕೆ ಸದ್ಗತಿ ನೀಡಲಿ. ಅವರ ಕುಟುಂಬ ವರ್ಗಕ್ಕೆ ಅವರನ್ನು ಕಳೆದುಕೊಂಡ ದುಃಖ ಸಹಿಸುವ ಶಕ್ತಿ ನೀಡಲಿ ಎಂದು ಶ್ರೀಕಂಠೇಶ್ವರಸ್ವಾಮಿ ಅವರಲ್ಲಿ ಪ್ರಾರ್ಥಿಸುತ್ತೇನೆ ಎಂದರು.



ಶಾಸಕ ದರ್ಶನ್ ಸಂಸದ ವಿ.ಶ್ರೀನಿವಾಸಪ್ರಸಾದ್ ಅವರ ಅಂತಿಮ ದರ್ಶನ ಪಡೆದರು.

**ಎಸ್.ಮಹದೇವಯ್ಯ ಸಂತಾಪ:** ವಿ.ಶ್ರೀನಿವಾಸಪ್ರಸಾದ್ ನಿಷ್ಠಾವಂತ, ದಕ್ಷ ಆಡಳಿತ ಗಾರ, ಇದ್ದದ್ದನ್ನು ಇದ್ದ ಹಾಗೆ ಹೇಳುತ್ತಿದ್ದ ಎದೆಗಾರಿಕೆಯುಳ್ಳ ರಾಜಕಾರಣಿ. ಅವರು ದಲಿತ ಸಮುಯಕ್ಕೆ ದೊಡ್ಡ ಮರದ ನೆರಳಿ ನಂತೆ ಇದ್ದವರು. ಅವರು ನಮ್ಮ ದಲಿತ ಸಮು ಯದಾಯದ ಹೆಮ್ಮೆ ಎಂದು ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್. ಮಹದೇವಯ್ಯ ಸಂತಾಪ ಸೂಚಿಸಿದ್ದಾರೆ.

ವಿ.ಶ್ರೀನಿವಾಸಪ್ರಸಾದ್ ಅವರು ಬುದ್ಧ, ಬಸವ, ಅಂಬೇಡ್ಕರ್ ತತ್ವಾದರ್ಶಗಳನ್ನು ಮೈಗೂಡಿಸಿ ಕೊಂಡಿದ್ದ ಅಪರೂಪದ ರಾಜಕಾರಣಿ. ಅವರು ಒಬ್ಬ ಕ್ಯಾಲ್ಕುಲೇಟೆಡ್ ಮೈಂಡ್ ಪೊಲಿಟಿಷಿಯನ್, ವಿಶೇಷವಾಗಿ ದಲಿತ ಸಮುದಾಯದ ಸ್ವಾಭಿಮಾನದ ಸಂಕೇತವಾಗಿದ್ದ ಹಿರಿಯ ಮುತ್ಸದ್ದಿ. ಅವರ ಅಗಲಿಕೆ ಯಿಂದ ದಲಿತ ಸಮುದಾಯಕ್ಕೆ ತುಂಬಲಾರದ ನಷ್ಟವಾಗಿದ್ದು, ಅವರ ಅಗಲಿಕೆ ನೋವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬಕ್ಕೆ ನೀಡಲಿ. ಅವರ ಆತ್ಮಕ್ಕೆ ಶಾಂತಿ ದೊರಕಲಿ ಎಂದು ಪ್ರಾರ್ಥನೆ ಸಲ್ಲಿಸುತ್ತೇನೆ ಎಂದರು.

**ಶ್ರೀನಿವಾಸಮೂರ್ತಿ ಸಂತಾಪ:** ವಿ.ಶ್ರೀನಿವಾಸ ಪ್ರಸಾದ್ ನಿಧನ ಕರ್ನಾಟಕ ರಾಜಕಾರಣ ಮತ್ತು ದಲಿತ ಸಮುದಾಯಕ್ಕೆ ತುಂಬಲಾರದ ನಷ್ಟ, ಅವರು ಎಲ್ಲಾ ವರ್ಗದ ಜನರನ್ನು ಒಟ್ಟಾಗಿ ಕರೆದುಕೊಂಡು ಹೋಗುತ್ತಿದ್ದ ಅಪರೂಪದ ರಾಜಕಾರಣಿ. ಎಲ್ಲಾ ಸಮುದಾಯಗಳಿಗೆ ಸಾಮಾಜಿಕ ನ್ಯಾಯ ಒದಗಿಸುವ ಮೂಲಕ ರಾಜಕೀಯ ಸ್ಥಾನಮಾನಗಳನ್ನು ದೊರಕಿಸಿ ಕೊಡಲು ಮುಂದಾಗುತ್ತಿದ್ದ ಅಪರೂಪದ ಮನಸ್ಸುಳ್ಳ ರಾಜಕಾರಣಿ. ಅವರ ಆತ್ಮಕ್ಕೆ ದೇವರು ಶಾಂತಿ ನೀಡಲಿ ಎಂದು ದೇವರಲ್ಲಿ ಪ್ರಾರ್ಥನೆ ಸಲ್ಲಿಸುತ್ತೇನೆ ಎಂದು ಕಾಂಗ್ರೆಸ್ ಮುಖಂಡ ಶ್ರೀನಿವಾಸಮೂರ್ತಿ ಸಂತಾಪ ಸೂಚಿಸಿದ್ದಾರೆ.

## ಮೈಸೂರು ಚಿತ್ರಮಂದಿರಗಳಲ್ಲಿ

| | |
|---|---|
| **ಪದ್ಮ ಚಿತ್ರಮಂದಿರ** | (ದೂ: 2521923) |
| ರತ್ನಂ (ತ) | 4 ಪ್ರದರ್ಶನಗಳು |
| **ವುಡ್‌ಲ್ಯಾಂಡ್ಸ್ ಚಿತ್ರಮಂದಿರ** | (ದೂ: 2422871) |
| ರತ್ನಂ (ತ) | 4 ಪ್ರದರ್ಶನಗಳು |
| **ಬಾಲಾಜಿ ಚಿತ್ರಮಂದಿರ** | (ದೂ: 2497199) |
| ರುಸ್ಲಾನ್ (ಹಿಂ) | 4 ಪ್ರದರ್ಶನಗಳು |
| **ಮಹದೇಶ್ವರ ಚಿತ್ರಮಂದಿರ** | (ಮೊ:9900820093) |
| ರತ್ನಂ (ತ) | 4 ಪ್ರದರ್ಶನಗಳು |
| **ಗಾಯಿತ್ರಿ** | |
| ಯುವ (ಕ) | 4 ಪ್ರದರ್ಶನಗಳು |
| **ರಾಜಕಮಲ್** | |
| ರೂಬನ್ (ತ) | 4 ಪ್ರದರ್ಶನಗಳು |
| **ಸಂಗಂ** | |
| ಅವತಾರ ಪುರುಷ 2 (ಕ) | 4 ಪ್ರದರ್ಶನಗಳು |
| **ಲಿಡೋ** | |
| ಮ್ಯಾಟ್ನಿ (ಕ) | 4 ಪ್ರದರ್ಶನಗಳು |
| **ತಿಬ್ಬಾದೇವಿ** | |
| ರತ್ನಂ (ತ) | 4 ಪ್ರದರ್ಶನಗಳು |
| **ಪ್ರಭಾ** | |
| ಇತ್ಯಾದಿ (ಕ) | 2 ಪ್ರದರ್ಶನಗಳು |
| ಆತ್ಮ (ಕ) | 2 ಪ್ರದರ್ಶನಗಳು |

### ಡಿಆರ್‌ಸಿ ಸಿನಿಮಾಸ್
ದೂ : 4240422/4241800

| | |
|---|---|
| ಸ್ಕ್ರೀನ್ 1 | ಕುಂಗ್ ಫೂ ಪಾಂಡ 4 (3ಡಿ) (ಇಂ): ಬೆ.11.30ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಮ.1.30ಕ್ಕೆ, ಗಿಲ್ಲಿ (ತ): ಮ.3.50ಕ್ಕೆ, ಆವೇಶಂ (ಮ): ರಾ.7ಕ್ಕೆ, ರಾ.10.05ಕ್ಕೆ. |
| ಸ್ಕ್ರೀನ್ 2 | ಇತ್ಯಾದಿ (ಕ): ಬೆ.11.30ಕ್ಕೆ, O2 (ಕ): ಮ.1.55ಕ್ಕೆ, ದಾಸವರೇಣ್ಯ ಶ್ರೀ ವಿಜಯದಾಸರು (ಕ): ಸಂ.4.15ಕ್ಕೆ, ವರ್ಷನ್‌ಗಲ್ಕು ಶೇಷಂ (ಮ): ರಾ.7ಕ್ಕೆ, ಪವಿ ಕೇರ್‌ಟೇಕರ್ (ಮ): ರಾ.10.10ಕ್ಕೆ, |
| ಸ್ಕ್ರೀನ್ 3 | ರತ್ನಂ (ತ): ಮ.1.10ಕ್ಕೆ, ಸಂ.4.10ಕ್ಕೆ, ಯುವ (ಕ): ರಾ.7.10ಕ್ಕೆ, ರುಸ್ಲಾನ್ (ಹಿಂ): ರಾ.10.10ಕ್ಕೆ. |
| ಸ್ಕ್ರೀನ್ 4 | ಮಂಜುಮ್ಮೆಲ್ ಬಾಯ್ಸ್ (ಮ): ಮ.1.45ಕ್ಕೆ, ಘೋಸ್ಟ್‌ಬಸ್ಟರ್ಸ್ ಫ್ರೋಜನ್ ಎಂಪೈರ್ (ಇಂ): ಸಂ.4.50ಕ್ಕೆ, ರಾ.7.20ಕ್ಕೆ, ರಾ.9.50ಕ್ಕೆ. |

### ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

| | |
|---|---|
| ಸ್ಕ್ರೀನ್ 1 | ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಬೆ.10.25ಕ್ಕೆ, ರಾ.10ಕ್ಕೆ, ಯುವ (ಕ): ಮ.1ಕ್ಕೆ, ಸಂ.4.15ಕ್ಕೆ, O2 (ಕ): ರಾ.7.30ಕ್ಕೆ. |
| ಸ್ಕ್ರೀನ್ 2 | ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ಬೆ10.45ಕ್ಕೆ, ಸಂ.5.55ಕ್ಕೆ, ಮೈದಾನ್ (ಹಿಂ): ಮ.2.10ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ರಾ.9.20ಕ್ಕೆ. |
| ಸ್ಕ್ರೀನ್ 3 | ಯುವ (ಕ): ಬೆ.10.10ಕ್ಕೆ, O2 (ಕ): ಮ.1.25ಕ್ಕೆ, ಪಾರಿಜಾತ ಪರ್ವಂ (ತೆ): ಮ.3.55ಕ್ಕೆ, ಆವೇಶಂ (ಮ): ಸಂ.6.50ಕ್ಕೆ, ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ರಾ.10.10ಕ್ಕೆ. |
| ಸ್ಕ್ರೀನ್ 4 | ಮೈದಾನ್ (ಹಿಂ): ಬೆ.11.25ಕ್ಕೆ, ರಾ.9.50ಕ್ಕೆ, ವರ್ಷನ್‌ಗಲ್ಕು ಶೇಷಂ (ಮ): ಮ.3.10ಕ್ಕೆ, ಯುವ (ಕ): ಸಂ.6.35ಕ್ಕೆ. |

### ಮೈಸೂರು ವಿಷನ್ ಸಿನಿಮಾ
ದೂ : 0821–2973519

| | |
|---|---|
| ಸ್ಕ್ರೀನ್ 1 | ಪಾರ್ಕಿಂಗ್ (ಕ): ಬೆ10.35ಕ್ಕೆ, ಸಪ್ತಸಾಗರದಾಚೆ ಎಲ್ಲೋ 2 (ಕ): ಮ1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ತ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ. |
| ಸ್ಕ್ರೀನ್ 2 | ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ. |
| ಸ್ಕ್ರೀನ್ 3 | ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಲಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ |
| ಸ್ಕ್ರೀನ್ 4 | ಸಪ್ತ ಸಾಗರದಾಚೆ ಎಲ್ಲೋ 2 (ತೆ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.35ಕ್ಕೆ. |

### ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ದಿ ಫ್ಯಾಮಿಲಿ ಸ್ಟಾರ್ (ತೆ): ಬೆ.9.10ಕ್ಕೆ, ಮ.12.30ಕ್ಕೆ, ಮ.3.50ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ, ಯುವ (ಕ): ಬೆ.10.20ಕ್ಕೆ, ಬೆ.11.35ಕ್ಕೆ, ಮ.12.45ಕ್ಕೆ, ಮ.3.20ಕ್ಕೆ, ಸಂ.5.45ಕ್ಕೆ, ಸಂ.6.45ಕ್ಕೆ, ರಾ.10ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಬೆ.10.45ಕ್ಕೆ, ಮ.1.25ಕ್ಕೆ, ಸಂ.6.50ಕ್ಕೆ, ರಾ.9.30ಕ್ಕೆ, ಅವತಾರ ಪುರುಷ 2 (ಕ): ಮ.12.40ಕ್ಕೆ, ಸಂ.6.35ಕ್ಕೆ, ಮ್ಯಾಟ್ನಿ (ಕ): ಮ.1.35ಕ್ಕೆ, ಭರ್ಜರಿ ಗಂಡು (ಕ): ಮ.2.50ಕ್ಕೆ, ದಿ ಫಸ್ಟ್ ಓಮನ್ (ಇಂ): ಸಂ.4ಕ್ಕೆ, ರಾ.9ಕ್ಕೆ, ಕ್ರೂವ್ (ಹಿಂ): ಸಂ.4.05ಕ್ಕೆ, ರಾ.9.15ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಸಂ.4.30ಕ್ಕೆ, ಮಾರಿಗೋಲ್ಡ್ (ಕ): ರಾ.7.25ಕ್ಕೆ, ಆಡುಜೀವಿತಂ (ಮ): ರಾ.10.15ಕ್ಕೆ.

### ಗರುಡ ಮಾಲ್,
1ನೇ ಮಹಡಿ, ಮೊ.ನಂ: 9901373210

ಯುವ (ಕ): ಬೆ.9.30ಕ್ಕೆ, ಮ.12.25ಕ್ಕೆ, ಮ.3.40ಕ್ಕೆ, ಸಂ.6.30ಕ್ಕೆ, ರಾ.10.30ಕ್ಕೆ, ದಿ ಫ್ಯಾಮಿಲಿ ಸ್ಟಾರ್ (ತೆ): ಬೆ.9.50ಕ್ಕೆ, ಮ.12ಕ್ಕೆ, ಮ.3.20ಕ್ಕೆ, ಸಂ.6.40ಕ್ಕೆ, ರಾ.10ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಮ.1.10ಕ್ಕೆ, ಮ.3.50ಕ್ಕೆ, ರಾ.9.45ಕ್ಕೆ, ಅವತಾರ ಪುರುಷ 2 (ಕ): ಮ.2ಕ್ಕೆ, ರಾ.7.35ಕ್ಕೆ, ಮ್ಯಾಟ್ನಿ (ಕ): ಸಂ.4.40ಕ್ಕೆ, ಆಡುಜೀವಿತಂ (ಮ): ಸಂ.6.55ಕ್ಕೆ, ರಾ.10.15ಕ್ಕೆ

**ಸೂಚನೆ :** ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

# ಸ್ವಾಭಿಮಾನಿ ರಾಜಕಾರಣಿ ಶ್ರೀನಿವಾಸಪ್ರಸಾದ್





ಕೋಟೆಯಲ್ಲಿ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಶ್ರದ್ಧಾಂಜಲಿ ಸಭೆ ನಡೆಯಿತು. ಮತ್ತೊಂದು ಚಿತ್ರದಲ್ಲಿ ಪಟ್ಟಣದ ವರ್ತಕರು ಅಂಗಡಿ ಮುಂಗಟ್ಟು ಮುಚ್ಚಿ ಗೌರವ ಸಲ್ಲಿಸಿದರು.

ಹೆಚ್.ಡಿ.ಕೋಟೆ, ಏ.29– ಕಳಂಕ ರಹಿತವಾಗಿ ಸುದೀರ್ಘ 50 ವರ್ಷಗಳ ಕಾಲ ಪ್ರಾಮಾಣಿಕವಾಗಿ ಜನಸೇವೆ ಮಾಡಿದ ಸ್ವಾಭಿಮಾನಿ ರಾಜಕಾರಣಿ ವಿ.ಶ್ರೀನಿವಾಸ ಪ್ರಸಾದ್ ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ವೆಂಕಟಸ್ವಾಮಿ ಬಣ್ಣಿಸಿದರು.

ಸಂಸದ ವಿ.ಶ್ರೀನಿವಾಸ ಪ್ರಸಾದ್ ನಿಧನದ ಹಿನ್ನೆಲೆಯಲ್ಲಿ ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಸೋಮವಾರ ಆಯೋಜಿಸಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದ ಅವರು, 70ರ ದಶಕದಲ್ಲಿ ಬಿ.ಬಸಲಿಂಗಪ್ಪ ಅವರ ಬೂಸ ಚಳವಳಿಯಲ್ಲಿ ಪಾಲ್ಗೊಂಡಿದ್ದ ವಿ.ಶ್ರೀನಿವಾಸ್ ಪ್ರಸಾದ್ ಅವರು ನಂತರದ ದಿನಗಳಲ್ಲಿ ದಕ್ಷಿಣ ಕರ್ನಾಟಕದಲ್ಲಿ ದಲಿತ ನಾಯಕರಾಗಿ ಪ್ರತಿಷ್ಠಾನಿಸಿದರು. ರಾಜಕಾರಣಿ ಆದರೂ ಕೂಡ ಯಾವೊಬ್ಬ ನಾಯಕರ ಜೊತೆ ಹೊಂದಾಣಿಕೆ ರಾಜಕಾರಣ ಮಾಡದೆ ನೇರವಾದಿಯಾಗಿದ್ದರು ಎಂದರು.

ಪ್ರಸಾದ್ ಅವರು 6 ಬಾರಿ ಸಂಸದ, 2 ಬಾರಿ ಶಾಸಕರಾಗಿ, ರಾಜ್ಯ ಕಂದಾಯ ಸಚಿವರಾಗಿ ಉತ್ತಮ ಆಡಳಿತ ನೀಡುವ ಮೂಲಕ ರಾಜಕಾರಣದಲ್ಲಿ ಪ್ರಭುತ್ವ ರಾಜಕಾರಣಿ ಎಂದೇ ಖ್ಯಾತಿಯಾಗಿದ್ದರು. ಅಂತಹ ಹಿರಿಯ ಮುತ್ಸದ್ದಿ ರಾಜಕಾರಣಿಯನ್ನು ಕಳೆದುಕೊಂಡಿರುವುದು ಈ ನಾಡಿಗೆ ತುಂಬಲಾರದ ನಷ್ಟ ಎಂದು ಬೇಸರ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಜಾತ್ಯಾತೀತ ರಾಜಕಾರಣಿಯಾಗಿ ಹಲವು ನಾಯಕರನ್ನು ಹುಟ್ಟುಹಾಕಿದ ಕೀರ್ತಿ ಶ್ರೀನಿವಾಸ ಪ್ರಸಾದ್ ಅವರಿಗೆ ಸಲ್ಲುತ್ತದೆ. ಇಂತಹ ನಾಯಕನನ್ನು ಕಳೆದುಕೊಂಡ ದಲಿತ ಸಮುದಾಯ ತಬ್ಬಲಿಯಾಗಿದೆ. ಶ್ರೀನಿವಾಸ್ ಪ್ರಸಾದ್ ಅವರ ಆದರ್ಶಗಳನ್ನು ಪಾಲಿಸುವ ಮೂಲಕ ಅವರಿಗೆ ಗೌರವ ಸಲ್ಲಿಸುವ ಕೆಲಸ ಮಾಡೋಣ ಎಂದರು.

ಈ ವೇಳೆ ಬಿಜೆಪಿ ಮಂಡಲ ಅಧ್ಯಕ್ಷ ಶಂಭೇಗೌಡ, ಪ್ರಧಾನ ಕಾರ್ಯದರ್ಶಿ ಗುರುಸ್ವಾಮಿ, ಪ್ರಕಾಶ್, ಲೋಕೇಶ್, ಬಿಡಗಲು ರಾಜು, ಭೀಮನಹಳ್ಳಿ ಸೋಮೇಶ್, ಮೊತ್ತ ಬಸವರಾಜಪ್ಪ, ವಿವೇಕ, ನಂದೀಶ್, ಚಂದ್ರಮೌಳಿ, ಸ್ವಾಮಿ, ಟಿ.ಟಿ.ವೆಂಕಟೇಶ್, ಸೋಮಾಚಾರಿ, ಕೆಂಡಗಣ್ಣಸ್ವಾಮಿ, ಗೋಪಾಲಯ್ಯ, ಗೋವಿಂದ, ಮಹೇಶ್, ರಘು, ಲೋಕೇಶ ಹಾಗೂ ಜಿಲ್ಲಾ ಮುಖಂಡರು ಜನಪ್ರತಿನಿಧಿಗಳು, ಕಾರ್ಯಕರ್ತರು ಭಾಗವಹಿಸಿದ್ದರು.

**ವರ್ತಕರ ಸಂಘದಿಂದ ಗೌರವ:** ಸಂಸದ ವಿ.ಶ್ರೀನಿವಾಸ್ ಪ್ರಸಾದ್ ನಿಧನದ ಹಿನ್ನೆಲೆಯಲ್ಲಿ ಪಟ್ಟಣದ ವರ್ತಕರ ಸಂಘದಿಂದ ಅಂಗಡಿ ಮುಂಗಟ್ಟುಗಳನ್ನು ಮುಚ್ಚಿ ಗೌರವ ಸಲ್ಲಿಸಲಾಯಿತು. ಅಲ್ಲದೇ ಪಟ್ಟಣ ಸೇರಿದಂತೆ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಹಲವು ದಲಿತಪರ ಸಂಘಟನೆಗಳು ಹಾಗೂ ಸಂಘ ಸಂಸ್ಥೆಗಳು ಪ್ರಸಾದ್ ಅವರ ಭಾವಚಿತ್ರವನ್ನಿಟ್ಟು ಪೂಜೆ ಸಲ್ಲಿಸಿ ಗೌರವ ಸಲ್ಲಿಸಿದರು.

# ಮಾನಸಿಕ, ದೈಹಿಕ ಆರೋಗ್ಯಕ್ಕೆ ಕ್ರೀಡೆ ಸಹಕಾರಿ

ತಿ.ನರಸೀಪುರ, ಏ.29– ಪಟ್ಟಣದ ಸಂತೇಮಾಳದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ಮೈಸೂರು ವಿವಿ ಕಬಿನಿ ವಲಯ ಅಂತರ ಕಾಲೇಜು ಮಹಿಳಾ ಕಬಡ್ಡಿ, ಬ್ಯಾಡ್ಮಿಂಟನ್, ಥ್ರೋಬಾಲ್, ಟೆನಿಕಾಯ್ಟ್ ಪಂದ್ಯಾವಳಿಯನ್ನು ಕಬಿನಿ ವಲಯದ ಅಧ್ಯಕ್ಷೆ ಹಾಗೂ ನಂಜನಗೂಡು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲೆ ರೇಣುಕಾ ಬಾಯಿ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಸದೃಢ ದೇಹದಲ್ಲಿ ಸದೃಢ ಮನಸ್ಸು ರೂಪಿಸಲು ಕ್ರೀಡೆ ಮುಖ್ಯ ಪಾತ್ರ ವಹಿಸುತ್ತದೆ. ಕ್ರೀಡಾ ಚಟುವಟಿಕೆಗಳು ಆತ್ಮವಿಶ್ವಾಸ ಹೆಚ್ಚಿಸುವ ಜೊತೆಗೆ ಮಾನಸಿಕ, ದೈಹಿಕ ಆರೋಗ್ಯಕ್ಕೆ ಸಹಕಾರಿಯಾಗಿದೆ. ಕ್ರೀಡೆಗಳಲ್ಲಿ ಹೆಣ್ಣು ಮಕ್ಕಳ ಭಾಗವಹಿಸುವಿಕೆ ಹೆಚ್ಚಾಗಬೇಕು. ಸೋಲು–ಗೆಲುವನ್ನು ಸಮನಾಗಿ ಸ್ವೀಕರಿಸಬೇಕು. ಅಲ್ಲದೇ ವಿದ್ಯಾರ್ಥಿಗಳು ಕ್ರೀಡೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಕರೆ ನೀಡಿದರು.

ಚಾಮರಾಜನಗರ ದೈಹಿಕ ಮತ್ತು ಶಿಕ್ಷಣ ವಿಭಾಗದ ನಿರ್ದೇಶಕ ಡಾ.ಶಾಂತರಾಜು ಮಾತನಾಡಿ, ವಲಯ ಪಂದ್ಯಾವಳಿಗಳು ಗ್ರಾಮೀಣ ವಿದ್ಯಾರ್ಥಿನಿಯರ ಕ್ರೀಡಾ ಚಟುವಟಿಕೆಗಳಿಗೆ ಸೂಕ್ತ ವೇದಿಕೆ. ಕ್ರೀಡಾ ಸಾಧನೆಗಳು ನೀಡುವ ವಿವಿಧ ಹಂತದ ಉದ್ಯೋಗವಕಾಶಗಳನ್ನು ಬಳಸಿಕೊಳ್ಳಲು ಕ್ರೀಡೆಗಳಲ್ಲಿ ಭಾಗವಹಿಸುವಂತೆ ಕರೆ ನೀಡಿದರು.

ಪುರಸಭಾ ಮುಖ್ಯಾಧಿಕಾರಿ ವಸಂತ ಕುಮಾರಿ, ಶಿವಲಿಂಗಪ್ಪ ಪೆಟ್ರೋಲ್ ಬಂಕ್ ಉದ್ಯಮಿ ಎನ್.ಶ್ರೀಕಂಠಸ್ವಾಮಿ ಕ್ರೀಡೆ ಮಹತ್ವದ ಬಗ್ಗೆ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಕಾಲೇಜಿನ ಪ್ರಾಂಶುಪಾಲ ಡಾ.ಎಚ್.ವಿ.ಉದಯ್ ಕುಮಾರ್ ಮಾತನಾಡಿದರು.

ಸಂಘಟನಾ ಮುಖ್ಯಸ್ಥ ಡಾ.ಸಂಪತ್ ಕುಮಾರ್, ಡಾ.ದೇವರಾಜೇಗೌಡ, ಡಾ.ಕವಿತಾ, ಮಂಜು, ಎಸ್.ಪ್ರತಾಪ್, ಮಹಾದೇವ್. ಡಾ.ಎಂ.ಕೆ.ಮಾಧವಿ, ಡಾ.ಗಂಗಾಧರ್, ಡಾ.ಪುಟ್ಟಸ್ವಾಮಿ, ಡಾ.ಅಮಿತ್, ಡಾ.ರೇಶ್ಮಾ ಚೆಂಗಪ್ಪ, ಸವಿತಾ, ಮಹೇಶ್, ಸಂತೋಷ್ ಹಾಜರಿದ್ದರು.



ತಿ.ನರಸೀಪುರದಲ್ಲಿ ಅಂತರ ಕಾಲೇಜು ಮಹಿಳಾ ಕಬಡ್ಡಿ, ಬ್ಯಾಡ್ಮಿಂಟನ್, ಥ್ರೋಬಾಲ್, ಟೆನಿಕಾಯ್ಟ್ ಪಂದ್ಯಾವಳಿ ನಡೆಯಿತು.

# ತಿ.ನರಸೀಪುರದಲ್ಲಿ ವಿ.ಶ್ರೀನಿವಾಸಪ್ರಸಾದ್‌ಗೆ ಶ್ರದ್ಧಾಂಜಲಿ

ತಿ.ನರಸೀಪುರ, ಏ.29– ಸ್ವಾಭಿಮಾನಿ ರಾಜಕಾರಣಿ, ಸಂಸದ ವಿ.ಶ್ರೀನಿವಾಸಪ್ರಸಾದ್ ಅವರ ನಿಧನ ರಾಜ್ಯಕ್ಕೆ ತುಂಬಲಾರದ ನಷ್ಟ ಎಂದು ಪುರಸಭಾ ಸದಸ್ಯ ತುಂಬಲ ಪ್ರಕಾಶ್ ತಿಳಿಸಿದರು.

ಪಟ್ಟಣದ ತ್ರಿವೇಣಿ ನಗರದ ಸರ್ಕಲ್‌ನಲ್ಲಿ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, 1974ರಲ್ಲಿ ಮೈಸೂರಿನ ಕೃಷ್ಣರಾಜ ಕ್ಷೇತ್ರದಲ್ಲಿ ಡಿ.ಸತ್ಯನಾರಾಯಣ ನಿಧನದಿಂದ ತೆರವಾಗಿದ್ದ ಸ್ಥಾನಕ್ಕೆ ನಡೆದ ಉಪ ಚುನಾವಣೆಯಲ್ಲಿ ಎಐಡಿಎಂಕೆ ಬೆಂಬಲದೊಂದಿಗೆ ಪಕ್ಷೇತರ ಅಭ್ಯರ್ಥಿಯಾಗಿ ಪ್ರಸಾದ್ ಕಣಕ್ಕೆ ಇಳಿಯುವ ಮೂಲಕ ರಾಜಕೀಯ ಪ್ರವೇಶ ಮಾಡಿದ್ದರು. ಸಂಸದೀಯ ಪಟುವಾಗಿದ್ದ ಪ್ರಸಾದ್ ಎಲ್ಲಾ ಚರ್ಚೆಗಳಲ್ಲೂ ಭಾಗಿಯಾಗುತ್ತಿದ್ದರು. ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಸಂಸತ್‌ನಲ್ಲಿ ನಿರ್ಗಳವಾಗಿ ಮಂಡಿಸುತ್ತಿದ್ದರು. ದಲಿತ ನಾಯಕರಾಗಿದ್ದ ಅವರು ತುಳಿತಕ್ಕೆ ಒಳಗಾದವರ ಪರವಾಗಿ ಸದಾ ಧ್ವನಿ ಎತ್ತುತ್ತಿದ್ದರು. ನೇರ–ನಿಷ್ಠುರವಾದಿಯಾಗಿದ್ದ ಪ್ರಸಾದ್ ಅವರು ಸಾಕಷ್ಟು ಬಾರಿ ನಾನು ಹಲವಾರು ಪಕ್ಷಗಳನ್ನು ಬದಲಿಸಿರಬಹುದು. ಆದರೆ ತತ್ವ ಬಿಟ್ಟಿಲ್ಲ. ನಾನು ಪಕ್ಷಾಂತರಿ ಆಗಿರಬಹುದು. ಆದರೆ ತತ್ವಾಂತರಿಯಾಗಿಲ್ಲ. ಸ್ವಾಭಿಮಾನ ಬಿಟ್ಟಿಲ್ಲ ಎನ್ನುತ್ತಿದ್ದರು. ಅದರಂತೆಯೇ ನಡೆದುಕೊಂಡಿದ್ದರು. ರಾಜಕೀಯ ಜೀವನದಲ್ಲಿ ಸ್ವಾಭಿಮಾನಕ್ಕೆ ಧಕ್ಕೆ ಉಂಟಾದಾಗ ಬಂಡಾಯವೆದ್ದು ಸ್ವಾಭಿಮಾನಿ ರಾಜಕಾರಣಿ ಎಂದೇ ಕರೆಸಿಕೊಂಡಿದ್ದಾರೆ ಎಂದರು. ಈ ವೇಳೆ ತ್ರಿವೇಣಿ ನಗರ ಅಂಬೇಡ್ಕರ್ ಸಂಘದ ಅಧ್ಯಕ್ಷ ಎನ್.ಮಹೇಶ್, ಕಾರ್ಯದರ್ಶಿ ಕೆಂಚಪ್ಪ, ಭೈರಾಪುರ ಗ್ರಾಪಂ ಮಾಜಿ ಸದಸ್ಯ ಹೇಮಂತ್ ಕುಮಾರ್, ಪುಟ್ಟರಾಜು, ಮುಖಂಡರಾದ ಶಿವಣ್ಣ, ಕೆಂಪರಾಜು, ಗೋವಿಂದರಾಜು, ರಂಗದಾಸಯ್ಯ ಮತ್ತಿತರಿದ್ದರು.



ತಿ.ನರಸೀಪುರದ ತ್ರಿವೇಣಿ ನಗರದ ಸರ್ಕಲ್‌ನಲ್ಲಿ ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

**ಸಂತಾಪ:** ವಿ.ಶ್ರೀನಿವಾಸಪ್ರಸಾದ್ ಅವರ ನಿಧನಕ್ಕೆ ಪುರಸಭಾ ಮಾಜಿ ಅಧ್ಯಕ್ಷ ಟಿ.ಎಂ.ನಂಜುಂಡಸ್ವಾಮಿ, ಸದಸ್ಯ ಬಾದಾಮಿ ಮಂಜು, ಎಪಿಎಂಸಿ ಮಾಜಿ ಸದಸ್ಯ ಉಕ್ಕಲಗೆರೆ ಬಸವಣ್ಣ ಸಂತಾಪ ಸೂಚಿಸಿದ್ದಾರೆ.

**ಇಂದು ಶ್ರದ್ಧಾಂಜಲಿ ಸಭೆ:** ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಏ.30ರಂದು ವಿ.ಶ್ರೀನಿವಾಸಪ್ರಸಾದ್ ಅವರ ಶ್ರದ್ಧಾಂಜಲಿ ಸಭೆ ಹಮ್ಮಿಕೊಳ್ಳಲಾಗಿದೆ. ಪ್ರಸಾದ್ ಅಭಿಮಾನಿ ಬಳಗ, ಮುಖಂಡರು, ಎಲ್ಲಾ ಪಕ್ಷದ ರಾಜಕೀಯ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಅಂಬೇಡ್ಕರ್ ಅಭಿವೃದ್ಧಿ ಸಂಘದ ಅಧ್ಯಕ್ಷ ಕರೋಹಟ್ಟಿ ಮಹದೇವಯ್ಯ ಮನವಿ ಮಾಡಿದ್ದಾರೆ.



# ಡೆಲ್ಲಿ ಮೇಲೆ ರೈಡ್ ಮಾಡಿದ ಕೋಲ್ಕತ್ತಾ ನೈಟ್ ರೈಡರ್ಸ್



**ಇಂದಿನ ಪಂದ್ಯ (ಏ.30)**
ಲಕ್ನೋ ಸೂಪರ್ ಜೈಂಟ್ಸ್ / ಮುಂಬೈ ಇಂಡಿಯನ್ಸ್
ಸ್ಥಳ: ಲಕ್ನೋ, ಭಾರತ್‌ರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಏಕನಾ ಕ್ರೀಡಾಂಗಣ
ಸಮಯ: ಸಂಜೆ 7.30ಕ್ಕೆ

**ಅಂಕಪಟ್ಟಿ ವಿವರ**

| ತಂಡ | ಪಂದ್ಯಗಳು | ಗೆಲುವು | ಸೋಲು | ಡ್ರಾ | ಅಂಕ |
|---|---|---|---|---|---|
| ರಾಜಸ್ಥಾನ್ | 9 | 8 | 1 | 0 | 16 |
| ಕೋಲ್ಕತ್ತಾ | 9 | 6 | 3 | 0 | 12 |
| ಚೆನ್ನೈ | 9 | 5 | 4 | 0 | 10 |
| ಹೈದರಾಬಾದ್ | 9 | 5 | 4 | 0 | 10 |
| ಲಕ್ನೋ | 9 | 5 | 4 | 0 | 10 |
| ಡೆಲ್ಲಿ | 11 | 5 | 6 | 0 | 10 |
| ಗುಜರಾತ್ | 10 | 4 | 6 | 0 | 8 |
| ಪಂಜಾಬ್ | 9 | 3 | 6 | 0 | 6 |
| ಮುಂಬೈ | 9 | 3 | 6 | 0 | 6 |
| ಬೆಂಗಳೂರು | 10 | 3 | 7 | 0 | 6 |

ಕೋಲ್ಕತ್ತಾ, ಏ.29– ಫಿಲ್ ಸಾಲ್ಟ್ ಅವರ ಬಿರುಸಿನ ಅರ್ಧಶತಕ ಹಾಗೂ ವರುಣ್ ಚಕ್ರವರ್ತಿ ಅವರ ಮಾರಕ ಬೌಲಿಂಗ್ ದಾಳಿ ನೆರವಿನಿಂದ ಕೋಲ್ಕತ್ತಾ ನೈಟ್ ರೈಡರ್ಸ್, ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.


ಆ ಮೂಲಕ ಕೆಕೆಆರ್ ಆಡಿರುವ 9 ಪಂದ್ಯಗಳಲ್ಲಿ 6 ಜಯ, 3 ಸೋಲಿನೊಂದಿಗೆ ಅಂಕಪಟ್ಟಿಯಲ್ಲಿ 12 ಅಂಕಗಳೊಂದಿಗೆ 2ನೇ ಸ್ಥಾನದಲ್ಲಿದ್ದು, ಪ್ಲೇ ಆಫ್ ಪ್ರವೇಶಕ್ಕೆ ಮತ್ತೊಂದು ಹೆಜ್ಜೆ ಮುಂದಿಟ್ಟಿದೆ. ಇಲ್ಲಿನ ಈಡನ್ ಗಾರ್ಡನ್ಸ್ ಮೈದಾನದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ಇನ್ನಿಂಗ್ಸ್ ಆರಂಭದಿಂದಲೂ ನಿಗದಿತವಾಗಿ ವಿಕೆಟ್ ಕಳೆದುಕೊಳ್ಳುತ್ತಾ ಸಾಗಿತು. ಪರಿಣಾಮ ನಿಗದಿತ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 153 ರನ್‌ಗಳ ಸಾಧಾರಣ ಮೊತ್ತ ದಾಖಲಿಸಿತು. ತಂಡದ ಪರ ಯಾವೊಬ್ಬ ಬ್ಯಾಟ್ಸ್‌ಮನ್ ಸಹ ದೊಡ್ಡ ಇನ್ನಿಂಗ್ಸ್ ಆಡುವಲ್ಲಿ ವಿಫಲರಾಗಿ ಪೆವಿಲಿಯನ್ ಪರೇಡ್ ನಡೆಸಿದರು.

ಅಂತಿಮವಾಗಿ ಡೆಲ್ಲಿ ಪರ ಪೃಥ್ವಿ ಶಾ 13, ಜಾಕ್ ಫ್ರೇಸರ್ ಮೆಕ್‌ಗಾರ್ಕ್ 12, ಅಭಿಷೇಕ್ ಪೊರೆಲ್ 18, ಶಾಯ್ ಹೋಪ್ 6, ನಾಯಕ ರಿಷಬ್ ಪಂತ್ 27, ಅಕ್ಷರ್ ಪಟೇಲ್ 15, ಕುಲದೀಪ್ ಯಾದವ್ 35 ರನ್ ಗಳಿಸಿದರು. ವರುಣ್ ಚಕ್ರವರ್ತಿ 3, ವೈಭವ್ ಅರೋರ, ಹರ್ಷಿತ್ ರಾಣಾ ತಲಾ 2, ಮಿಚೆಲ್ ಸ್ಟಾರ್ಕ್, ಸುನೀಲ್ ನರೇನ್ ತಲಾ ಒಂದೊಂದು ವಿಕೆಟ್ ಕಬಳಿಸಿದರು.

ಡೆಲ್ಲಿ ಕ್ಯಾಪಿಟಲ್ಸ್ ನೀಡಿದ 154 ರನ್‌ಗಳ ಸುಲಭ ಗುರಿ ಬೆನ್ನತ್ತಿದ ಕೋಲ್ಕತ್ತಾ ನೈಟ್ ರೈಡರ್ಸ್ 16.3 ಓವರ್‌ಗಳಲ್ಲಿ ಇನ್ನೂ 21 ಎಸೆತ ಬಾಕಿ ಇರುವಂತೆಯೇ 3 ವಿಕೆಟ್ ನಷ್ಟಕ್ಕೆ 157 ರನ್ ಗಳಿಸಿ ಜಯದ ನಗೆ ಬೀರಿತು.

ಕೋಲ್ಕತ್ತಾ ಪರ ಆರಂಭದಿಂದಲೂ ಅಬ್ಬರಿಸಿದ ಫಿಲ್ ಸಾಲ್ಟ್, ಸುನೀಲ್ ನರೇನ್ ಜೊತೆಗೂಡಿ ಮೊದಲ ವಿಕೆಟ್‌ಗೆ 79 ರನ್‌ಗಳ ಭರ್ಜರಿ ಆರಂಭ ನೀಡಿದರು. ಈ ವೇಳೆ 3 ಬೌಂಡರಿ ಒಳಗೊಂಡ 15 ರನ್ ಗಳಿಸಿದ್ದ ನರೇನ್ ವಿಕೆಟ್ ಒಪ್ಪಿಸಿದರು. ಇದಾದ ಕೆಲ ಹೊತ್ತಲ್ಲೇ 33 ಎಸೆತಗಳಲ್ಲಿ 7 ಬೌಂಡರಿ, 5 ಸಿಕ್ಸರ್ 68 ರನ್ ಗಳಿಸಿ ಸಾಲ್ಟ್ ನಿರ್ಗಮಿಸಿದರು. ನಂತರ ಬಂದ ರಿಂಕು ಸಿಂಗ್ 11 ರನ್ ಗಳಿಸಿ ಬಹುಬೇಗ ಔಟಾದರು. ಆದರೆ ಕೊನೆಯಲ್ಲಿ ಮುರಿಯದ 4ನೇ ವಿಕೆಟಿಗೆ ನಾಯಕ ಶ್ರೇಯಸ್ ಅಯ್ಯರ್ ಮತ್ತು ವೆಂಕಟೇಶ್ ಅಯ್ಯರ್ 43 ಎಸೆತಗಳಲ್ಲಿ 57 ರನ್ ಜೊತೆಯಾಟವಾಡಿ ತಂಡಕ್ಕೆ ಗೆಲುವು ತಂದುಕೊಟ್ಟರು. ಶ್ರೇಯಸ್ ಅಯ್ಯರ್ ಔಟಾಗದೇ 33 ರನ್ ಗಳಿಸಿದರೇ, ವೆಂಕಟೇಶ್ ಅಯ್ಯರ್ ಔಟಾಗದೇ 26 ರನ್ ಗಳಿಸಿ ಅಜೇಯರಾಗಿ ಉಳಿದರು. ಡೆಲ್ಲಿ ಪರ ಅಕ್ಷರ್ ಪಟೇಲ್ 2, ಲಿಜಾಡ್ ವಿಲಿಯಮ್ಸ್ 1 ವಿಕೆಟ್ ಪಡೆದರು. ಕೆಕೆಆರ್ ಪರ ವರುಣ್ ಚಕ್ರವರ್ತಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

# ಕಂಪಲಾಪುರಕೊಪ್ಪಲು ಡೇರಿಗೆ ಚಂದ್ರು ಅಧ್ಯಕ್ಷ



ಕಂಪಲಾಪುರಕೊಪ್ಪಲು ಡೇರಿ ಅಧ್ಯಕ್ಷರಾಗಿ ಕೆ.ಎಸ್.ಚಂದ್ರು ಹಾಗೂ ಉಪಾಧ್ಯಕ್ಷರಾಗಿ ಶೀಲಾ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಕಂಪಲಾಪುರ, ಏ.29– ಕಂಪಲಾಪುರ ಕೊಪ್ಪಲು ಹಾಲಿನ ಡೇರಿ ಅಧ್ಯಕ್ಷರಾಗಿ ಕೆ.ಎಸ್. ಚಂದ್ರು ಹಾಗೂ ಉಪಾಧ್ಯಕ್ಷರಾಗಿ ಶೀಲಾ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಅಧ್ಯಕ್ಷರಾದ ಕೆ.ಎಂ. ಲಕ್ಷ್ಮಣ್, ಉಪಾಧ್ಯಕ್ಷೆ ಪುಟ್ಟಮ್ಮ ಅವರು ಆಂತರಿಕ ಒಪ್ಪಂದದಂತೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ಅವರಿಂದ ತೆರವಾದ ಸ್ಥಾನಕ್ಕೆ ಸೋಮವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಕೆ.ಎಸ್.ಚಂದ್ರು, ಉಪಾಧ್ಯಕ್ಷ ಸ್ಥಾನಕ್ಕೆ ಶೀಲಾ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಜೆ.ಹಿತೇಂದ್ರ ಘೋಷಿಸಿದರು.

ಈ ವೇಳೆ ಎಪಿಎಂಸಿ ಮಾಜಿ ಉಪಾಧ್ಯಕ್ಷ ಎಂ.ರಮೇಶ್, ನಿರ್ದೇಶಕರಾದ ಗೋಪಾಲ್, ಲಕ್ಷ್ಮಣ್, ಗಿರೀಶ್, ಸಿದ್ದಪ್ಪ, ಸದಾನಂದ, ದಿನೇಶ್, ಪುಟ್ಟಮ್ಮ, ಗೀತಾ, ಸಿಇಓ ಲೋಕೇಶ್, ಹಾಲು ಪರೀಕ್ಷಕ ಮಂಜು ಮತ್ತಿತರರಿದ್ದರು.

# ಅಗಲಿದ ನಾಯಕನ ಅಂತಿಮ ದರ್ಶನಕ್ಕೆ ಹರಿದು ಬರುತ್ತಿದ್ದ ಜನ ಸಮೂಹ



ಮೈಸೂರು, ಏ.29(ಎಂಕೆ)– ಹಿರಿಯ ರಾಜಕೀಯ ಮುತ್ಸದಿ, ಚಾಮರಾಜನಗರ ಲೋಕಸಭಾ ಕ್ಷೇತ್ರದ ಸಂಸದರಾದ ವಿ.ಶ್ರೀನಿವಾಸ್ ಪ್ರಸಾದ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ಗಣ್ಯರು, ಅಭಿಮಾನಿಗಳು, ಬೆಂಬಲಿಗರು ಸೇರಿದಂತೆ ಜನ ಸಮೂಹವೇ ಹರಿದು ಬಂದಿತು. ಮೈಸೂರಿನ ಅಶೋಕ ಪುರಂನಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಉದ್ಯಾನವನದ ಎದುರಿನ ಸರ್ಕಾರಿ ಶಾಲೆ ಆವರಣದಲ್ಲಿ ವಿ.ಶ್ರೀನಿವಾಸ್‌ಪ್ರಸಾದ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡ ಲಾಗಿದೆ. ಸೋಮವಾರ ಮಧ್ಯಾಹ್ನದಿಂದ ತಡರಾತ್ರಿಯವರೆಗೆ ತಂಡೋಪ ತಂಡವಾಗಿ ಆಗಮಿಸಿದ ವಿ.ಶ್ರೀನಿವಾಸ್ ಪ್ರಸಾದ್ ಅವರ ಅಭಿಮಾನಿಗಳು, ಬೆಂಬಲಿಗರು, ಅಶೋಕಪುರಂ ನಿವಾಸಿಗಳು ಸರತಿ ಸಾಲಿನಲ್ಲಿ ನಿಂತು ಅಂತಿಮ ದರ್ಶನ ಪಡೆದರು. ಶಾಲೆಯ ವೇದಿಕೆಯ ಬಳಿ ಇರಿಸಲಾ ಗಿದ್ದ ಪಾರ್ಥಿವ ಶರೀರದ ವೀಕ್ಷಣೆಗೆ ಬ್ಯಾರಿಕೇಡ್ ಗಳ ಮೂಲಕ ಸರತಿ ಸಾಲಿನಲ್ಲಿ ಸಾಗುವಂತೆ ವ್ಯವಸ್ಥೆ ಕಲ್ಪಿಸಲಾಗಿತ್ತು. ಅದರಂತೆ ತಡರಾತ್ರಿಯ ವರೆಗೆ ಆಗಮಿಸಿದ ಸಾವಿರಾರು ಮಂದಿ ತಮ್ಮ ನೆಚ್ಚಿನ ನಾಯಕನ ಅಂತಿಮ ದರ್ಶನ ಪಡೆದರು.

## ತಮ್ಮೂರ ನಾಯಕನ ನೆನೆದು ಕಣ್ಣೀರಾಕಿದ ಅಶೋಕಪುರಂ!

ಮೈಸೂರು, ಏ.29(ಎಸ್‌ಬಿಡಿ)– ವಿ.ಶ್ರೀನಿವಾಸ ಪ್ರಸಾದ್ ಅವರ ಪಾರ್ಥಿವ ಶರೀರವಿದ್ದ ವಾಹನ ಹುಟ್ಟೂರಾದ ಅಶೋಕ ಪುರಂಗೆ ಬರುತ್ತಿದ್ದಂತೆ ಗಂಟೆಗಳಿಂದ ಕಾದಿದ್ದ ಸಾವಿರಾರು ಮಂದಿ ಭಾವುಕರಾದರು.

ಮಧ್ಯಾಹ್ನ 1 ಗಂಟೆಯಿಂದ ಅಶೋಕಪುರಂ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ ಆವರಣ ದಲ್ಲಿ ಅಂತಿಮ ದರ್ಶನಕ್ಕಿಡಲಾಗುವುದು ಎಂದು ತಿಳಿಯುತ್ತಿದ್ದಂತೆ ಅಶೋಕಪುರಂ ನಿವಾಸಿಗಳು ಮಾತ್ರವಲ್ಲದೆ ಚಾಮರಾಜನಗರ, ನಂಜನಗೂಡು ಇನ್ನಿತರ ಕಡೆಯ ಸಾವಿರಾರು ಮಂದಿ ಅಲ್ಲಿ ಜಮಾಯಿಸಿದ್ದರು. ಜಯಲಕ್ಷ್ಮೀಪುರಂನ ಭೀಮ ಸದನ ನಿವಾಸದಿಂದ ಮೆರವಣಿಗೆ ಮೂಲಕ ವಿ.ಶ್ರೀನಿವಾಸ ಪ್ರಸಾದ್ ಅವರ ಪಾರ್ಥಿವ ಶರೀರವನ್ನು ಅಶೋಕಪುರಂಗೆ ತರುವಷ್ಟರಲ್ಲಿ ಮಧ್ಯಾಹ್ನ 3.30 ಗಂಟೆಯಾಗಿತ್ತು. ಮೆರವಣಿಗೆ ಯುದ್ದಕ್ಕೂ ಪುಷ್ಪವೃಷ್ಟಿಯೊಂದಿಗೆ ನಮನ ಸಲ್ಲಿಸಲಾಯಿತು. ಪೊಲೀಸರು ವಾಹನ ಸಂಚಾರ ನಿಯಂತ್ರಿಸಿ, ಮೆರವಣಿಗೆಗೆ ಅನುವು ಮಾಡಿಕೊಟ್ಟರು. ರಸ್ತೆ ಇಕ್ಕೆಲಗಳಲ್ಲಿ ನಿಂತು ಸಾರ್ವಜನಿಕರು ಪ್ರಸಾದ್ ಅವರಿಗೆ ಅಂತಿಮ ನಮನ ಸಲ್ಲಿಸಿದರು.

ಹುಟ್ಟೂರಿಗೆ ತರುತ್ತಿದ್ದಂತೆ ನೆರೆದಿದ್ದವರು ಭಾವುಕರಾಗಿ ಕಂಬನಿ ಮಿಡಿದರು. ಕೆಲವರು ಜೈಕಾರ ಹಾಕಿದರು. ಪ್ರಸಾದ್ ಅಣ್ಣ ಮತ್ತೆ ಹುಟ್ಟಿ ಬರಲಿ ಘೋಷಣೆ ಕೂಗಿದರು. ಬಹುತೇಕ ವ್ಯಾಪಾರಿಗಳು ಸ್ವಯಂ ಪ್ರೇರಣೆಯಿಂದ ಅಂಗಡಿ ಮುಂಗಟ್ಟು ಬಂದ್ ಮಾಡಿ, ಸಂತಾಪ ವ್ಯಕ್ತಪಡಿಸಿದರು. ವಾಹನ ಶಾಲಾ ಆವರಣಕ್ಕೆ ಪ್ರವೇಶಿಸುವ ವೇಳೆಗೆ ಅದರ ಸುತ್ತ ಸಾವಿರಾರು ಜನ ಜಮಾಯಿಸಿ, ಕಣ್ಣೀರಾದರು. ನಂತರ ಸರದಿಯಲ್ಲಿ ಶ್ರೀನಿವಾಸ ಪ್ರಸಾದರ ಅಂತಿಮ ದರ್ಶನ ಪಡೆದರು. ಗ್ರಾಮದ ಮಹಿಳೆಯರು, ಮಕ್ಕಳಾದಿಯಾಗಿ ಎಲ್ಲರೂ ತಮ್ಮ ಊರಿನ ಸಾಧಕನಿಗೆ ಅಂತಿಮ ನಮನ ಸಲ್ಲಿಸಿದರು.

## ನೇರ ನಡೆ–ನುಡಿಯ ನಾಯಕ

ಮೈಸೂರು: ಹೋರಾಟದ ಮೂಲಕ ರಾಜಕೀಯ ಪ್ರವೇಶಿಸಿದ್ದ ವಿ.ಶ್ರೀನಿವಾಸ ಪ್ರಸಾದ್ ಅವರು ನೇರ ನಡೆ–ನುಡಿಯ ನಾಯಕರಾಗಿದ್ದರು. ಸೋಲಿನ ಮೂಲಕ ರಾಜಕೀಯ ಆರಂಭಿಸಿದ ಅವರು ಗೆಲುವಿನೊಂದಿಗೆ ರಾಜಕೀಯಕ್ಕೆ ವಿದಾಯ ಹೇಳಿದವರು. ಮಾನವೀಯ ಗುಣದ ವಿ.ಶ್ರೀನಿವಾಸ ಪ್ರಸಾದ್, ಜನರ ಕಷ್ಟ–ಸುಖದಲ್ಲಿ ಭಾಗಿಯಾಗುತ್ತಿದ್ದವರು. ಹಲವು ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಸೂಚಿಸಿದವರು. ಆದರೆ ಕೆಲವೊಮ್ಮೆ ಸಹನೆ ಮೀರಿದರೆ ಮುಲಾಜಿಲ್ಲದೆ ಕಠಿಣವಾಗಿ ವರ್ತಿಸುತ್ತಿದ್ದರು. ಕಂದಾಯ ಸಚಿವರಾಗಿದ್ದ ವೇಳೆ ಅಭಿವೃದ್ಧಿ ಕಾಮಗಾರಿ ಚಾಲನೆ ನೀಡುತ್ತಿದ್ದ ಸಂದರ್ಭದಲ್ಲಿ ಕಾರ್ಯ ಕರ್ತರೊಬ್ಬರು ಮದ್ಯದಂಗಡಿ ಆರಂಭಿಸಲು ನೆರವು ಕೇಳಿದ್ದರು. ಇದರಿಂದ ಸಿಟ್ಟಿಗೆದ್ದ ಪ್ರಸಾದ್ ಅವರು ಏರುಧ್ವನಿಯಲ್ಲೇ ಶಾಲೆ, ಕಾಲೇಜು ಅಥವಾ ಅಂಗನವಾಡಿ ಕೇಂದ್ರಕ್ಕೆ ನೆರವು ನೀಡುತ್ತೇನೆ. ನಿಮ್ಮ ಮದ್ಯದಂಗಡಿಗಲ್ಲ ಎಂದು ಗದರಿ ಕಳುಹಿಸಿದ್ದರು.

## ಪ್ರಸಾದ್ ನಿಧನಕ್ಕೆ ಬಾಲ್ಯದ ಗೆಳೆಯ ವೆಂಕಟರಾಮ್ ಕಂಬನಿ

ಮೈಸೂರು, ಏ.29(ಎಸ್‌ಬಿಡಿ)– ಹೋರಾಟ ಮನೋಭಾವದ ವಿ.ಶ್ರೀನಿವಾಸ ಪ್ರಸಾದ್ ಅವರು ಸ್ವ–ಸಾಮರ್ಥ್ಯದಿಂದ ರಾಜಕೀಯದಲ್ಲಿ ಸಾಧನೆ ಮಾಡಿದ್ದಾರೆ ಎಂದು ಅವರ ಬಾಲ್ಯದ ಗೆಳೆಯ, ಆರ್‌ಎಸ್‌ಎಸ್ ಹಿರಿಯ ಮುಖಂಡ ಮಾ. ವೆಂಕಟರಾಮ್ ಸ್ಮರಿಸಿಕೊಂಡರು.



ನಾನು ಮತ್ತು ಶ್ರೀನಿವಾಸ ಪ್ರಸಾದ್ 1958ರಿಂದ ರಾಷ್ಟ್ರೀಯ ಸ್ವಯಂ ಸೇವಕ ಸಂಘ(ಆರ್‌ಎಸ್‌ಎಸ್)ಕ್ಕೆ ಸೇರಿದೆವು. ನಾವಿಬ್ಬರೂ 1947ರಲ್ಲೇ ಹುಟ್ಟಿದವರು. ಬಾಲ್ಯದಿಂದಲೂ ಒಟ್ಟಿಗೆ ಬೆಳೆದವರು. ಎನ್‌ಟಿಎಂ ಶಾಲೆಯಲ್ಲೇ ಓದಿದ್ದು. ಅಶೋಕಪುರಂ ಕಾಂಗ್ರೆಸ್ ಭದ್ರಕೋಟೆಯಾಗಿದ್ದ ಸಂದರ್ಭದಲ್ಲಿ ನಾವು ಯುವಕರ ಸಂಘ ಕಟ್ಟಿದೆವು ಎಂದರು.

ವಿರೋಧದ ನಡುವೆಯೂ ನಾವು ಕಟ್ಟಿದ್ದ ಸಂಘಟನೆಯಲ್ಲಿ 50–60 ಯುವಕರಿದ್ದರು. ಆ ಮೂಲಕ ಬಡವರ ಮಕ್ಕಳಿಗೆ ಸಮವಸ್ತ್ರ, ಪುಸ್ತಕ ನೀಡುವುದು, ಮನೆ ಪಾಠದ ವ್ಯವಸ್ಥೆ ಮಾಡುವುದು, ಆರ್‌ಎಸ್‌ಎಸ್ ಮೂಲಕ ಶಿಕ್ಷಣ ನೀಡುವುದು, ದೇಶಭಕ್ತಿ ಗೀತೆಗಳನ್ನು ಹೇಳಿಕೊಡುವುದು. ಈ ರೀತಿಯ ಚಟುವಟಿಕೆಗಳನ್ನು ನಡೆಸುತ್ತಿದ್ದೆವು. ಇಂದು ಶ್ರೀನಿವಾಸ ಪ್ರಸಾದ್ ಅವರ ಪಾರ್ಥಿವ ಶರೀರವಿಟ್ಟಿರುವ ಎನ್‌ಟಿಎಂ ಶಾಲೆ ಆವರಣದಲ್ಲೇ ನಮ್ಮೆಲ್ಲಾ ಚಟುವಟಿಕೆಗಳು ನಡೆಯುತ್ತಿದ್ದವು. ಸಂಘದ ಶಾಖೆ ಕೂಡ ಇಲ್ಲಿಯೇ ಇತ್ತು ಎಂದು ತಿಳಿಸಿದರು.

ಬಸವಲಿಂಗಪ್ಪ ಅವರನ್ನು ಮಂತ್ರಿ ಸ್ಥಾನದಿಂದ ತೆಗೆದಾಗ ನಾವೆಲ್ಲಾ ಪ್ರತಿಭಟಿಸಿದ್ದೆವು. ಆಗ ನಡೆದಂತಹ ಬೂಸಾ ಚಳವಳಿ ನೇತೃತ್ವವನ್ನು ಶ್ರೀನಿವಾಸ ಪ್ರಸಾದ್ ವಹಿಸಿಕೊಂಡಿದ್ದರು. ಯುವಕರನ್ನು ಸಂಘಟಿಸಿ ಭಾರೀ ಹೋರಾಟ ಮಾಡಿದ್ದೆವು. ಬಸವಲಿಂಗಪ್ಪ ಅವರನ್ನು ಕರೆತಂದು ಇಲ್ಲಿ ಮೆರವಣಿಗೆ ಮಾಡಿದ್ದೆವು. ವಿ.ಶ್ರೀನಿವಾಸ ಪ್ರಸಾದ್ ಅವರು ಸಾಮರಸ್ಯಕ್ಕೆ ತುಂಬಾ ಒತ್ತು ನೀಡಿದ್ದರು. ಸಂಘವೂ ಕೂಡ ಅದನ್ನೇ ಕಲಿಸಿದ್ದು. ಉಪ ಚುನಾವಣೆ ಮೂಲಕ ಚುನಾವಣೆ ರಾಜಕೀಯಕ್ಕೆ ಹೆಜ್ಜೆಯಿಟ್ಟ ಪ್ರಸಾದ್, ಸ್ವ–ಸಾಮರ್ಥ್ಯ ಹಾಗೂ ಪ್ರತಿಭೆಯಿಂದ ಬೆಳೆದು ಬಂದವರು ಎಂದು ಸ್ಮರಿಸಿಕೊಂಡರು.



ಮಾಜಿ ಶಾಸಕ ಡಾ. ಯತೀಂದ್ರ, ಕಾಂಗ್ರೆಸ್ ಮುಖಂಡ ಸುನೀಲ್ ಬೋಸ್ ಅಗಲಿದ ನಾಯಕನಿಗೆ ಅಂತಿಮ ನಮನ ಸಲ್ಲಿಸಿದರು.



ಶ್ರೀನಿವಾಸಪ್ರಸಾದ್ ಅವರಿಗೆ ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ಅಂತಿಮ ನಮನ.

## ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು, ಏ.29– ಮೈಸೂರು ಲಕ್ಷ್ಮೀಪುರಂನಲ್ಲಿರುವ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಮೇ 2 (ಗುರುವಾರ)ದಂದು ಬೆಳಗ್ಗೆ 10ರಿಂದ ರಾತ್ರಿ 8 ಗಂಟೆವರೆಗೆ ಕ್ಯಾನ್ಸರ್ ಉಚಿತಾ ತಪಾಸಣಾ ಶಿಬಿರ ಏರ್ಪಡಿಸಲಾಗಿದೆ. ಒಂದು ತಿಂಗಳಿಗೂ ಮೇಲ್ಪಟ್ಟು ವಾಸಿಯಾಗದ ಗಾಯ, ರಕ್ತಸ್ರಾವ, ಊತ, ಗಡಸುತನ, ನುಂಗುವಾಗಿನ ತೊಂದರೆ, ಗಂಟಲಲ್ಲಿ ಉರಿತ ಅಥವಾ ತೆಡೆತ, ಧ್ವನಿ ಬದಲಾವಣೆ ಇರುವ ರೋಗಿಗಳು ಶಿಬಿರದಲ್ಲಿ ಪಾಲ್ಗೊಳ್ಳಬಹುದು. ಕ್ಯಾನ್ಸರ್ ಪತ್ತೆಯಾದ ರೋಗಿಗಳಿಗೆ ಚಿಕಿತ್ಸೆಯನ್ನು ರಿಯಾಯಿತಿ ದರದಲ್ಲಿ ನೀಡಲಾಗುವುದು. ಹೆಚ್ಚಿನ ವಿವರಗಳಿಗೆ ದೂ.ಸಂಖ್ಯೆ 0821– 4259259.

## ಪ್ರಸಾದರ ನಿಧನಕ್ಕೆ ಆರ್‌ಎಸ್‌ಎಸ್‌ನ ಸು.ರಾಮಣ್ಣ ಸಂತಾಪ

ಮೈಸೂರು, ಏ.29– ಸಂಸದ ವಿ.ಶ್ರೀನಿವಾಸಪ್ರಸಾದ್ ಅವರ ನಿಧನಕ್ಕೆ ರಾಷ್ಟ್ರೀಯ ಸ್ವಯಂಸೇವಕ ಸಂಘದ ಜ್ಯೇಷ್ಠ ಪ್ರಚಾರಕ ಸು.ರಾಮಣ್ಣ ತೀವ್ರ ಸಂತಾಪ ಸೂಚಿಸಿದ್ದಾರೆ.



ಶ್ರೀನಿವಾಸ ಪ್ರಸಾದ್ ಅವರು ದಶಕಗಳ ಕಾಲ ಸಂಘದ ಸ್ವಯಂ ಸೇವಕರಾಗಿ ಸೇವೆ ಸಲ್ಲಿಸಿದವರು. ಅವರೊಂದಿಗೆ ನನಗೆ ಸುದೀರ್ಘವಾದ ಸಂಬಂಧವಿತ್ತು. ಅವರು ಯಾವಾಗಲೂ ನಾನು ಸ್ವಯಂ ಸೇವಕ ಎಂದು ಹೆಮ್ಮೆಯಿಂದ ಹೇಳಿ ಕೊಳ್ಳುತ್ತಿದ್ದರು.

ಅವರು ಎಂದಿಗೂ ಸಮಾಜದೊಡನೆ ಸಾಮರಸ್ಯ ಬಯಸುತ್ತಿದ್ದರು. ಅವರದ್ದು ನೇರವಾದ ಮಾತುಗಳಾಗಿರುತ್ತಿದ್ದವು. ಅವರ ಅಗಲಿಕೆಯಿಂದ ಸಮಾಜಕ್ಕೆ ತುಂಬಾ ನಷ್ಟವಾಗಿದೆ. ಅವರ ಆತ್ಮಕ್ಕೆ ಚಿರಶಾಂತಿ ದೊರಕಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ತಿಳಿಸಿದ್ದಾರೆ.















